ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಡಿಸೆಂಬರ್ 16 ಮಂಗಳವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

46

ಸಂಪುಟ: 46 | ಸಂಚಿಕೆ: 238 | ಪುಟಗಳು: 12+IV
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಆನ್‌ಲೈನ್ ಮೂಲಕ ಮೈಸೂರು ವಿವಿ ಪ್ರಸಾರಾಂಗದ ಪುಸ್ತಕಗಳ ಮಾರಾಟ; ಶೀಘ್ರ ವೆಬ್‌ಸೈಟ್ ವ್ಯವಸ್ಥೆ

● ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಮಾಹಿತಿ ● ಜಾಗತಿಕ ಮಟ್ಟದಲ್ಲಿ ಪುಸ್ತಕ ಮಾರಾಟ ಮಾಡುವ ಉದ್ದೇಶ

ಮೈಸೂರು,ಡಿ.15(ಎಂಟಿವೈ)- ಮೈಸೂರು ವಿಶ್ವವಿದ್ಯಾನಿಲಯದ ಪ್ರಸಾರಾಂಗದ ಪುಸ್ತಕಗಳ ಇನ್ನಷ್ಟು ದೊಡ್ಡ ಪ್ರಮಾಣದಲ್ಲಿ ಓದುಗರಿಗೆ ತಲುಪಿಸಲು ಶೀಘ್ರದಲ್ಲೇ ಪ್ರಸಾರಾಂಗದ ವೆಬ್‌ಸೈಟ್ ಆರಂಭಿಸುವುದಾಗಿ ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ತಿಳಿಸಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯದ ಪ್ರಸಾರಾಂಗದ ಆವರಣದಲ್ಲಿ ಸೋಮವಾರ ನಡೆದ 'ಪ್ರಸಾರಾಂಗ ಪುಸ್ತಕೋತ್ಸವ 2025' ಹಾಗೂ ಪ್ರಸಾರಾಂಗದಲ್ಲಿರುವ ಪ್ರಮುಖ ಕೃತಿಗಳ ಪರಾಮರ್ಶೆ ಮತ್ತು ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಸಾರಾಂಗದ ಪುಸ್ತಕಗಳು ಜಾಗತಿಕ ಮಟ್ಟದಲ್ಲಿ ಹೆಚ್ಚಾಗಿ ಮಾರಾಟವಾಗುತ್ತಿವೆ. ಪ್ರಸಾರಾಂಗದಲ್ಲಿ ಮುದ್ರಣವಾಗಿರುವ ಸಾವಿರಾರು ಅಮೂಲ್ಯ ಗ್ರಂಥಗಳ ಜಗತ್ತಿನ ವಿವಿಧ ದೇಶದ ಓದುಗರಿಗೆ ತಲುಪಿಸಲು ಆನ್‌ಲೈನ್ ಮೂಲಕ ಪುಸ್ತಕ ಮಾರಾಟ ಮಾಡಲು ನಿರ್ಧರಿಸಲಾಗಿದೆ. ಇದಕ್ಕಾಗಿ ವೆಬ್‌ಸೈಟ್ ಆರಂಭಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ರಾಷ್ಟ್ರಕವಿ ಕುವೆಂಪು ಪ್ರಸಾರಾಂಗದ ಕನಸು ಕಂಡಿದ್ದರು. ಕುವೆಂಪು ನಿವೃತ್ತಿಯಾದ ಬಳಿಕವೂ ಪ್ರಸಾರಾಂಗಕ್ಕೆ ಆಗಾಗ ಬಂದು ಹೋಗುತ್ತಿದ್ದರು. ಇದೀಗ ಪ್ರಸಾರಾಂಗ ಹೆಮ್ಮರವಾಗಿ ಬೆಳೆದಿದೆ. ಡಿಜಿಟಲ್ ಯುಗ ಪ್ರಬಲಗೊಂಡ ಹಿನ್ನೆಲೆಯಲ್ಲಿ ಇಲ್ಲಿನ ಪುಸ್ತಕ ಮಾರಾಟಕ್ಕೆ ಹಿನ್ನಡೆಯಾಗುತ್ತಿತ್ತು. ಪ್ರಸಾರಾಂಗದ ಭಂಡಾರದಲ್ಲಿ ಸಾವಿರಾರು ಪುಸ್ತಕಗಳಿವೆ. ಅದನ್ನು ಸಾರ್ವಜನಿಕರಿಗೆ ತಲುಪಿಸಲು ಪುಸ್ತಕೋತ್ಸವ ಆರಂಭಿಸಿರುವುದು ಉತ್ತಮ ಕಾರ್ಯ ಎಂದು ತಿಳಿಸಿದರು. ಪ್ರಸಾರಾಂಗದಲ್ಲಿ 25 ಪೈಸೆಯಿಂದ ಸಾವಿರಾರು ರೂ. ಮುಖಬೆಲೆಯ ಪುಸ್ತಕಗಳಿವೆ. ರಿಯಾಯಿತಿ ದರದಲ್ಲಿ ಮಾರಾಟವಾಗುತ್ತಿರುವ ಕೃತಿಗಳ ಖರೀದಿಸುವಂತೆ ಸಲಹೆ ನೀಡಿದರು.



ಮೈಸೂರು ವಿಶ್ವವಿದ್ಯಾನಿಲಯದ ಪ್ರಸಾರಾಂಗದ ಆವರಣದಲ್ಲಿ ಸೋಮವಾರ ನಡೆದ 'ಪ್ರಸಾರಾಂಗ ಪುಸ್ತಕೋತ್ಸವ 2025' ಕಾರ್ಯಕ್ರಮವನ್ನು ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಉದ್ಘಾಟಿಸಿದರು.

ಉಳಿಸಿ ಕೊಳ್ಳೋಣ: ಇದೇ ವೇಳೆ ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವೆ ಎಂ.ಕೆ ಸವಿತಾ ಮಾತನಾಡಿ, ಪ್ರಸಾರಾಂಗ ಜ್ಞಾನದ ಕೇಂದ್ರ. ಕುವೆಂಪು ಅವರ ಕಾಲದಲ್ಲಿ ಪುಸ್ತಕದ ಕೆಲಸಕ್ಕಾಗಿ ಭವ್ಯವಾದ ಕಟ್ಟಡ ನಿರ್ಮಾಣಗೊಂಡಿರುವುದು ಹೆಮ್ಮೆಯ ವಿಚಾರ. ಇದನ್ನು ಉಳಿಸಲು ಎಲ್ಲರೂ ಶ್ರಮಿಸೋಣ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಸಾರಾಂಗದ ನಿರ್ದೇಶಕ ಡಾ.ಎಂ.ನಂಜಯ್ಯ ಹೊಂಗನೂರು ಮಾತನಾಡಿದ ಅವರು, ಎಪಿಗ್ರಫಿ ಆಫ್ ಕರ್ನಾಟಕ ಸಂಪುಟಗಳ ಬಗ್ಗೆ ಒಂದು ಸಮೀಕ್ಷೆಯನ್ನು ನಡೆಸಬೇಕು. ಶಾಸನ, ಸಂಪುಟಗಳ ಬಗ್ಗೆ ಇತ್ತೀಚಿನ ಯುವ ಪೀಳಿಗೆಗೆ ಸಾಕಷ್ಟು ಮಾಹಿತಿ ಇಲ್ಲ. ಅದನ್ನು ತಿಳಿಸುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಿದ್ದೇವೆ. ಭಾರತೀಯ ಕಾವ್ಯ ಮೀಮಾಂಸೆ ಕೃತಿ ಬಂದು 80 ವರ್ಷ ಆಗಿದೆ. ಇದು ಮೈಸೂರು ವಿಶ್ವವಿದ್ಯಾನಿಲಯದ ಹೆಗ್ಗಳಿಕೆ. ಇಂದಿಗೂ ಕೂಡ ಓದುಗರು ಈ ಪುಸ್ತಕವನ್ನು ಹೆಚ್ಚಿನ ಸಂಖ್ಯೆಯಲ್ಲಿ ಕೊಂಡೊಯ್ಯುತ್ತಿದ್ದಾರೆ ಎಂದು ಹೇಳಿದರು.

ಭಾರತದ ಯಾವುದೇ ಪುಸ್ತಕ ಮಳಿಗೆಗೆ ಹೋದರೆ 50 ಪೈಸೆ ಹಾಗೂ 75 ಪೈಸೆಯ ಪುಸ್ತಕಗಳು ಸಿಗುವುದಿಲ್ಲ. ನಮ್ಮ ಪ್ರಸಾರಂಗದಲ್ಲಿ 50 ಪೈಸೆ, 75 ಪೈಸೆ ಹಾಗೂ 1 ರೂ. ಮುಖಬೆಲೆಯ ಪುಸ್ತಕ ಲಭ್ಯವಿದೆ. ಹೀಗಾಗಿ ಜನ ಸಾಮಾನ್ಯರಿಗೆ ಬೇಕಾದ ವಿದ್ವಾಂಸರನ್ನು, ಬರಹಗಾರರನ್ನು ಗುರುತಿಸಿ ದೊಡ್ಡ ದೊಡ್ಡ ಉಪನ್ಯಾಸ ಆಯೋಜಿಸಿ ಗ್ರಾಮೀಣ ಮಟ್ಟಕ್ಕೆ ತಲುಪಿಸುವ ಕಾರ್ಯ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ನಿವೃತ್ತರಿಗೆ ಸನ್ಮಾನ: ಇದೇ ವೇಳೆ ಪ್ರಸಾರಂಗದಲ್ಲಿ ಕಾರ್ಯ ನಿರ್ವಹಿಸಿ ನಿವೃತ್ತರಾದ ದಾಸೇಗೌಡ, ಲಿಂಗಣ್ಣ, ಕೆ.ಎಸ್.ರಾಮಶೇಷನ್, ಟಿ.ಕಮಲಮ್ಮ, ಜಿ.ಶ್ರೀದೇವಿ, ಡಿ.ಟಿ.ಈರೇಗೌಡ ಹಾಗೂ ಕುಮಾರ್ ಅವರನ್ನು ಸನ್ಮಾನಿಸಲಾಯಿತು. ಪ್ರಸಾರಂಗದ ವಿಶ್ರಾಂತ ನಿರ್ದೇಶಕರಾದ ಕೆ.ಟಿ.ವೀರಪ್ಪ, ಪ್ರೊ.ಎಸ್. ಲಕ್ಷ್ಮೀ ನಾರಾಯಣ ಅರೋರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನ ಸ್ವಾಮಿ ಉಪಸ್ಥಿತರಿದ್ದರು.

ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘಕ್ಕೆ ಮೈಸೂರು ಭಾಗದ ನಿರ್ದೇಶಕರು ಸದಸ್ಯರಾಗಬಹುದು

ಮೈಸೂರು, ಡಿ.15(ಜಿಎ)–ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘ ಹಲವಾರು ವರ್ಷಗಳಿಂದ ಅಸ್ತಿತ್ವದಲ್ಲಿದ್ದು, ಮೈಸೂರು ಭಾಗದ ನಿರ್ದೇಶಕರು ಸಹಾ ಸದಸ್ಯರಾಗುವ ಮೂಲಕ ವಿವಿಧ ಸಮಸ್ಯೆ ವೇಳೆ ಸಂಘದ ಬೆಂಬಲ ಹಾಗೂ ಕೆಲವೊಂದು ಸೌಲಭ್ಯ ಪಡೆಯಬಹುದಾಗಿದೆ ಎಂದು ಹಿರಿಯ ಚಲನಚಿತ್ರ ನಿರ್ದೇಶಕ ಹಾಗೂ ಸಂಘದ ಉಪಾಧ್ಯಕ್ಷರಾದ ಜೋ ಸೈಮನ್ ತಿಳಿಸಿದರು.



ಜೋ ಸೈಮನ್

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸದಸ್ಯತ್ವ ಪಡೆಯಲು ಯಾವುದಾದರೊಂದು ಸಿನಿಮಾ ನಿರ್ದೇಶನ ಮಾಡಿರಬೇಕು, ಸೆನ್ಸಾರ್ ಮಂಡಳಿಯಿಂದ ಸೆನ್ಸಾರ್ ಆಗಿರುವ ಪ್ರಮಾಣ ಪತ್ರ ಸಲ್ಲಿಸಬೇಕು. ಕಲ್ಯಾಣ ನಿಧಿ ಸೇರಿ ಸುಮಾರು 25 ಸಾವಿರ ರೂ. ಶುಲ್ಕ ಪಾವತಿಸಬೇಕು. ಒಂದು ವೇಳೆ ಸದಸ್ಯರಿಗೆ ಅನಾರೋಗ್ಯವೇನಾದರೂ ಉಂಟಾದರೆ ಸಂಘ ನೀಡುವ ಶಿಫಾರಸು ಪತ್ರ ಆಧರಿಸಿ ಕರ್ನಾಟಕ ಚಲನಚಿತ್ರ ಅಕಾಡೆಮಿ ಅವರಿಗೆ 75 ಸಾವಿರ ರೂ., ನೆರವು ನೀಡಲಿದೆ ಎಂದರು.

ಕಾರ್ಯದರ್ಶಿ ರೇಣುಕುಮಾರ್ ಟಾಪ್‌ಸ್ಟಾರ್ ಮಾತನಾಡಿ, ಪ್ರತಿಯೊಂದೂ ವಲಯದಲ್ಲೂ ಸದಸ್ಯರನ್ನಾಗಿಸಿಕೊಳ್ಳಲು ಸಂಘದ ಸಮಿತಿ ಪ್ರವಾಸ ಕೈಗೊಂಡಿದೆ. ಇದೇ ರೀತಿ ಈಗ ಮೈಸೂರಿನ ಉಸ್ತುವಾರಿ ಪುಟ್ಟಸ್ವಾಮಿ ಅವರಿಗೆ ವಹಿಸಲಾಗಿದೆ. ದಿವಂಗತ ಪುಟ್ಟಣ್ಣ ಕಣಗಾಲ್, ಸಿದ್ದಲಿಂಗಯ್ಯ ಮೊದಲಾದ ಹಿರಿಯರು ಸೇರಿ 1984 ರಲ್ಲಿ ಸಂಘ ಸ್ಥಾಪಿಸಿದರು. ಇಲ್ಲಿಗೆ ಆಗಮಿಸಿರುವ ತಾವೆಲ್ಲ ಪುಟ್ಟಣ್ಣ ಅವರ ಕಣಗಾಲ್ ಗ್ರಾಮಕ್ಕೆ ಭೇಟಿ ನೀಡಿ ಅವರ ಮನೆ ಪುನರುಜ್ಜೀವನ ಸಾಧ್ಯತೆ ಪರಿಶೀಲಿಸಲಿದ್ದೇವೆಂದರು. ಸುದ್ದಿಗೋಷ್ಠಿಯಲ್ಲಿ ಅಧ್ಯಕ್ಷ ಎನ್ನಾರ್ ಕೆ. ವಿಶ್ವನಾಥ್, ಮಳವಳ್ಳಿ ಸಾಯಿಕೃಷ್ಣ, ಪುಟ್ಟಸ್ವಾಮಿ, ಆದಿತ್ಯ ಚಿಕ್ಕಣ್ಣ ಉಪಸ್ಥಿತರಿದ್ದರು.

ನಾಳೆ ಮೈಸೂರಲ್ಲಿ ನಿವೃತ್ತ ನೌಕರರ ಪ್ರತಿಭಟನೆ

ಮೈಸೂರು, ಡಿ.15(ಜಿಎ)–ಮೈಸೂರಿನ ರಾಮಕೃಷ್ಣ ನಗರದಲ್ಲಿರುವ ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ವತಿಯಿಂದ ಪಿಂಚಣಿದಾರರ ದಿನಾಚರಣೆ ಅಂಗವಾಗಿ ಡಿ.17 ರಂದು ಮಧ್ಯಾಹ್ನ 3.30ಕ್ಕೆ ರಾಮಕೃಷ್ಣ ನಗರದ ಪೊಲೀಸ್ ಠಾಣೆ ಮುಖ್ಯ ರಸ್ತೆಯಲ್ಲಿ ಸದಸ್ಯರು ಮಾನವ ಸರಪಳಿ ರಚಿಸಿ, ತಮ್ಮ ಬೇಡಿಕೆ ಈಡೇರಿಸುವಂತೆ ಸರ್ಕಾರವನ್ನು ಒತ್ತಾಯಿಸಲಿದ್ದಾರೆ ಎಂದು ಅಧ್ಯಕ್ಷ ಉಮಾಕಾಂತ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾನವ ಸರಪಳಿ ರಚನೆ ಸುಮಾರು 15 ನಿಮಿಷ ಇರಲಿದೆ. ಪಾಲ್ಗೊಳ್ಳಲಿಚ್ಛಿಸುವವರು ಬಿಳಿ ಶರ್ಟ್ ಹಾಗೂ ಯಾವುದಾದರೂ ಬಣ್ಣದ ಪ್ಯಾಂಟ್ ಧರಿಸಿರಬೇಕು, ಮಹಿಳೆಯರು ಸಹಾ ಸಾಧ್ಯವಾದಷ್ಟು ಹಳದಿ ಮತ್ತು ಕೆಂಪು ಮಿಶ್ರಿತ

ಬೇಡಿಕೆ ಈಡೇರಿಕೆಗೆ ಆಗ್ರಹ, ಮಧ್ಯಾಹ್ನ ಪಿಂಚಣಿದಾರರ ದಿನಾಚರಣೆ

ಸೀರೆ ಧರಿಸಿ ಬರಬೇಕೆಂದು ಮನವಿ ಮಾಡಿದರು.

ರಾಜ್ಯ ಸರ್ಕಾರ 7 ನೇ ವೇತನ ಆಯೋಗದ ಶಿಫಾರಸನ್ನು 15 ತಿಂಗಳಾದರೂ ಜಾರಿಗೆ ತಂದಿಲ್ಲ. ಸಿಎಂಗೂ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ. ಇದೇ ರೀತಿಯ ಸಮಸ್ಯೆ ಆ ವೇಳೆ ಸರ್ಕಾರದ ಗಮನಕ್ಕೆ ತರಲಾಗುವುದು ಎಂದರು.

2.30ಕ್ಕೆ ಪಿಂಚಣಿದಾರರ ದಿನಾಚರಣೆ ಆಯೋಜಿಸಿದ್ದು, ಅಂದು ಸಂಘದ ಹಿರಿಯ ಸದಸ್ಯರನ್ನು ಸನ್ಮಾನಿಸಲಾಗುವುದು. ಕಾರ್ಯಕ್ರಮವನ್ನು ಮಾಜಿ ಸಚಿವ ಸಾ.ರಾ.ಮಹೇಶ್ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಖಜಾಂಚಿ ಚಂದ್ರಶೇಖರ್, ಚಿಕ್ಕಲಿಂಗಸ್ವಾಮಿ ಉಪಸ್ಥಿತರಿದ್ದರು.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ಡಿಸೆಂಬರ್ 16 ಮಂಗಳವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 238 | ಪುಟಗಳು: 12 + IV
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ರಾಹುಲ್ ಗಾಂಧಿ ಜರ್ಮನಿಯಿಂದ ವಾಪಸ್ಸಾದ ನಂತರ

ಅಧಿಕಾರ ಹಸ್ತಾಂತರ ನಿರ್ಧಾರ

• ಡಿ. 20ಕ್ಕೆ ರಾಹುಲ್ ಸ್ವದೇಶಕ್ಕೆ ವಾಪಸ್ • ಬಳಿಕ ಸಿಎಂ, ಡಿಸಿಎಂ ಸಮ್ಮುಖದಲ್ಲಿ ನಿರ್ಣಯ • ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ಗೆ ಮಾಹಿತಿ

ಬೆಂಗಳೂರು, ಡಿ. 15(ಕೆಎಂಶಿ)– ಜರ್ಮನಿ ಪ್ರವಾಸದಿಂದ ಹಿಂತಿರುಗಿದ ನಂತರ ಕರ್ನಾಟಕದಲ್ಲಿ ಅಧಿಕಾರ ಹಸ್ತಾಂತರ ಕುರಿತಂತೆ ತೀರ್ಮಾನ ಕೈಗೊಳ್ಳುವುದಾಗಿ ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ತಿಳಿಸಿದ್ದಾರೆ.

ದೆಹಲಿಯಲ್ಲಿ ನಡೆದ ಮತಗಳ್ಳತನ ವಿರೋಧಿ ರ್‍ಯಾಲಿ ಮುಗಿಸಿ ಭಾನುವಾರ ರಾತ್ರಿಯೇ ಜರ್ಮನಿ ಪ್ರವಾಸಕ್ಕೆ ತೆರಳಿದ ರಾಹುಲ್, ಡಿಸೆಂಬರ್ 20ಕ್ಕೆ ಹಿಂತಿರುಗಲಿದ್ದಾರೆ. ಪ್ರವಾಸದಿಂದ ಬರುತ್ತಿದ್ದಂತೆ ತಮ್ಮನ್ನು ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕರೆಸಿ, ಪಕ್ಷದ ಮುಖಂಡರ ಸಮ್ಮುಖದಲ್ಲಿ ತೀರ್ಮಾನ ಕೈಗೊಳ್ಳುವುದಾಗಿ ಹೇಳಿದ್ದಾರೆ. ಮತಗಳ್ಳತನ ವಿರೋಧಿ ರ್‍ಯಾಲಿಗೂ ಮುನ್ನ ಇಂದಿರಾ ಭವನದಲ್ಲಿ ನಡೆದ ಔತಣಕೂಟದ ವೇಳೆಯೇ ಶಿವಕುಮಾರ್ ಅವರಿಗೆ ರಾಹುಲ್ ಈ ವಿಷಯ ತಿಳಿಸಿದ್ದಾರೆ.


ರಾಹುಲ್ ಗಾಂಧಿ


ಡಿ.ಕೆ.ಶಿವಕುಮಾರ್

ಇದಾದ ನಂತರ ಶಿವಕುಮಾರ್ ಪಕ್ಷದ ರಾಜ್ಯ ಉಸ್ತುವಾರಿ ಹಾಗೂ ಎಐಸಿಸಿ ಪ್ರಧಾನಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಜೊತೆಗೂಡಿ ರಾಜಕೀಯ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಿವಾಸಕ್ಕೆ ಇಂದು ಬೆಳಗ್ಗೆ ತೆರಳಿ ಅಲ್ಲಿಯೇ ಉಪಹಾರ ಸೇವಿಸಿ, ಅಧಿಕಾರ ಹಸ್ತಾಂತರ ಕುರಿತಂತೆ ಸಮಾಲೋಚಿಸಿದ್ದಾರೆ.

ನಂತರ ಖರ್ಗೆ ಜೊತೆಗೂಡಿಯೇ ವಿಶೇಷ ವಿಮಾನದಲ್ಲಿ ಬೆಂಗಳೂರಿಗೆ ಧಾವಿಸಿ, ಎಚ್‌ಎಎಲ್ ವಿಮಾನ ನಿಲ್ದಾಣದಿಂದ ಹೆಲಿಕಾಪ್ಟರ್‌ನಲ್ಲಿ ದಾವಣಗೆರೆಗೆ ತೆರಳಿ ಹಿಂತಿರುಗಿದರು. ದೆಹಲಿಯಿಂದ ವಿಮಾನದಲ್ಲಿ ಹಿಂತಿರುಗುವ ಸಂದರ್ಭದಲ್ಲೇ ಖರ್ಗೆ ಅವರು, ರಾಹುಲ್ ವಿದೇಶದಿಂದ ಬರುತ್ತಿದ್ದಂತೆ ಅಧಿಕಾರ ಹಸ್ತಾಂತರದ ಬಗ್ಗೆ ನಿಲುವು ತೆಗೆದುಕೊಳ್ಳುವುದಾಗಿ ಹೇಳಿದ್ದಾರೆ ಎನ್ನಲಾಗಿದೆ.

ಕಾಲಾವಕಾಶ ಕೋರಿಕೆ: ಈ ಮಧ್ಯೆ ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಿವಕುಮಾರ್, ನ್ಯಾಷನಲ್ ಹೆರಾಲ್ಡ್ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಪೊಲೀಸರ ನೋಟಿಸ್‌ಗೆ ಉತ್ತರ ನೀಡಲು ಕಾಲಾವಕಾಶ ಕೋರುವು ದಾಗಿ ತಿಳಿಸಿದರು. ಇಂದು ದೆಹಲಿ ಪೊಲೀಸ್ ನೋಟಿಸ್‌ಗೆ ಉತ್ತರ ನೀಡಲು ನಿರ್ಧರಿಸಿದ್ದೆ. ಆದರೆ, ಶಾಮನೂರು ಶಿವಶಂಕರಪ್ಪ ನಿಧನದ ಹಿನ್ನೆಲೆಯಲ್ಲಿ ವಿಶೇಷ ವಿಮಾನದಲ್ಲಿ ದಾವಣಗೆರೆಗೆ ತೆರಳುತ್ತಿದ್ದು, ಕರ್ನಾಟಕ ವಿಧಾನ ಮಂಡಲ ಅಧಿವೇಶನ ಬಳಿಕ ಉತ್ತರ ನೀಡಲು ಕಾಲಾವಕಾಶ ಕೋರುವುದಾಗಿ ತಿಳಿಸಿದರು. ■ 6ನೇ ಪುಟಕ್ಕೆ

ಶಿವ ಸನ್ನಿಧಿಗೆ ಶಾಮನೂರು

ಸಕಲ ಸರ್ಕಾರಿ ಗೌರವದೊಂದಿಗೆ ಪತ್ನಿ ಪಾರ್ವತಮ್ಮ ಸಮಾಧಿ ಪಕ್ಕದಲ್ಲೇ ಕ್ರಿಯಾಸಮಾಧಿ

ದಾವಣಗೆರೆ: ದಾವಣಗೆರೆ ದಕ್ಷಿಣ ಕ್ಷೇತ್ರದ ಕಾಂಗ್ರೆಸ್ ಶಾಸಕ ಹಾಗೂ ಅಖಿಲ ಭಾರತ ವೀರಶೈವ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ ಶಿವನ ಸನ್ನಿಧಿಗೆ ಸಂದಿದ್ದಾರೆ. ಅವರನ್ನು ದಾವಣಗೆರೆಯ ಕಲ್ಲೇಶ್ವರ ರೈಸ್‌ಮಿಲ್ ಆವರಣದಲ್ಲಿ ವೀರಶೈವ–ಲಿಂಗಾಯತ ಸಂಪ್ರದಾಯದಂತೆ ಸಕಲ ಸರ್ಕಾರಿ ಗೌರವಗಳೊಂದಿಗೆ ಕ್ರಿಯಾಸಮಾಧಿ ಮಾಡಲಾಗಿದೆ.



ಪತ್ನಿ ಪಾರ್ವತಮ್ಮ ಸಮಾಧಿ ಪಕ್ಕದಲ್ಲೇ ಕ್ರಿಯಾಸಮಾಧಿ ಮಾಡಲಾಯಿತು. ಮಣ್ಣಿನ ಬದಲಿಗೆ ವಿಭೂತಿ ಗಟ್ಟಿಗಳೊಂದಿಗೆ ಪಂಚಪೀಠದ ಸ್ವಾಮೀಜಿಗಳ ಸಮ್ಮುಖದಲ್ಲಿ ಶಾಮನೂರು ಪುತ್ರ ಎಸ್.ಎಸ್ ಮಲ್ಲಿಕಾರ್ಜುನ ಅಂತಿಮ ಸಂಸ್ಕಾರದ ವಿಧಿ ವಿಧಾನ ನೆರವೇರಿಸಿದರು. ಅಂತ್ಯಕ್ರಿಯೆ ವೇಳೆ ಶಾಮನೂರರ ಪಾರ್ಥಿವ ಶರೀರಕ್ಕೆ ಪೊಲೀಸರು ತ್ರಿವರ್ಣ ಧ್ವಜ ಹೊದಿಸಿ ಗೌರವ ಸೂಚಿಸಿದರು. ಇದಾದ ಮೇಲೆ ಡಿಸಿಎಂ ಡಿ.ಕೆ. ಶಿವಕುಮಾರ್ ತ್ರಿವರ್ಣಧ್ವಜವನ್ನು ಶಾಮನೂರು ಕುಟುಂಬಕ್ಕೆ ನೀಡಿದರು. ರಾಷ್ಟ್ರಗೀತೆಯೊಂದಿಗೆ ಮೂರು ಸುತ್ತು ಕುಶಾಲತೋಪು ಸಿಡಿಸುವ ಮೂಲಕ ವಿಶೇಷ ಗೌರವ ಸಲ್ಲಿಸಿದರು. ಬಳಿಕ ವಾದ್ಯ ವಂದನೆ ಅರ್ಪಿಸಿ, ಬಳಿಕ ಒಂದು ನಿಮಿಷ ಮೌನಾಚರಣೆ ಮಾಡಲಾಯಿತು.


ಸೋಮವಾರದಂದು ವೀರಶೈವ–ಲಿಂಗಾಯತ ಸಂಪ್ರದಾಯದಂತೆ ಶಾಮನೂರು ಶಿವಶಂಕರಪ್ಪನವರ ಕ್ರಿಯಾಸಮಾಧಿ ನೆರವೇರಿತು.

ಇದಕ್ಕೂ ಮೊದಲು ಅವರ ಪಾರ್ಥಿವ ಶರೀರವನ್ನು ಪುತ್ರರೂ ಆದ ಸಚಿವ ಮಲ್ಲಿಕಾರ್ಜುನ ಅವರ ನಿವಾಸ ನಂತರ, ಸರ್ಕಾರಿ ಪ್ರೌಢಶಾಲೆ ಮೈದಾನದಲ್ಲಿ ಅಂತಿಮ ದರ್ಶನಕ್ಕೆ ಇರಿಸಲಾಗಿತ್ತು. ಸರ್ವಧರ್ಮದ ಲಕ್ಷಾಂತರ ಜನ ಸರದಿ ಸಾಲಿನಲ್ಲಿ ಬಂದು ಅಂತಿಮ ದರ್ಶನ ಪಡೆದು, ಕಂಬನಿ ಮಿಡಿದರು. ಭಾರೀ ಪ್ರಮಾಣದಲ್ಲಿ ಜನ ಸೇರಿದ್ದರೂ ಒಂದೇ ಒಂದು ಸಣ್ಣ ಅಹಿತಕರ ಘಟನೆ ನಡೆಯಲಿಲ್ಲ. ಪೊಲೀಸರು ಭಾರೀ ಬಂದೋಬಸ್ತ್ ಮಾಡಿದ್ದರೂ, ■ 6ನೇ ಪುಟಕ್ಕೆ

ಜಕ್ಕೂರು ವಿಮಾನ ತರಬೇತಿ ಶಾಲೆ ಮೈಸೂರಿಗೆ?

ಮೈಸೂರು, ಡಿ. 15 (ಆರ್‌ಕೆ)– ಬೆಂಗಳೂರಿನ ಜಕ್ಕೂರು ವಿಮಾನ ನಿಲ್ದಾಣದಲ್ಲಿರುವ ವಿಮಾನ ತರಬೇತಿ ಶಾಲೆಯನ್ನು ಸಾಂಸ್ಕೃತಿಕ ನಗರ ಮೈಸೂರಿಗೆ ಸ್ಥಳಾಂತರಿಸಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ.



ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಸರ್ಕಾರಿ ವಿಮಾನ ತರಬೇತಿ ಶಾಲೆ (Government Flying Training School)ಯನ್ನು ಸ್ಥಳಾಂತರಿಸುವ ಬಗ್ಗೆ ಪ್ರಸಕ್ತ ಕಾಂಗ್ರೆಸ್ ಸರ್ಕಾರವು ಪ್ರಕ್ರಿಯೆ ನಡೆಸುತ್ತಿದ್ದು, ಈ ಪ್ರಸ್ತಾವನೆ ಸಂಬಂಧ ಪರಿಶೀಲಿಸಿ ವರದಿ ನೀಡಲು ರಚಿಸಿರುವ ತಜ್ಞರ ಸಮಿತಿ ಸದಸ್ಯರು ವಾರದ ಹಿಂದೆಯಷ್ಟೇ ಬೆಂಗಳೂರಲ್ಲಿ ಸಭೆ ನಡೆಸಿದ್ದರು.


ಉಷಾಕುಮಾರಿ

ರಾಜ್ಯ ಸರ್ಕಾರವು 2025 ರ ನವೆಂಬರ್‌ನಲ್ಲಿ ನಾಗರಿಕ ವಿಮಾನಯಾನದ ಮಹಾನಿರ್ದೇಶಕರಿಗೆ (ಡಿಜಿಸಿಎ) ಬರೆದ ಪತ್ರದಲ್ಲಿ ಜಿಎಫ್‌ಟಿಎಸ್ ಅನ್ನು ಮೈಸೂರಿಗೆ ಸ್ಥಳಾಂತರಿಸುವ ಆಸಕ್ತಿ ವ್ಯಕ್ತಪಡಿಸಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಹ ತಮ್ಮ ತವರು ಜಿಲ್ಲೆಗೆ ತರಬೇತಿ ■ 6ನೇ ಪುಟಕ್ಕೆ

ವಿಮಾನ ನಿಲ್ದಾಣಕ್ಕೆ ಗಂಡಾಂತರ

ಮೈಸೂರು ಡಿ.15 (ಆರ್‌ಕೆ)– ಒಂದು ವೇಳೆ ಬೆಂಗಳೂರಿನಿಂದ ಜಕ್ಕೂರು ಸರ್ಕಾರಿ ವಿಮಾನ ತರಬೇತಿ ಶಾಲೆಯನ್ನು ಮೈಸೂರಿಗೆ ಸ್ಥಳಾಂತರಿಸಿದಲ್ಲಿ ಮಂಡಕಳ್ಳಿಯ ವಿಮಾನ ನಿಲ್ದಾಣಕ್ಕೆ ಗಂಡಾಂತರ ಒದಗಿ ಬರಲಿದೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ 'ಮೈಸೂರು ಮಿತ್ರ' ನಿಗೆ ಪ್ರತಿಕ್ರಿಯೆ ನೀಡಿದ ಮಾಜಿ ಸಂಸದ ಪ್ರತಾಪ್ ಸಿಂಹ ಅವರು ಮೈಸೂರು ವಿಮಾನನಿಲ್ದಾಣವು ನಾಗರಿಕ ವಿಮಾನ ನಿಲ್ದಾಣವಾಗಿಯೇ ಉಳಿಯ ಬೇಕು ಮತ್ತು ಇಲ್ಲಿ ■ 6ನೇ ಪುಟಕ್ಕೆ




ಮುಂದಿನ ಲೋಕಸಭಾ ಚುನಾವಣೆಯಲ್ಲೂ

ಪ್ರಧಾನಿ ಮೋದಿ ನೇತೃತ್ವದಲ್ಲಿ ಬಿಜೆಪಿ ಅಧಿಕಾರಕ್ಕೆ ಬರುತ್ತೆ!


■ ಪ್ರಧಾನಿ ಮೋದಿಯನ್ನು ಟೀಕಿಸಿದ ಪ್ರತಿಪಕ್ಷಗಳ ವಿರುದ್ಧ ಹೆಚ್.ಡಿ.ದೇವೇಗೌಡರು ವಾಗ್ದಾಳಿ; ತಿರುಗುಬಾಣದ ಎಚ್ಚರಿಕೆ ■ ರಾಜ್ಯಸಭೆಯಲ್ಲಿ ವೋಟ್ ಚೋರಿ ಚರ್ಚೆ; ಕಾಂಗ್ರೆಸ್ ವಿರುದ್ಧ ಗುಡುಗಿದ ಮಾಜಿ ಪ್ರಧಾನಿ ■ ವೋಟ್ ಚೋರಿ ನೆಪದಲ್ಲಿ ಸುಳ್ಳು ಸಂಕಥನ ಸೃಷ್ಟಿ; ಬಿಹಾರದಲ್ಲಿ ಆರಕ್ಕಿಳಿದ ಕಾಂಗ್ರೆಸ್‌ಗೆ ಚಾಟಿ

ನವದೆಹಲಿ, ಡಿ.15– ವೋಟ್ ಚೋರಿ ಹೆಸರಿನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಸರ್ಕಾರ ಹಾಗೂ ಸಾಂವಿಧಾನಿಕ ಸಂಸ್ಥೆಗಳ ವಿರುದ್ಧ ಸುಳ್ಳಿನ ಸಂಕಥನ ಸೃಷ್ಟಿಸುತ್ತಿರುವ ಪ್ರತಿಪಕ್ಷಗಳು ಭವಿಷ್ಯದಲ್ಲಿ ಘೋರ ಪರಿಣಾಮ ಅನುಭವಿಸುತ್ತವೆ. ರಾಷ್ಟ್ರದ ಜನರು ನರೇಂದ್ರ ಮೋದಿ ಅವರ ಸರಕಾರದ ಮೇಲೆ ಸಂಪೂರ್ಣ ವಿಶ್ವಾಸ ಹೊಂದಿದ್ದಾರೆ. ಮುಂದಿನ ಲೋಕಸಭೆ ಚುನಾವಣೆಯ ನಂತರವೂ ಅವರು ಮತ್ತೆ ಅಧಿಕಾರಕ್ಕೆ ಬರುತ್ತಾರೆ ಎಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಭವಿಷ್ಯ ನುಡಿದಿದ್ದಾರೆ.


ಹೆಚ್.ಡಿ.ದೇವೇಗೌಡರು

ರಾಜ್ಯಸಭೆಯಲ್ಲಿ ಸೋಮವಾರ ಈ ಕುರಿತ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪ್ರತಿಪಕ್ಷಗಳು ನಿರಂತರವಾಗಿ ಸುಳ್ಳಿನ ಕಥೆಗಳನ್ನು ಪ್ರಚಾರ ಮಾಡುತ್ತಾ ಹೋದರೆ, ಮತದಾರರ ಮನಸ್ಸಿನಲ್ಲಿ ಅನುಮಾನಗಳನ್ನು ಹುಟ್ಟು ಹಾಕಿದಂತೆ. ಅದರಿಂದ ಪ್ರತಿಪಕ್ಷಗಳಿಗೆ ಒಳ್ಳೆಯದಾಗುವುದಿಲ್ಲ. ಪ್ರತಿಪಕ್ಷಗಳು ಪ್ರಧಾನಿಯವರ ಬಗ್ಗೆ ಹಾದಿ–ಬೀದಿಗಳಲ್ಲಿ ಮತ್ತು ಸಾರ್ವಜನಿಕ ವೇದಿಕೆಗಳಲ್ಲಿ ಕೆಟ್ಟದ್ದಾಗಿ ಟೀಕೆ ಮಾಡುತ್ತಿರುವುದು ಸರಿಯಲ್ಲ ಎಂದು ಹರಿಹಾಯ್ದರು. ನಮ್ಮದು ಬಹಳ ದೊಡ್ಡ ರಾಷ್ಟ್ರ, ಕಾಂಗ್ರೆಸ್ ಪಕ್ಷವು ಈಗ ಮೂರು ರಾಜ್ಯಗಳಲ್ಲಿ ಅಧಿಕಾರದಲ್ಲಿ ಇರಬಹುದು. ನನ್ನ ಪ್ರತಿಪಕ್ಷ ಸ್ನೇಹಿತರೇ, ದಯವಿಟ್ಟು ■ 6ನೇ ಪುಟಕ್ಕೆ







ನಕ್ಕರೆ ಅದೇ ಸ್ವರ್ಗ

ರೋಗಿ : ಡಾಕ್ಟರ್ ಮೂರು ತಿಂಗಳಿಂದ ಕೆಮ್ಮಿದೆ.
ಡಾಕ್ಟರ್ : ಈಗ ಬಂದಿದ್ದೀರಾ... ಇಷ್ಟು ದಿನ ಏನ್ ಮಾಡ್ತಾ ಇದ್ರಿ?
ರೋಗಿ : ಕೆಮ್ತಾ ಇದ್ದೆ ಡಾಕ್ಟ್ರೆ!

ಮೈಸೂರು ಮಿತ್ರ
ಮಂಗಳವಾರ, 16 ಡಿಸೆಂಬರ್ 2025
ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ಉಪ್ಪಿನಂತಾಗಿದೆ ನಮ್ಮ ಜೀವನ. ಜನರು ಅವರವರ ರುಚಿಗೆ ತಕ್ಕಷ್ಟು ನಮ್ಮನ್ನು ಬಳಸಿಕೊಳ್ಳುತ್ತಾರೆ. – ಪ್ರೀತು ಪ್ರೀತಮ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಧೈರ್ಯವಿದ್ದವನಿಗೆ ದೈವವೂ ಅನುಕೂಲ.

ನಿಮ್ಮ ಪತ್ರಗಳು

ಕುಟುಂಬದ ಜುಟ್ಟು ಸರ್ಕಾರದ ಕೈಯಲ್ಲಿ

ಮಾನ್ಯರೆ,

ಕಳೆದ ಯುಪಿಎ ಸರ್ಕಾರದ ಅವಧಿಯಲ್ಲಿ ಪ್ರತಿಯೊಬ್ಬ ವ್ಯಕ್ತಿಯ ವಯಸ್ಸು, ವಿಳಾಸ ವಿವರವುಳ್ಳ ದತ್ತಾಂಶದ ಆಧಾರ್ ಕಾರ್ಡ್ ಅನ್ನು ಜಾರಿಗೆ ತರಲಾಯಿತು. ಇದನ್ನು ಅಂದಿನ ಬಿಜೆಪಿ ತೀವ್ರವಾಗಿ ವಿರೋಧಿಸಿತ್ತು. ಆಧಾರ್ ಕಾರ್ಡ್‌ಗೆ ಬ್ಯಾಂಕ್ ಅಕೌಂಟ್ ಹಾಗೂ ವೋಟರ್ ಐಡಿ ಲಿಂಕ್ ಮಾಡುವ ಬಗ್ಗೆ ಅನೇಕರು ತಕರಾರು ಮಾಡಿ ಸುಪ್ರೀಂ ಕೋರ್ಟ್ ಮೆಟ್ಟಿಲು ಹತ್ತಿದ್ದರು. ಇದರಿಂದ ತಮ್ಮ ಖಾಸಗಿತನಕ್ಕೆ ಧಕ್ಕೆಯಾಗುತ್ತದೆ ಎನ್ನುವುದು ಅವರ ವಾದವಾಗಿತ್ತು. ಅದು ನಿಜವೂ ಹೌದು. ಎಲ್ಲವೂ ಅವರ ಕೈಯಲ್ಲಿದೆ. ಆಧಾರ್, ಪ್ಯಾನ್ ನಂಬರ್‌ಗಳನ್ನು ದುರುಪಯೋಗ ಪಡಿಸಿಕೊಂಡು ಜನರ ಖಾತೆಯಲ್ಲಿದ್ದ ಹಣ ಕಳುವು ಪ್ರಕರಣಗಳು ವರದಿಯಾಗಿವೆ. ಸೈಬರ್ ವಂಚನೆಯ ನೂರಾರು ಪ್ರಕರಣಗಳು ನಿತ್ಯ ವರದಿಯಾಗುತ್ತಲೇ ಇವೆ. ಇವುಗಳೆಲ್ಲಾ ತಂತ್ರಜ್ಞಾನ ಅಭಿವೃದ್ಧಿಯ ಫಲಗಳು. ಒಂದು ಒಳ್ಳೆಯದರ ಜೊತೆಗೆ ಹಲವು ಕಳ್ಳ ಮಾರ್ಗಗಳಿಗೂ ಈ ಅಭಿವೃದ್ಧಿ ಕಾರಣವಾಗುತ್ತಿದೆ.

ಇದೀಗ ಕರ್ನಾಟಕ ಸರ್ಕಾರವು ಕುಟುಂಬಕ್ಕೊಂದು ವಿಶಿಷ್ಟ ಸಂಖ್ಯೆ ನೀಡುವ ಮಸೂದೆಯನ್ನು ಸಿದ್ಧಪಡಿಸುವುದು ವರದಿಯಾಗಿದೆ.

ಆದರೆ ನಿಜಕ್ಕೂ ಇದು ಅವಶ್ಯವಿದೆಯೇ ಎನ್ನುವ ಬಗ್ಗೆ ಆಲೋಚಿಸುವುದು ಒಳ್ಳೆಯದು. ಏಕೆಂದರೆ ಈಗಾಗಲೇ, ಆಧಾರ್‌ನಲ್ಲಿ ವ್ಯಕ್ತಿಯ ಮಾಹಿತಿಯನ್ನು ಪಡೆಯಲಾಗಿದೆ. ಪ್ಯಾನ್‌ನಲ್ಲಿ ವ್ಯಕ್ತಿಯ ಆದಾಯದ ವಿವರಗಳಿವೆ. ಎಲ್ಲಾ ಆಸ್ತಿ, ಉದ್ಯೋಗ, ಬ್ಯಾಂಕ್ ಖಾತೆಗಳಿಗೆ ಆಧಾರ್, ಪ್ಯಾನ್ ಲಿಂಕ್ ಆಗಿರುವುದರಿಂದ ವ್ಯಕ್ತಿಯ ಎಲ್ಲಾ ವ್ಯವಹಾರವೂ ಸರ್ಕಾರದ ಕಣ್ಗಾವಲಿನಲ್ಲಿದೆ. ಯಾವುದೂ ರಹಸ್ಯವಾಗಿ ಉಳಿದಿಲ್ಲ. ಇದೀಗ ಸಮಾಜ ಕಲ್ಯಾಣ ಇಲಾಖೆ ನಡೆಸಿದ ಸಾಮಾಜಿಕ, ಶೈಕ್ಷಣಿಕ, ಜಾತಿ ಸಮೀಕ್ಷೆಯಲ್ಲಿ ಕೂಡ, ಕುಟುಂಬದ ಮುಖ್ಯಸ್ಥನ ಹಾಗೂ ಕುಟುಂಬದ ಸದಸ್ಯರ ಜಾತಿ, ಶಿಕ್ಷಣ, ಉದ್ಯೋಗ, ಆಸ್ತಿ, ಹಣಕಾಸಿನ ಎಲ್ಲಾ ಮಾಹಿತಿಯನ್ನು ಒಟ್ಟು (60 ಮಾಹಿತಿ) ಸಂಗ್ರಹಿಸಲಾಗಿದೆ.

ಅಲ್ಲದೆ ಈಗಾಗಲೇ ಇರುವ ಎಪಿಎಲ್, ಬಿಪಿಎಲ್ ರೇಷನ್ ಕಾರ್ಡ್‌ಗಳಲ್ಲಿ ಕುಟುಂಬದ ಮುಖ್ಯಸ್ಥನ ಹಾಗೂ ಕುಟುಂಬ ಸದಸ್ಯರ ವಿವರಗಳಿವೆ. ಹೆಸರೇ ಹೇಳುವಂತೆ, ಬಡತನ ರೇಖೆಗಿಂತ ಮೇಲಿರುವವರು ಹಾಗೂ ಬಡತನ ರೇಖೆಗಿಂತ ಕೆಳಗಿರುವವರು ಎಂದು ಸ್ಪಷ್ಟವಾಗಿ ಗುರುತಿಸಲಾಗಿದೆ. ಹೀಗಿರುವಾಗ ಇದನ್ನೇ ಬಲಪಡಿಸುವ ಬದಲು ಕರ್ನಾಟಕ ಕುಟುಂಬ ಪ್ರಾಧಿಕಾರ (ಮಾಹಿತಿ ಮತ್ತು ನಿರ್ವಹಣೆ) ರೂಪಿಸಿ ಕುಟುಂಬ ತಂತ್ರಾಂಶದ ಮೂಲಕ ಪ್ರತಿ ಕುಟುಂಬವೂ ತನ್ನ ವಿವರಗಳನ್ನು ನಮೂದಿಸಿ ಕುಟುಂಬ ಸಂಖ್ಯೆ ಪಡೆಯುವ ಅವಶ್ಯಕತೆ ಇದೆಯೇ? ಸರ್ಕಾರ ಚಾಪೆಯ ಕೆಳಗೆ ತೂರಿದರೆ ಕಳ್ಳರು ರಂಗೋಲಿ ಕೆಳಗೆ ನುಸುಳುತ್ತಾರೆ.

ಸರ್ಕಾರ ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ ಪಡಿತರ ಚೀಟಿದಾರರಿಗೆ ಅನ್ನ ಭಾಗ್ಯ ಯೋಜನೆಯಡಿ ವಿತರಿಸುವ ಅಕ್ಕಿ ಹೊರ ರಾಜ್ಯವಷ್ಟೇ ಅಲ್ಲ ದುಬೈ, ಸಿಂಗಪುರ ಸೇರಿದಂತೆ ವಿದೇಶಗಳಿಗೂ ಕಳ್ಳ ಸಾಗಾಣೆಯಾಗುತ್ತಿದೆ ಎಂದು ಶಾಸಕರೇ ಹೇಳಿದ್ದಾರೆ. ಈ ವರ್ಷ ಪಡಿತರ ಕಳ್ಳ ಸಾಗಾಣೆ ಮಾಡುತ್ತಿದ್ದ 570 ಮಂದಿಯನ್ನು ಬಂಧಿಸಿ 29600 ಕ್ವಿಂಟಾಲ್ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಆಹಾರ ಮತ್ತು ನಾಗರೀಕ ಪೂರೈಕೆ ಸಚಿವರೇ ವಿಧಾನಸಭೆಯಲ್ಲಿ ಹೇಳಿದ್ದಾರೆ. ಕಾಯುವವರು ಹೆಚ್ಚೋ ಕಳುವವರು ಹೆಚ್ಚೋ ಯಾವುದೇ ವ್ಯವಸ್ಥೆ ಮಾಡಿದರೂ ಅಲ್ಲಿ ಅವ್ಯವಸ್ಥೆಯೂ ಜೊತೆಗೆ ಇರುತ್ತದೆ. ಇದೀಗ ಸರ್ಕಾರ ಅಂತಹ ಕಡೆ ಮತ್ತೊಂದು ಹೆಜ್ಜೆ ಇಡಲು ಮುಂದಾಗಿದೆ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ಮೈಸೂರೇ ಗ್ರೇಟರ್ ಅಲ್ಲವೇ?



ಮಾನ್ಯರೆ,

ಮೈಸೂರು ಆಗುತಿದೆ ಮತ್ತೊಂದು ಬೆಂಗಳೂರು, ಖುಷಿ
ಫ್ಲೈಓವರ್ ಬರುತಿದೆ, ಹಾರುವೆವು ಮೇಲೆಯೇ ಇನ್ಮೇಲೆ,
ರಸ್ತೆಗಳಿಗೆ ಕಾಂಕ್ರೀಟ್ ಹಾಕುವರಂತೆ, ಗುಂಡಿಗಳಿಲ್ಲದ ನೈಸ್‌ರಸ್ತೆ,
ಗ್ರೇಟರ್ ನಾದವು ಮೊಳಗಿದೆ ಎಲ್ಲೆಡೆ, ಗ್ರೇಟಾಯಿತು ನಮ್ಮೂರು
ರೇಟಾಯಿತು ನಮ್ಮೂರಿಗೂ, ಮೊಟಕಾಯಿತು ನೆಮ್ಮದಿ ನಮಗೆ,
ವೇದಿಕೆಯೇರಿ ವಿರೋಧ ಇಲ್ಲವೆಂದು ಘೋಷಿಸಿದರು ಗಣ್ಯರು,
ಆದರೆ.. ಆದರೆ... ಹಾಗಿರಲಿ, ಹೀಗಿರಲೆಂದು ಕೊಟ್ಟರು ಸಲಹೆ,
ತೀರ್ಥಪ್ರಸಾದಗಳ ಯೋಜನೆಯಡಿ ಕಡಿದಾಯಿತು ಬೆಟ್ಟವನ್ನೂ,
ಶುದ್ಧಗಾಳಿಗೂ ಹಣಗಾಡುವ ಕಾಲ ಕಣ್ಮುಂದಿದೆ, ಕೆರೆಗಳು ಕಾಣೆವು
ಇದ್ದಂತಿರಲಿ, ಉಳಿಸಿರಿ ಮಹಾರಾಜರು ಕಟ್ಟಿದ ಸುಂದರ ಮೈಸೂರನ್ನು,
ಕೊಳ್ಳೆ ಹೊಡೆಯುವ ಭೂಗಳ್ಳರಿಂದ ರಕ್ಷಣೆಯಾದರೆ ಅದೇ ಗ್ರೇಟ್!
ಏತಕೆ ಬೇಕು?, ಯಾರಿಗೇ ಬೇಕು?, ಹೇಳಿ ಗ್ರೇಟರ್ ಮೈಸೂರು,
ರೇಟ್‌ನಲ್ಲಿರುವ ಅರಸರು ಕೊಟ್ಟ ಮೈಸೂರೇ ಗ್ರೇಟರ್ ಅಲ್ಲವೇ?!.

–ಮಿರ್ಲೆ ಚಂದ್ರಶೇಖರ, ಲೇಖಕರು, ಮೈಸೂರು.

ಸಾತಗಳ್ಳಿ ಬಸ್ ನಿಲ್ದಾಣದಲ್ಲಿ ಬಸ್ ನಿಲ್ಲಿಸದೇ ನಿರ್ಲಕ್ಷ್ಯತೆ

ಮಾನ್ಯರೆ,

ಮೈಸೂರು ಗ್ರಾಮಾಂತರ ಸಬ್ ಅರ್ಬನ್ ಬಸ್ ನಿಲ್ದಾಣದಿಂದ ಕೆಸರೆ, ಆರ್.ಎಸ್. ನಾಯ್ಡುನಗರ ಕಡೆ ತೆರಳುವ ನಗರ ಸಾರಿಗೆ ಬಸ್ ಸಂಖ್ಯೆ ಕೆಎ–09–ಎಫ್–4791 ಸಾತಗಳ್ಳಿ ಡಿಪೋ ಬಸ್ ನಿಲ್ದಾಣದಲ್ಲಿ ಸರಿಯಾಗಿ ನಿಲ್ಲಿಸದೆಯೇ ನಿರ್ಲಕ್ಷ್ಯ ವಹಿಸುವುದುಂಟು. ಈ ಹಿಂದೆ ಇದೇ ಚಾಲಕನ ಮೇಲೆ ಅನೇಕ ಅಪವಾದಗಳೂ ಇವೆ. ಅಲ್ಲದೆ, ಮಹಿಳೆಯರ ಬಗ್ಗೆ ತಾತ್ಸಾರ ವಹಿಸುವುದು, ಮಹಿಳೆಯರು ಕೇವಲ 20 ಮಂದಿಗೆ ಮಾತ್ರ ಎಂಬುದಾಗಿ ಹೇಳುವುದು, ಶಾಲಾ–ಕಾಲೇಜು ವಿದ್ಯಾರ್ಥಿಗಳನ್ನು ಹತ್ತಿಸಿಕೊಳ್ಳದಿರುವುದು, ಶಕ್ತಿಯೋಜನೆಯನ್ನು ತಾತ್ಸಾರದಿಂದ ಕಾಣುವುದು ಇನ್ನಿತರ ಸಮಸ್ಯೆಗಳನ್ನು ಮಾಡುತ್ತಾರೆ. ಸಂಬಂಧಪಟ್ಟ ಅಧಿಕಾರಿಗಳು ಇದರ ಬಗ್ಗೆ ಗಮನಹರಿಸಿ, ಈ ಮುಂದೆಯಾದರೂ ಇಂತಹ ಘಟನೆಗಳು ಮರುಕಳಿಸದಂತೆ ಕ್ರಮವಹಿಸಬೇಕೆಂದು ಈ ಮೂಲಕ ಮನವಿ.

–ಜಮುನಾ, ಕುರಿಮಂಡಿ, ಕೆಸರೆ, ಮೈಸೂರು.



ಬನ್ನೂರು ಕೆ. ರಾಜು
ಸಾಹಿತಿ, ಪತ್ರಕರ್ತ
ಮೊ: 94815 33167

ಬಹುಮುಖಿ

ಜನರ ಅಚ್ಚು–ಮೆಚ್ಚಿನ ಬ್ರದರು ಕುಮಾರಣ್ಣ



ಹೆಚ್.ಡಿ. ಕುಮಾರಸ್ವಾಮಿ

> ಕುಮಾರಸ್ವಾಮಿ, ಅಧಿಕಾರ ಸಿಕ್ಕ ಅಲ್ಪ ಅವಧಿಯಲ್ಲೇ ಹಲವಾರು ಜನಪರ ಕಾರ್ಯಗಳನ್ನು ಮಾಡಿ ಅನೇಕ ಜನೋಪಯೋಗಿ ಯೋಜನೆಗಳನ್ನು ನಾಡಿಗೆ ಕೊಟ್ಟು, ಜನರ ಗಮನ ಸೆಳೆದಿದ್ದರು. ಹೆಂಡ–ಸಾರಾಯಿ ನಿಷೇಧ, ಲಾಟರಿ ನಿಷೇಧ, ಮಹಿಳಾ ಮೀನುಗಾರರಿಗೆ ಶೇಕಡಾ 4 ರಷ್ಟು ಬಡ್ಡಿ ದರದಲ್ಲಿ ಸಾಲ, ವಿದ್ಯಾರ್ಥಿಗಳಿಗೆ ಸೈಕಲ್ ವಿತರಣೆ, ಇನ್ನು ಅನೇಕ ಯೋಜನೆಗಳನ್ನು ರೂಪಿಸಿ ಪ್ರಾಮಾಣಿಕವಾಗಿ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಶ್ರಮಿಸಿದರು. ಹಾಗಾಗಿ ನಾಡು ಮೆಚ್ಚಿದ ಮುಖ್ಯಮಂತ್ರಿಯಾಗಿ ಜನಮನ್ನಣೆ ಗಳಿಸಿದ್ದರು.

ಡಿಸೆಂಬರ್ 16, ಹೆಚ್.ಡಿ. ಕುಮಾರ ಸ್ವಾಮಿ ಅವರ ಜನ್ಮದಿನ. ತನ್ನಿಮಿತ್ತ ಈ ಲೇಖನ.

ಇಸವಿ 1996. ಹೆಚ್.ಡಿ. ದೇವೇಗೌಡರು ರಾಜ್ಯದ ಮುಖ್ಯಮಂತ್ರಿಗಳಾಗಿದ್ದ ಕಾಲವದು. ಅದೇ ವರ್ಷ ಸರಿಯಾಗಿ ಖ್ಯಾತ ಚಲನ ಚಿತ್ರನಟ ರೆಬಲ್‌ಸ್ಟಾರ್ ಅಂಬರೀಶ್ ಅವರು ಚಿತ್ರರಂಗ ಪ್ರವೇಶಿಸಿ ಇಪ್ಪತ್ತೈದು ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿದ್ದರು. ಅಭಿಮಾನಿಗಳಿಗೆ ಹೆಮ್ಮೆಪಡಲು ಇದೊಂದು ಸುಸಂದರ್ಭವಾಗಿತ್ತು. ಹಾಗಾಗಿ ಅಖಿಲ ಭಾರತ ಅಂಬರೀಶ್ ಅಭಿಮಾನಿಗಳ ಸಂಘದ ವತಿಯಿಂದ ಅಂಬರೀಶ್ ಚಿತ್ರ ಜೀವನದ ಬೆಳ್ಳಿ ಹಬ್ಬವನ್ನು ಬನ್ನೂರಿನಲ್ಲಿ ಬಹಳ ಅದ್ಧೂರಿಯಾಗಿ ಆಯೋಜಿಸಲಾಗಿತ್ತು. ರಾಜ್ಯದ ಮೂಲೆ ಮೂಲೆಗಳಿಂದ ಬಂದಿದ್ದ ಐವತ್ತು ಸಾವಿರಕ್ಕೂ ಹೆಚ್ಚು ಅಭಿಮಾನಿಗಳು ಸಾಗರದೋಪಾದಿಯಲ್ಲಿ ಜಮಾಯಿಸಿದ್ದರು.

ಈ ಸಮಾರಂಭಕ್ಕೆ ಹೆಚ್.ಡಿ. ಕುಮಾರಸ್ವಾಮಿ ಅವರು ಸ್ನೇಹ ಪೂರ್ವಕವಾಗಿ ಬಂದಿದ್ದರು. ಚಲನಚಿತ್ರ ವಿತರಕರೆಂಬುದನ್ನು ಬಿಟ್ಟರೆ ಅವರು ಅವತ್ತು ರಾಜಕೀಯದಲ್ಲಿ ಏನೇನೂ ಅಲ್ಲ. ಆ ಜನಜಂಗುಳಿಯಲ್ಲಿ ಅವರು ವೇದಿಕೆಯನ್ನು ಏರಲಾಗಿರಲಿಲ್ಲ. ದೂರದಲ್ಲೆಲ್ಲೋ ಒಂದು ಮೋರಿಯ ಮೇಲೆ ನಿಂತು ಸಮಾರಂಭ ನೋಡುತ್ತಿದ್ದರು. ಇದನ್ನು ವೇದಿಕೆಯಿಂದ ತಕ್ಷಣವೇ ಗಮನಿಸಿದ ಅಂಬರೀಶ್ ಅವರು 'ಏಯ್ ನನ್ನಕ್ಕಳ್ರಾ ಮುಖ್ಯಮಂತ್ರಿ ದೇವೇಗೌಡ್ರ ಮಗ ಕಣ್ರೋ ಕುಮಾರಸ್ವಾಮಿ ಮೊದ್ಲು ಅವ್ರನ್ನ ಅಲ್ಲಿಂದ ವೇದಿಕೆ ಮೇಲೆ ಕರೆತನ್ರೋ...' ಎಂದು ಮೈಕ್‌ನಲ್ಲಿ ಕಿರುಚಿದರು. ಕೂಡಲೇ ಹೋಗಿ ಅವರನ್ನು ವೇದಿಕೆಗೆ ಕರೆದಾಗ "ಪರವಾಗಿಲ್ಲ ಬಿಡಿ ಬ್ರದರ್, ನಾನಿಲ್ಲೇ ನಿಂತು ಸಮಾರಂಭ ನೋಡಿ ಖುಷಿಪಡ್ತಿನಿ" ಎಂದು ಖುಷಿ ಖುಷಿಯಾಗಿಯೇ ಹೇಳಿಬಿಟ್ಟರು. ಬಹುಷಃ ಅವರ ದೊಡ್ಡಸ್ಥಿಕೆಯಿಲ್ಲದ ಸರಳ, ಸಜ್ಜನಿಕೆಯ ಇಂಥಾ ದೊಡ್ಡಗುಣವೇ ಮುಂದಿನ ದಿನಗಳಲ್ಲಿ ಅವರನ್ನು ರಾಜ್ಯದ ಮುಖ್ಯ ಮಂತ್ರಿ ಸ್ಥಾನದಲ್ಲಿ ಕೂರಿಸಿತೆಂದು ಕಾಣುತ್ತದೆ.

ಇದಾಗಿ ಸುಮಾರು ಎರಡು ಮುಕ್ಕಾಲು ದಶಕಗಳು ಉರುಳಿದ್ದವು. ಅಂಬರೀಶ್ ಅವರು ತಮ್ಮ ಚಿತ್ರ ಜೀವನದಲ್ಲಿ 50 ವರ್ಷಗಳ ಸುವರ್ಣ ಸಂಭ್ರಮವನ್ನು ಆಚರಿಸಿಕೊಂಡರು. ಇದಾದ ಸ್ವಲ್ಪ ಕಾಲದಲ್ಲೇ ಅವರು 2018 ನವೆಂಬರ್ 24ರಂದು ನಿಧನರಾದರು. ಅಂಬರೀಶ್ ನಿಧನರಾದ ಸುದ್ದಿ ತಿಳಿದಾಕ್ಷಣ ಬೆಂಗಳೂರಿಗೆ ದೌಡಾಯಿಸಿದ ಜನ ಸಾಗರವೆಷ್ಟೋ, ನಿಂತಲ್ಲೇ ಅತ್ತವರೆಷ್ಟೋ, ಹಳ್ಳಿ ಹಳ್ಳಿಗಳಲ್ಲಿ ಬಿಕ್ಕಳಿಸಿ ಬಿದ್ದವರೆಷ್ಟೋ, ಪ್ರತಿಯೊಬ್ಬರಲ್ಲೂ ಅಂದು ಅಂಬರೀಶ್ ಮುಖವನ್ನೊಮ್ಮೆ ಕೊನೆ ಬಾರಿಗೆ ನೋಡಿಯೇ ತೀರಬೇಕೆಂಬ ಅಳಲು. ಎಲ್ಲರಿಗಿಂತ ಹೆಚ್ಚಾಗಿ ಅಂಬರೀಶ್ ಅವರು ರಾಜಕೀಯವಾಗಿ ಪ್ರತಿನಿಧಿಸುತ್ತಿದ್ದ ಮಂಡ್ಯ ಜಿಲ್ಲೆಯ ಜನರಂತೂ ಅಂಬರೀಶ್ ಅವರ ಪಾರ್ಥಿವ ಶರೀರವನ್ನು ಮಂಡ್ಯಕ್ಕೆ ತರಲೇಬೇಕೆಂಬ ಕೂಗನ್ನು ಮುಗಿಲು ಮುಟ್ಟಿಸಿದ್ದರು. ಅಚ್ಚರಿಯೆಂದರೆ ಆ ಸಂದರ್ಭದಲ್ಲಿ ಕರ್ನಾಟಕ ರಾಜ್ಯದ ಮುಖ್ಯಮಂತ್ರಿಯಾಗಿದ್ದವರು ಹೆಚ್.ಡಿ. ಕುಮಾರಸ್ವಾಮಿ. ಅವರು ಒಂದರಗಳಿಗೆಯೂ ತಡಮಾಡಲಿಲ್ಲ. ಅಂಬರೀಶ್ ಅವರ ಪಾರ್ಥೀವ ಶರೀರವನ್ನು ರಾಜಧಾನಿ ಬೆಂಗಳೂರಿನಿಂದ ಕೇಂದ್ರ ರಕ್ಷಣಾ ಹೆಲಿಕಾಪ್ಟರ್ (ಏರ್ ಅಂಬ್ಯುಲೆನ್ಸ್)ನಲ್ಲಿ ತಂದು ಮಂಡ್ಯದ ಜನತೆಗೆ ದರ್ಶನ ಮಾಡುವ ವ್ಯವಸ್ಥೆ ಮಾಡಿದ್ದರು. ಬಹುಷಃ ಅವತ್ತಿನ ಸಂದರ್ಭದಲ್ಲಿ ಬೇರೆ ಯಾರೇ ಮುಖ್ಯಮಂತ್ರಿಯಾಗಿದ್ದರೂ ಇಂಥಾ ರಿಸ್ಕ್ ತೆಗೆದು ಕೊಳ್ಳುತ್ತಿರಲಿಲ್ಲವೇನೋ. ನಂತರ ಅದೇ ಅಂಬರೀಶ್‌ರ ಪಾರ್ಥೀವ ಶರೀರವನ್ನು ಮಂಡ್ಯದಿಂದ ಮತ್ತೆ ಬೆಂಗಳೂರಿಗೆ ತಂದು ಕಲಾವಿದರ ಕರ್ಮ ಭೂಮಿ ಕಂಠೀರವ ಸ್ಟುಡಿಯೋದ ಮಣ್ಣಲ್ಲಿ ಮಣ್ಣು ಮಾಡಿಗಳಗಳನೆ ಅತ್ತ ಕುಮಾರಸ್ವಾಮಿಯ ಹೃದಯವಂತಿಕೆಗೆ ಇಡೀ ಕನ್ನಡನಾಡು ಸೆಲ್ಯೂಟ್ ಹೊಡೆದಿತ್ತು. ಅದರಲ್ಲೂ ವಿಶೇಷವಾಗಿ ಕಲಾವಿದರ ಸಮೂಹವು ಅಂಬರೀಶ್‌ರಂತಹ ಮೇರು ಕಲಾವಿದರ ಸಾವಿಗೆ ಕುಮಾರಸ್ವಾಮಿ ಸ್ಪಂದಿಸಿದ ರೀತಿ ಕಂಡು ಶರಣು ಶರಣೆಂದಿತ್ತು.

'ಮಣ್ಣಿನಮಗ' ಎಂದ ತಕ್ಷಣ ನಮ್ಮ ಕಣ್ಮುಂದೆ ಪ್ರತ್ಯಕ್ಷ ಆಗುವ ಮತ್ತು ಅಭಿಮಾನದಿಂದ ಕಿವಿಯಲ್ಲಿ ಗುಯ್ ಗುಡುವ ಹೆಸರೆಂದರೆ ಅದು ಹರದನಹಳ್ಳಿ ದೇವೇಗೌಡ ಅರ್ಥಾತ್ ಎಚ್.ಡಿ. ದೇವೇಗೌಡ. ಹೇಮಾವತಿ ನದಿಯ ಮಣ್ಣಿನ ಮಡಿಲಲ್ಲಿ ಕನ್ನಡ ನಾಡಿನ ಬಂಗಾರದ ಮನುಷ್ಯನಾಗಿ ಬೆಳೆದು ರಾಜಕೀಯ ಕ್ಷೇತ್ರದಲ್ಲಿ ದಾಖಲಾರ್ಹ ಚರಿತ್ರೆ ಬರೆದ ಒಕ್ಕಲಿಗ ಕುಲದ ಕುಟುಂಬವಿದು. ದೇವೇಗೌಡರಂತೂ ಕನ್ನಡ ನಾಡು ಮಾತ್ರವಲ್ಲದೆ ದೇಶ ಕಂಡಂತಹ ಮಹಾಸಾಧಕರು. ಕನ್ನಡ ನಾಡಿನ ಮಣ್ಣಿನ ಮಗನೊಬ್ಬ ದೇಶದ ರಾಜಧಾನಿ ದೆಹಲಿಯ ಕೆಂಪು ಕೋಟೆಯ ಮೇಲೆ ರಾಷ್ಟ್ರಧ್ವಜ ಹಾರಿಸುವುದೆಂದರೆ ಅದು ಸಾಮಾನ್ಯ ಸಾಧನೆಯಲ್ಲ. ಭಾರತದ ಪ್ರಧಾನಿಯಾಗಿ ಅದೂ ಮೊದಲ ಕನ್ನಡಿಗ ಪ್ರಧಾನಿಯಾಗಿ ಎಚ್.ಡಿ. ದೇವೇಗೌಡರು ಇಡೀ ಕನ್ನಡ ನಾಡು ಸಂಭ್ರಮಿಸುವಂತೆ ಮಾಡಿದ್ದು ಇನ್ನೂ ಸಹ ಹಚ್ಚಹಸಿರಾಗಿದೆ. ಇಂತಹ ಕುಟುಂಬದ ಕುಡಿ ಹರದನಹಳ್ಳಿ ದೇವೇಗೌಡ ಕುಮಾರಸ್ವಾಮಿ ಅರ್ಥಾತ್ ಎಚ್.ಡಿ. ಕುಮಾರಸ್ವಾಮಿ ಕೂಡ ತಂದೆಗೆ ತಕ್ಕ ಮಗನಾಗಿ ಜನಪರ ಧ್ವನಿಯಾಗಿರುವುದು ಕನ್ನಡನಾಡಿನ ಭಾಗ್ಯವೇ ಸರಿ!

ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಎರಡು ಬಾರಿ ಮುಖ್ಯಮಂತ್ರಿಯಾದವರಲ್ಲಿ ಎಸ್.ನಿಜ ಲಿಂಗಪ್ಪ, ಡಿ.ದೇವರಾಜ ಅರಸು, ವೀರೇಂದ್ರ ಪಾಟೀಲ್, ರಾಮಕೃಷ್ಣ ಹೆಗಡೆ, ಬಿ.ಎಸ್.ಯಡಿಯೂರಪ್ಪ, ಹೆಚ್.ಡಿ.ಕುಮಾರಸ್ವಾಮಿ, ಸಿದ್ದರಾಮಯ್ಯ ಪ್ರಮುಖರು. ಹೆಚ್.ಡಿ. ಕುಮಾರಸ್ವಾಮಿ ಅವರಿಗೆ ಪೂರ್ಣಾವಧಿ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಲು ಯೋಗ್ಯತೆ ಮತ್ತು ಅರ್ಹತೆ ಇದ್ದರೂ ಕೂಡ ಎರಡು ಬಾರಿಯೂ ಅವಧಿ ಮುಗಿಯುವ ಮುನ್ನವೇ ಮುಖ್ಯಮಂತ್ರಿ ಕುರ್ಚಿಯಿಂದ ಅವರನ್ನು ಕೆಳಗಿಳಿಯುವಂತೆ ಮಾಡಿದ್ದು ಯಾರೂ ಒಪ್ಪುವಂತಹದ್ದಲ್ಲ. ಏಕೆಂದರೆ ಅವರ ಅಧಿಕಾರದ ಅವಧಿಯಲ್ಲಿ ಅದರಲ್ಲೂ ವಿಶೇಷವಾಗಿ ಅವರು ಮೊದಲ ಬಾರಿ ಮುಖ್ಯಮಂತ್ರಿಯಾದಾಗ ಭ್ರಷ್ಟಾಚಾರ ರಹಿತವಾಗಿ ಗ್ರಾಮ ವಾಸ್ತವ್ಯದಂತಹ ಕ್ರಾಂತಿಕಾರಿ ಹೆಜ್ಜೆಗಳಿಂದ ದೇಶಕ್ಕೆ ಮಾದರಿಯಾಗುವಂತಹ ಜನ ಮೆಚ್ಚಿದ ಆಡಳಿತ ನೀಡಿದ್ದರು. ಆದರೆ ನಮ್ಮ ಜಾತಿವ್ಯವಸ್ಥೆ ಅವರ ಅಧಿಕಾರಕ್ಕೆ ಮುಳುವಾಯಿತು ಎಂಬ ಮಾತುಗಳು ಈಗಲೂ ನಾಡಿನಲ್ಲಿ ಪಿಸುಗುಡುತ್ತಿವೆ. ಜಾತಿರಹಿತ ಸಮಾಜದ ಬಗ್ಗೆ ಗಂಟೆಗಟ್ಟಲೆ ನಾವು ಎಷ್ಟೇ ಚರ್ಚಿಸಿದರೂ, ದಿನಗಟ್ಟಲೆ ಮಾತನಾಡಿದರೂ ಭಾರತದಂತಹ ರಾಷ್ಟ್ರದಲ್ಲಿ ಎಷ್ಟೋ ಬಾರಿ ಜಾತಿಯೇ ನಿರ್ಣಾಯಕವಾಗಿ ಬಿಡುತ್ತದೆ. ಅತ್ಯಂತ ದಕ್ಷ ಆಡಳಿತಗಾರ ಹಾಗೂ ಕ್ರಾಂತಿಕಾರಿ ಮುಖ್ಯಮಂತ್ರಿಯಾಗಿ ರಾಜ್ಯಕ್ಕೆ ಉತ್ತಮ ಆಡಳಿತ ನೀಡಿಯೂ ಕೂಡ ಇನ್ನೂ ಅವಧಿ ಇದ್ದಾಗಲೇ ಮುಖ್ಯಮಂತ್ರಿ ಸ್ಥಾನ ಕಳೆದುಕೊಂಡದ್ದು ನಿಜಕ್ಕೂ ಒಂದು ದುರಂತವೇ ಸರಿ! ಆದರೂ ಕೂಡ ಅವರು ತಮ್ಮ ಶತ್ರುಗಳೂ ಮೆಚ್ಚುವಂತಹ ಜನಪರ ಕೆಲಸಗಳಿಂದ ಕರ್ನಾಟಕದ ಮನೆ ಮನೆ ಮಾತಾದದ್ದು ಸುಳ್ಳಲ್ಲ.

ಇಂತಹ ರಾಜಕೀಯ ಕ್ಷೇತ್ರದ ಜನಪರ ನಾಯಕ, ಚಲನಚಿತ್ರ ನಿರ್ಮಾಪಕ, ಚಲನಚಿತ್ರ ವಿತರಕ, ಬಹುಮುಖ ಸಮಾಜಸೇವಕ ಎಚ್.ಡಿ. ಕುಮಾರಸ್ವಾಮಿ ಅವರು ಜನಿಸಿದ್ದು ಭವ್ಯ ಭಾರತದ ದಿವ್ಯ ಭೂಪಟದಲ್ಲಿ ದೇವೇಗೌಡರಂತಹ ಕನ್ನಡಿಗರೊಬ್ಬರು ಪ್ರಧಾನ ಮಂತ್ರಿಗಳಾಗಿದ್ದರೆಂಬುದನ್ನು ದಾಖಲಿಸಿರುವ ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲೂಕಿನ ಹರದನಹಳ್ಳಿ ಎಂಬ ಪುಟ್ಟ ಗ್ರಾಮದಲ್ಲಿ.ತಂದೆ 'ಮಣ್ಣಿನ ಮಗ' ಎಂದೇ ದೇಶದ ಉದ್ದಗಲಕ್ಕೂ ಕರೆಯಲ್ಪಡುವ ಕರ್ನಾಟಕದ ಸುಪುತ್ರ ಹೆಚ್.ಡಿ. ದೇವೇಗೌಡ. ತಾಯಿ ಜನಪರ ಕಾಳಜಿಯುಳ್ಳ ಸುಸಂಸ್ಕೃತೆ ಚೆನ್ನಮ್ಮ. ಇವರ ಮೂರನೇ ಪುತ್ರನೇ ಹೆಚ್.ಡಿ. ಕುಮಾರಸ್ವಾಮಿ. ಇವರ ಜನ್ಮ ದಿನಾಂಕ 1959 ಡಿಸೆಂಬರ್ 16. ಹುಟ್ಟಿದೂರು ಹರದನಹಳ್ಳಿಯಲ್ಲೇ ಪ್ರಾಥಮಿಕ ಮತ್ತು ಮಾಧ್ಯಮಿಕ ಶಿಕ್ಷಣ ಮುಗಿಸಿದ ಕುಮಾರಸ್ವಾಮಿ, ಪ್ರೌಢ ಶಿಕ್ಷಣ ಮತ್ತು ಕಾಲೇಜು ವಿದ್ಯಾಭ್ಯಾಸಕ್ಕಾಗಿ ಬೆಂಗಳೂರಿನತ್ತ ಪಯಣಿಸಿದರು. ಅಲ್ಲಿ ಪ್ರತಿಷ್ಠಿತ ವಿಜಯ ಕಾಲೇಜಿನಲ್ಲಿ ಪಿಯುಸಿಯನ್ನು ವ್ಯಾಸಂಗ ಮಾಡಿ ಅಷ್ಟೇ ಪ್ರತಿಷ್ಠಿತ ನ್ಯಾಷನಲ್ ಕಾಲೇಜಿನಲ್ಲಿ ಕಲಿತು ಬಿಎಸ್ಸಿ ಪದವಿ ಗಳಿಸಿದರು. ವಿದ್ಯಾರ್ಥಿ ದಿಸೆಯಲ್ಲೇ ಇವರು ನಾಯಕತ್ವ ಗುಣಗಳನ್ನು ಹೊಂದಿದ್ದು ಸಂಘಟನೆ ಮತ್ತು ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿದ್ದರು. ಹಾಗಾಗಿ ಇವರು ಶಾಲಾ–ಕಾಲೇಜುಗಳಲ್ಲಿ ಹಾಗೂ ಇಲ್ಲಿಂದ ಹೊರತಾಗಿಯೂ ಎಲ್ಲರ ಮೆಚ್ಚುಗೆ ಗಳಿಸಿದ್ದರು.

ಬಿಎಸ್ಸಿ ಪದವಿ ಮುಗಿಸಿದ ಇವರು ಇನ್ನು ಮುಂದಕ್ಕೆ ವಿದ್ಯಾಭ್ಯಾಸವನ್ನು ಮುಂದುವರಿಸಲಿಲ್ಲ. ರಾಜಕೀಯ ಕುಟುಂಬದ ಕುಡಿಯಾದರೂ ಎಂದೂ ಕೂಡ ರಾಜಕಾರಣಿಯಾಗಬೇಕೆಂದು ಕನಸು ಮನಸಿನಲ್ಲೂ ಆಸೆ ಪಟ್ಟವರಲ್ಲ. ತಂದೆಯ ರಾಜಕಾರಣವೂ ಇವರನ್ನು ಆಕರ್ಷಿಸಲಿಲ್ಲ. ಅದೇಕೋ ಏನೋ ಕೆಎಎಸ್ ಅಧಿಕಾರಿಯಾದ ಅಣ್ಣ ಬಾಲಕೃಷ್ಣೇಗೌಡರ ಸರಕಾರಿ ನೌಕರಿಯೂ ಇವರಿಗೆ ಸರಿ ಎನಿಸಲಿಲ್ಲ. ಮತ್ತೊಬ್ಬ ಅಣ್ಣ ರೇವಣ್ಣರ ರಾಜಕೀಯ ಪ್ರವೇಶವೂ ಇವರನ್ನು ಸ್ವಲ್ಪವೂ ಪ್ರೇರೇಪಿಸಲಿಲ್ಲ. ಭಿನ್ನ ಚಿಂತನೆ, ವಿಭಿನ್ನ ಆಲೋಚನೆಗಳುಳ್ಳ ಇವರು ಏನಾದರೂ ಅದ್ಭುತವಾದುದನ್ನು, ಜನೋಪಯೋಗಿ ಆದದ್ದನ್ನು ಸಾಧಿಸಬೇಕೆಂಬ ಹಂಬಲ ಉಳ್ಳವರಾಗಿದ್ದರು. ಹಾಗಾಗಿ ಸಿನಿಮಾಲೋಕದಂತಹ ಬಣ್ಣದ ಲೋಕದತ್ತ ಕುಮಾರಸ್ವಾಮಿ ಅವರು ಆಕರ್ಷಿತರಾದರು. ಹಾಗಾಗಿ ಅವರು ಮೊದಲಿಗೆ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ತಮ್ಮ ತಾಯಿಯ ಹೆಸರಿನಲ್ಲಿ ಚೆನ್ನಾಂಬಿಕಾ ಫಿಲಂಸ್ ಎಂಬ ಚಲನಚಿತ್ರ ವಿತರಣಾ ಸಂಸ್ಥೆಯನ್ನು ಸ್ಥಾಪಿಸಿದರು. ಪ್ರಸಿದ್ಧ ಸದಭಿರುಚಿ ಚಲನ ಚಿತ್ರಗಳನ್ನು ವಿತರಣೆ ಮಾಡ ಮಾಡುತ್ತಲೇ ತಮ್ಮ ಚೆನ್ನಾಂಬಿಕಾ ಫಿಲಂಸ್ ಬ್ಯಾನರ್‌ನಲ್ಲಿ ಅನೇಕ ಚಲನಚಿತ್ರಗಳನ್ನು ನಿರ್ಮಿಸಿದರು. ಇವರು ಚಿತ್ರ ನಿರ್ಮಾಪಕರಾಗಿ ತೆರೆಗೆ ತಂದ ಪ್ರಮುಖ ಚಿತ್ರಗಳೆಂದರೆ ಸೂರ್ಯವಂಶ, ಪ್ರೇಮೋತ್ಸವ, ಗಲಾಟೆ ಅಳಿಯಂದ್ರು, ಜಿತೇಂದ್ರ, ಚಂದ್ರಚಕೋರಿ ಹಾಗೂ ತಮ್ಮ ಪುತ್ರ ನಿಖಿಲ್ ಕುಮಾರಸ್ವಾಮಿ ಅವರನ್ನೇ ನಾಯಕ ನಟನನ್ನಾಗಿ ಮಾಡಿ ಜಾಗ್ವಾರ್, ಸೀತಾರಾಮ ಕಲ್ಯಾಣ ಮುಂತಾದ ಕನ್ನಡ ಚಲನಚಿತ್ರಗಳನ್ನು ನಿರ್ಮಿಸಿ ಕನ್ನಡ ಚಿತ್ರಲೋಕದ ಗಮನ ಸೆಳೆದರು. ಬಹಳಷ್ಟು ಕಲಾವಿದರಿಗೆ, ತಂತ್ರಜ್ಞರಿಗೆ ಹಾಗೂ ನಿರ್ದೇಶಕರಿಗೆ ಆಶ್ರಯದಾತರಾದರು. ಅನ್ನದಾತರೂ ಆದರು. ಹೀಗೆ ಸಿನಿಮಾಲೋಕ ಸೇರಿದಂತೆ ಸಾಹಿತ್ಯ–ಸಂಗೀತ,ನಾಟಕ–ನೃತ್ಯ ಮುಂತಾದ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಸಂಪೂರ್ಣವಾಗಿ ತಮ್ಮನ್ನು ತೊಡಗಿಸಿಕೊಂಡು ನಾಡಿನಲ್ಲಿ ಗುರುತರವಾದ ಸಮಾಜಮುಖಿ ಕಾರ್ಯಗಳನ್ನು ಮಾಡತೊಡಗಿದರು. ತಾವು ಕಂಡುಕೊಂಡಿದ್ದ, ತಮಗೆ ಸರಿಯೆನಿಸಿದ್ದ ಈ ಹಾದಿಯಲ್ಲಿ ಅವರು ನಡೆಯ ಬಯಸಿದರೂ ಕೂಡ ಬೇರೊಂದು ಲೋಕ ಅವರಿಗರಿವಿಲ್ಲದಂತೆಯೇ ಅವರನ್ನು ಸೆಳೆಯುತ್ತಿತ್ತು. ಈ ನಡುವೆ 1986 ಮಾರ್ಚ್ 13 ರಂದು ಸುಸಂಸ್ಕೃತ ಮನೆತನದ ಅನಿತಾ ಅವರನ್ನು ವಿವಾಹವಾಗಿ ನಿಖಿಲ್ ಗೌಡ ಎಂಬ ಓರ್ವ ಪುತ್ರನ ತಂದೆ ಆದರು.

1994ರಲ್ಲಿ ತಂದೆ ಹೆಚ್.ಡಿ. ದೇವೇಗೌಡರು ಮುಖ್ಯಮಂತ್ರಿ ಆಗಿದ್ದಾಗಲೂ ಮನೆ ತುಂಬ ಜನ ತುಂಬಿ ತುಳುಕುತ್ತಾ ರಾಜಕಾರಣದ ವೈಭೋಗವೇ ಮೆರೆಯುತ್ತಿದ್ದರೂ ಅತ್ತ ಇವರು ವಾಲಿರಲಿಲ್ಲ. ಆದರೆ ರಕ್ತಗತವಾಗಿ ಇವರಲ್ಲಿದ್ದ ರಾಜಕಾರಣ ಇವರನ್ನು ಮಾತ್ರ ಬಿಡಲಿಲ್ಲ. ತನ್ನತ್ತ ಸೆಳೆದುಕೊಂಡೇ ಬಿಟ್ಟಿತು. ತಂದೆಯ ಜೊತೆಯಲ್ಲಿದ್ದ ಹಿರಿಯರು, ತನ್ನ ಜೊತೆಯಲ್ಲಿದ್ದ ಹಿತೈಷಿಗಳು–ಸ್ನೇಹಿತರು, ಬಂಧು–ಬಳಗ ಇವರೆಲ್ಲರ ಒತ್ತಾಯದ ಮೇರೆಗೆ 1996 ರಲ್ಲಿ ಕರ್ನಾಟಕದ ಬಹುದೊಡ್ಡ ಕ್ಷೇತ್ರವೆಂದು ಹೆಸರಾಗಿದ್ದ ಕನಕಪುರ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಸ್ಪರ್ಧಿಸಿದರು. ಖ್ಯಾತ ಚಲನಚಿತ್ರ ನಟ ರೆಬಲ್‌ಸ್ಟಾರ್ ಅಂಬರೀಶ್ ಅವರಂತಹ ಘಟಾನುಘಟಿ ವ್ಯಕ್ತಿಗಳು ಇವರ ಹಿಂದೆ ನಿಂತು ಪ್ರಚಾರ ಕೈಗೊಂಡಿದ್ದರು. ಅವರೆಲ್ಲರ ಆಶಯದಂತೆ ಇವರು ಗೆದ್ದು ಸಂಸದರಾಗುವ ಮೂಲಕ ರಾಜಕಾರಣಿ ಆದರು. ಆಗ ಅವರು ತಾನು ಪರಿಸ್ಥಿತಿಯ ಶಿಶು ಎಂದಿದ್ದರು. ಆದರೂ ಅವರ ಇಷ್ಟದ ಸಿನಿಮಾ ಮತ್ತು ಸಾಂಸ್ಕೃತಿಕ ಲೋಕವನ್ನು ಅವರು ಬಿಡಲಿಲ್ಲ. ಇವರು ಲೋಕಸಭಾ ಸದಸ್ಯರಾಗುತ್ತಿದ್ದಂತೆಯೇ ತಂದೆ ದೇವೇಗೌಡರು ದೇಶದ ಪ್ರಧಾನಮಂತ್ರಿಯಾದರು. ನೀರಿಗೆ ಬಿದ್ದ ಮೇಲೆ ಚಳಿಯಾದರೇನು, ಮಳೆಯಾದರೇನು ಎಂಬಂತೆ ಕರ್ನಾಟಕದ ರಾಜಕಾರಣದ ಜೊತೆಗೆ ತಂದೆಯೊಡನೆ ದೇಶದ ರಾಜಕೀಯವನ್ನು ಚೆನ್ನಾಗಿ ಕರಗತ ಮಾಡಿಕೊಂಡ ಇವರು 1998ರಲ್ಲಿ ಮತ್ತೆ ಎದುರಾದ ಕನಕಪುರ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಸೋಲುಂಡರು. ಆದರೆ ಇದರಿಂದ ವಿಚಲಿತರಾಗದೆ ಮತ್ತೆ 1999ರಲ್ಲಿ ಸಾತನೂರು ವಿಧಾನಸಭಾ ಚುನಾವಣೆಯಲ್ಲಿ ನಿಂತು ಡಿ.ಕೆ.ಶಿವಕುಮಾರ್ ಎದುರು ಸೋತರು. ಆದರೂ ಎದೆಗುಂದಲಿಲ್ಲ. ರಾಜಕೀಯವೇ ಹಾಗೆ. ಸೋಲೇ ಗೆಲುವಿನ ಮೆಟ್ಟಿಲು ಎಂದು ಭಾವಿಸಿ ಇಷ್ಟೊತ್ತಿಗೆ ಪಳಗಿದ ರಾಜಕಾರಣಿಯಾಗಿದ್ದ ಇವರು 2004ರಲ್ಲಿ ರಾಮನಗರ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಿ ಅಭೂತಪೂರ್ವ ಯಶಸ್ಸಿನಿಂದ ಪ್ರಥಮ ಬಾರಿಗೆ ವಿಧಾನಸಭೆಯನ್ನು ಪ್ರವೇಶ ಮಾಡಿದರು. 2006ರಲ್ಲಿ ನಡೆದ ರಾಜಕೀಯ ಬೆಳವಣಿಗೆಯಲ್ಲಿ ಕರ್ನಾಟಕ ಸರ್ಕಾರದ 18ನೇ ಮುಖ್ಯಮಂತ್ರಿಯಾಗಿ 2006 ಫೆಬ್ರವರಿ 3ರಂದು ಪ್ರಮಾಣ ವಚನ ಸ್ವೀಕರಿಸಿ ಇತಿಹಾಸ ಬರೆದರು. ಆಗಲೂ ಕೂಡ ಇವರು ತಾನು ಪರಿಸ್ಥಿತಿಯ ಶಿಶು ಎಂದಿದ್ದರು. ಮುಂದೆ ನಡೆದದ್ದೆಲ್ಲವೂ ಈಗ ಇತಿಹಾಸ.

ಕುಮಾರಸ್ವಾಮಿ, ಅಧಿಕಾರ ಸಿಕ್ಕ ಅಲ್ಪ ಅವಧಿಯಲ್ಲೇ ಹಲವಾರು ಜನಪರ ಕಾರ್ಯಗಳನ್ನು ಮಾಡಿ ಅನೇಕ ಜನೋಪಯೋಗಿ ಯೋಜನೆಗಳನ್ನು ನಾಡಿಗೆ ಕೊಟ್ಟು, ಜನರ ಗಮನ ಸೆಳೆದಿದ್ದರು. ಹೆಂಡ ಸಾರಾಯಿ ನಿಷೇಧ, ಲಾಟರಿ ನಿಷೇಧ, ಮಹಿಳಾ ಮೀನುಗಾರರಿಗೆ ಶೇಕಡಾ 4 ರಷ್ಟು ಬಡ್ಡಿ ದರದಲ್ಲಿ ಸಾಲ, ಕೃಷಿ ಕ್ಷೇತ್ರಕ್ಕೆ ಏಳು ಸಾವಿರ ಕೋಟಿ ರೂಪಾಯಿಗಳ ಅನುದಾನ, ಯುವಜನರಿಗೆ ಕೌಶಲ್ಯ ಅಭಿವೃದ್ಧಿ, ಗ್ರಾಮ ವಾಸ್ತವ್ಯ, ಸುವರ್ಣ ಗ್ರಾಮೋದಯ ಯೋಜನೆ, ಅಕ್ರಮ ಸರಕಾರಿ ಭೂ ಒತ್ತುವರಿ ತಡೆಯಲು ಸಮಿತಿ ಮತ್ತು ಸೂಕ್ತ ಕ್ರಮ, ಉತ್ತರ ಕರ್ನಾಟಕದಲ್ಲಿ ಸಂಚಾರಿ ಹೈಕೋರ್ಟ್ ಪೀಠ ಸ್ಥಾಪನೆ, ವಿದ್ಯಾರ್ಥಿಗಳಿಗೆ ಸೈಕಲ್ ವಿತರಣೆ, ಆಸರೆ ಅಮೃತ ಯೋಜನೆಗಳನ್ನು ರೂಪಿಸಿ ಪ್ರಾಮಾಣಿಕವಾಗಿ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಶ್ರಮಿಸಿದರು. ಹಾಗಾಗಿ ನಾಡು ಮೆಚ್ಚಿದ ಮುಖ್ಯಮಂತ್ರಿಯಾಗಿ ಜನಮನ್ನಣೆ ಗಳಿಸಿದ್ದರು. ನಂತರದ ದಿನಗಳಲ್ಲಿ ಬದಲಾದ ರಾಜಕೀಯ ಪರಿಸ್ಥಿತಿಯಿಂದ ಮುಖ್ಯಮಂತ್ರಿ ಸ್ಥಾನವನ್ನು ಕಳೆದುಕೊಂಡರೂ ತಮ್ಮ ಇಂಥಾ ಅಭೂತಪೂರ್ವ ಯಶಸ್ವಿ ಸಾಧನೆಗಳಿಂದ ಮತ್ತೆ 2008ರಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ರಾಮನಗರ ವಿಧಾನಸಭಾ ಕ್ಷೇತ್ರದಿಂದ ಗೆದ್ದು ಬಂದರು. ಮತ್ತೆ 2013ರಲ್ಲಿ ಇಲ್ಲಿಂದಲೇ ಮರು ಆಯ್ಕೆ ಆದರು. 2018ರಲ್ಲಿ ರಾಮನಗರ ಮತ್ತು ಚನ್ನಪಟ್ಟಣ ಎರಡೂ ವಿಧಾನ ಸಭಾ ಕ್ಷೇತ್ರಗಳಲ್ಲಿ ಸ್ಪರ್ಧಿಸಿ ಉಭಯ ಕ್ಷೇತ್ರಗಳಲ್ಲೂ ಗೆದ್ದಿದ್ದರು. ಯಾವ ಪಕ್ಷಗಳಿಗೂ ಬಹುಮತ ಭಾರದ ಕಾರಣ ಜೆಡಿಎಸ್ ಮತ್ತು ಕಾಂಗ್ರೆಸ್‌ನ ಸಮ್ಮಿಶ್ರ ಸರ್ಕಾರದಲ್ಲಿ ಎರಡನೇ ಬಾರಿಗೆ ಕುಮಾರಸ್ವಾಮಿ ಅವರು ಕರ್ನಾಟಕ ರಾಜ್ಯದ 25ನೇ ಮುಖ್ಯಮಂತ್ರಿಯಾಗಿ ಮೇ 23ರಂದು ಸಾಯಂಕಾಲ 4 ಗಂಟೆ 32 ನಿಮಿಷದ ಸುಮಾರಿಗೆ ದೇವರು ಮತ್ತು ಕನ್ನಡ ಜನತೆಯ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿ ಒಂದು ರೀತಿ ದಾಖಲೆ ಬರೆದರು. ಆಗಲೂ ಕೂಡ ಅವರು ತಾವು ಪರಿಸ್ಥಿತಿಯ ಕೂಸು ಎಂದೇ ಹೇಳಿದ್ದರು. ಮುಂದಿನದೆಲ್ಲ ಇತಿಹಾಸ. ಪ್ರಸ್ತುತ ಜೆಡಿಎಸ್ ಪಕ್ಷದ ಪ್ರಬಲ ನಾಯಕರೂ ಆಗಿರುವ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾಗಿದ್ದು ಇವತ್ತಿಗೂ ಕೂಡ ರಾಜ್ಯದ ಜನರ ಸಮಸ್ಯೆಗಳ ಪರಿಹಾರಕ್ಕೆ ಪಕ್ಷಭೇದವಿಲ್ಲದೆ ಶ್ರಮಿಸುತ್ತಿದ್ದಾರೆ. ಹುಟ್ಟುಹಬ್ಬದ ಸಂದರ್ಭದಲ್ಲಿ ಅವರಿಗೆ ಶುಭವಾಗಲಿ.

ನೇರ ಫೋನ್–ಇನ್ ಕಾರ್ಯಕ್ರಮದಲ್ಲಿ ಡಿಡಿಪಿಐ



ಮೈಸೂರು, ಡಿ. 15– ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನ ಜೆಎಸ್‌ಎಸ್ ರೇಡಿಯೋ 91.2ಎಫ್‌ಎಂ ಸಮುದಾಯ ಬಾನುಲಿ ಕೇಂದ್ರವು, 2025–2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಪೂರ್ವಸಿದ್ಧತೆ ಕುರಿತು ನೇರ ಸಂದರ್ಶನ ಫೋನ್–ಇನ್ ಕಾರ್ಯಕ್ರಮದಲ್ಲಿ ಡಿ. 17 ರಂದು ಬೆಳಗ್ಗೆ 11:30ರಿಂದ 12:30ರವರೆಗೆ ಮೈಸೂರು ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯ (ಆಡಳಿತ), ಉಪ ನಿರ್ದೇಶಕರಾದ ಡಿ. ಉದಯಕುಮಾರ್ ಭಾಗವಹಿಸಲಿದ್ದಾರೆ.

ಸಾರ್ವಜನಿಕರು 2025–2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಪೂರ್ವಸಿದ್ಧತೆ ಮತ್ತು ಈ ಶೈಕ್ಷಣಿಕ ವರ್ಷದಲ್ಲಿ ಮೈಸೂರು ಜಿಲ್ಲೆಯ ಶಾಲೆಗಳ ಫಲಿತಾಂಶ ವೃದ್ಧಿಸುವಲ್ಲಿ ಹಾಗೂ ಗುಣಾತ್ಮಕ ಶಿಕ್ಷಣಕ್ಕಾಗಿ ಇಲಾಖೆ ಕೈಗೊಂಡ ಕ್ರಮಗಳ ಕುರಿತಂತೆ ಯಾವುದೇ ಪ್ರಶ್ನೆಗಳು ಅಥವಾ ಸಲಹೆಗಳು ಇದ್ದಲ್ಲಿ ಕರೆಮಾಡಿ ನೇರವಾಗಿ ಉಪ ನಿರ್ದೇಶಕರ ಜೊತೆ ನೇರವಾಗಿ ಮಾತನಾಡಬಹುದು. ಅದಕ್ಕಾಗಿ ನಿಲಯದ ದೂರವಾಣಿ ಸಂಖ್ಯೆ: 8296725912 / 0821–25 46 563 ಸಂಪರ್ಕಿಸುವುದು.

ಉಚಿತ ಪ್ರಾಸ್ಟೇಟ್ ಗ್ರಂಥಿ ತಪಾಸಣೆ ಶಿಬಿರ

ಮೈಸೂರು: ಮೈಸೂರಿನ ರಾಮಕೃಷ್ಣನಗರದ ಸುಯೋಗ್ ಆಸ್ಪತ್ರೆಯಲ್ಲಿ ಡಿ.20 ರವರೆಗೆ ಉಚಿತ ಪ್ರಾಸ್ಟೇಟ್ ಗ್ರಂಥಿ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ.

ಶಿಬಿರದಲ್ಲಿ ಮೂತ್ರ ವಿಸರ್ಜಿಸುವಾಗ ಅಡಚಣೆ, ಸದಾ ಮೂತ್ರ ವಿಸರ್ಜನೆಗೆ ಬಾಧೆ, ಮೂತ್ರದಲ್ಲಿ ರಕ್ತ, ರಾತ್ರಿ ವೇಳೆ ಹೆಚ್ಚು ಅಧಿಕ ಸಲ ಮೂತ್ರಕ್ಕೆ ಹೋಗುವುದು, ಮೂತ್ರಜನಕಾಂಗದ ಸಮಸ್ಯೆಗಳಿರುವವರು, ಮೂತ್ರಜನಕಾಂಗದಲ್ಲಿ ಕಲ್ಲು, ಮೂತ್ರದಲ್ಲಿ ಸೋಂಕು, ಪ್ರಾಸ್ಟೇಟ್ ಸಂಬಂಧಿತ ಸಮಸ್ಯೆಗಳಿರುವವರು ಕೂಡಲೇ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳತಕ್ಕದ್ದು. ಮಾಹಿತಿಗಾಗಿ 0821–2533600, 99863 99862 ಸಂಪರ್ಕಿಸಿ.

ಭಾರತೀಯ ನೌಕಾಪಡೆಗೆ ಅಪಾಚೆ ಹೆಲಿಕಾಪ್ಟರ್

ನವದೆಹಲಿ: ಭಾರತೀಯ ನೌಕಾಪಡೆಗೆ ಮತ್ತಷ್ಟು ಬಲ ಬಂದಿದೆ. ಅಮೆರಿಕದಿಂದ ಮತ್ತೆ ಮೂರು ಅಪಾಚೆ ಎಹೆಚ್–64ಆರ್ ಸೀಹಾಕ್ ಹೆಲಿಕಾಪ್ಟರ್‌ಗಳು ಸೇರ್ಪಡೆಗೊಳ್ಳಲಿವೆ.

ಡಿ.17ರಂದು ಗೋವಾದ ಐಎನ್‌ಎಸ್ ಹನ್ಸ್‌ನಲ್ಲಿ ಸೇನೆಗೆ ನಿಯೋಜನೆಗೊಳಿಸಲಾಗುತ್ತೆ. ಈ ಹೆಲಿಕಾಪ್ಟರ್‌ಗಳು ಸುಧಾರಿತ ಆಯುಧಗಳು, ಸೆನ್ಸಾರ್‌ಗಳು ಹಾಗೂ ಸಂಯೋಜಿತ ಎಲೆಕ್ಟ್ರಾನಿಕ್ಸ್ ಸೌಲಭ್ಯಗಳನ್ನ ಒಳಗೊಂಡಿವೆ. ಅಲ್ಲದೇ ನೌಕಾಪಡೆಯ ಪ್ರಮುಖ ಆಸ್ತಿ ಅಂತಲೂ ಕರೆಯಲಾಗುತ್ತಿದೆ. ಮೂಲಗಳ ಪ್ರಕಾರ ಭಾರತ–ಪಾಕ್ ಗಡಿಯಲ್ಲಿ ಗಸ್ತಿಗೆ ನಿಯೋಜಿಸುವ ಸಾಧ್ಯತೆಯಿದೆ ಎಂದು ಹೇಳಲಾಗಿದೆ.

ಇದು ಸಾಂಪ್ರದಾಯಿಕ ಮತ್ತು ಅನಿರೀಕ್ಷಿತ ದಾಳಿಗಳನ್ನು ಎದುರಿಸಬಲ್ಲ ಸಾಮರ್ಥ್ಯ ಹೊಂದಿದೆ. ಈ ಹೆಲಿಕಾಪ್ಟರ್‌ಗಳು ಮುಂದುವರಿದ ತಂತ್ರಜ್ಞಾನವನ್ನು ಒಳಗೊಂಡಿದ್ದು, ಸುಧಾರಿತ ಡಿಜಿಟಲ್ ಸಂಪರ್ಕ, ಜಂಟಿ ಯುದ್ಧತಂತ್ರದ ಮಾಹಿತಿ ವಿತರಣಾ ವ್ಯವಸ್ಥೆ ಹೊಂದಿದೆ. ಅಲ್ಲದೇ ಜಾಗತಿಕವಾಗಿ 400ಕ್ಕೂ ಹೆಚ್ಚು ಅಪಾಚೆ ಹೆಲಿಕಾಪ್ಟರ್‌ಗಳನ್ನ ವಿತರಿಸಲಾಗಿದ್ದು, ಅಮೆರಿಕ ನೌಕಾಪಡೆಯು 4.5 ಮಿಲಿಯನ್‌ಗಿಂತಲೂ ಹೆಚ್ಚು ಗಂಟೆಗಳ ಹಾರಾಟವನ್ನು ನಡೆಸಿದೆ.

ಯಾವಾ ಒಪ್ಪಂದ ಆಗಿತ್ತು: 2015ರಲ್ಲಿ ಭಾರತ 22 ಅಪಾಚೆ ಹೆಲಿಕಾಪ್ಟರ್ ಖರೀದಿಸಲಾಗಿತ್ತು. ಜುಲೈ 2020ರಲ್ಲಿ ಮತ್ತೆ 600 ದಶಲಕ್ಷ ಡಾಲರ್ ವೆಚ್ಚದ 6 ಹೆಲಿಕಾಪ್ಟರ್‌ಗಳಿಗಾಗಿ ಸಹಿ ಹಾಕಿತ್ತು. ಇದಾಗಿ ಒಂದು ವರ್ಷದ ಬಳಿಕ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಮೊದಲ ಅವಧಿಯಲ್ಲಿ ಭಾರತಕ್ಕೆ ಭೇಟಿ ನೀಡಿದಾಗ, ಮತ್ತೆ ಆರು ಹೊಸ ಅಪಾಚೆ ಹೆಲಿಕಾಪ್ಟರ್‌ಗಳನ್ನು ಖರೀದಿಸಲು 600 ಮಿಲಿಯನ್ ಅಮೆರಿಕನ್ ಡಾಲರ್ ಮೌಲ್ಯದ ಒಪ್ಪಂದಕ್ಕೆ ಸಹಿ ಹಾಕಲಾಯಿತು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visweswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com


ಮಾಜಿ ಮುಖ್ಯಮಂತ್ರಿ ಹಾಗೂ ಭಾರೀ ಕೈಗಾರಿಕೆಗಳು
ಮತ್ತು ಉಕ್ಕಿನ ಸಚಿವರಾದ ಸನ್ಮಾನ್ಯ
ಶ್ರೀ ಹೆಚ್.ಡಿ.ಕುಮಾರಸ್ವಾಮಿ ರವರಿಗೆ
ಹುಟ್ಟುಹಬ್ಬದ ಶುಭಾಶಯಗಳು
ಮಾಜಿ ಮಂತ್ರಿಗಳಾದ
ಹೆಚ್.ಡಿ.ರೇವಣ್ಣ
ಅವರಿಗೆ
ಹುಟ್ಟುಹಬ್ಬದ ಶುಭಾಶಯಗಳು
ದಿನಾಂಕ: 16.12.2025 ಮಂಗಳವಾರ
ಬೆಳಿಗ್ಗೆ 8.00 ಗಂಟೆಗೆ ಮಣಿಪಾಲ್ ಆಸ್ಪತ್ರೆ
ರಿಂಗ್ ರಸ್ತೆ ಮುಖಾಂತರ
ಚಾಮುಂಡಿಬೆಟ್ಟಕ್ಕೆ ಆಗಮಿಸುತ್ತಿರುವ
ಹೆಚ್.ಡಿ.ಕುಮಾರಸ್ವಾಮಿ ಅವರಿಗೆ
ಸುಸ್ವಾಗತ
VISMAYA
ADVERTISERS
8050302424

ಮೈಸೂರು ಮಿತ್ರ ಮಂಗಳವಾರ 16 ಡಿಸೆಂಬರ್ 2025

ಮಳವಳ್ಳಿಯಲ್ಲಿ ಶಿವರಾತ್ರೀಶ್ವರ ಶಿವಯೋಗಿಗಳ ಉತ್ಸವ ಮೂರ್ತಿಗೆ ಅದ್ಧೂರಿ ಸ್ವಾಗತ

ಸುತ್ತೂರಲ್ಲಿ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಯವರಿಂದ ಜಯಂತ್ಯೋತ್ಸವಕ್ಕೆ ಚಾಲನೆ

ಮಳವಳ್ಳಿ, ಡಿ.15– ಸುತ್ತೂರು ಶಿವರಾತ್ರೀಶ್ವರ ಶಿವಯೋಗಿಗಳ 1066ನೇ ಜಯಂತ್ಯೋತ್ಸವದ ಅಂಗವಾಗಿ ಪಟ್ಟಣಕ್ಕೆ ಸಂಜೆ ಆಗಮಿಸಿದ ಶಿವ ಯೋಗಿಗಳ ಉತ್ಸವ ಮೂರ್ತಿಯನ್ನು ಸೋಮವಾರ ಅದ್ಧೂರಿಯಾಗಿ ಸ್ವಾಗತಿಸಲಾಯಿತು.

ಸೋಮವಾರ ಬೆಳಗ್ಗೆ 7.30ಕ್ಕೆ ಮೈಸೂರಿನ ಸುತ್ತೂರು ಮಠದ ಆವರಣದಲ್ಲಿ ಶಿವರಾತ್ರಿ ದೇಶಿ ಕೇಂದ್ರ ಸ್ವಾಮೀಜಿ ಅವರು ಪೂಜೆ ಸಲ್ಲಿಸಿ ಮಳವಳ್ಳಿಯಲ್ಲಿ ನಡೆಯಲಿರುವ ಜಯಂತ್ಯೋತ್ಸವಕ್ಕೆ ಚಾಲನೆ ನೀಡಿದರು. ಸುತ್ತೂರಿನಿಂದ ಹೊರಟ ಯಾತ್ರೆಯು ತಿ.ನರಸೀಪುರ, ಬೆಳಕವಾಡಿ ಮಾರ್ಗವಾಗಿ ಸಂಜೆ ಮಳವಳ್ಳಿ ಪಟ್ಟಣಕ್ಕೆ ಆಗಮಿಸಿತು. ಈ ವೇಳೆ ಮಂಗಳವಾದ್ಯ ಹಾಗೂ ವಿವಿಧ ಜಾನಪದ ಕಲಾತಂಡಗಳ ಮೆರವಣಿಗೆಯೊಂದಿಗೆ ಬರಮಾಡಿಕೊಳ್ಳಲಾಯಿತು.

ಬೆಳಕವಾಡಿ ಗ್ರಾಮಕ್ಕೆ ಆಗಮಿಸಿದಾಗ ಶಿವಕುಮಾರ ಸ್ವಾಮಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿನಿಯರು ಕುಂಭ ಕಳಸದೊಂದಿಗೆ ಸ್ವಾಗತಿಸಿ ಬರಮಾಡಿಕೊಂಡರು. ಮಳವಳ್ಳಿ ಪಟ್ಟಣಕ್ಕೆ ಆಗಮಿಸಿದ ಉತ್ಸವಮೂರ್ತಿಯನ್ನು ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಕನಕಪುರ ದೇಗುಲ ಮಠದ ಚನ್ನಬಸವ ಸ್ವಾಮೀಜಿ ಸಮ್ಮುಖದಲ್ಲಿ ಪ್ರವಾಸಿ ಮಂದಿರದ ಬಳಿ ಅದ್ಧೂರಿಯಾಗಿ ಸ್ವಾಗತಿಸಲಾಯಿತು.

ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಚನ್ನಬಸವ ಸ್ವಾಮೀಜಿ, ಸ್ವಾಗತ ಸಮಿತಿ ಅಧ್ಯಕ್ಷ, ಶಾಸಕ ಪಿ.ಎಂ.ನರೇಂದ್ರಸ್ವಾಮಿ, ಮಾಜಿ ಶಾಸಕ ಕೆ.ಅನ್ನದಾನಿ, ಬಿಜೆಪಿ ಮುಖಂಡ ಯಮದೂರು ಸಿದ್ದರಾಜು ಅವರು ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಪುಷ್ಪನಮನ ಸಲ್ಲಿಸಿದರು.



ಮಳವಳ್ಳಿಗೆ ಆಗಮಿಸಿದ ಶಿವರಾತ್ರೀಶ್ವರ ಶಿವಯೋಗಿಗಳ ಉತ್ಸವಮೂರ್ತಿಯನ್ನು ಸ್ವಾಗತಿಸಲಾಯಿತು.

ಬೃಹತ್ ಕಮಾನು, ದ್ವಾರ ನಿರ್ಮಾಣ

ದೇಶದ ಪ್ರಥಮ ಪ್ರಜೆಯ ಸ್ವಾಗತಕ್ಕೆ ಈಗಾಗಲೇ ಪಟ್ಟಣ ಮಧುವಣಗಿತ್ತಿಯಂತೆ ಸಿಂಗಾರಗೊಂಡಿದೆ. ಹಲವೆಡೆ ತೆಂಗಿನ ಗರಿಗಳ, ಬಾಳೆ ಎಲೆಗಳ, ಮಾವಿನ ಹಸಿರು ತೋರಣಗಳನ್ನು ಕಟ್ಟಲಾಗಿದೆ. ವಿದ್ಯುತ್ ದೀಪಾಲಂಕಾರ ಕಂಗೊಳಿಸುತ್ತಿದೆ. ಪಟ್ಟಣದ ನಾಲ್ಕು ಪ್ರಮುಖ ರಸ್ತೆಗಳಲ್ಲಿ ಬೃಹತ್ ಕಮಾನುಗಳನ್ನು ನಿರ್ಮಿಸಿ ಸಿದ್ದಪ್ಪಾಜಿ, ಮಂಟೇಸ್ವಾಮಿ ದ್ವಾರಗಳನ್ನಾಗಿ ಮಾಡಲಾಗಿದೆ. ಶಾಂತಿ ಕಾಲೇಜು ಮುಂಭಾಗದ 33 ಎಕರೆ ಪ್ರದೇಶದಲ್ಲಿ ಶಿವಯೋಗಿ ಅವರ ಉತ್ಸವ ಮೂರ್ತಿ ಪ್ರತಿಷ್ಠಾಪನೆಗೆ ಷಡಕ್ಷರದೇವರ ಅನುಭವ ಮಂಟಪ ಹಾಗೂ ಪ್ರಮುಖ ವೇದಿಕೆಗೆ ಜಗದ್ಗುರು ಘನಲಿಂಗ ಶಿವಯೋಗಿ ಅವರ ಹೆಸರನ್ನು ಇಡಲಾಗಿದೆ.

ಆನ್‌ಲೈನ್ ನೋಂದಾವಣಿ ವಿರೋಧಿಸಿ

ನಂ.ಗೂಡಲ್ಲಿ ಪತ್ರ ಬರಹಗಾರರ ಪ್ರತಿಭಟನೆ

ನಂಜನಗೂಡು: ರಾಜ್ಯ ಸರ್ಕಾರ ಆಸ್ತಿ ನೋಂದಾವಣಿಗೆ ಆನ್‌ಲೈನ್ ವ್ಯವಸ್ಥೆಯಡಿ ಕಾವೇರಿ–3 ಜಾರಿಗೆ ತಂದಿರುವುದರಿಂದ ಪತ್ರ ಬರಹಗಾರರ ವೃತ್ತಿಗೆ ಸಂಚಕಾರ ಬಂದಿದೆ, ಸರ್ಕಾರ ಆಸ್ತಿ ನೋಂದಾವಣಿಗಾಗಿ ಪತ್ರುಬರಹ ಗಾರರಿಗೆ ಪ್ರತ್ಯೇಕ ಲಾಗಿನ್ ವ್ಯವಸ್ಥೆ ಮಾಡಬೇಕು ಎಂದು ತಾಲೂಕು ಪತ್ರಬರಹಗಾರರ ಸಂಘದ ಅಧ್ಯಕ್ಷ ಪ್ರಕಾಶ್ ರಾಜೇ ಅರಸ್ ಆಗ್ರಹಿಸಿದರು.

ನಗರದ ತಾಲ್ಲೂಕು ಕಚೇರಿ ಮುಂಭಾಗ ಸೋಮವಾರ ಪತ್ರಬರಹ ಗಾರರು ನಡೆಸಿದ ಪ್ರತಿಭಟನೆ ವೇಳೆ ಅವರು ಮಾತನಾಡಿದರು.

ಸಾರ್ವಜನಿಕರ ಆಸ್ತಿ ದಾಖಲೆಗಳನ್ನು ಕ್ರಮವಾಗಿ ದಾಖಲಿಸಿ ಜವಾಬ್ದಾರಿ ಯುತವಾಗಿ ಕಾರ್ಯನಿರ್ವಹಿಸುವ ಮೂಲಕ ಜನರ ನಂಬಿಕೆಗೆ ಪಾತ್ರ ವಾಗಿದ್ದ ಪತ್ರುಬರಹಗಾರರನ್ನು ಕಡೆಗಣಿಸಿ, ಪೇಪರ್ ಲೆಸ್ ಆನ್‌ಲೈನ್ ನೋಂದಣಿ ವ್ಯವಸ್ಥೆ ಜಾರಿಗೆ ತಂದು, ಪತ್ರಬರಹಗಾರರ ವೃತ್ತಿಯನ್ನು ಕಿತ್ತುಕೊಳ್ಳುವ ಮೂಲಕ ನಿರುದ್ಯೋಗ ಹೆಚ್ಚಿಸುವ ಕಾರ್ಯ ನಡೆಸಿದೆ, ಈ ವ್ಯವಸ್ಥೆಯಿಂದಾಗಿ ವೃತ್ತಿ ಬದ್ಧತೆ, ಅನುಭವವಿಲ್ಲದ ಕಂಪ್ಯೂಟರ್ ಸೆಂಟರ್‌ನವರು ಆಸ್ತಿ ದಾಸ್ತಾವೇಜುಗಳನ್ನು ತಯಾರಿಸಲು ಅವಕಾಶ ನೀಡುವ ಮೂಲಕ ಸಾರ್ವಜನಿಕರ ಆಸ್ತಿಯ ಕ್ರಮಬದ್ಧ ಅಳತೆ ಹಾಗೂ ಆಸ್ತಿಯ ಹಕ್ಕನ್ನು ವ್ಯತಿರಿಕ್ತವಾಗಿ ನಮೂದಿಸಿ ಸಾರ್ವಜನಿಕರು ತೊಂದರೆಗೆ ಸಿಲುಕಿಸುವ ಸಾಧ್ಯತೆಗಳು ಹೆಚ್ಚಿವೆ, ಆದ್ದರಿಂದ ಸರ್ಕಾರ ಪತ್ರುಬರಹಗಾರರಿಗೆ ಪ್ರತ್ಯೇಕ ಲಾಗಿನ್ ವ್ಯವಸ್ಥೆ ರೂಪಿಸಬೇಕು, ನಮ್ಮ ಬೇಡಿಗೆಗಳನ್ನು ಈಡೇರಿಸದಿದ್ದರೆ, ತೀವ್ರತರದ ಹೋರಾಟ ರೂಪಿಸುತ್ತೇವೆ. ಬೆಳಗಾವಿ ಅಧಿವೇಶನ ನಡೆಯುತ್ತಿರುವ ಸೌಧವನ್ನು ಮುತ್ತಿಗೆ ಹಾಕಲಾಗುವುದು ಎಂದು ಹೇಳಿದರು. ಪ್ರತಿಭಟನೆಯಲ್ಲಿ ಪತ್ರಬರಹಗಾರರು ಉಪಸ್ಥಿತರಿದ್ದರು.



ನಂಜನಗೂಡಿನ ತಾಲೂಕು ಕಚೇರಿ ಮುಂಭಾಗ ಸೋಮವಾರ ತಾಲೂಕು ಪತ್ರಬರಹಗಾರರ ಸಂಘದ ಸದಸ್ಯರು ಪ್ರತಿಭಟನೆ ನಡೆಸಿದರು.

ಲೋಕಾ ಅದಾಲತ್‌ನಲ್ಲಿ 1421 ಪ್ರಕರಣಗಳು ಇತ್ಯರ್ಥ

ನ್ಯಾಯಾಧೀಶರ ಸಮ್ಮುಖದಲ್ಲಿ ಒಂದಾದ ದಂಪತಿ

ಹುಣಸೂರು, ಡಿ.15– ಹುಣಸೂರಿನ ನ್ಯಾಯಾಲಯದ ಆವರಣದಲ್ಲಿ ನಡೆದ ರಾಷ್ಟ್ರೀಯ ಲೋಕಾ ಅದಾಲತ್‌ನಲ್ಲಿ ವ್ಯಾಜ್ಯ ಪೂರ್ವ ಮತ್ತು ಬಾಕಿ ಉಳಿದ 4999 ಪ್ರಕರಣಗಳ ಪೈಕಿ 1421 ಪ್ರಕರಣಗಳು 4.98 ಕೋಟಿ ರೂ.ಗಳ ದಂಡ ವಸೂಲಿಯೊಂದಿಗೆ ಇತ್ಯರ್ಥವಾಗಿದೆ. ಅಲ್ಲದೆ ನ್ಯಾಯಾಧೀಶರ ಸಮ್ಮುಖದಲ್ಲಿ ಬೇರೆಯಾಗಿದ್ದ ಸತಿ–ಪತಿ ಒಂದಾಗಿದ್ದಾರೆ.

ತಾಲೂಕಿನ ಸಣ್ಣೇನಹಳ್ಳಿ ಗ್ರಾಮದ ವೆಂಕಟೇಶ್ ಮತ್ತು ನಗರದ ಕಲ್ಕುಣಿಕೆ ಹೌಸಿಂಗ್ ಬೋರ್ಡ್ ಕಾಲೋನಿಯ ಸುನೀತ ದಂಪತಿಗಳು ಕಳೆದ ಎರಡು ವರ್ಷಗಳಿಂದ ಕೌಟುಂಬಿಕ ಕಲಹದಿಂದ ದೂರವಿದ್ದು ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿಕೊಂಡು ಕಾನೂನು ಹೋರಾಟ ನಡೆಸುತ್ತಿದ್ದರು. ನ್ಯಾಯಾಧೀಶರ ಸಲಹೆಯಿಂದ ಮನ ಪರಿವರ್ತನೆಗೊಂಡು ದಂಪತಿ ರಾಷ್ಟ್ರೀಯ ಲೋಕಾ ಅದಾಲತ್‌ನಲ್ಲಿ ಎಲ್ಲಾ ನ್ಯಾಯಾಧೀಶರ ಸಮ್ಮುಖದಲ್ಲಿ ಹಾರ ಬದಲಿಸಿಕೊಂಡು ಒಂದಾದರು.

ರಾಷ್ಟ್ರೀಯ ಲೋಕಾ ಅದಾಲತ್‌ನಲ್ಲಿ 29 ಚೆಕ್ ಬೌನ್ಸ್ ಪ್ರಕರಣಗಳು 56,41,200 ರೂ.ಗೆ ಇತ್ಯರ್ಥವಾದರೆ, ಹಣ ವಸೂಲಿ ಪ್ರಕರಣದಲ್ಲಿ 3 ಪ್ರಕರಣಗಳು 29,93,000 ರೂ.ಗೆ ಇತ್ಯರ್ಥವಾಯಿತು. ಆಸ್ತಿ ವಿವಾದದಲ್ಲಿ 13 ದಾವೆಗಳು ಇತ್ಯರ್ಥವಾದರೆ, ಜನನ–ಮರಣದ 31 ಪ್ರಕರಣಗಳು ಇತ್ಯರ್ಥವಾಯಿತು. ಎಲ್ಲಾ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳು ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳು ಸೇರಿ 1421 ಪ್ರಕರಣಗಳು ರೂ. 4.98 ಕೋಟಿಗೆ ಇತ್ಯರ್ಥವಾಯಿತು.

ಡಿಸೆಂಬರ್ 1ರ 2025ಕ್ಕೆ 8ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ 2142 ಪ್ರಕರಣಗಳು, ಪ್ರಧಾನ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಲಯದಲ್ಲಿ 2435, ಹೆಚ್ಚುವರಿ ಹಿರಿಯ ಶ್ರೇಣಿ ನ್ಯಾಯಾಲಯದಲ್ಲಿ 1466, ಪ್ರಧಾನ ಸಿವಿಲ್ ನ್ಯಾಯಾಲಯದಲ್ಲಿ 3808, ಹೆಚ್ಚುವರಿ ಸಿವಿಲ್ ನ್ಯಾಯಾಲಯದಲ್ಲಿ 2643 ಪ್ರಕರಣಗಳು ಸೇರಿ ಒಟ್ಟು 12494 ಪ್ರಕರಣಗಳು ಬಾಕಿ ಇದ್ದು, ಈ ಪೈಕಿ 4999 ಪ್ರಕರಣಗಳನ್ನು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಕೈಗೆತ್ತಿಕೊಂಡು 1421 ಪ್ರಕರಣಗಳನ್ನು ರಾಜಿ ಮೂಲಕ ಇತ್ಯರ್ಥಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ 8ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಟಿ. ಗೋವಿಂದಯ್ಯ, ಪ್ರಧಾನ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷೆ ಅನಿತಾ, ಹೆಚ್ಚುವರಿ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ಶ್ರೀಮತಿ ಭಾಗ್ಯಮ್ಮ, ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಅಯಿಷಾ.ಬಿ.ಪಿ. ವಾಜೀದ್ ಹಾಗೂ ವಕಿಲರು, ಕಕ್ಷಿದಾರರು ಭಾಗವಹಿಸಿದ್ದರು.



ಹುಣಸೂರಿನಲ್ಲಿ ನಡೆದ ಲೋಕಾ ಅದಾಲತ್‌ನಲ್ಲಿ ಒಂದಾದ ದಂಪತಿ.

ನಾಳೆ ವಿದ್ಯುತ್ ವ್ಯತ್ಯಯ

ಮೈಸೂರು,ಡಿ.15– ಎಫ್‌ಟಿಎಸ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ನಿರ್ವಹಣಾ ಕಾಮಗಾರಿ ನಿಮಿತ್ತ ಡಿ.17 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಕೆಸರೆ 1ನೇ & 2ನೇ ಹಂತ, ಸುಭಾಷ್ ನಗರ, ಶೋಭಾ ಗಾರ್ಡನ್, ಆರ್.ಎಸ್.ನಾಯ್ಡು ನಗರ, ಎನ್.ಆರ್. ಗಾರ್ಡನ್, ಬೆಲವತ್ತ, ಶ್ಯಾದನಹಳ್ಳಿ, ನಾಗನಹಳ್ಳಿ, ಹೊಸ ಬಡಾವಣೆ, ಕೆ.ಆರ್.ಮಿಲ್ ಕಾಲೋನಿ, ವರುಣಾ ಚಾನೆಲ್, ಸಿದ್ದಲಿಂಗಪುರ, ಕಳಸ್ತವಾಡಿ, ಲಕ್ಷ್ಮಿಪುರಂ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ವಿದ್ಯಾರ್ಥಿಗಳು ಕನಸು ಕಟ್ಟಿಕೊಂಡು ಸಾಧನೆ ಮಾಡಿ

ಚಿನಕುರಳಿ, ಡಿ.15– ವಿದ್ಯಾರ್ಥಿಗಳು ಜೀವನದಲ್ಲಿ ದೊಡ್ಡ ಸಾಧನೆ ಮಾಡಬೇಕು ಎಂಬ ಕನಸು ಕಟ್ಟಿಕೊಂಡು ವಿದ್ಯಾಭ್ಯಾಸ ನಡೆಸಿದರೆ ಮಾತ್ರ ಸಾಧನೆ ಮಾಡಲು ಸಾಧ್ಯ ಎಂದು ಕರ್ನಾಟಕ ಲೋಕಸೇವಾ ಆಯೋಗದ ಸದಸ್ಯ ಪ್ರಭುದೇವ ತಿಳಿಸಿದರು.

ಚಿನಕುರಳಿ ಎಸ್‌ಟಿಜಿ ಪದವಿ ಪೂರ್ವ ಕಾಲೇಜಿನ 'ಕಲಾವಿಸ್ಮಯ–2025'ರ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಮಾಜದಲ್ಲಿ ಬಡತನದಲ್ಲಿ ಓದಿ ದೊಡ್ಡ ಸಾಧನೆ ಮಾಡಿರುವ ಸಾಕಷ್ಟು ಸಾಧಕರು ನಮ್ಮ ಕಣ್ಮುಂದೆ ಇದ್ದಾರೆ. ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್ ಸಹ ಚಿಕ್ಕಂದಿನಿಂದ ಬಡತನದಲ್ಲಿ ಓದಿ ಪ್ರಸ್ತುತ ಜಿಲ್ಲಾಧಿಕಾರಿಯಾಗಿದ್ದಾರೆ. ಅದೇ ರೀತಿ ಜಿಲ್ಲೆಯ ಜಿಪಂ ಸಿಇಓ ಕೆ.ಆರ್.ನಂದಿನಿ ಅವರು ಸಾಧನೆ ಮಾಡಬೇಕೆಂಬ ಛಲದಿಂದ ಸಾಧನೆ ಮಾಡಿದ್ದಾರೆ. ಇಂತಹ ಹಲವು ಸಾಧಕರು ನಮ್ಮ ಕಣ್ಣ ಮುಂದಿದ್ದಾರೆ. ದೊಡ್ಡ ಮಟ್ಟದಲ್ಲಿ ಸಾಧನೆ ಮಾಡಿದ ಸಾಧಕರು ದೊಡ್ಡ ಶಿಕ್ಷಣ ಸಂಸ್ಥೆಗಳಲ್ಲಿ ಓದಿದವರಲ್ಲ. ಹಾಗಾಗಿ ಮಕ್ಕಳು ಇಂತಹ ಸಾಧಕರನ್ನು ಪ್ರೇರಣೆಯಾಗಿ ತೆಗೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಅಮೆರಿಕಾ ಅಕ್ಕ ಸಂಘದ ಅಧ್ಯಕ್ಷ ಅಮರನಾಥ್‌ಗೌಡ ಮಾತನಾಡಿ, ಗ್ರಾಮೀಣ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕೆಂಬ ಉದ್ದೇಶದಿಂದ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ತಮ್ಮೂರಿನಲ್ಲಿ ಎಸ್‌ಟಿಜಿ ಶಿಕ್ಷಣ ಸಂಸ್ಥೆ ಸ್ಥಾಪಿಸಿ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದಾರೆ. ಪೋಷಕರು ಕಷ್ಟ ಪಟ್ಟು ನಮ್ಮ ಮಕ್ಕಳು ಓದಿ ಭವಿಷ್ಯ ರೂಪಿಸಿಕೊಳ್ಳಲೆಂದು ಇಂತಹ ಶಿಕ್ಷಣ ಸಂಸ್ಥೆಗೆ ಸೇರಿಸಿದ್ದಾರೆ. ಮಕ್ಕಳು ಇದರ ಸದ್ಬಳಕೆ ಮಾಡಿಕೊಂಡು ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.



ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು.

ಸಂಸ್ಥೆ ಅಧ್ಯಕ್ಷ ಸಿ.ಎಸ್.ಪುಟ್ಟರಾಜು ಮಾತನಾಡಿದರು. ಇದೇ ವೇಳೆ ಗಾಯಕ, ನಟ ನವೀನ್ ಸಜ್ಜು ಮತ್ತು ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು. ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಹಾಡುವ ಮೂಲಕ ಮಕ್ಕಳನ್ನು ರಂಜಿಸಿದರು. ಬಳಿಕ ಕಾಲೇಜು ಮಕ್ಕಳು ಹಲವು ಹಾಡುಗಳಿಗೆ ನೃತ್ಯ ಮಾಡುವ ಮೂಲಕ ರಂಜಿಸಿದರು. ಸಂಸ್ಥೆ ಸಿಇಓ ಸಿ.ಪಿ.ಶಿವರಾಜು, ಉದ್ಯಮಿ ಹರೆಕೋಟಿ ವಿಶ್ವಮಿತ್ರ, ಈ ಸಂಜೆ ಪತ್ರಿಕೆ ಸಂಪಾದಕ ನಾಗರಾಜು, ಸುರೇಶ್, ಯದುನಾಥ್, ವಕೀಲ ಎಂ.ಕೆ.ಪುಟ್ಟೇಗೌಡ, ಉದ್ಯಮಿ ತಿಮ್ಮಪ್ಪ, ಅಮರ್, ಡಾ.ತಿಬ್ಬೇಗೌಡ, ಜಿಪಂ ಮಾಜಿ ಸದಸ್ಯ ಸಿ.ಅಶೋಕ್, ಮನ್‌ಮುಲ್ ನಿರ್ದೇಶಕ ಸಿ.ಶಿವಕುಮಾರ್, ಪ್ರಾಂಶುಪಾಲ ಮಾರುತಿ, ಹೆಚ್‌ಓಡಿ ರಘುಸ್ವಾಮಿ ಸೇರಿದಂತೆ ಹಲವರಿದ್ದರು.

ಮೂರನೇ ಪುಟದಿಂದ

ಶಿವ ಸನ್ನಿಧಿಗೆ ಶಾಮನೂರು



ಅಂತಿಮ ನಮನ ಸಲ್ಲಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ

ಜನರೂ ಶಿಸ್ತಿನಿಂದ ವರ್ತಿಸಿ, ದಾವಣಗೆರೆ ಧಣಿ ಶಾಮನೂರು ಶಿವಶಂಕರಪ್ಪ ಅವರಿಗೆ ವಿದಾಯ ಹೇಳಿದರು. ಅಂತ್ಯಕ್ರಿಯೆಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್, ಸತೀಶ್ ಜಾರಕಿಹೊಳಿ, ಈಶ್ವರ್ ಖಂಡ್ರೆ, ವಿಪಕ್ಷ ನಾಯಕ ಆರ್. ಅಶೋಕ್, ಸಿ.ಟಿ ರವಿ, ವಿವಿಧ ಮಠಾಧೀಶರು ಹಾಗೂ ಚರ್ಚ್ ಪಾದ್ರಿಗಳು ಸೇರಿದಂತೆ ಹಲವು ಗಣ್ಯರು ಭಾಗಿಯಾಗಿದ್ದರು.

1931ರ ಜೂನ್ 16ರಂದು ದಾವಣಗೆರೆಯಲ್ಲಿ ಜನಿಸಿದ್ದ ಶಾಮನೂರು ಶಿವಶಂಕರಪ್ಪ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ವಿಧಾನಸಭೆಯ ಸದಸ್ಯರಾಗಿದ್ದು, ಅವರು ಭಾರತದಲ್ಲಿ ರಾಜ್ಯ ವಿಧಾನ ಸಭೆಯ ಅತ್ಯಂತ ಹಿರಿಯ ಸದಸ್ಯರಾಗಿದ್ದರು. ಶಾಮನೂರು ಶಿವಶಂಕರಪ್ಪ ಅವರು ವಿಧಾನಸಭೆಗೆ ಆರು ಸಲ ಶಾಸಕ ರಾಗಿ, ಒಮ್ಮೆ ಸಂಸದರಾಗಿ ಆಯ್ಕೆಯಾ ಗಿದ್ದಾರೆ. 1997ರಲ್ಲಿ ದಾವಣಗೆರೆ ಲೋಕಸಭೆ ಮಧ್ಯಂತರ ಚುನಾವಣೆಯಲ್ಲಿ ಸೋಲು ಕಂಡಿದ್ದರು. ಐದು ದಶಕದ ರಾಜಕೀಯ ಜೀವನದಲ್ಲಿ ಒಂದು ಬಾರಿ ಸೋಲನ್ನಪ್ಪಿದ್ದರು. 1994, 2004, 2008, 2013, 2018, 2023ರಲ್ಲಿ ಶಾಸಕರಾಗಿ ಆಯ್ಕೆಯಾಗಿದ್ದರು.

ಬೆಳಗಾವಿ ಅಧಿವೇಶನದಲ್ಲಿ ಶಾಮನೂರು ಶಿವಶಂಕರಪ್ಪಗೆ ಸಂತಾಪ: ಭಾನುವಾರ ನಿಧನರಾದ ಹಿರಿಯ ಕಾಂಗ್ರೆಸ್ ಶಾಸಕ ಶಾಮನೂರು ಶಿವಶಂಕರಪ್ಪ ಅವರಿಗೆ ಸೋಮವಾರ ವಿಧಾನಸಭೆ ಮತ್ತು ವಿಧಾನಪರಿಷತ್‌ನಲ್ಲಿ ಸಂತಾಪ ಸೂಚಿಸಲಾಯಿತು.

ಬೆಳಗಾವಿಯ ಸುವರ್ಣಸೌಧದಲ್ಲಿ ಚಳಿಗಾಲದ ಅಧಿವೇಶನ ನಡೆಯುತ್ತಿದ್ದು, ಇಂದು ವಿಧಾನಸಭೆ ಕಲಾಪ ಆರಂಭವಾಗುತ್ತಿದ್ದಂತೆ ಶಾಮನೂರು ಶಿವಶಂಕರಪ್ಪಗೆ ಅವರಿಗೆ ಸಂತಾಪ ಸೂಚಿಸಲಾಯಿತು. ಬಳಿಕ ಉಭಯ ಸದನಗಳ ಕಲಾಪವನ್ನು ಮಂಗಳವಾರಕ್ಕೆ ಮುಂದೂಡಲಾಯಿತು.

ವಿಮಾನ ತರಬೇತಿ ಶಾಲೆ ಮೈಸೂರಿಗೆ?

ಶಾಲೆಯನ್ನು ಸ್ಥಳಾಂತರಿಸಲು ಉತ್ಸುಕರಾಗಿದ್ದಾರೆ ಎಂದು ಹೇಳಲಾಗುತ್ತಿದೆ.

1950ರಲ್ಲಿ ಸ್ಥಾಪನೆಯಾದ ಜಕ್ಕೂರಿನ ಸರ್ಕಾರಿ ವಿಮಾನ ತರಬೇತಿ ಶಾಲೆಯು ದೇಶದ ಅತ್ಯಂತ ಹಳೆಯ ತರಬೇತಿ ಶಾಲೆಗಳಲ್ಲಿ ಒಂದಾಗಿದೆ. ವಿಮಾನಯಾನ ತರಬೇತಿಗಾಗಿ ಮೈಸೂರು ಮಹಾರಾಜರಾದ ಜಯಚಾಮರಾಜೇಂದ್ರ ಒಡೆಯರ್ ಅವರು ಆ ಭೂಮಿಯನ್ನು ಉಡುಗೊರೆಯಾಗಿ ನೀಡಿದ್ದರು ಎಂದು ಹೇಳಲಾಗಿದೆ.

ಒಂದು ವೇಳೆ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದ ಆವರಣಕ್ಕೆ ಸ್ಥಳಾಂತರಗೊಂಡಲ್ಲಿ ಇಲ್ಲಿನ ನಾಗರಿಕ ವಿಮಾನಗಳ ಹಾರಾಟ ಮತ್ತು ಲ್ಯಾಂಡಿಂಗ್ (ಭೂಸ್ಪರ್ಶ) ಮಾಡಲು ತರಬೇತಿ ಶಾಲೆಯು ಅಡ್ಡಿಯಾಗುವ ಸಂಭವವಿದೆ ಅಲ್ಲದೇ, ರನ್‌ವೇ ವಿಸ್ತರಣೆ ಮಾಡಿ ಅತೀ ಹೆಚ್ಚು ವಿಮಾನಗಳು ಹಾರಾಟ ನಡೆಸಲು ಸ್ಥಳಾವಕಾಶದ ಕೊರತೆ ಇದೆ ಎಂಬ ಆಕ್ಷೇಪ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

ಈ ಕುರಿತು 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯಿಸಿರುವ ಮೈಸೂರು ವಿಮಾನ ನಿಲ್ದಾಣದ ನಿರ್ದೇಶಕಿ ಪಿ.ವಿ. ಉಷಾ ಕುಮಾರಿ, ಕಳೆದ ವಾರ ಬೆಂಗಳೂರಿನಲ್ಲಿ ವಿಮಾನ ತರಬೇತಿ ಶಾಲೆ ಸ್ಥಳಾಂತರ ಕುರಿತಂತೆ ಪೂರ್ವಭಾವಿ ಸಭೆ ನಡೆದಿದೆ. ಆದರೆ ನಾನು ಹಾಜರಾಗಲು ಸಾಧ್ಯವಾಗಿಲ್ಲ. ಬೆಂಗಳೂರಿನ ಪ್ರಧಾನ ಕಛೇರಿಯಿಂದ ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು. ಪ್ರಕ್ರಿಯೆ ಬಗ್ಗೆ ನಮಗೆ ಇದುವರೆಗೆ ಯಾವುದೇ ಅಧಿಕೃತ ಮಾಹಿತಿ ಬಂದಿಲ್ಲ ಎಂದರು.

ವಿಮಾನ ನಿಲ್ದಾಣಕ್ಕೆ ಗಂಡಾಂತರ

ಜಿಎಫ್‌ಟಿಎಸ್‌ಗೆ ಅವಕಾಶ ನೀಡಬಾರದು. ಕಾರಣ, ಇದು ಈ ಪ್ರದೇಶದ ಅಭಿವೃದ್ಧಿಗೆ ಅಡ್ಡಿಯಾಗುತ್ತದೆ. ಎಚ್.ಡಿ. ಕುಮಾರಸ್ವಾಮಿ ನೇತೃತ್ವದ ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಮೈಸೂರು ವಿಮಾನ ನಿಲ್ದಾಣವನ್ನು ಭಾರತೀಯ ವಾಯುಪಡೆಗೆ (ಐಎಎಫ್) ಹಸ್ತಾಂತರಿ ಸುವ ಪ್ರಸ್ತಾವನೆ ಬಂದಿತ್ತು. ರಕ್ಷಣಾ ಸಚಿವಾಲಯ ಮತ್ತು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ (ಎಎಐ) ಸಹಿ ಹಾಕಿದ ತಿಳುವಳಿಕೆ ಪತ್ರವನ್ನು (ಎಂಒಯು) ನಾನು ವೈಯಕ್ತಿಕವಾಗಿ ಮಧ್ಯ ಪ್ರವೇಶಿಸಿ ರದ್ದುಗೊಳಿಸಿದ್ದೆ ಎಂದರು.

ಮೈಸೂರು ವಿಮಾನ ನಿಲ್ದಾಣವನ್ನು ಜಿಎಫ್‌ಟಿಎಸ್ ಆಗಿ ಬಳಸುವುದರಿಂದ ಈ ಪ್ರದೇಶದ ಭವಿಷ್ಯದ ಬೆಳವಣಿಗೆ ಕುಂಠಿತಗೊಳ್ಳುತ್ತದೆ. ಇದು ಹಲವಾರು ರೂಪಗಳಲ್ಲಿ ನಿರ್ಬಂಧಗಳನ್ನು ಎದುರಿಸ ಬೇಕಾಗುತ್ತದೆ ಮತ್ತು ವಿಮಾನ ಕಾರ್ಯಾಚರಣೆಗೆ ತೊಂದರೆಯಾಗುತ್ತದೆ. ಇದರಿಂದಾಗಿ ವಿಮಾನ ನಿಲ್ದಾಣದಿಂದ ನಾಗರಿಕ ವಿಮಾನ ಗಳನ್ನು ನಿರ್ವಹಿಸಲು ಎಲ್ಲಾ ರೀತಿಯ ಅನುಮತಿಗಳು ಬೇಕಾಗುತ್ತದೆ ಎಂದ ಅವರು, ಮೈಸೂರು ಪ್ರಮುಖ ಪ್ರವಾಸಿ ಕೇಂದ್ರವಾಗಿದೆ, ತಮಿಳುನಾಡು ಮತ್ತು ಕೇರಳಕ್ಕೆ ಸಂಚಾರ ಜಂಕ್ಷನ್ ಮತ್ತು ಕೊಡಗಿಗೆ ಪ್ರವೇಶ ಬಿಂದುವಾಗಿದೆ. ವಿಮಾನ ತರಬೇತಿಗಾಗಿ ಯಾವುದೇ ಪರಿವರ್ತನೆ ಪ್ರವಾಸೋದ್ಯಮ ಮತ್ತು ಪ್ರಾದೇಶಿಕ ಸಂಪರ್ಕದ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ ಎಂದರು.

ಮೈಸೂರು ವಿಮಾನ ನಿಲ್ದಾಣವು ಪ್ರಸ್ತುತ 507 ಎಕರೆ ವ್ಯಾಪ್ತಿ ಹೊಂದಿದೆ. ರಾಜ್ಯ ಸರ್ಕಾರವು ದೊಡ್ಡ ವಿಮಾನಗಳನ್ನು ನಿರ್ವಹಿಸಲು ರನ್‌ವೇ ವಿಸ್ತರಣೆಗಾಗಿ 150 ಎಕರೆಗಳಿಗಿಂತ ಹೆಚ್ಚಿನ ಹೆಚ್ಚುವರಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿದೆ. ನನ್ನ ಅಧಿಕಾರಾವಧಿಯಲ್ಲಿ ವಿಮಾನ ನಿಲ್ದಾಣ ವಿಸ್ತರಣೆಗಾಗಿ 319 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿತ್ತು. ಅದು ಈಗ ಪ್ರಗತಿಯಲ್ಲಿದೆ. ಜಿಎಫ್‌ಟಿಎಸ್ ಅನ್ನು ಇಲ್ಲಿಗೆ ಸ್ಥಳಾಂತರಿಸುವುದರಲ್ಲಿ ಅರ್ಥವಿಲ್ಲ. ಅದನ್ನು ಶಿವಮೊಗ್ಗ ಅಥವಾ ಹಾಸನ ವಿಮಾನ ನಿಲ್ದಾಣಗಳಿಗೆ ಸ್ಥಳಾಂತರಿಸಬಹುದು. ಅಲ್ಲಿ ಅಂತಹ ಸಂಘರ್ಷಗಳು ಉದ್ಭವಿಸುವುದಿಲ್ಲ ಎಂದು ಪ್ರತಾಪ್ ಸಿಂಹ ಅಭಿಪ್ರಾಯಪಟ್ಟರು. ಈ ಮಧ್ಯೆ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ನವದೆಹಲಿಯಲ್ಲಿ ಸಂಸತ್ ಅಧಿವೇಶದಲ್ಲಿ ಪಾಲ್ಗೊಂಡಿರುವುದರಿಂದ ಸಂಪರ್ಕ ಸಾಧ್ಯವಾಗಲಿಲ್ಲ.

ಅಧಿಕಾರ ಹಸ್ತಾಂತರ ನಿರ್ಧಾರ

ಪೊಲೀಸ್ ನೋಟಿಸ್‌ಗೆ ನೀಡುವ ನನ್ನ ಉತ್ತರದ ಪ್ರತಿಯನ್ನು ಮಾಧ್ಯಮಗಳಿಗೆ ಬಿಡುಗಡೆ ಮಾಡುತ್ತೇನೆ. ಏಕೆಂದರೆ, ಅವರು ಎಫ್‌ಐಆರ್ ಪ್ರತಿ ಲಗತ್ತಿಸಿಲ್ಲ. ಜಾರಿ ನಿರ್ದೇಶನಾಲಯ (ಇ.ಡಿ.)ಕ್ಕೆ ಈಗಾಗಲೇ ಉತ್ತರಿಸಿದ್ದೇವೆ. ಎಫ್‌ಐಆರ್‌ನಲ್ಲಿ ಏನಿದೆ ಓದಿಲ್ಲ. ನೋಟಿಸ್ ಮಾತ್ರ ನೀಡಿದ್ದಾರೆ. ಎಫ್‌ಐಆರ್ ಪ್ರತಿ ನೀಡುವಂತೆ ಕೋರುತ್ತೇನೆ ಎಂದರು. ಕೆ.ಸಿ.ವೇಣುಗೋಪಾಲ್ ಹಾಗೂ ಸುರ್ಜೆವಾಲ ಭೇಟಿಗೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿ, ದೆಹಲಿಗೆ ಬಂದಾಗ ಸುರ್ಜೆವಾಲ, ಮಲ್ಲಿಕಾರ್ಜುನ ಖರ್ಗೆ, ವೇಣುಗೋಪಾಲ್ ಸೇರಿದಂತೆ ಎಲ್ಲರನ್ನೂ ಭೇಟಿ ಮಾಡಬೇಕು. ನಿನ್ನೆ ಇಂದಿರಾ ಭವನದಲ್ಲಿ ನಡೆದ ಭೋಜನಕೂಟ ವೇಳೆ ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಅವರನ್ನೂ ಭೇಟಿ ಮಾಡಿದ್ದೆ ಎಂದರು. ಮತ್ತೆ ರಾಹುಲ್ ಗಾಂಧಿ ಭೇಟಿ ಮಾಡುವುದು. ನಮ್ಮ, ಅವರ ಮಧ್ಯೆ ಮಾತುಕತೆ ಇದ್ದೇ ಇರುತ್ತದೆ. ಅದರ ಬಗ್ಗೆ ತಲೆ ಕೆಡಿಸಿಕೊಳ್ಳಬೇಡಿ ಎಂದರು.

ಮೋದಿ ನೇತೃತ್ವದಲ್ಲಿ ಬಿಜೆಪಿ ಅಧಿಕಾರಕ್ಕೆ ಬರುತ್ತೆ!

ನೆಪಿಡಿ 'ವೋಟ್ ಚೋರಿ' ಎಂಬ ಪದಗಳನ್ನು ಬಳಸುವುದರಿಂದ ನೀವು ಮುಂಬರುವ ದಿನಗಳಲ್ಲಿ ತೊಂದರೆ ಅನುಭವಿಸುತ್ತೀರಿ. ನೀವು ಯುದ್ಧದಲ್ಲಿ ಗೆಲ್ಲಲು ಸಾಧ್ಯವಿಲ್ಲ ಎಂದು ದೇವೇಗೌಡರು ಗುಡುಗಿದರು.


ವೋಟ್ ಚೋರಿ ಎಂಬ ಅಪಪ್ರಚಾರದ ಮೂಲಕ ನರೇಂದ್ರ ಮೋದಿ ಅವರ ನಾಯಕತ್ವವನ್ನು ದೂಷಿಸುವುದರೊಂದಿಗೆ ಮತದಾರರ ಮನಸ್ಸಿನಲ್ಲಿ ಅನುಮಾನ ಸೃಷ್ಟಿಸಿ, ಪ್ರತಿಪಕ್ಷಗಳು ಏನು ಗಳಿಸಲಿವೆ. ನಿಮ್ಮ ಮನಸ್ಸಿಗೆ ಏನಾಗಿದೆ, ಏನಾದರೂ ಸಮಸ್ಯೆ ಇದ್ದರೆ ಸರಿಪಡಿಸಿಕೊಳ್ಳಿ. ನಾನು ಏಳು ದಶಕಗಳಿಗೂ ಹೆಚ್ಚು ಕಾಲದಿಂದ ಸಾರ್ವಜನಿಕ ಜೀವನದಲ್ಲಿದ್ದೇನೆ. ಚುನಾವಣೆಗಳಲ್ಲಿ ಸೋಲು–ಗೆಲುವನ್ನು ಕಂಡಿದ್ದೇನೆ. ನಾನು ಎಂದಿಗೂ ಮತಗಳ್ಳತನದಂತಹ ವಿಷಯಗಳನ್ನು ಹೇಳಲಿಲ್ಲ ಎಂದು ಪ್ರತಿಪಕ್ಷದವರಿಗೆ ಕಿವಿಮಾತು ಹೇಳಿದರು. ಕೇರಳದಲ್ಲಿ 18,000 ಮತದಾರರ ಸೇರ್ಪಡೆಗೆ ಸಂಬಂಧಿಸಿದಂತೆ ಅಂದಿನ ಪ್ರಧಾನಿ ಜವಾಹರಲಾಲ್ ನೆಹರು ಬರೆದ ಪತ್ರವನ್ನು ಉಲ್ಲೇಖಿಸಿದ ದೇವೇಗೌಡರು, ನಾನು ಇದನ್ನು ಏಕೆ ಹೇಳುತ್ತಿದ್ದೇನೆಂದರೆ ನೆಹರು ಅವಧಿಯಲ್ಲೂ ಚುನಾವಣಾ ವ್ಯವಸ್ಥೆಯಲ್ಲಿ ಕೆಲವು ಲೋಪಗಳು ಇದ್ದವು ಎಂದು ತಿಳಿಸಿದರು.

ಮತದಾರರ ಪಟ್ಟಿಯಲ್ಲಿನ ಲೋಪಗಳನ್ನು ಪ್ರಸ್ತಾಪಿಸಿಯೂ ಕಾಂಗ್ರೆಸ್ ಪಕ್ಷವು ಇತ್ತೀಚಿಗೆ ಬಿಹಾರ ಚುನಾವಣೆಯಲ್ಲಿ ಸೋಲು ಎದುರಿಸಿತು. ಮತದಾರರ ಪಟ್ಟಿಯ ಕೂಲಂಕುಶ ಪರಿಶೀಲನೆ ನಂತರವೂ ಆ ರಾಜ್ಯದಲ್ಲಿ ಏನಾಯಿತು ಎಂಬುದನ್ನು ಸ್ವತಃ ಪ್ರತಿಪಕ್ಷ ನಾಯಕರು ಆಲೋಚಿಸಬೇಕು. ಆ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಆರು ಶಾಸಕರು ಸಿಕ್ಕಿದ್ದಾರೆ ಎಂದು ಮಾಜಿ ಪ್ರಧಾನಿಗಳು ಟೀಕಿಸಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಬಗ್ಗೆ ಪ್ರಧಾನಿಗಳ ವಿರುದ್ಧ ಪ್ರತಿಪಕ್ಷಗಳು ಆರೋಪಗಳನ್ನು ಮಾಡಲು ಅವರು ಏಕೆ ಬಯಸುತ್ತಾರೆ ಎಂದು ಖಾರವಾಗಿ ಪ್ರಶ್ನಿಸಿದ ಅವರು, ದೇಶದಲ್ಲಿ ಚುನಾವಣಾ ಆಯೋಗವಿದೆ, ಸುಪ್ರೀಂಕೋರ್ಟ್ ಇದೆ. ಈ ಎಲ್ಲ ವಿಷಯಗಳನ್ನು ಸರಿಪಡಿಸಲು ಚುನಾವಣಾ ಆಯೋಗವು ಎಲ್ಲಾ ರಾಜ್ಯ ಘಟಕಗಳಿಗೆ ನಿರ್ದೇಶನ ನೀಡಿದೆ ಎಂದು ಅವರು ಒತ್ತಿ ಹೇಳಿದರು.

ಕರ್ನಾಟಕದ ಬಿಜೆಪಿ ಅಧ್ಯಕ್ಷರಾಗಿ ಬಿ.ವೈ.ವಿಜಯೇಂದ್ರ ಮುಂದುವರಿಕೆ?

ಬೆಳಗಾವಿ, ಡಿ.15– ಬಿಜೆಪಿ ರಾಷ್ಟ್ರೀಯ ಕಾರ್ಯಾಧ್ಯಕ್ಷ ಹಾಗೂ ಉತ್ತರ ಪ್ರದೇಶದ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಹೆಸರುಗಳನ್ನು ಘೋಷಣೆ ಮಾಡಿರುವ ಹಿನ್ನೆಲೆಯಲ್ಲಿ ರಾಷ್ಟ್ರೀಯ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಚುರುಕುಗೊಳಿಸಿರುವ ಬಿಜೆಪಿ, ಕರ್ನಾಟಕ ಘಟಕದ ಅಧ್ಯಕ್ಷರ ನೇಮಕ ಅಂತಿಮಗೊಳಿಸಲು ಮುಂದಾಗಿದೆ.



ಕರ್ನಾಟಕದಲ್ಲಿ ಬಿಜೆಪಿ ಅಧ್ಯಕ್ಷ ಸ್ಥಾನಕ್ಕೆ ಬಿ.ವೈ.ವಿಜಯೇಂದ್ರ ಅವರೇ ಅಂತಿಮ ಎಂಬ ಮಾತುಗಳು ಕೇಳಿಬಂದಿವೆ. ಕಳೆದ ಲೋಕ ಸಭಾ ಚುನಾವಣೆ ಎದುರಿಸಿ ಉತ್ತಮ ಫಲಿತಾಂಶ ತಂದು ಕೊಟ್ಟಿದ್ದ ವಿಜಯೇಂದ್ರಗೆ ಮುಂದೆಯೂ ಸಾರಥ್ಯ ಇರಲಿ ಎಂದು ಜಿಲ್ಲಾ ಘಟಕಗಳ ಅಧ್ಯಕ್ಷರು ಹೇಳಿದ್ದಾರೆ ಎನ್ನಲಾಗಿದೆ.

ಆದರೆ, ಹೈಕಮಾಂಡ್ ಘೋಷಣೆ ಬಳಿಕವಷ್ಟೇ ಖಚಿತವಾಗಲಿದೆ. ಇನ್ನು ವಿಜಯೇಂದ್ರ ಅವರನ್ನು ಬಿಟ್ಟರೆ ಶಾಸಕ ಸುನೀಲ್ ಕುಮಾರ್, ಮುರುಗೇಶ ನಿರಾಣಿ, ಕೇಂದ್ರ ಸಚಿವ ಸಚಿವ ವಿ.ಸೋಮಣ್ಣ ಹೆಸರುಗಳು ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಕೇಳಿ ಬರುತ್ತಿವೆ. ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಸ್ಥಾನಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹಿಂದೇಟು ಹಾಕುತ್ತಿರುವುದರಿಂದ ಬಿ.ವೈ.ವಿಜಯೇಂದ್ರ ಅವರ ಹೆಸರು ಮತ್ತೊಮ್ಮೆ ಮುನ್ನೆಲೆಗೆ ಬಂದಿದೆ. ತಾವು ರಾಜ್ಯ ರಾಜಕಾರಣಕ್ಕೆ ಬರುವುದಿಲ್ಲ ಎಂದು ಶೋಭಾ ಇತ್ತೀಚೆಗೆ ಹೇಳಿದ್ದಾರೆ.

ಈ ಹಿನ್ನೆಲೆಯಲ್ಲಿ ವಿಜಯೇಂದ್ರ ಅವರನ್ನು ನೇಮಿಸುವ ಬಗ್ಗೆ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಮತ್ತು ಗೃಹ ಸಚಿವ ಅಮಿತ್ ಶಾ ಒಲವು ಹೊಂದಿದ್ದಾರೆ. ಆದರೆ ಇದಕ್ಕೆ ಪ್ರಧಾನಿ ಮೋದಿ ಅವರ ಒಪ್ಪಿಗೆಯ ಅಗತ್ಯವಿದೆ ಎಂದು ಮೂಲಗಳು ತಿಳಿಸಿವೆ. ಜನಪ್ರಿಯತೆ, ಹಣ ಖರ್ಚು ಮಾಡುವ ಹಾಗೂ ಪಕ್ಷವನ್ನು ಸಂಘಟಿಸುವ ಸಾಮರ್ಥ್ಯ ವಿಜಯೇಂದ್ರ ಅವರಿಗಿದೆ. ರಾಜ್ಯದ ಉದ್ದಗಲಕ್ಕೂ ಓಡಾಡಿ ಪಕ್ಷವನ್ನು ಕಟ್ಟಬಲ್ಲರು. ಯಡಿಯೂರಪ್ಪ ಅವರೂ ಪೂರ್ಣ ಮನಸ್ಸಿನಿಂದ ಕೆಲಸ ಮಾಡಬಲ್ಲರು ಎಂಬ ಚರ್ಚೆಯೂ ಪಕ್ಷದಲ್ಲಿ ನಡೆದಿದೆ.

ಬಿಜೆಪಿಯಲ್ಲಿ ವಿಜಯೇಂದ್ರ ಅವರನ್ನು ಪೂರ್ಣ ಪ್ರಮಾಣದ ಅವಧಿಗೆ ರಾಜ್ಯಾಧ್ಯಕ್ಷರನ್ನಾಗಿ ನೇಮಕ ಮಾಡುವ ಬಗ್ಗೆ ಮೂರು ಗುಂಪುಗಳಾಗಿವೆ. ವಿಜಯೇಂದ್ರ ನೇಮಕದ ಪರವಾಗಿರುವ ಮಾಜಿ ಸಿಎಂ ಯಡಿಯೂರಪ್ಪ ಬಣ, ಪಕ್ಷವನ್ನು ಬಿಎಸ್‌ವೈ ಹಿಡಿತದಿಂದ ಹೊರತರಬೇಕೆಂದು ಆಗ್ರಹಿಸುತ್ತಿರುವ ಬಿಜೆಪಿ ಅಸಮಾಧಾನಿತರ ಗುಂಪು. ಈ ಗುಂಪಿನಲ್ಲಿ ಪ್ರಮುಖವಾಗಿ ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ್, ಮಾಜಿ ಸಚಿವರಾದ ಕುಮಾರ ಬಂಗಾರಪ್ಪ, ಅರವಿಂದ ಲಿಂಬಾವಳಿ, ರಮೇಶ್ ಜಾರಕಿಹೊಳಿ, ಶಾಸಕ ಬಿ.ಪಿ.ಹರೀಶ, ಮಾಜಿ ಸಂಸದ ಪ್ರತಾಪ ಸಿಂಹ ಮತ್ತು ಇತರ ನಾಯಕರಿದ್ದಾರೆ. ತಟಸ್ಥ ಗುಂಪಿನಲ್ಲಿ ಕೇಂದ್ರ ಸಚಿವ ವಿ. ಸೋಮಣ್ಣ, ಮಾಜಿ ಸಚಿವ ಸುನೀಲ್ ಕುಮಾರ್, ಸಿ.ಟಿ.ರವಿ ಸೇರಿದಂತೆ ಬಹುತೇಕ ಸಂಸದರಿದ್ದಾರೆ.

ರಾಜ್ಯ ಬಿಜೆಪಿಗೆ ಪೂರ್ಣ ಪ್ರಮಾಣದ ಅಧ್ಯಕ್ಷರನ್ನಾಗಿ ವಿಜಯೇಂದ್ರ ಅವರನ್ನು ಆಯ್ಕೆ ಮಾಡುವುದಕ್ಕೆ ಅಪಸ್ವರವೆತ್ತಿರುವ ಪಕ್ಷದ ತಟಸ್ಥ ಬಣ ಮತ್ತು ಅಸಮಾಧಾನಿತ ಬಣದವರನ್ನು ವಿಶ್ವಾಸಕ್ಕೆ ತೆಗೆದುಕೊಂಡೇ ಹೊಸ ಅಧ್ಯಕ್ಷರ ಹೆಸರನ್ನು ಘೋಷಣೆ ಮಾಡಬೇಕೆನ್ನುವ ಧೋರಣೆಯನ್ನು ಪಕ್ಷದ ಹೈಕಮಾಂಡ್ ಹೊಂದಿದೆ ಎಂದು ಹೇಳಲಾಗಿದೆ.

ಈ ಹಿನ್ನೆಲೆಯಲ್ಲಿ ವಿಜಯೇಂದ್ರ ನೇಮಕವನ್ನು ಪ್ರಬಲವಾಗಿ ವಿರೋಧಿಸಿ ಬಹಿರಂಗ ಹೇಳಿಕೆಗಳನ್ನು ನೀಡುತ್ತಿದ್ದ ಬಿಜೆಪಿಯ ಹಿರಿಯ ಮುಖಂಡರಾಗಿದ್ದ ಮಾಜಿ ಕೇಂದ್ರ ಸಚಿವ ಬಸನಗೌಡ ಯತ್ನಾಳ್ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ. ಪ್ರತ್ಯೇಕ ಸಭೆಗಳನ್ನು ನಡೆಸಿ ಮುಜುಗರ ಮಾಡುತ್ತಿದ್ದ ಹಾಗೂ ಬಹಿರಂಗ ಹೇಳಿಕೆಗಳನ್ನು ನೀಡುತ್ತಿದ್ದ ಅತೃಪ್ತ ಬಣದ ಶಾಸಕ ಬಿ.ಪಿ. ಹರೀಶ್ ಅವರಿಗೆ ಶಿಸ್ತು ಕ್ರಮದ ನೋಟಿಸ್ ನೀಡಿ ಬಿಜೆಪಿ ಹೈಕಮಾಂಡ್ ಬಿಸಿ ಮುಟ್ಟಿಸಿತ್ತು.

ಹೈಕಮಾಂಡ್‌ನ ಈ ಹೆಜ್ಜೆಗಳೆಲ್ಲಾ ವಿಜಯೇಂದ್ರ ಆಯ್ಕೆಗೆ ದಾರಿ ಸುಗಮಗೊಳಿಸುವುದಾಗಿದೆ ಎಂದೇ ವಿಶ್ಲೇಷಿಸಲಾಗುತ್ತಿದೆ. ಕೇಂದ್ರ ಸಚಿವ ವಿ.ಸೋಮಣ್ಣ ರಾಜ್ಯ ಬಿಜೆಪಿ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದಾರೆ. ಅಧ್ಯಕ್ಷ ಸ್ಥಾನ ನೀಡುವುದಾದರೆ ಕೇಂದ್ರ ಸಚಿವ ಸ್ಥಾನವನ್ನು ಸಹ ಬಿಟ್ಟು ಬರಲು ಸಿದ್ಧವೆನ್ನುವ ಸಂದೇಶವನ್ನು ಸಹ ಸಚಿವ ಸೋಮಣ್ಣ ಹೈಕಮಾಂಡ್‌ಗೆ ರವಾನಿಸಿದ್ದಾರೆ.

ಪಕ್ಷದ ಹಿರಿಯ ಮುಖಂಡರಾದ ಸಿ.ಟಿ.ರವಿ, ಮಾಜಿ ಉಪ ಮುಖ್ಯಮಂತ್ರಿ ಡಾ.ಅಶ್ವತ್ಥನಾರಾಯಣ, ಅರವಿಂದ ಲಿಂಬಾವಳಿ, ಮಾಜಿ ಸಚಿವ ಸುನೀಲ್ ಕುಮಾರ್, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಅವರು ಪಕ್ಷ ಅವಕಾಶ ನೀಡಿದರೆ ರಾಜ್ಯ ಬಿಜೆಪಿ ಅಧ್ಯಕ್ಷ ಗಾದಿಗೇರಲು ಒಲವನ್ನು ಹೊಂದಿದ್ದಾರೆ ಎನ್ನಲಾಗಿದೆ.

ಹಾಸನ ಜಿಲ್ಲಾಧಿಕಾರಿ ಕಚೇರಿಗೆ ಬಾಂಬ್ ಬೆದರಿಕೆ ಮೇಲ್

ಹಾಸನ: ಜಿಲ್ಲಾಧಿಕಾರಿಗೆ ಕಚೇರಿಗೆ ಬಾಂಬ್ ಬೆದರಿಕೆ ಮೇಲ್ ಬಂದಿದೆ. ಇ–ಮೇಲ್ ಸತ್ಯಾಸತ್ಯತೆ ಪರಿಶೀಲನೆ ಮಾಡಬೇಕಾಗುತ್ತದೆ. ಯಾರು ಆತಂಕಪಡುವುದು ಬೇಡ ಎಂದ ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಪ್ರತಿಕ್ರಿಯಿಸಿದ್ದಾರೆ.



ಲತಾ ಕುಮಾರಿ

ಸೋಮವಾರ (ಡಿ.15) ಹಾಸನ ಕಲೆಕ್ಟರ್ ಅಂಡ್ ಸ್ಟಾಫ್ ಎಂದು ಮೇಲ್ ಬಂದಿದೆ. ಆರ್ಮಾ ಅಶ್ವಿನ್ ಶೇಖರ್ ಹೆಸರಿನಲ್ಲಿ ಮೇಲ್ ಬಂದಿದ್ದು, ಪಾಕಿಸ್ತಾನ ಐಎಸ್‌ಐ ಸೆಲ್ ಎಕ್ಸ್–ಎಲ್‌ಎಲ್‌ಟಿಐ ಕೇಡರ್‌ನಿಂದ ಬ್ಲಾಸ್ಟ್ ಆಯ್ಕೆ ಮಾಡಲಾಗುತ್ತಿದೆ ಎಂದು ಬರೆಯಲಾಗಿದೆ.

ಮೇಲ್ ಬಂದ ತಕ್ಷಣವೇ ಹಾಸನ ಉಪವಿಭಾಗಾಧಿಕಾರಿ ಪೋಲಿಸರಿಗೆ ದೂರು ನೀಡಿದ್ದು, ದೂರಿನನ್ವಯ ಎಫ್‌ಐಆರ್ ದಾಖಲಾಗಿದೆ. ಜಿಲ್ಲಾಧಿಕಾರಿ ಕಚೇರಿಗೆ ಜಿಲ್ಲಾ ಪೊಲೀಸರ ತಂಡ, ಶ್ವಾನದಳ ದೌಡಾಯಿಸಿದ್ದು, ಕಟ್ಟಡದ ಮೂಲೆ, ಮೂಲೆಯಲ್ಲಿಯೂ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಹಾಸನ ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಮಾತನಾಡಿ, ಯಾವುದೇ ಗಂಭೀರ ವಿಷಯ ಇಲ್ಲ. ಇ–ಮೇಲ್ ಸತ್ಯಾಸತ್ಯತೆ ಪರಿಶೀಲನೆ ಮಾಡಬೇಕಾಗಿದ್ದು, ಯಾರು ಆತಂಕ ಪಡುವುದು ಬೇಡ ಎಂದಿದ್ದಾರೆ.


ಮಾಜಿ ಮುಖ್ಯಮಂತ್ರಿ ಹಾಗೂ ಭಾರೀ ಕೈಗಾರಿಕೆಗಳು
ಮತ್ತು ಉಕ್ಕಿನ ಸಚಿವರಾದ ಸನ್ಮಾನ್ಯ
ಶ್ರೀ ಹೆಚ್.ಡಿ.ಕುಮಾರಸ್ವಾಮಿ ರವರಿಗೆ
ಹುಟ್ಟುಹಬ್ಬದ ಶುಭಾಶಯಗಳು
ದಿನಾಂಕ: 16.12.2025 ಮಂಗಳವಾರ
ಬೆಳಿಗ್ಗೆ 8.00 ಗಂಟೆಗೆ ಮಣಿಪಾಲ್ ಆಸ್ಪತ್ರೆ
ರಿಂಗ್ ರಸ್ತೆ ಮುಖಾಂತರ
ಚಾಮುಂಡಿಬೆಟ್ಟಕ್ಕೆ ಆಗಮಿಸುತ್ತಿರುವ
ಹೆಚ್.ಡಿ.ಕುಮಾರಸ್ವಾಮಿ ಅವರಿಗೆ
ಸುಸ್ವಾಗತ
VISMAYA
ADVERTISERS
8050302424

ಕೇಂದ್ರ ಸರ್ಕಾರ ಘೋಷಿತ ವಿಕಸಿತ ಭಾರತ-2047 ಗುರಿಯಡಿ

ಬಿಲ್ಡರ್‌ಗಳು, ಉತ್ಪಾದಕರು, ಸೇವಾ ಪೂರೈಕೆದಾರರಿಗೆ ಭರ್ಜರಿ ಅವಕಾಶ

● ಬಿಎಐ ಕರ್ನಾಟಕ ಘಟಕದ ಅಧ್ಯಕ್ಷ ಎನ್.ಸುಬ್ರಹ್ಮಣ್ಯ ವಿಶ್ವಾಸ ● ಐದು ದಿನಗಳ 25ನೇ ವರ್ಷದ ಮೈಬಿಲ್ಡ್ ವಸ್ತು ಪ್ರದರ್ಶನಕ್ಕೆ ತೆರೆ ● ಅತ್ಯುತ್ತಮ ಪ್ರದರ್ಶಕ ಮಳಿಗೆದಾರರಿಗೆ ಬಹುಮಾನ ವಿತರಣೆ





ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಸೋಮವಾರ ನಡೆದ ಮೈಬಿಲ್ಡ್ ವಸ್ತುಪ್ರದರ್ಶನದ ಸಮಾರೋಪ ಸಮಾರಂಭದಲ್ಲಿ ಅತ್ಯುತ್ತಮ ಪ್ರದರ್ಶಕ ಮಳಿಗೆದಾರರಿಗೆ ಬಹುಮಾನಗಳನ್ನು ವಿತರಣೆ ಮಾಡಲಾಯಿತು. (ಕುಳಿತವರು ಎಡದಿಂದ) ಮೈಬಿಲ್ಡ್ 25ರ ಗೌರವ ಕಾರ್ಯದರ್ಶಿ ಎನ್.ಲೋಕೇಶ್‌ಗೌಡ, ಮೈಬಿಲ್ಡ್ 25ರ ಅಧ್ಯಕ್ಷ ಆರ್.ರಮೇಶ್ ರಾವ್, 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ವ್ಯವಸ್ಥಾಪಕ ಸಂಪಾದಕರಾದ ವಿಕ್ರಂ ಮುತ್ತಣ್ಣ, ಬಿಎಐ ಮೈಸೂರು ಕೇಂದ್ರದ ಅಧ್ಯಕ್ಷ ವಿ.ಶ್ರೀನಾಥ್, ಬಿಎಐ ಕರ್ನಾಟಕ ಘಟಕದ ಅಧ್ಯಕ್ಷ ಎನ್.ಸುಬ್ರಹ್ಮಣ್ಯ, ಬಿಎಐ ಮೈಸೂರು ಗೌರವ ಕಾರ್ಯದರ್ಶಿ ಸಿ.ಡಿ.ಕೃಷ್ಣ ಅವರನ್ನು (ಎಡಚಿತ್ರ) ಕಾಣಬಹುದು. ಬಲ ಚಿತ್ರದಲ್ಲಿ ವಿಕ್ರಂ ಮುತ್ತಣ್ಣ ಅವರು ಸೇರಿದಂತೆ ಗಣ್ಯರು ವಸ್ತುಪ್ರದರ್ಶನದ ಮಳಿಗೆಗಳನ್ನು ವೀಕ್ಷಿಸುತ್ತಿರುವುದನ್ನು ಕಾಣಬಹುದು.

ಮೈಸೂರು,ಡಿ.15(ಪಿಎಂ)– 'ವಿಕಸಿತ ಭಾರತ–2047' ಶೀರ್ಷಿಕೆಯಡಿ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸುವ ಗುರಿಯನ್ನು ಕೇಂದ್ರ ಸರ್ಕಾರ ಹೊಂದಿದ್ದು, ಇದರಿಂದ ಬಿಲ್ಡರ್‌ಗಳು, ಉತ್ಪಾದಕರು ಮತ್ತು ಸೇವಾ ಪೂರೈಕೆದಾರರಿಗೆ ಭರ್ಜರಿ ಅವಕಾಶ ಲಭ್ಯವಾಗಲಿದೆ ಎಂದು ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ (ಬಿಎಐ) ಕರ್ನಾಟಕ ಘಟಕದ ಅಧ್ಯಕ್ಷ ಎನ್.ಸುಬ್ರಹ್ಮಣ್ಯ ಹೇಳಿದರು.

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ (ಬಿಎಐ) ಮೈಸೂರು ಕೇಂದ್ರದ ವತಿಯಿಂದ ಐದು ದಿನಗಳ ಕಾಲ ಹಮ್ಮಿಕೊಂಡಿದ್ದ ಕಟ್ಟಡ ಸಾಮಗ್ರಿ, ಇತ್ತೀಚಿನ ನಿರ್ಮಾಣ ತಂತ್ರಜ್ಞಾನಗಳ ಕುರಿತ 25ನೇ ವರ್ಷದ ಮೈಬಿಲ್ಡ್ ಬೃಹತ್ ವಸ್ತುಪ್ರದರ್ಶನದ (ಮೈಬಿಲ್ಡ್ ರಜತ ಮಹೋತ್ಸವ) ಸಮಾರೋಪ ಸಮಾರಂಭದಲ್ಲಿ ಸೋಮವಾರ ಅವರು ಮಾತನಾಡಿದರು.

ನಮ್ಮ ಭಾರತ ಸರ್ಕಾರವು ವಿಕಸಿತ ಭಾರತ ಶೀರ್ಷಿಕೆಯಡಿ 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸುವ ಗುರಿ ಹೊಂದಿದೆ. ಇದರ ಅರ್ಥ, ನಾವು ಇಲ್ಲಿಯವರೆಗೆ ಭಾರತವನ್ನು ಏನೇ ನಿರ್ಮಿಸಿದ್ದರೂ 2047ರ ವೇಳೆಗೆ ಮತ್ತಷ್ಟು ಬಲಿಷ್ಠ ಭಾರತವನ್ನು ನಿರ್ಮಿಸಬೇಕು ಎಂಬುದಾಗಿದೆ. ಅಂದರೆ ಬಿಲ್ಡರ್‌ಗಳು, ತಯಾರಕರು ಹಾಗೂ ಪೂರೈಕೆದಾರಿಗೆ ಇದರ ಮೂಲಕ ಅಪಾರ ಪ್ರಮಾಣದ ಅವಕಾಶ ದೊರೆಯಲಿದೆ. ಈ ಹಿನ್ನೆಲೆಯಲ್ಲಿ ಎಲ್ಲಾ ಪಾಲುದಾರರಿಗೆ ಇತ್ತೀಚಿನ ತಂತ್ರಜ್ಞಾನಗಳು, ನಿರ್ಮಾಣ ಸಾಮಗ್ರಿಗಳ ಬಗ್ಗೆ ಜಾಗೃತಿ ಮೂಡಿಸಲು ಮೈಬಿಲ್ಡ್ ಅತ್ಯುತ್ತಮ ವೇದಿಕೆಯಾಗಿದೆ ಎಂದು ಹೇಳಿದರು.

25 ವರ್ಷಗಳ ಸುದೀರ್ಘ ಇತಿಹಾಸ ಹೊಂದಿರುವ ಮೈಬಿಲ್ಡ್ ಇಂದು 25ನೇ ಆವೃತ್ತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಮೈಬಿಲ್ಡ್ ಪ್ರಯಾಣದ ಬಗ್ಗೆ ಹಿಂತಿರುಗಿ ನೋಡಿದರೆ ಪ್ರತಿ ಆವೃತ್ತಿಯಲ್ಲೂ ಹಿಂದಿನ ಆವೃತ್ತಿಗಿಂತ ಸುಧಾರಣೆ ಹೊಂದಿರುವುದನ್ನು ಕಾಣಬಹುದು. ಕೋವಿಡ್ ಪರಿಸ್ಥಿತಿಯಲ್ಲಿಯೂ ಬಿಎಐ ಮೈಸೂರು ಘಟಕ ಹಿಂಜರಿಯದೇ ವರ್ಚುವಲ್ ಮೂಲಕ ಮೈಬಿಲ್ಡ್ ವಸ್ತುಪ್ರದರ್ಶನ ಮಾಡಿದೆ. ನನಗೆ ತಿಳಿದಂತೆ ಇಡೀ ದಕ್ಷಿಣ ಭಾರತದಲ್ಲಿ ಕಳೆದ 25 ವರ್ಷಗಳಿಂದ ನಿರಂತರವಾಗಿ ಇಂತಹ ನಿರ್ಮಾಣ ಸಾಮಾಗ್ರಿ ಪ್ರದರ್ಶನ ನಡೆದಿಲ್ಲ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

> ಮೈಬಿಲ್ಡ್ ವಸ್ತುಪ್ರದರ್ಶನ ನಿರ್ಮಾಣ ಕ್ಷೇತ್ರದ ಎಲ್ಲಾ ಸಾಮಗ್ರಿಗಳ ಬೃಹತ್ ಪ್ರದರ್ಶನವಾಗಿದೆ. ಇದರಿಂದ ಸಾರ್ವಜನಿಕರಿಗೆ ಅನುಕೂಲವಾಗಲಿದೆ. ಹಾಗಾಗಿ ಮುಂದಿನ ವರ್ಷ ಈ ಪ್ರದರ್ಶನಕ್ಕೆ ಇನ್ನು ಹೆಚ್ಚಿನ ಪ್ರಚಾರ ನೀಡುವ ಅಗತ್ಯವಿದೆ. 25 ವರ್ಷಗಳ ಕಾಲ 25 ಆವೃತ್ತಿಗಳನ್ನು ಯಶಸ್ವಿಯಾಗಿ ಆಯೋಜಿಸಿರುವುದಕ್ಕೆ ಬಿಎಐ ಮೈಸೂರು ಘಟಕವನ್ನು ಅಭಿನಂದಿಸುತ್ತೇನೆ.
>
> -**ವಿಕ್ರಂ ಮುತ್ತಣ್ಣ**, ವ್ಯವಸ್ಥಾಪಕ ಸಂಪಾದಕರು, 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್'.

'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ವ್ಯವಸ್ಥಾಪಕ ಸಂಪಾದಕರಾದ ಕೆ.ಜಿ.ವಿಕ್ರಂ ಮುತ್ತಣ್ಣ ಅವರು ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು. ಇದೇ ವೇಳೆ ಮುಂಬರುವ 2026ರ ಡಿ.10ರಿಂದ 14ರವರೆಗೆ 26ನೇ ವರ್ಷದ ಮೈಬಿಲ್ಡ್ ಆಯೋಜಿಸುವ ಕುರಿತ ಬ್ಯಾನರ್ ಬಿಡುಗಡೆ ಮಾಡಲಾಯಿತು. ಜೊತೆಗೆ ವಸ್ತುಪ್ರದರ್ಶನ ಆಯೋಜನೆಗೆ ವಿಶೇಷವಾಗಿ ಶ್ರಮಿಸಿದವರು, ಪ್ರದರ್ಶನದ ವಿವಿಧ ಸಮಿತಿಗಳ ಪದಾಧಿಕಾರಿಗಳು, ಸದಸ್ಯರು, ಪ್ರಾಯೋಜಕತ್ವ ನೀಡಿದವರಿಗೆ ಸ್ಮರಣಿಕೆ ನೀಡಿ ಗೌರವಿಸಲಾಯಿತು. ಮಹಾರಾಜ ಕಾಲೇಜು ಮೈದಾನದಲ್ಲಿ 5 ದಿನಗಳು ನಡೆದ ರಜತ ಮಹೋತ್ಸವ ಮೈಬಿಲ್ಡ್ ವಸ್ತು ಪ್ರದರ್ಶನಕ್ಕೆ 50 ಸಾವಿರಕ್ಕೂ ಹೆಚ್ಚು ಮಂದಿ ಭೇಟಿ ನೀಡಿದ್ದರು. ಸುಮಾರು 300 ಮಳಿಗೆಗಳಲ್ಲಿ ನಿರ್ಮಾಣ ಕ್ಷೇತ್ರ ಸಾಮಗ್ರಿಗಳ ಬೃಹತ್ ಪ್ರದರ್ಶನ ಏರ್ಪಡಿಸಲಾಗಿತ್ತು.

ಬಹುಮಾನ: ಪ್ರತಿ ವರ್ಷದಂತೆ ಉತ್ತಮ ಪ್ರದರ್ಶಕರಿಗೆ ಬಹುಮಾನ ನೀಡಲಾಯಿತು. ಪ್ಲಾಟಿನಮ್ ಬ್ಲಾಕ್‌ನ 2 ಸ್ಟಾಲ್ ವಿಭಾಗದಲ್ಲಿ ಜೆಕೆ ಡಿಸೈನರ್ ಟೈಲ್ಸ್ ವರ್ಲ್ಡ್ ಪ್ರಥಮ, ರಿಲಿಕಾಂಪ್ ಎಲಿವೇಟರ್ಸ್ ದ್ವಿತೀಯ ಹಾಗೂ ಜಿ ಸ್ಕೈರ್ ತೃತೀಯ ಬಹುಮಾನ ಪಡೆದವು. ಅಂತೆಯೇ 3 ಸ್ಟಾಲ್ ವಿಭಾಗದಲ್ಲಿ ಡಿಸೈನ್ ಟು ಡಿಲಿವರ್ ಸ್ಟುಡಿಯೋ ಪ್ರೈ.ಲಿಮಿಟೆಡ್ ಪ್ರಥಮ, 4 ಸ್ಟಾಲ್ ವಿಭಾಗದಲ್ಲಿ ಇಕೋಪ್ಲಾನೆಟ್ ಎಲಿವೇಟರ್ಸ್ ಪ್ರಥಮ, ನಮ್ಮನೆ ಇಂಟಿರಿಯರ್ಸ್ ದ್ವಿತೀಯ, ಪ್ಯಾರಾಮೌಂಟ್ ತೃತೀಯ, 6 ಸ್ಟಾಲ್ ವಿಭಾಗದಲ್ಲಿ ಚೆರಿಶ್ ಇಂಟೀರಿಯರ್ಸ್ ಸ್ಟುಡಿಯೋ ಪ್ರೈ.ಲಿ. ಪ್ರಥಮ, ಅಸೆಟೆಕ್ ಎಲಿಯೇಟರ್ಸ್ ದ್ವಿತೀಯ ಬಹುಮಾನ ಪಡೆದರೆ, ಯೂನಿಕ್ ಸ್ಟಾಲ್ ವಿಭಾಗದಲ್ಲಿ ಆರ್‌ಕೆಬಿ ಏಕೈಕ ಪ್ರಥಮ ಬಹುಮಾನ ಪಡೆಯಿತು. ಸಿಲ್ವರ್ ಜುಬಿಲಿ ಜ್ಯೂರಿ ಪ್ರೈಜ್ ವಿಭಾಗದಲ್ಲಿ ಜೀರೋ ಟು ಇನ್ಫಿನಿಟಿ, ಡಾರ್ಲಾ ಇಂಟೀರಿಯರ್ಸ್, ಹೆಲೆನ್ ಕಲರ್ ಮೈಸೂರು, ಓಸಿಯಾ ಫರ್ನಿಚರ್ಸ್, ಸಾಯ್ ಹೀಟಿಂಗ್ ಅಂಡ್ ಕೂಲಿಂಗ್, ಸಲ್ಯೂಷನ್ಸ್ (ನಿಯೋ ಹೀಟ್ ಪಂಪ್ಸ್) ಬಹುಮಾನ ಪಡೆದವು.

ಡೈಮಂಡ್ ಬ್ಲಾಕ್‌ನ ಸಿಂಗಲ್ ಸ್ಟಾಲ್ ವಿಭಾಗದಲ್ಲಿ ಸ್ಕೋನ್ ಅಲ್ಯೂಮಿನಿಯಂ ಸ್ಟುಡಿಯೋ ಪ್ರಥಮ, ಯೂನಿವರ್ಸಲ್ ಲ್ಯಾಂಡ್ ಸರ್ವೇಯರ್ಸ್ ಅಂಡ್ ಸಾಯಿಲ್ ಟೆಸ್ಟಿಂಗ್ ಲ್ಯಾಬ್ ದ್ವಿತೀಯ, 2 ಸ್ಟಾಲ್ ವಿಭಾಗದಲ್ಲಿ ಇನೋವೇಟಿವ್ ಡಿಸೈನ್ ಸ್ಟುಡಿಯೋ ಪ್ರಥಮ, ಮಹಾವೀರ್ ಲೈಟಿಂಗ್ಸ್ ದ್ವಿತೀಯ, ಶ್ರೀ ಮಿರ್ಜಿ ಬಿಲ್ಡ್ ಮಾರ್ಟ್ ತೃತೀಯ, 3 ಸ್ಟಾಲ್ ವಿಭಾಗದಲ್ಲಿ ಲೆಡ್ ಲೈಟೆಡ್ ಪ್ರಥಮ, ತ್ರಿಶೂಲ್ ಎಲೆಕ್ಟ್ರಿಕಲ್ಸ್ ದ್ವಿತೀಯ ಬಹುಮಾನ ಪಡೆದವು. 4 ಸ್ಟಾಲ್ ವಿಭಾಗದಲ್ಲಿ ಮೇಘಾ ಎಲೆಕ್ಟ್ರಿಕಲ್ ಅಂಡ್ ಇಂಟಪ್ರೈಸಸ್ ಏಕೈಕ ಪ್ರಥಮ ಬಹುಮಾನ ಪಡೆಯಿತು. 8 ಸ್ಟಾಲ್ ವಿಭಾಗದಲ್ಲಿ ಆರೋ ಇಂಟೀರಿಯರ್ಸ್ ಏಕೈಕ ಪ್ರಥಮ ಬಹುಮಾನ ಪಡೆದರೆ, ಸಿಲ್ವರ್ ಜ್ಯೂಬಿಲಿ ಜ್ಯೂರಿ ಪ್ರೈಜ್ ವಿಭಾಗದಲ್ಲಿ ಶ್ರೀ ವಿಷ್ಣು ಸೆರಾಮಿಕ್ಸ್, ಓರಿಯಂಟಲ್ ಬೆಲ್ ಲಿಮಿಟೆಡ್, ಮೂನ್ ವಾಲ್ ಪೇಪರ್ಸ್, ಫೈಬ್ರೋಟೆಕ್ ಎಫ್‌ಆರ್‌ಪಿ ಬಹುಮಾನ ಪಡೆದವು. ಬಿಎಐ ಮೈಸೂರು ಕೇಂದ್ರದ ಅಧ್ಯಕ್ಷ ವಿ.ಶ್ರೀನಾಥ್, ಗೌರವ ಕಾರ್ಯದರ್ಶಿ ಸಿ.ಡಿ.ಕೃಷ್ಣ, ಮೈಬಿಲ್ಡ್ 25ರ ಅಧ್ಯಕ್ಷ ಆರ್.ರಮೇಶ್ ರಾವ್, ಗೌರವ ಕಾರ್ಯದರ್ಶಿ ಎನ್.ಲೋಕೇಶ್ ಗೌಡ ಮತ್ತಿತರರು ಹಾಜರಿದ್ದರು.

ಪಹಲ್ಗಾಮ್ ಉಗ್ರ ದಾಳಿ: 1,597 ಪುಟಗಳ ಚಾರ್ಜ್‌ಶೀಟ್ ಸಲ್ಲಿಸಿದ ಎನ್‌ಐಎ

ಉನ್ನತ LeT ಕಮಾಂಡರ್ ಸಾಜಿದ್ ಜಾಟ್ ಹೆಸರು ಉಲ್ಲೇಖ!

ನವದೆಹಲಿ: ಎಂಟು ತಿಂಗಳ ಕಠಿಣ ತನಿಖೆಯ ನಂತರ, ರಾಷ್ಟ್ರೀಯ ತನಿಖಾ ಸಂಸ್ಥೆ ಇಂದು ಪಹಲ್ಗಾಮ್ ಭಯೋತ್ಪಾದಕ ದಾಳಿ ಪ್ರಕರಣದಲ್ಲಿ ಏಳು ಆರೋಪಿಗಳ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಿದೆ. ಚಾರ್ಜ್‌ಶೀಟ್‌ನಲ್ಲಿ ಪಾಕಿಸ್ತಾನ ಮೂಲದ ಲಷ್ಕರ್–ಎ–ತೈಬಾ ಮತ್ತು ದಿ ರೆಸಿಸ್ಟೆನ್ಸ್ ಫ್ರಂಟ್ ಭಯೋತ್ಪಾದಕ ಸಂಘಟನೆಗಳ ಹೆಸರುಗಳಿವೆ. ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಸಂಬಂಧಿಸಿದಂತೆ 1,597 ಪುಟಗಳ ಚಾರ್ಜ್‌ಶೀಟ್ ಅನ್ನು ಜಮ್ಮು ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ.

ಚಾರ್ಜ್‌ಶೀಟ್‌ನಲ್ಲಿ ಪಾಕಿಸ್ತಾನದ ಪಿತೂರಿ, ಆರೋಪಿಗಳ ಪಾತ್ರಗಳು ಮತ್ತು ಪ್ರಕರಣದಲ್ಲಿ ಪೋಷಕ ಪುರಾವೆಗಳನ್ನು ವಿವರಿಸಲಾಗಿದೆ. ನಿಷೇಧಿತ ಎಲ್‌ಇಟಿ/ಟಿಆರ್‌ಎಫ್ ಕಾನೂನುಬದ್ಧ ಘಟಕವಾಗಿ ಪಹಲ್ಗಾಮ್ ದಾಳಿಯನ್ನು ಯೋಜಿಸುವುದು, ಸುಗಮಗೊಳಿಸುವುದು ಮತ್ತು ಕಾರ್ಯಗತಗೊಳಿಸುವಲ್ಲಿ ಅದರ ಪಾತ್ರವನ್ನು ಆರೋಪಿಸುತ್ತದೆ. ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದಕರು ಧರ್ಮದ ಆಧಾರದ ಮೇಲೆ ನಡೆಸಿದ ದಾಳಿಯಲ್ಲಿ 25 ಹಿಂದೂ ಪ್ರವಾಸಿಗರು ಮತ್ತು ಒಬ್ಬ ಸ್ಥಳೀಯ ನಾಗರಿಕ ಸಾವನ್ನಪ್ಪಿದ್ದನು. ಜಮ್ಮುವಿನ ಎನ್‌ಐಎ ವಿಶೇಷ ನ್ಯಾಯಾಲಯದಲ್ಲಿ ಸಲ್ಲಿಸಲಾದ 1,597 ಪುಟಗಳ ಆರೋಪಪಟ್ಟಿಯಲ್ಲಿ ಪಾಕಿಸ್ತಾನಿ ಭಯೋತ್ಪಾದಕ ಸಾಜಿದ್ ಜಾಟ್ ನನ್ನು ಆರೋಪಿಯನ್ನಾಗಿ ಹೆಸರಿಸಲಾಗಿದೆ.

ಮಾರಣಾಂತಿಕ ಭಯೋತ್ಪಾದಕ ದಾಳಿಯ ಕೆಲವು ವಾರಗಳ ನಂತರ ಜುಲೈನಲ್ಲಿ ಶ್ರೀನಗರದ ಡಚಿಗಮ್‌ನಲ್ಲಿ ಆಪರೇಷನ್ ಮಹಾದೇವ್ ಸಮಯದಲ್ಲಿ ಭಾರತೀಯ ಭದ್ರತಾ ಪಡೆಗಳಿಂದ ಹತ್ಯೆಗೀಡಾದ ಮೂವರು ಪಾಕಿಸ್ತಾನಿ ಭಯೋತ್ಪಾದಕರನ್ನು NIA ಆರೋಪಪಟ್ಟಿಯಲ್ಲಿ ಹೆಸರಿಸಲಾಗಿದೆ. ಉಗ್ರರನ್ನು ಫೈಸಲ್ ಜಾಟ್ ಅಲಿಯಾಸ್ ಸುಲೇಮಾನ್ ಶಾ, ಹಬೀಬ್ ತಾಹಿರ್ ಅಲಿಯಾಸ್ ಜಿಬ್ರಾನ್ ಮತ್ತು ಹಮ್ಜಾ ಅಫ್ಘಾನಿ ಎಂದು ಗುರುತಿಸಲಾಗಿದೆ. ನಾಲ್ವರು ಭಯೋತ್ಪಾದಕರ ಜೊತೆಗೆ ಎಲ್‌ಇಟಿ ಮತ್ತು ಟಿಆರ್‌ಎಫ್ ವಿರುದ್ಧ ಭಾರತೀಯ ದಂಡ ಸಂಹಿತೆ, 2023, ಶಸ್ತ್ರಾಸ್ತ್ರ ಕಾಯ್ದೆ, 1959 ಮತ್ತು ಕಾನೂನುಬಾಹಿರ ಚಟುವಟಿಕೆಗಳು (ತಡೆಗಟ್ಟುವಿಕೆ) ಕಾಯ್ದೆ, 1967ರ ಸಂಬಂಧಿತ ನಿಬಂಧನೆಗಳ ಅಡಿಯಲ್ಲಿ ಆರೋಪ ಹೊರಿಸಲಾಗಿದೆ.

ಭಯೋತ್ಪಾದನೆಗೆ ಆಶ್ರಯ ನೀಡಿದ ಆರೋಪದ ಮೇಲೆ ಭಾರತದಲ್ಲಿ ಪರ್ವೇಜ್ ಅಹ್ಮದ್ ಮತ್ತು ಬಶೀರ್ ಅಹ್ಮದ್ ಜೋಥಾದ್ ಸೇರಿದಂತೆ ಇಬ್ಬರು ಆರೋಪಿಗಳನ್ನು ಜೂನ್ 22 ರಂದು ಎನ್‌ಐಎ ಬಂಧಿಸಿದ್ದು, ಅವರ ವಿರುದ್ಧ ಆರೋಪಪಟ್ಟಿ ಸಲ್ಲಿಸಲಾಗಿದೆ.

ಮೊಟ್ಟೆ ಸೇವನೆಯಿಂದ ಕ್ಯಾನ್ಸರ್ ವದಂತಿ: ಎಚ್ಚೆತ್ತ ಆರೋಗ್ಯ ಇಲಾಖೆ, 200ಕ್ಕೂ ಹೆಚ್ಚು ಕಡೆಯಿಂದ ಸ್ಯಾಂಪಲ್ ಸಂಗ್ರಹ



ಬೆಂಗಳೂರು: ಮೊಟ್ಟೆಯಿಂದ ಕ್ಯಾನ್ಸರ್ ವದಂತಿ ಬೆನ್ನಲ್ಲೇ ಆಹಾರ ಸುರಕ್ಷಾ ಇಲಾಖೆ ಅಲರ್ಟ್ ಆಗಿದೆ. ಬೆಂಗಳೂರಿನಲ್ಲಿ 200ಕ್ಕೂ ಹೆಚ್ಚು ಪ್ರದೇಶಗಳಿಂದ ಮೊಟ್ಟೆ ಸಂಗ್ರಹ ಮಾಡಿ ಲ್ಯಾಬ್‌ಗೆ ರವಾನೆ ಮಾಡಲಾಗ್ತಿದೆ.

ಸೂಪರ್ ಮಾರ್ಕೆಟ್, ಪೌಲ್ಟ್ರಿ ಅಂಗಡಿ ಸೇರಿದಂತೆ ವಿವಿಧ ಬ್ರ್ಯಾಂಡ್‌ಗಳ ಮೊಟ್ಟೆಯನ್ನ ಸಂಗ್ರಹ ಮಾಡಿ, ಲ್ಯಾಬ್‌ಗೆ ರವಾನೆ ಮಾಡಲಾಗಿದೆ. ಇದಾದ 15 ರಿಂದ 20 ದಿನಗಳಲ್ಲಿ ವರದಿ ಹೊರಬೀಳಲಿದೆ.

ಈ ಸಂಬಂಧ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಪ್ರತಿಕ್ರಿಯಿಸಿ, ಮೊಟ್ಟೆ ಸಂಗ್ರಹ ಮಾಡಿ ಟೆಸ್ಟ್‌ಗೆ ಕಳಿಸಿದ್ದಾರೆ. ಗುಣಮಟ್ಟ ಪರೀಕ್ಷೆ ಮಾಡ್ತಾರೆ. ಗುಣಮಟ್ಟ ರಿಪೋರ್ಟ್ ಬಂದ ಮೇಲೆ ಮುಂದಿನ ನಿರ್ಧಾರ ಮಾಡುತ್ತೇವೆ. ಸದ್ಯಕ್ಕೆ ಜನ ಆತಂಕ ಪಡೋದು ಬೇಡ ಎಂದಿದ್ದಾರೆ. ಇತ್ತ, ಆಹಾರ ತಜ್ಞರೂ ಕೂಡ ಮೊಟ್ಟೆ ತಿಂದರೆ ಕ್ಯಾನ್ಸರ್ ಬರುತ್ತೆ ಅನ್ನೋದು ತಪ್ಪು. ಮೊಟ್ಟೆಯಲ್ಲಿ ಕ್ಯಾನ್ಸರ್‌ಕಾರಕ ಅಂಶ ಇದ್ದರೆ ಆ ಮೊಟ್ಟೆ ಸೇವನೆ ಮಾಡಿದ್ರೆ ಅಪಾಯ. ಮೊಟ್ಟೆ ಎನ್ನುವುದು ಪೌಷ್ಟಿಕಾಂಶವಾಗಿದ್ದು, ಅದು ಮನುಷ್ಯ ದೇಹಕ್ಕೆ ಮುಖ್ಯ. ಎಲ್ಲಾ ಮೊಟ್ಟೆಯಲ್ಲೂ ಕ್ಯಾನ್ಸರ್ ಕಾರಕ ಇರಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಇನ್ನು, ಪೌಲ್ಟ್ರಿ ಅಸೋಸಿಯೇಷನ್ ಅಧ್ಯಕ್ಷ ನಾಗರಾಜ್ ಪ್ರತಿಕ್ರಿಯಿಸಿ, ಉತ್ತರ ಭಾರತದಲ್ಲಿ ಈ ರೀತಿಯ ವದಂತಿಯನ್ನ ಹಬ್ಬಿಸಲಾಗಿದೆ. ಇದು ಶುದ್ಧ ಸುಳ್ಳು. ಯಾವುದೇ ಲ್ಯಾಬ್‌ನಿಂದ ಇದು ಸಾಬೀತು ಆಗಿಲ್ಲ. ಸುಳ್ಳು ವದಂತಿಗೆ ತಲೆಕೆಡಿಸಿಕೊಳ್ಳಬೇಡಿ ಎಂದು ಸ್ಪಷ್ಟನೆ ನೀಡಿದ್ದಾರೆ. ಇದೆಲ್ಲದರ ಮಧ್ಯೆ ಸಾರ್ವಜನಿಕರೂ ಕೂಡ ಯಾವುದೇ ವದಂತಿಗಳಿಗೆ ಕಿವಿಗೊಡದೇ ತಿನ್ನಿ. ಮೊಟ್ಟೆಯಿಂದ ಯಾವ್ರದೇ ತೊಂದರೆಯಿಲ್ಲ ಅಂತಿದ್ದಾರೆ.

ಮುಕ್ಕಾಟಿ ರಮೇಶ್ ನಿಧನ



ಮೈಸೂರು, ಡಿ.15– ಮೈಸೂರಿನ ಕುವೆಂಪುನಗರ 'ಎನ್' ಬ್ಲಾಕ್ ನಿವಾಸಿ ಮುಕ್ಕಾಟಿ ರಮೇಶ್(76) ಅವರು ಇಂದು ಬೆಳಗ್ಗೆ ನಿಧನರಾದರು.

ಇವರು ಪತ್ನಿ ಪುತ್ರ ಪುತ್ರಿ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಜಯನಗರದ ರುದ್ರಭೂಮಿಯಲ್ಲಿ ಮಂಗಳವಾರ ಮಧ್ಯಾಹ್ನ 12ಕ್ಕೆ ಅಂತ್ಯ ಸಂಸ್ಕಾರ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಯುಜಿ ವೈದ್ಯಕೀಯ: ಸ್ಟ್ರೇ ವೇಕೆನ್ಸಿ ಸುತ್ತಿನ ತಾತ್ಕಾಲಿಕ ಫಲಿತಾಂಶ ಪ್ರಕಟ–ಕೆಇಎ

ಯುಜಿ ಆಯುಷ್: ಮತ್ತೊಂದು ಸುತ್ತು ಕೌನ್ಸೆಲಿಂಗ್

ಬೆಂಗಳೂರು: ವೈದ್ಯಕೀಯ ಮತ್ತು ದಂತ ವೈದ್ಯಕೀಯ ಪದವಿ ಕೋರ್ಸ್‌ಗಳ ಪ್ರವೇಶಕ್ಕೆ ಆನ್‌ಲೈನ್ ಸ್ಟ್ರೇ ವೇಕೆನ್ಸಿ ಸುತ್ತಿನ ಸೀಟು ಹಂಚಿಕೆಯ ತಾತ್ಕಾಲಿಕ ಫಲಿತಾಂಶವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸೋಮವಾರ (ಡಿ.15) ಪ್ರಕಟಿಸಿದೆ.

ಆಕ್ಷೇಪಣೆಗಳು ಇದ್ದಲ್ಲಿ ಡಿ.16ರಂದು ಬೆಳಿಗ್ಗೆ 10ಗಂಟೆಯೊಳಗೆ ಪ್ರಾಧಿಕಾರಕ್ಕೆ ಇ–ಮೇಲ್ ಮೂಲಕ ತಿಳಿಸಬೇಕು. ಬಳಿಕ ಡಿ.16ರಂದು ಬೆಳಿಗ್ಗೆ 11 ಗಂಟೆ ನಂತರ ಅಂತಿಮ ಫಲಿತಾಂಶ ಪ್ರಕಟಿಸಲಾಗುತ್ತದೆ. ಸೀಟು ಹಂಚಿಕೆಯಾದವರು ಡಿ.17ರಂದು ಸಂಜೆ 4 ಗಂಟೆಯೊಳಗೆ ಶುಲ್ಕ ಪಾವತಿಸಿ (ವೈದ್ಯಕೀಯ ಶುಲ್ಕ ಠೇವಣಿ ಕಡಿತ ಮಾಡಿಕೊಂಡು), ಸೀಟು ಖಾತರಿ ಚೀಟಿ ಡೌನ್‌ಲೋಡ್ ಮಾಡಿಕೊಳ್ಳಬೇಕು. ಬಳಿಕ ಸಂಜೆ 6 ಗಂಟೆ ಒಳಗೆ ಸಂಬಂಧಪಟ್ಟ ಕಾಲೇಜುಗಳಲ್ಲಿ ವರದಿ ಮಾಡಿಕೊಳ್ಳಬೇಕು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಯುಜಿ ಆಯುಷ್: ಮತ್ತೊಂದು ಸುತ್ತು ಕೌನ್ಸೆಲಿಂಗ್: ಆಯುಷ್ ಕೋರ್ಸ್‌ಗಳ ಪ್ರವೇಶಕ್ಕೆ ಅಂತಿಮ ಹಾಗೂ ನಾಲ್ಕನೇ ಸ್ಟ್ರೇ ವೇಕೆನ್ಸಿ ಸುತ್ತಿನ ಸೀಟು ಹಂಚಿಕೆ ಮಾಡುತ್ತಿದ್ದು, ಸೀಟು ಹಂಚಿಕೆಯಾದವರು ಡಿ.20ರೊಳಗೆ ಕಾಲೇಜುಗಳಲ್ಲಿ ವರದಿ ಮಾಡಿಕೊಳ್ಳಬೇಕಾಗುತ್ತದೆ ಎಂದಿದ್ದಾರೆ.

ಈ ಸುತ್ತಿನಲ್ಲಿ ಭಾಗವಹಿಸಲು ಇಚ್ಛಿಸುವ ಅಭ್ಯರ್ಥಿಗಳು ತಮ್ಮ ಎಲ್ಲ ಮೂಲ ದಾಖಲೆಗಳು ಹಾಗೂ ತಾವು ತೆಗೆದುಕೊಳ್ಳಬಹುದಾದ ಸೀಟಿನ ಪೂರ್ಣ ಶುಲ್ಕದ ಡಿಡಿ ಸಮೇತ ಡಿ.17ರಂದು ಮಧ್ಯಾಹ್ನ 2 ಗಂಟೆಯೊಳಗೆ ಖುದ್ದಾಗಿ ಕೆಇಎ ಕಚೇರಿಯಲ್ಲಿ ಸಲ್ಲಿಸಬೇಕು. ಅದರ ನಂತರ ಡಿ.18ರಂದು ಬೆಳಿಗ್ಗೆ 11 ಗಂಟೆವರೆಗೆ ಇಚ್ಛೆ/ಆಯ್ಕೆಗಳನ್ನು ದಾಖಲಿಸಲು ಅವಕಾಶ ನೀಡಲಾಗುವುದು ಎಂದು ವಿವರಿಸಿದ್ದಾರೆ.

ಇದುವರೆಗೂ ನೋಂದಣಿ ಮಾಡದಿರುವ ವೈ ಕ್ಲಾಸ್ ಅಭ್ಯರ್ಥಿಗಳು ಕೂಡ ಡಿ.17ರಂದು ಕೆಇಎ ಕಚೇರಿಗೆ ಬಂದು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದು. ಡಿ.18ರಂದು ಸಂಜೆ 5ಗಂಟೆ ನಂತರ ಫಲಿತಾಂಶ ಪ್ರಕಟಿಸಲಾಗುತ್ತೆ. ಸೀಟು ಹಂಚಿಕೆಯಾದವರು ಡಿ.20ರೊಳಗೆ ಕಾಲೇಜುಗಳಲ್ಲಿ ವರದಿ ಮಾಡಿಕೊಳ್ಳಬೇಕು ಎಂದು ಮಾಹಿತಿ ನೀಡಿದ್ದಾರೆ.

ನ್ಯಾಯಮೂರ್ತಿಗಳ ಪ್ರಕರಣಗಳ ವಿಲೇವಾರಿ ಸಂಖ್ಯೆ ಬಿಡುಗಡೆಯಾಗಲಿ: ಹೈಕೋರ್ಟ್ ವಕೀಲರ ಆಗ್ರಹ

ಬೆಂಗಳೂರು: 'ಹಾಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ಹೈಕೋರ್ಟ್‌ನ 50 ನ್ಯಾಯಮೂರ್ತಿಗಳಲ್ಲಿ ಯಾವ್ಯಾವ ನ್ಯಾಯಮೂರ್ತಿಗಳು ಎಷ್ಟೆಷ್ಟು ಕೇಸುಗಳನ್ನು ವಿಲೇವಾರಿ ಮಾಡುತ್ತಿದ್ದಾರೆ ಎಂಬ ಅಂಕಿ ಅಂಶಗಳನ್ನು ಪ್ರತಿ ತಿಂಗಳೂ ಸಾರ್ವಜನಿಕ ಅವಗಾಹನೆಗೆ ಬಿಡುಗಡೆ ಮಾಡುವಂತಾಗಬೇಕು' ಎಂದು ಹೈಕೋರ್ಟ್‌ನ ಹಿರಿಯ ವಕೀಲರು ಆಗ್ರಹಿಸಿದ್ದಾರೆ.

'ತಿಂಗಳ ಪ್ರತಿ ಶನಿವಾರಗಳಂದೂ ಹೈಕೋರ್ಟ್‌ನ ಪೂರ್ಣ ಕಲಾಪ ನಡೆಸುವ ಪ್ರಸ್ತಾವವನ್ನು 2026ರ ಜನವರಿಯಿಂದ ಅನುಷ್ಠಾನಗೊಳಿಸಬೇಕು' ಎಂಬ ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳ ನಿರ್ಧಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿರುವ ಮತ್ತು ಹೆಸರು ಬಹಿರಂಗಗೊಳಿಸಲು ಇಚ್ಛಿಸದ ಕೆಲವು ಹಿರಿಯ ವಕೀಲರು, 'ಈಗಿರುವ ಎಲ್ಲ ನ್ಯಾಯಮೂರ್ತಿಗಳ ಕಾರ್ಯಕ್ಷಮತೆ ವೃದ್ಧಿಯಾದರೆ ಶನಿವಾರವೂ ಕೆಲಸ ನಿರ್ವಹಿಸುವ ಅಗತ್ಯವೇ ಬರುವುದಿಲ್ಲ' ಎಂದು ಪ್ರತಿಪಾದಿಸಿದ್ದಾರೆ.

'ಈ ನಿಟ್ಟಿನಲ್ಲಿ ಪ್ರತಿಯೊಬ್ಬ ನ್ಯಾಯಮೂರ್ತಿಗಳೂ ತಾವು ವಿಲೇವಾರಿ ಮಾಡುವ ಕೇಸುಗಳ ಸಂಖ್ಯೆಯನ್ನು ತಿಂಗಳ ಕೊನೆಯಲ್ಲಿ ಸಾರ್ವಜನಿಕ ಅವಗಾಹನೆಗೆ ಬಿಡುಗಡೆ ಮಾಡಬೇಕು. ಈ ದಿಸೆಯಲ್ಲಿ ಹೈಕೋರ್ಟ್ ರಿಜಿಸ್ಟ್ರಾರ್ ನಿಖರ ಅಂಕಿ ಅಂಶಗಳನ್ನು ಸಾರ್ವಜನಿಕವಾಗಿ ಬಹಿರಂಗಗೊಳಿಸಲು ಮುಂದಾಗಬೇಕು' ಎಂದು ಆಗ್ರಹಿಸಿದ್ದಾರೆ.

ಎಎಬಿ ಸಭೆ: ತಿಂಗಳಲ್ಲಿ ಎರಡನೇ ಶನಿವಾರವನ್ನು ಹೊರತುಪಡಿಸಿ ಉಳಿದ ಶನಿವಾರಗಳಂದೂ ಹೈಕೋರ್ಟ್‌ನ ಪೂರ್ಣ ಕಲಾಪ ನಡೆಸುವ ಮುಖ್ಯ ನ್ಯಾಯಮೂರ್ತಿಗಳ ಪ್ರಸ್ತಾವಕ್ಕೆ ಸಂಬಂಧಿಸಿದಂತೆ ಚರ್ಚಿಸಲು ಬೆಂಗಳೂರು ವಕೀಲರ ಸಂಘ ಮಂಗಳವಾರ (ಡಿ.16) ಸಾಮಾನ್ಯ ಸಭೆ ಕರೆದಿದೆ.

'ಸಂಘದ ಬೈಲಾದ ನಿಯಮ 17ಎ ಅಡಿಯಲ್ಲಿ ಮಂಗಳವಾರ ಮಧ್ಯಾಹ್ನ 1.30ಕ್ಕೆ ಹೈಕೋರ್ಟ್‌ನ ವಕೀಲರ ಸಂಘದ ಹಾಲ್‌ನಲ್ಲಿ ಈ ಸಭೆ ನಡೆಯಲಿದೆ. ಸದಸ್ಯರು ಮತ್ತು ಎಲ್ಲ ಪದಾಂಕಿತ ಹಿರಿಯ ವಕೀಲರು ಈ ಸಭೆಯಲ್ಲಿ ಭಾಗವಹಿಸಿ ತಮ್ಮ ಅಭಿಪ್ರಾಯಗಳನ್ನು ದಾಖಲಿಸಬೇಕು' ಎಂದು ಸಂಘದ ಅಧ್ಯಕ್ಷ ವಿವೇಕ್ ಸುಬ್ಬಾರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸ್ವಾಗತ: 'ಸುಪ್ರೀಂಕೋರ್ಟ್ ನಿರ್ದೇಶನದ ಅನುಸಾರ ಶನಿವಾರಗಳಂದೂ ಹೈಕೋರ್ಟ್‌ನ ಕಲಾಪ ನಡೆಸಲು ಮುಂದಾಗಿರುವ ಮುಖ್ಯ ನ್ಯಾಯಮೂರ್ತಿಗಳ ಪ್ರಸ್ತಾವ ಸ್ವಾಗತಾರ್ಹ' ಎಂದು ಕರ್ನಾಟಕ ರಾಜ್ಯ ವಕೀಲರ ಪರಿಷತ್ ಸದಸ್ಯ ಎಂ.ದೇವರಾಜ್ ಸ್ವಾಗತಿಸಿದ್ದಾರೆ.

ಪರಿಷತ್‌ನ ಮತ್ತೊಬ್ಬ ಸದಸ್ಯ ಎಸ್.ಹರೀಶ್, 'ಪ್ರತಿ ಶನಿವಾರ ಹೈಕೋರ್ಟ್ ಮಾತ್ರವಲ್ಲ ಎಲ್ಲ ಅಧೀನ ನ್ಯಾಯಾಲಯಗಳಿಗೂ ರಜೆ ಕೊಡಬೇಕು. ಇವತ್ತು ವಕೀಲರ ವೃತ್ತಿಯ ಒತ್ತಡ ಹೆಚ್ಚಾಗುತ್ತಿದ್ದು ಅವರ ಆರೋಗ್ಯದ ಮೇಲೆ ತೀವ್ರ ದುಷ್ಪರಿಣಾಮ ಬೀರುತ್ತಿದೆ. ಲೋಕ ಅದಾಲತ್ ಮತ್ತು ಪರ್ಯಾಯ ನ್ಯಾಯ ತೀರ್ಮಾನ ಕೇಂದ್ರಗಳು ನಿವೃತ್ತ ನ್ಯಾಯಾಧೀಶರಿಗೆ ಗಂಜಿ ಕೇಂದ್ರಗಳಂತಾಗಿವೆ. ಲೋಕ ಅದಾಲತ್‌ಗಳಲ್ಲಿ ಕೇಸುಗಳು ಸರಿಯಾದ ರೀತಿಯಲ್ಲಿ ತೀರ್ಮಾನವಾಗುತ್ತಿಲ್ಲ. ಸಮಸ್ಯೆ ಪರಿಹರಿಸಬೇಕು ಎಂದರೆ ಕೋರ್ಟ್‌ಗಳ ಮೂಲ ಸೌಕರ್ಯ ಹೆಚ್ಚಾಗಬೇಕು. ನ್ಯಾಯಾಧೀಶರು, ನ್ಯಾಯಮೂರ್ತಿಗಳ ಸಂಖ್ಯೆ ದ್ವಿಗುಣಗೊಳ್ಳಬೇಕು' ಎಂಬ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಪೋಕ್ಸೊ ಪ್ರಕರಣ: ಮುರುಘಾ ಶ್ರೀ ಖುಲಾಸೆ ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ ಸಂತ್ರಸ್ತೆ



ಚಿತ್ರದುರ್ಗ: ಪೋಕ್ಸೊ ಪ್ರಕರಣದಲ್ಲಿ ಚಿತ್ರದುರ್ಗದ ಮುರುಘಾ ಮಠದ ಡಾ.ಶಿವಮೂರ್ತಿ ಶರಣರನ್ನು ಖುಲಾಸೆ ಗೊಳಿಸಿದ ಚಿತ್ರದುರ್ಗ ಜಿಲ್ಲಾ ನ್ಯಾಯಾಲಯ ಆದೇಶ ಪ್ರಶ್ನಿಸಿ ಸಂತ್ರಸ್ತೆ ಹೈಕೋರ್ಟ್ ಗೆ ಮೇಲ್ಮನವಿ ಸಲ್ಲಿಸಿದ್ದಾರೆ.

ನ. 26 ರಂದು ಎರಡನೇ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶ ಚನ್ನಬಸಪ್ಪ ಹಡಪದ್ ನೀಡಿದ ತೀರ್ಪಿನ ವಿರುದ್ಧ ಸಂತ್ರಸ್ತೆ ತನ್ನ ವಕೀಲ ಶ್ರೀನಿವಾಸ್ ಡಿಸಿ ಮೂಲಕ ಕ್ರಿಮಿನಲ್ ಮೇಲ್ಮನವಿ(CRL A 2498/2025) ಸಲ್ಲಿಸಿದ್ದಾರೆ. 2022 ಆಗಸ್ಟ್ 31 ರಂದು ಇಬ್ಬರು ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಎದುರಿಸುತ್ತಿದ್ದ ಮುರುಘಾ ಶ್ರೀಗಳ ವಿರುದ್ಧ ಪೋಕ್ಸೊ ಪ್ರಕರಣ ದಾಖಲಾಗಿತ್ತು.

ಪ್ರಕರಣದ ವಿಚಾರಣೆ ನಡೆಸಿದ ಚಿತ್ರದುರ್ಗದ 2ನೇ ಹೆಚ್ಚುವರಿ ಸೆಷನ್ಸ್ ಕೋರ್ಟ್, ಮೊದಲ ಪೋಕ್ಸೋ ಪ್ರಕರಣದಲ್ಲಿ ಮುರುಘಾ ಶರಣರು ನಿರ್ದೋಷಿ ಎಂದು ತೀರ್ಪು ನೀಡಿದೆ. ಪ್ರಕರಣದ ಎರಡನೇ ಆರೋಪಿ ರಶ್ಮಿ ಹಾಗೂ ನಾಲ್ಕನೇ ಆರೋಪಿ ಪರಮಶಿವಯ್ಯ ಅವರನ್ನು ಕೂಡ ನಿರ್ದೋಷಿ ಎಂದು ಕೋರ್ಟ್ ತೀರ್ಪು ನೀಡಿದ್ದು, ಈ ತೀರ್ಪು ಪ್ರಶ್ನಿಸಿ ಸಂತ್ರಸ್ತೆ ಮೇಲ್ಮನವಿ ಸಲ್ಲಿಸಿದ್ದಾರೆ.

ವೈದ್ಯಕೀಯ ವರದಿಯಲ್ಲಿ ಲೈಂಗಿಕ ದೌರ್ಜನ್ಯದ ಯಾವುದೇ ಪುರಾವೆಗಳಿಲ್ಲ ಮತ್ತು ವೈದ್ಯರು ಮತ್ತು ಮ್ಯಾಜಿಸ್ಟ್ರೇಟ್ ಮುಂದೆ ಸಂತ್ರಸ್ತರು ನೀಡಿದ ಸಾಕ್ಷ್ಯಗಳು ವಿರೋಧಾತ್ಮಕವಾಗಿವೆ ಎಂದು ಕೆಳ ನ್ಯಾಯಾಲಯವು ತೀರ್ಪು ನೀಡಿತ್ತು. ಕಳೆದ 15 ವರ್ಷಗಳಿಂದ ಶರಣರು ಮತ್ತು ಬಸವರಾಜನ್ ನಡುವೆ ಆಸ್ತಿ ವಿವಾದವಿತ್ತು ಎಂದು ನ್ಯಾಯಾಲಯವು ಕಂಡುಕೊಂಡಿದ್ದು, ಇದು ಪ್ರಕರಣವನ್ನು ದುರ್ಬಲಗೊಳಿಸಿದೆ.

ಶ್ರೀಗಳ ವಿರುದ್ಧ ದಾಖಲಾಗಿರುವ ಪ್ರಕರಣವು ಪಿತೂರಿ ಎಂದು ನ್ಯಾಯಾಲಯ ಹೇಳಿದೆ. "ಸಂತ್ರಸ್ತರು ನೀಡಿದ ಹೇಳಿಕೆಗಳು ಒಂದಕ್ಕೊಂದು ಹೊಂದಿಕೆಯಾಗುತ್ತಿಲ್ಲ. ಮಾಜಿ ಶಾಸಕ ಮತ್ತು ಮಠದ ವ್ಯವಸ್ಥಾಪಕ ಎಸ್.ಕೆ. ಬಸವರಾಜನ್ ಅವರು ಘಟನೆಗೆ ಸಂಬಂಧಿಸಿದಂತೆ ಎಸ್ಪಿಗೆ ಸಾಕ್ಷ್ಯ ಮತ್ತು ಫೋಟೋಗಳನ್ನು ನೀಡಿರುವುದಾಗಿ ಹೇಳಿದ್ದರೂ, ವಿಚಾರಣೆಯ ಸಮಯದಲ್ಲಿ ಅದನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿಲ್ಲ" ಎಂದು ತೀರ್ಪಿನಲ್ಲಿ ಹೇಳಲಾಗಿದೆ.

ಕರ್ನಾಟಕದ ಕಾಫಿ ಬೆಳೆಗಾರರಿಂದ ಸ್ವಂತ ಹವಾಮಾನ ಕೇಂದ್ರ ಸ್ಥಾಪನೆ

ಬೆಂಗಳೂರು: ಹವಾಮಾನ ವೈಪರೀತ್ಯದಿಂದ ಬೆಳೆಗಳನ್ನು ರಕ್ಷಿಸಲು, ರಾಜ್ಯದ ಕಾಫಿ ಬೆಳೆಗಾರರು ತಮ್ಮ ಎಸ್ಟೇಟ್‌ಗಳಲ್ಲಿ ಸ್ವಯಂಚಾಲಿತ ಹವಾಮಾನ ಕೇಂದ್ರಗಳನ್ನು ಸ್ಥಾಪಿಸುತ್ತಿದ್ದಾರೆ.

ಭಾರತೀಯ ಹವಾಮಾನ ಇಲಾಖೆ ಮತ್ತು ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ಮೇಲ್ವಿಚಾರಣಾ ಕೇಂದ್ರವು ವಿವಿಧ ಸಂಶೋಧನೆ ಮತ್ತು ಶಿಕ್ಷಣ ಸಂಸ್ಥೆಗಳ ಜೊತೆಗೆ ಈ ಉದ್ಯಮಕ್ಕಾಗಿ ಎಸ್ಟೇಟ್ ಮಾಲೀಕರಿಗೆ ಬೆಂಬಲ ನೀಡುತ್ತಿದೆ.

ಕಾಫಿ ಮಂಡಳಿಯ ಅಧಿಕಾರಿಗಳು ಹವಾಮಾನ ವೀಕ್ಷಣಾಲಯಗಳನ್ನು ಅನೇಕ ಸ್ಥಳಗಳಲ್ಲಿ ಸ್ಥಾಪಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಅವುಗಳಲ್ಲಿ ಕೆಲವು ಮಂಡಳಿಯಿಂದ ಅನುಮತಿ ಮತ್ತು ಪ್ರಮಾಣೀಕರಣವನ್ನು ಪಡೆಯುತ್ತಿವೆ. ಇವುಗಳನ್ನು ಕೊಡಗು, ಚಿಕ್ಕಮಗಳೂರು ಮತ್ತು ಹಾಸನ ಸೇರಿದಂತೆ 10 ಸ್ಥಳಗಳಲ್ಲಿ ಸ್ಥಾಪಿಸಲಾಗಿದೆ.

ಹೂಬಿಡುವ, ಕೊಯ್ಲು ಮಾಡುವ ಸಮಯದಲ್ಲಿ ಮತ್ತು ಹುರುಳಿ ಒಣಗಿಸುವ ಸಮಯದಲ್ಲಿ ನಿಖರವಾದ ಹವಾಮಾನ ಮಾಹಿತಿಯ ಅವಶ್ಯಕತೆಯಿದೆ. ಹವಾಮಾನ ವೈಪರೀತ್ಯದಿಂದಾಗಿ ಹುರುಳಿ ಮತ್ತು ಹೂವು ಹಾನಿಗೊಳಗಾದ ನಿದರ್ಶನಗಳು ಹಿಂದೆ ಇದ್ದವು. ಐಎಂಡಿ ವೀಕ್ಷಣಾಲಯಗಳು ಅಗತ್ಯವಿರುವ ಸ್ಥಳಗಳಿಂದ ದೂರವಿದ್ದು, ಸಕಾಲಿಕ ನವೀಕರಣಗಳು ಯಾವಾಗಲೂ ಲಭ್ಯವಿರುವುದಿಲ್ಲ. ಹೀಗಾಗಿ ಎಸ್ಟೇಟ್ ಮಾಲೀಕರು ತಮ್ಮದೇ ಆದ ವೀಕ್ಷಣಾಲಯಗಳನ್ನು ಸ್ಥಾಪಿಸುತ್ತಿದ್ದಾರೆ "ಎಂದು ಅಧಿಕಾರಿ ಹೇಳಿದ್ದಾರೆ.

ಪರಪ್ಪನ ಅಗ್ರಹಾರ ಜೈಲಿಗೆ ಭೇಟಿ ವೇಳೆ ದರ್ಶನ್ ಬ್ಯಾರಕ್‌ಗೆ ಡಿಜಿಪಿ ಅಲೋಕ್‌ಕುಮಾರ್ ಭೇಟಿ



ಬೆಂಗಳೂರು: ಕಾರಾಗೃಹ ಹಾಗೂ ಸುಧಾರಣಾ ಸೇವೆಗಳ ಇಲಾಖೆಯ ರಾಜ್ಯ ಪೊಲೀಸ್ ಮಹಾನಿರ್ದೇಶಕರಾಗಿ ನೇಮಕಗೊಂಡಿರುವ ಅಲೋಕ್‌ಕುಮಾರ್ ಅವರು ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹಕ್ಕೆ ಸೋಮವಾರ ಭೇಟಿ ನೀಡಿ, ಅಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿದರು.

ಅಕ್ರಮ ಎಸಗಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜೈಲಿನ ಸಿಬ್ಬಂದಿಗೆ ಕಠಿಣ ಸಂದೇಶ ರವಾನಿಸಿದರು. ಚೆಕ್‌ಪೋಸ್ಟ್ ಬಳಿ ಪರಿಶೀಲನೆ ನಡೆಸಿದ ಅಲೋಕ್‌ಕುಮಾರ್ ಅವರು, ಸುತ್ತಮುತ್ತಲ ಸ್ಥಳದಲ್ಲಿ ಸ್ವಚ್ಛತೆ ಕಾಪಾಡುವಂತೆ ಸಿಬ್ಬಂದಿಗೆ ಸೂಚನೆ ನೀಡಿದರು. ಯಾವುದೇ ವಾಹನ ಬಂದರೂ ಚೆಕ್ ಪೋಸ್ಟ್‌ನಲ್ಲೇ ತಡೆದು ಪರಿಶೀಲಿಸಿ ಪ್ರವೇಶ ಕಲ್ಪಿಸಬೇಕು. ಒಂದುವೇಳೆ ನಿಷೇಧಿತ ವಸ್ತುಗಳು ವಾಹನದಲ್ಲಿರುವುದು ಕಂಡುಬಂದರೆ ಅವರ ವಿರುದ್ಧ ಪ್ರಕರಣ ದಾಖಲಿಸಬೇಕು ಎಂದು ಸೂಚನೆ ನೀಡಿದರು.

ಪಾರ್ಕಿಂಗ್ ಸ್ಥಳದಲ್ಲಿನ ಅವ್ಯವಸ್ಥೆ ಕಂಡು ಆಕ್ರೋಶ ಹೊರಹಾಕಿದರು. ಪಾರ್ಕಿಂಗ್ ಸ್ಥಳವನ್ನು ಉತ್ತಮವಾಗಿ ನಿರ್ವಹಣೆ ಮಾಡಬೇಕು ಎಂದೂ ಸೂಚಿಸಿದರು.

ಅದಾದ ಮೇಲೆ ಕಾರಾಗೃಹಕ್ಕೆ ತೆರಳಿ, ವಿವಿಧ ಬ್ಯಾರಕ್‌ಗಳಲ್ಲಿ ಪರಿಶೀಲನೆ ನಡೆಸಿದರು. ಸಜಾಬಂದಿಗಳು ಹಾಗೂ ವಿಚಾರಣಾಧೀನ ಕೈದಿಗಳಿಗೆ ನೀಡಲಾಗುತ್ತಿರುವ ಊಟ ಹಾಗೂ ತಿಂಡಿ ಪರಿಶೀಲಿಸಿದರು. ಕಾರಾಗೃಹದಲ್ಲಿರುವ ಆಸ್ಪತ್ರೆಗೂ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯನ್ನು ಪರಿಶೀಲಿಸಿದರು. ಬೇಕರಿಯಲ್ಲೂ ತಪಾಸಣೆ ನಡೆಸಿದರು. ಕೈದಿಗಳಿಂದಲೂ ಕೆಲ ಮಾಹಿತಿ ಪಡೆದುಕೊಂಡರು.

ಮೊಬೈಲ್ ತರಿಸಿಕೊಂಡು ಬ್ಯಾರಕ್‌ನಲ್ಲಿ ಇಟ್ಟುಕೊಂಡು ಬಳಕೆ ಮಾಡುತ್ತಿದ್ದರೆ, ಅದನ್ನು ಸಿಬ್ಬಂದಿಗೆ ವಾಪಸ್ ನೀಡಬೇಕು ಎಂದು ಕೈದಿಗಳಿಗೂ ಸೂಚನೆ ನೀಡಿದರು.

ಅಕ್ರಮಕ್ಕೆ ಕಡಿವಾಣ: ಕಾರಾಗೃಹಕ್ಕೆ ಬೀಡಿ, ಸಿಗರೇಟ್ ತಂದುಕೊಡುವಂತಿಲ್ಲ. ಎಲ್ಲ ಅಕ್ರಮ ಚಟುವಟಿಕೆಗಳು ಬಂದ್ ಆಗಬೇಕು ಎಂದು ಅಲೋಕ್‌ಕುಮಾರ್ ಅವರು ಜೈಲಿನ ಸಿಬ್ಬಂದಿಗೆ ಸೂಚನೆ ನೀಡಿದರು.

'ಕೈದಿಗಳು ಅನಾರೋಗ್ಯಕ್ಕೆ ಒಳಗಾದರೆ ವೈದ್ಯರು ಚಿಕಿತ್ಸೆ ಮಾತ್ರ ಕೊಡಬೇಕು. ಅದನ್ನು ಬಿಟ್ಟು ಮೊಬೈಲ್, ಗಾಂಜಾ ಸಾಗಣೆ ಮಾಡಿದರೆ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು' ಎಂದು ಎಚ್ಚರಿಕೆ ನೀಡಿದರು.

ಐಜಿಪಿ ದಿವ್ಯಾ, ಡಿಸಿಪಿ ನಾರಾಯಣ, ಕಾರಾಗೃಹದ ಸೂಪರಿಂಟೆಂಡೆಂಟ್ ಅಂಶುಕುಮಾರ್, ಕಮಾಂಡರ್ ವೀರೇಶ್ ಕುಮಾರ್, ಸಹಾಯಕ ಕಮಾಂಡರ್ ಮಾದೇಶ ಹಾಜರಿದ್ದರು.

ದರ್ಶನ್ ಕೊಠಡಿಗೂ ಭೇಟಿ: ರೇಣುಕಸ್ವಾಮಿ ಕೊಲೆ ಪ್ರಕರಣದ ಆರೋಪಿ ನಟ ದರ್ಶನ್ ಅವರ ಬ್ಯಾರಕ್‌ಗೂ ಅಲೋಕ್ ಕುಮಾರ್ ಅವರು ಭೇಟಿ ನೀಡಿ ಪರಿಶೀಲಿಸಿದರು.

ಬಳಿಕ ಮಾಧ್ಯಮ ಪ್ರತಿನಿಧಿಗಳ ಜತೆಗೆ ಮಾತನಾಡಿದ ಅವರು 'ದರ್ಶನ್ ಅವರನ್ನು ಇರಿಸಲಾಗಿರುವ ಬ್ಯಾರಕ್‌ಗೂ ಭೇಟಿ ನೀಡಿ ಪ್ರಕರಣದ ವಿಚಾರಣೆಯ ಬಗ್ಗೆ ಮಾಹಿತಿ ಪಡೆದುಕೊಂಡಿದ್ದೇನೆ. ಯಾವುದೇ ಕುಂದುಕೊರತೆ ಇಲ್ಲ ಎಂದು ದರ್ಶನ್ ಹೇಳಿದ್ದಾರೆ. ಆರು ಮಂದಿ ಆ ಬ್ಯಾರಕ್‌ನಲ್ಲಿ ಇದ್ದಾರೆ' ಎಂದು ಹೇಳಿದರು.

ಕಾಶ್ಮೀರ ವಿಷಯವನ್ನು ಜವಾಹರಲಾಲ್ ನೆಹರು ವಿವಾದಾತ್ಮಕವಾಗಿಸಿದರು...!

ಲಖನೌ: ಕಾಶ್ಮೀರದಿಂದ ಹೊರಹೊಮ್ಮುತ್ತಿರುವ ಉಗ್ರವಾದ ಮತ್ತು ಪ್ರತ್ಯೇಕತಾವಾದಕ್ಕೆ ಜವಾಹರಲಾಲ್ ನೆಹರು ಅವರನ್ನು ದೂಷಿಸಿರುವ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಭಾರತದ ಮೊದಲ ಪ್ರಧಾನಿ ಈ ವಿಷಯವನ್ನು ಎಷ್ಟು ವಿವಾದಾತ್ಮಕ'ವಾಗಿಸಿದ್ದಾರೆಂದರೆ, ಅದು ಇಂದಿಗೂ ದೇಶವನ್ನು ಕುಟುಕುತ್ತಿದೆ ಎಂದು ಆದಿತ್ಯನಾಥ್ ಸೋಮವಾರ ಆರೋಪಿಸಿದ್ದಾರೆ.



ಆದಿತ್ಯನಾಥ್

ದೇಶದ ಮೊದಲ ಗೃಹ ಸಚಿವ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 75ನೇ ಪುಣ್ಯತಿಥಿ ಅಂಗವಾಗಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, 560ಕ್ಕೂ ಹೆಚ್ಚು ರಾಜಪ್ರಭುತ್ವಗಳನ್ನು ಭಾರತದ ಒಕ್ಕೂಟಕ್ಕೆ ವಿಲೀನ ಗೊಳಿಸುವುದನ್ನು ಉಲ್ಲೇಖಿಸಿದರು ಮತ್ತು ಈ ಪ್ರಕ್ರಿಯೆಯಲ್ಲಿ ಮುಳ್ಳಾಗಿದ್ದ ಜುನಾಗಢ ಮತ್ತು ಹೈದರಾಬಾದ್ ರಾಜಮನೆಗಳತ್ತ ಗಮನಸೆಳೆದರು.

ಭಾರತದ ಎಲ್ಲ ಹಿಂದೂ ರಾಜಪ್ರಭುತ್ವಗಳು ಭಾರತ ಗಣರಾಜ್ಯದ ಭಾಗವಾಗಲು ಒಪ್ಪಿಕೊಂಡವು. ಆದರೆ, ಜುನಾಗಢದ ನವಾಬ ಮತ್ತು ಹೈದರಾಬಾದ್ ನಿಜಾಮ ನಿರಾಕರಿಸಿದರು. ಆಗ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಬುದ್ಧಿವಂತಿಕೆಯಿಂದಾಗಿ, ರಕ್ತರಹಿತ ಕ್ರಾಂತಿಯ ಮೂಲಕ ಈ ಎರಡು ರಾಜಪ್ರಭುತ್ವಗಳು ಭಾರತದ ಭಾಗವಾದವು ಎಂದು ಮುಖ್ಯಮಂತ್ರಿ ಆದಿತ್ಯನಾಥ್ ಹೇಳಿದರು.

ಜಮ್ಮು ಮತ್ತು ಕಾಶ್ಮೀರದ ರಾಜಪ್ರಭುತ್ವದ ಭವಿಷ್ಯದ ಬಗ್ಗೆ ಅನಿಶ್ಚಿತತೆ ಇತ್ತು. ಆದ್ದರಿಂದ, ಪಂಡಿತ್ ಜವಾಹರಲಾಲ್ ನೆಹರು ಈ ವಿಷಯವನ್ನು ತಾವು ಕೈಗೆತ್ತಿಕೊಂಡರು. ಅವರು ಜಮ್ಮು ಮತ್ತು ಕಾಶ್ಮೀರವನ್ನು ಎಷ್ಟು ವಿವಾದಾತ್ಮಕಗೊಳಿಸಿದರು ಎಂದರೆ, ಸ್ವಾತಂತ್ರ್ಯದ ನಂತರವೂ ಅದು ಭಾರತವನ್ನು ಕುಟುಕುತ್ತಲೇ ಇತ್ತು. ಪಂಡಿತ್ ನೆಹರು ಅವರ ಕಾರಣದಿಂದಾಗಿ ದೇಶವು ಕಾಶ್ಮೀರದಿಂದ ಉಗ್ರವಾದ ಮತ್ತು ಪ್ರತ್ಯೇಕತಾವಾದವನ್ನು ಪಡೆದುಕೊಂಡಿತು ಎಂದರು.

ನಾಳೆ, ನಾಳಿದ್ದು ಜನಸಂಪರ್ಕ ಸಭೆ

ಮೈಸೂರು: ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವತಿಯಿಂದ ವಿ.ವಿ ಮೊಹಲ್ಲಾ ವಿಭಾಗದ ವ್ಯಾಪ್ತಿಯ ಹೂಟಗಳ್ಳಿ, ವಿ.ವಿ. ಮೊಹಲ್ಲಾ, ಕುವೆಂಪುನಗರ, ಆರ್.ಕೆ.ನಗರ ಉಪವಿಭಾಗ ಕಚೇರಿಗಳಲ್ಲಿ ವಿ.ವಿ ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್, ಅಧೀಕ್ಷಕ ಇಂಜಿನಿಯರ್ ಅಧ್ಯಕ್ಷತೆಯಲ್ಲಿ ಡಿ.17 ಮತ್ತು 18 ರಂದು ಗ್ರಾಹಕರ ಕುಂದು ಕೊರತೆಗಳ ಸಂಬಂಧ ಮೂರನೇ ತ್ರೈಮಾಸಿಕ ಜನ ಸಂಪರ್ಕ ಸಭೆಯನ್ನು ಏರ್ಪಡಿಸಲಾಗಿದೆ.

ಡಿ.17ರಂದು ಬೆಳಗ್ಗೆ 11 ಗಂಟಗೆ ಹೂಟಗಳ್ಳಿ ಉಪ ವಿಭಾಗ ಕಚೇರಿಯಲ್ಲಿ, ಮಧ್ಯಾಹ್ನ 3.30 ಗಂಟೆಗೆ ವಿವಿ ಮೊಹಲ್ಲಾ ಉಪವಿಭಾಗ ಕಚೇರಿಯಲ್ಲಿ, ಡಿ.18 ರಂದು ಬೆಳಗ್ಗೆ 11 ಗಂಟೆಗೆ ಕುವೆಂಪುನಗರ ಉಪವಿಭಾಗ ಕಚೇರಿಯಲ್ಲಿ, ಮಧ್ಯಾಹ್ನ 4 ಗಂಟೆಗೆ ಆರ್.ಕೆ.ನಗರ ಉಪ ವಿಭಾಗ ಕಚೇರಿಯಲ್ಲಿ ಆಯೋಜಿಸಲಾಗಿದ್ದು, ವಿದ್ಯುತ್ ಗ್ರಾಹಕರು ಭಾಗವಹಿಸಲು ಮತ್ತು ವಿದ್ಯುತ್ ಸಮಸ್ಯೆ ಬಗ್ಗೆ ಏನಾದರೂ ದೂರುಗಳಿದ್ದಲ್ಲಿ, ಅರ್ಜಿ ನೀಡುವುದರ ಮುಖಾಂತರ ಬಗೆಹರಿಸಿಕೊಳ್ಳಬಹುದು ಎಂದು ಚಾವಿಸನಿನಿಯ ವಿ.ವಿ ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಳ್ಳಾರಿ ರಸ್ತೆಯಲ್ಲಿ ಹೊತ್ತಿ ಉರಿದ ಲಾರಿ; 40 ಯಮಹಾ ಬೈಕ್ ಸುಟ್ಟು ಕರಕಲು



ಬಳ್ಳಾರಿಯಲ್ಲಿ ಲಾರಿಗೆ ಆಕಸ್ಮಿಕವಾಗಿ ಬೆಂಕಿ ಹೊತ್ತಿಕೊಂಡು 40 ಬೈಕ್‌ಗಳು ಸಂಪೂರ್ಣವಾಗಿ ಸುಟ್ಟು ಕರಕಲಾಗಿವೆ.

ಬಳ್ಳಾರಿ: ಯಮಹಾ ಕಂಪನಿಯ ಬೈಕ್‌ಗಳನ್ನು ಸಾಗಿಸುತ್ತಿದ್ದ ಲಾರಿಗೆ ಆಕಸ್ಮಿಕವಾಗಿ ಬೆಂಕಿ ಹೊತ್ತಿಕೊಂಡಿದ್ದು, ರಸ್ತೆಯಲ್ಲೇ 40 ಬೈಕ್‌ಗಳು ಸಂಪೂರ್ಣವಾಗಿ ಸುಟ್ಟು ಕರಕಲಾಗಿರುವ ಘಟನೆ ಸೋಮವಾರ ನಡೆದಿದೆ.



ಇಂದು ಬೆಳಗ್ಗೆ ಬಳ್ಳಾರಿ ನಗರದ ಅನಂಪುರ ರಸ್ತೆಯ ಆಟೋ ನಗರ ಪ್ರದೇಶದಲ್ಲಿ ರಸ್ತೆ ಬದಿ ನಿಂತಿದ್ದ ಲಾರಿಯಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ಕೆಲವೇ ಕ್ಷಣಗಳಲ್ಲಿ ಲಾರಿ ಹಾಗೂ ಬೈಕ್‌ಗಳು ಹೊತ್ತಿ ಉರಿದಿವೆ.

ಚೆನ್ನೈಯಿಂದ ಬಳ್ಳಾರಿಗೆ ಬೈಕ್‌ಗಳನ್ನು ಸಾಗಿಸುತ್ತಿದ್ದ ಲಾರಿಯಲ್ಲಿ ಸಂಭವಿಸಿದ ಈ ಅವಘಡದಲ್ಲಿ ಸುಮಾರು 45 ಲಕ್ಷ ರೂಪಾಯಿ ಮೌಲ್ಯದ 40 ಬೈಕ್‌ಗಳು ಬೆಂಕಿಗೆ ಆಹುತಿಯಾಗಿವೆ. ಅದೃಷ್ಟವಶಾತ್ ಲಾರಿಯಿಂದ ಹಾರಿದ ಚಾಲಕ ಪ್ರಾಣಾಪಾಯದಿಂದ ಪಾರಾಗಿದ್ದಾನೆ.

ಮಾಹಿತಿ ಪಡೆದ ತಕ್ಷಣ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯ ಕೈಗೊಂಡು ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ. ಘಟನೆಯಿಂದ ಕೆಲಕಾಲ ಸಂಚಾರ ಅಸ್ತವ್ಯಸ್ತವಾಗಿದ್ದು, ನಂತರ ಪರಿಸ್ಥಿತಿ ನಿಯಂತ್ರಣಕ್ಕೆ ಬಂದಿದೆ.

ಮೈಸೂರು ಮಿತ್ರ
46
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಭಣಗುಡುತ್ತಿದೆ ಬೃಂದಾವನದ ಕಾರಂಜಿ: ಪ್ರವಾಸಿಗರಲ್ಲಿ ನಿರಾಸೆ



ಕೃಷ್ಣರಾಜಸಾಗರ ಬೃಂದಾವನದಲ್ಲಿ ನೀರಿಲ್ಲದೇ ಕಾರಂಜಿಗಳು ಸೊರಗಿ ಹೋಗಿರುವುದು

ಮೈಸೂರು, ಡಿ. 15 (ಆರ್‌ಕೆ)– ವಿಶ್ವ ಪ್ರಸಿದ್ಧ ಪ್ರವಾಸಿ ತಾಣವಾಗಿರುವ ಮಂಡ್ಯ ಜಿಲ್ಲೆಯ ಕೃಷ್ಣ ರಾಜ ಸಾಗರ ಬೃಂದಾವನದಲ್ಲಿ ನೀರಿಲ್ಲದೇ ಕಾರಂಜಿಗಳು ಸೊರಗಿವೆ.

ದೇಶದ ವಿವಿಧ ರಾಜ್ಯ ಹಾಗೂ ವಿದೇಶ ಗಳಿಂದ ಆಗಮಿಸುತ್ತಿರುವ ಪ್ರವಾಸಿಗರಿಗೆ ಬೃಂದಾವನದಲ್ಲಿ ಈ ವಿಶೇಷ ಆಕರ್ಷಣೆ ಇಲ್ಲದೆ ಇರುವುದು ತೀವ್ರ ನಿರಾಸೆ ತಂದಿದೆ. ಕಳೆದ ಸೋಮವಾರ (ಡಿ. 8) ದಿಂದ ಬೃಂದಾವನದಲ್ಲಿ ನೀರಿನ ಹರಿವು ನಿಲ್ಲಿಸಲಾಗಿದೆ. ಹಾಗಾಗಿ ಬೃಂದಾವನ ಬರಡು ಭೂಮಿಯಂತಾಗಿದೆ.

ನೀರಿನ ಜುಳು–ಜುಳು ಝೇಂಕಾರ, ವರ್ಣ ರಂಜಿತ ಚಿಲುಮೆಗಳು ಹಾಗೂ, ನಿಸರ್ಗದತ್ತ ವಾತಾವರಣ ಕಣ್ತುಂಬಿ ಕೊಳ್ಳಲು ಟೋಲ್, ಪಾರ್ಕಿಂಗ್, ಪ್ರವೇಶ ಶುಲ್ಕ ಪಾವತಿಸಿ ಬರುವ ಪ್ರವಾಸಿಗರು ಭಣಗುಡುತ್ತಿರುವ ಬೃಂದಾವನ ಕಂಡು ನಿರಾಶರಾಗುತ್ತಿದ್ದು, ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳಿಗೆ ಹಿಡಿ ಶಾಪ ಹಾಕಿ ಹಿಂತಿರುಗುತ್ತಿರುವುದು ಕಂಡು ಬರುತ್ತಿದೆ.

ಪ್ರವಾಸಿಗರು ಟೋಲ್ ಫೀ ಹಾಗೂ ಪಾರ್ಕಿಂಗ್ ಫೀ ಪಾವತಿಸಿ ಬೃಂದಾವನಕ್ಕೆ ಪ್ರವೇಶ ಪಡೆಯುವವರೆಗೂ ಇಲ್ಲಿನ ದುಸ್ಥಿತಿಯ ಮಾಹಿತಿಯನ್ನು ಯಾರೂ ನೀಡುವುದಿಲ್ಲ ಅಥವಾ ಬೃಂದಾವನಕ್ಕೆ ನೀರು ಹರಿಸುವುದನ್ನು ಸ್ಥಗಿತ ಗೊಳಿಸಲಾಗಿದೆ ಎಂಬುದರ ಬಗ್ಗೆಯೂ ಸಂಬಂಧಪಟ್ಟ ಅಧಿಕಾರಿಗಳು ಸಾರ್ವಜನಿಕ ಪ್ರಕಟಣೆ ಕೂಡ ಹೊರಡಿಸಿಲ್ಲ ಎಂದು ಪ್ರವಾಸಿಗರು ಬೇಸರ ವ್ಯಕ್ತಪಡಿಸುತ್ತಿದ್ದಾರೆ.

ಒಂದು ವೇಳೆ ನಮಗೆ ಮೊದಲೇ ತಿಳಿದಿದ್ದರೆ ನಾವು ಮಕ್ಕಳೊಂದಿಗೆ ಹಣ ಖರ್ಚು ಮಾಡಿಕೊಂಡು ಕೆಆರ್‌ಎಸ್‌ಗೆ ಬರುವ ಬದಲು ಬೇರೆ ಯಾವುದಾದರೂ ಸ್ಥಳಕ್ಕೆ ಪ್ರವಾಸ ಕೈಗೊಳ್ಳುತ್ತಿದ್ದೆವು. ಈಗ ಸಮಯವೂ ವ್ಯರ್ಥ, ಹಣವೂ ವ್ಯರ್ಥವಾಗು ವುದರಿಂದ ನಿರಾಸೆಯಾಗಿದೆ ಎಂದು ಅವರು ಅಸಮಾಧಾನ ಹೊರಹಾಕುತ್ತಿದ್ದಾರೆ.

ಈ ಕುರಿತಂತೆ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯೆ ನೀಡಿರುವ ಕಾವೇರಿ ನೀರಾವರಿ ನಿಗಮ ನಿಯಮಿತ ಕೆಆರ್‌ಎಸ್ ವಿಭಾಗದ ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ಫಾರೂಕ್ ಅಹಮ್ಮದ್, ಕರ್ನಾಟಕ ಇಂಜಿನಿಯರಿಂಗ್ ಸಂಶೋಧನಾ ಸಂಸ್ಥೆ (ಕೆಇಆರ್‌ಎಸ್) ಯವರು ಹೈಡ್ರಾಲಿಕ್ ಮಾಡೆಲ್ ಸ್ಟಡೀಸ್‌ಗಾಗಿ 15 ದಿನಗಳ ಕಾಲ ಬೃಂದಾವನದಲ್ಲಿ ಅವಕಾಶ ಕೋರಿ ರುವುದರಿಂದ ಹಾಗೂ ಅದೇ ವೇಳೆ ನಾಲೆಗೆ ಅಣೆಕಟ್ಟೆಯಿಂದ ನೀರು ಬಿಡುವ ಗೇಟ್‌ನಲ್ಲಿ ಕೆಲ ಕಾಮಗಾರಿ ಮಾಡಬೇಕಾಗಿ ರುವ ಹಿನ್ನೆಲೆಯಲ್ಲಿ ಕಳೆದ ಸೋಮವಾರ (ಡಿ. 8) ದಿಂದ ಬೃಂದಾವನದ ಚಿಲುಮೆ ಗಳು, ಕಾರಂಜಿಗಳಿಗೆ ನೀರು ಹರಿಸುವು ದನ್ನು ಸ್ಥಗಿತಗೊಳಿಸಲಾಗಿದೆ ಎಂದರು.

ಮುಂದಿನ ಶುಕ್ರವಾರ (ಡಿ. 19) ದವರೆಗೆ ಕೆಲಸ ನಡೆಯುತ್ತಿದ್ದು ವಾರಾಂತ್ಯ ದಿಂದ ಎಂದಿನಂತೆ ಬೃಂದಾವನದಲ್ಲಿ ನೀರು ಹರಿಸಲಾಗುವುದು. ಈ ಸಂಬಂಧ ನಾವು ಮಾಧ್ಯಮದ ಮೂಲಕ ಪ್ರಕಟಣೆ ನೀಡಿ ಸಾರ್ವಜನಿಕರು ಹಾಗೂ ಪ್ರವಾಸಿಗರಿಗೆ ಮಾಹಿತಿ ನೀಡಬೇಕಾಗಿತ್ತು. ಆದರೆ ದಿಢೀರ್ ನಿರ್ಧಾರವಾದ ಕಾರಣ ಅದು ಸಾಧ್ಯವಾಗ ಲಿಲ್ಲ ಎಂದು ಫಾರೂಕ್ ತಿಳಿಸಿದ್ದಾರೆ.

ಸಿಡ್ನಿ ಕಡಲತೀರದಲ್ಲಿ ಯಹೂದಿಗಳ ನರಮೇಧ; ಮೃತರ ಸಂಖ್ಯೆ 16ಕ್ಕೆ ಏರಿಕೆ



ಸಿಡ್ನಿ: ಧಾರ್ಮಿಕ ಕಾರ್ಯಕ್ರಮ ವೊಂದರ ನಿಮಿತ್ತ ಆಸ್ಟ್ರೇಲಿಯಾದ ಸಿಡ್ನಿಯ ಬೋಂಡಿ ಕಡಲತೀರದಲ್ಲಿ ಜಮಾವಣೆಯಾಗಿದ್ದ ಸುಮಾರು 2000 ಯಹೂದಿಗಳ ಮೇಲೆ ಇಬ್ಬರು ಗುಂಡಿನ ದಾಳಿ ನಡೆಸಿದ್ದು, ಪರಿಣಾಮ 16 ಮಂದಿ ಸಾವನ್ನಪ್ಪಿದ್ದಾರೆ.

ದಾಳಿ ಬೆನ್ನಲ್ಲೇ ಪೊಲೀಸರು ಪ್ರತಿ ದಾಳಿ ನಡೆಸಿ ಓರ್ವ ಬಂದೂಕುಧಾರಿ ಯನ್ನು ಹತ್ಯೆ ಮಾಡಿದ್ದಾರೆ. ಮತ್ತೊಬ್ಬನನ್ನು ಬಂಧಿಸಲಾಗಿದ್ದು, ಆತನ ಸ್ಥಿತಿ ಗಂಭೀರ ವಾಗಿದೆ ಎಂದು ತಿಳಿದುಬಂದಿದೆ.

ಗಾಯಗೊಂಡಿರುವ ಆರೋಪಿ ಸಿಡ್ನಿಯಲ್ಲಿ ಡ್ರೈವರ್ ಆಗಿದ್ದ ನವೀದ್ ಅಕ್ರಮ್ (24) ಎಂದು ಗುರ್ತಿಸಲಾಗಿದೆ. ಈತ ಪಾಕಿಸ್ತಾನ ಮೂಲದವನು ಎಂದು ಪತ್ರಿಕೆಯೊಂದು ವರದಿ ಮಾಡಿದೆ.

ಮೃತ ವ್ಯಕ್ತಿ ಹಾಗೂ ಗಾಯಗೊಂಡಿರುವ ವ್ಯಕ್ತಿ ತಂದೆ ಹಾಗೂ ಮಗನಾಗಿದ್ದಾರೆಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ನ್ಯೂ ಸೌತ್ ವೇಲ್ಸ್ ಪೊಲೀಸ್ ಆಯುಕ್ತ ಮಾಲ್ ಲ್ಯಾನ್ಯನ್ ಅವರು ಮಾತನಾಡಿ, ಒಬ್ಬ ಗುಂಡು ಹಾರಿಸಿದ ವ್ಯಕ್ತಿ ಭದ್ರತಾ ಸಂಸ್ಥೆಗೆ ತಿಳಿದಿರುವ ವ್ಯಕ್ತಿಯೇ ಆಗಿದ್ದು, ಇದು ಯೋಜಿತ ದಾಳಿ ಎಂಬುದಕ್ಕೆ ಯಾವುದೇ ಸುಳಿವು ಗಳು ಸಿಗುತ್ತಿಲ್ಲ ಎಂದು ಹೇಳಿದ್ದಾರೆ.

ಘಟನೆಯಲ್ಲಿ ಗಾಯಗೊಂಡಿರುವ 42 ಮಂದಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದ್ದು, ಹಲವರ ಸ್ಥಿತಿ ಗಂಭೀರವಾಗಿದೆ ಎಂದು ತಿಳಿಸಿದ್ದಾರೆ.

ಎಚ್ಚರ! ಇನ್ನು ಚಳಿ... ಚಳಿ...



ಮೈಸೂರು, ಡಿ.15– ರಾಜ್ಯದಲ್ಲಿ ಮಂಗಳವಾರದಿಂದ ಚಳಿ ಮತ್ತಷ್ಟು ಹೆಚ್ಚಾಗಲಿದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಮಾಹಿತಿ ನೀಡಿದೆ.

ಮುಂದಿನ ಆರು ದಿನಗಳ ರಾಜ್ಯದ ಕನಿಷ್ಠ ತಾಪಮಾನದ ಹವಾಮಾನ ಸೂಚ್ಯಂಕ ಮುನ್ಸೂಚನೆ ನೀಡಿದ್ದು, ಡಿ.16, 20 ಮತ್ತು 21ರಂದು ಮಲೆ ನಾಡು ಜಿಲ್ಲೆಗಳ ಕೆಲವು ಪ್ರದೇಶಗಳಲ್ಲಿ ಕನಿಷ್ಠ ತಾಪಮಾನವು ಸಾಮಾನ್ಯಕ್ಕಿಂತ 4°ಸೆ. ನಿಂದ 6°ಸೆ.ವರೆಗೆ ಕಡಿಮೆ ಯಾಗುವ ಸಾಧ್ಯತೆಯಿದೆ. ಇದರಿಂದ ಕೆಲವು ಸ್ಥಳಗಳಲ್ಲಿ ತೀವ್ರ ಶೀತ ಅಲೆಯ ಪರಿಸ್ಥಿತಿ ಉಂಟಾಗಬಹುದು.

ಕರ್ನಾಟಕದ ಉತ್ತರ ಒಳನಾಡು ಹಾಗೂ ಕರ್ನಾಟಕದ ದಕ್ಷಿಣ ಒಳನಾಡಿನಲ್ಲಿ ಡಿ.19 ರಿಂದ 21 ರವರೆಗೆ ಕನಿಷ್ಠ ತಾಪಮಾನವು ಸಾಮಾನ್ಯಕ್ಕಿಂತ 4°ಸೆ. ನಿಂದ 6°ಸೆ.ವರೆಗೆ ಕಡಿಮೆ ಇರುವ ಸಾಧ್ಯತೆಯಿದೆ. ಡಿ.21 ರಂದು ಕರ್ನಾಟಕದ ಉತ್ತರ ಒಳನಾಡಿನ ಕೆಲವು ಸ್ಥಳಗಳಲ್ಲಿ ತೀವ್ರ ಶೀತಗಾಳಿ ಬೀಸಲಿದೆ. ಡಿ.20ರಂದು ಕರಾವಳಿ ಭಾಗದಲ್ಲಿ ಕನಿಷ್ಠ ತಾಪಮಾನವು ಸಾಮಾನ್ಯಕ್ಕಿಂತ ಗಣನೀಯವಾಗಿ ಕಡಿಮೆಯಾಗುವ ಸಾಧ್ಯತೆ ಯಿದ್ದು, ಸಾರ್ವಜನಿಕರು ಸುರಕ್ಷತಾ ಕ್ರಮ ಗಳನ್ನು ಅನುಸರಿಸುವಂತೆ ತಿಳಿಸಲಾಗಿದೆ.

ಕ್ಯಾಲೆಂಡರ್ ಬಿಡುಗಡೆ


ಮೈಸೂರಿನ ಗಾಂಧಿ ಚೌಕದಲ್ಲಿರುವ 'ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್'ನ ನೂತನ ವರ್ಷ(2026)ದ ಕ್ಯಾಲೆಂಡರ್ ಅನ್ನು ಬ್ಯಾಂಕ್ ಅಧ್ಯಕ್ಷ ಜೆ.ಯೋಗೇಶ್ ಬಿಡುಗಡೆ ಮಾಡಿದರು. ಈ ವೇಳೆ ಉಪಾಧ್ಯಕ್ಷ ಟಿ.ರವಿ, ನಿರ್ದೇಶಕರಾದ ಎಸ್‌ಬಿಎಂ ಮಂಜು, ಎನ್.ಯೋಗಾನಂದ, ವೈ.ವಿಕಾಸ್, ಎ.ಮಂಚಪ್ಪ, ಪಡುವಾರಹಳ್ಳಿ ಎಂ ರಾಮಕೃಷ್ಣ, ಸಿ.ಚಂದ್ರಶೇಖರ್, ಪಿ.ರಾಜೇಶ್ವರಿ ಹಾಗೂ ಕಾರ್ಯದರ್ಶಿ ಹರ್ಷಿತ್ ಗೌಡ ಉಪಸ್ಥಿತರಿದ್ದರು.

ಜಿಬಿಎ ಚುನಾವಣೆ: ಕಾಂಗ್ರೆಸ್ ಟಿಕೆಟ್ ಅರ್ಜಿಗೆ 50 ಸಾವಿರ ಶುಲ್ಕ



ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ನಗರ ಪಾಲಿಕೆಗಳಿಗೆ ನಡೆಯಲಿರುವ ಚುನಾವಣೆಗೆ ಸೋಮವಾರದಿಂದ (ಡಿ.15) ಅರ್ಜಿ ಸ್ವೀಕರಿಸಲಾಗುವುದು. ಮೀಸಲಾತಿ ಇನ್ನು ಅಂತಿಮ ಆಗಿಲ್ಲವಾದರೂ 369 ವಾರ್ಡ್‌ಗಳಲ್ಲಿ ಸ್ಪರ್ಧಿಸಲು ಯಾರಿಗೆಲ್ಲ ಆಸಕ್ತಿ ಇದೆ ಎಂದು ತಿಳಿಯಲು ಅರ್ಜಿ ಕರೆಯಲಾಗಿದೆ ಎಂದು ಬೆಂಗಳೂರು ಅಭಿವೃದ್ಧಿ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ದೆಹಲಿಯ ಕರ್ನಾಟಕ ಭವನದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, 'ಸಚಿವರ ಜೊತೆ ಚರ್ಚಿಸಿ ಈ ಅರ್ಜಿ ಜೊತೆಗೆ ಪಡೆಯುವ ಹಣವನ್ನು ಪಕ್ಷದ ಕಟ್ಟಡ ನಿಧಿಗೆ ಬಳಸಲು ತೀರ್ಮಾನಿಸಿದ್ದು, ಸಾಮಾನ್ಯವರ್ಗಕ್ಕೆ 50 ಸಾವಿರ ರೂ. ಹಾಗೂ ಮಹಿಳೆಯರು ಹಾಗೂ ಪರಿಶಿಷ್ಟ ಸಮುದಾಯದವರಿಗೆ 25 ಸಾವಿರ ರೂ. ನಿಗದಿಪಡಿಸಲಾಗಿದೆ. ಆನ್‌ಲೈನ್ ಅರ್ಜಿ ಹಾಕಲು ಅವಕಾಶ ಮಾಡಲಾಗಿದೆ' ಎಂದರು.

ಮತ ಕಳ್ಳತನ ವಿರುದ್ಧದ ಹೋರಾಟ ಮುಂದುವರಿಯಲಿದೆ: ಪ್ರಜಾಪ್ರಭುತ್ವ ವ್ಯವಸ್ಥೆ ಉಳಿಸಲು, ಮತ ಕಳ್ಳತನ ವಿರುದ್ಧ ನಾವು ಆರಂಭಿಸಿರುವ ಹೋರಾಟ ಮುಂದುವರಿಯಲಿದೆ. ಪ್ರತಿ ಕ್ಷೇತ್ರದಲ್ಲಿ ನಾವು ಕಾನೂನು ಬ್ಯಾಂಕ್ ಸ್ಥಾಪಿಸುತ್ತೇವೆ. ನಮ್ಮ ಪಕ್ಷದ ಪರ ಇರುವ ವಕೀಲರನ್ನು ಇದರಲ್ಲಿ ಸೇರಿಸಿ ಪಕ್ಷದ ಕಾರ್ಯಕರ್ತರಿಗೆ ಕಾನೂನು ಸಲಹೆ ನೀಡಲಾಗುವುದು ಎಂದರು.

ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿರುವ ಜಿ.ಸಿ. ಚಂದ್ರಶೇಖರ್ ಅವರು ಬಿಎಲ್‌ಎ ಗುರುತಿನ ಚೀಟಿ ನೀಡಲು ತಯಾರು ಮಾಡಿಕೊಂಡಿದ್ದಾರೆ. ಎಐಸಿಸಿಯಿಂದ ಒಪ್ಪಿಗೆ ಪಡೆಯಲು ತೆಗೆದುಕೊಂಡು ಹೋಗಲಾಗುವುದು. ನಾವು ಇಡೀ ದೇಶದಲ್ಲಿಯೇ ಅತಿ ಹೆಚ್ಚು ಸಹಿ ಸಂಗ್ರಹ ಮಾಡಿದ್ದೇವೆ ಎಂದರು.

ಬೆಳಗಾವಿ ಅಧಿವೇಶನದಲ್ಲಿ ಪರಿಶಿಷ್ಟ ಜಾತಿಯ ಒಳ ಮೀಸಲಾತಿ ಗೊಂದಲ ನಿವಾರಿಸದಿದ್ದರೆ ಹೋರಾಟ ಅನಿವಾರ್ಯ

ಸಾಮಾಜಿಕ ನ್ಯಾಯಪರ ವೇದಿಕೆಯ ಅಧ್ಯಕ್ಷ ಎಸ್.ಅರುಣ್‌ಕುಮಾರ್ ಎಚ್ಚರಿಕೆ




ಮೈಸೂರು, ಡಿ.15(ಎಸ್‌ಪಿಎನ್)– ಬೆಳಗಾವಿ ಅಧಿವೇಶನ ಮುಗಿಯುವು ದರೊಳಗೆ ಪರಿಶಿಷ್ಟ ಜಾತಿಯ ಒಳ ಮೀಸಲಾತಿಯಲ್ಲಿನ ಗೊಂದಲ ಬಗೆಹರಿಸದಿದ್ದರೆ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ಅನಿವಾರ್ಯ ಎಂದು ಹಿರಿಯ ವಕೀಲರೂ ಆದ ಕರ್ನಾಟಕ ಸಾಮಾಜಿಕ ನ್ಯಾಯ ಪರ ವೇದಿಕೆಯ ಅಧ್ಯಕ್ಷ ಎಸ್.ಅರುಣಕುಮಾರ್ ಎಚ್ಚರಿಸಿದ್ದಾರೆ

ಮಂಗಳವಾರ ಬೆಳಗಾವಿಯ ಸುವರ್ಣ ಸೌಧದ ಅಧಿವೇಶನದಲ್ಲಿ ಒಳ ಮೀಸಲಾತಿ ಸಂಬಂಧ ಬಿಲ್ ಮಂಡನೆಯಾಗುತ್ತಿರುವುದು ಸ್ವಾಗತಾರ್ಹ. ಆದರೆ, ಆದಿ ದ್ರಾವಿಡ, ಆದಿ ಕರ್ನಾಟಕ, ಆದಿ ಆಂಧ್ರ ಗುಂಪುಗಳಲ್ಲಿನ ಗೊಂದಲ ಬಗೆಹರಿಸದೇ ಒಳ ಮೀಸಲಾತಿ ಬಿಲ್ ಮಂಡನೆಯಾದರೆ, ಆ ಬಿಲ್ ಸಮಸ್ತ ಮಾದಿಗ ಸಮುದಾಯಕ್ಕೆ ಮರಣ ಶಾಸನ. ಹಾಗಾಗಿ ಈ ಬಿಲ್ ಮಂಡನೆಗೂ ಮುನ್ನ ಎಎ, ಎಕೆ, ಎಡಿಯಲ್ಲಿನ ಸಮಸ್ಯೆ ಬಗೆಹರಿಸಬೇಕು ಎಂದು ಒತ್ತಾಯಿಸಿದ್ದಾರೆ. ಒಳ ಮೀಸಲಾತಿ ಸಂಬಂಧ ಬ್ಯಾಕ್ ಲಾಗ್ ಹುದ್ದೆ ನೇಮಕ ಸಂದರ್ಭದಲ್ಲಿ ಎಎ, ಎಕೆ, ಎಡಿ ಸಮುದಾಯಗಳು ಎಸ್ಸಿ ಮೀಸಲಾತಿ ಸೌಲಭ್ಯವನ್ನು ಇಲ್ಲಿವರೆಗೆ ಬಹುಪಾಲು ಪಡೆದುಕೊಂಡಿದ್ದಾರೆ. ಮುಂದೆಯೂ ಅದೇ ಗೊಂದಲ ಮುಂದುವರೆಯಬಾರದು. ಈ ಗೊಂದಲ ಬಗೆಹರಿಯದಿದ್ದರೆ, ಹೋರಾಟ ಆರಂಭಿಸುವುದಾಗಿ ಕರ್ನಾಟಕ ಸಾಮಾಜಿಕ ನ್ಯಾಯ ಪರ ವೇದಿಕೆಯ ರಾಜ್ಯಾಧ್ಯಕ್ಷ ಅರುಣ್ ಕುಮಾರ್ ರಾಜ್ಯ ಸರ್ಕಾರವನ್ನು ಎಚ್ಚರಿಸಿದ್ದಾರೆ.

ಅಂತೆಯೇ ಹೊಸ ಮೀಸಲಾತಿಯಲ್ಲಿ ಮಾದಿಗರಿಗೆ ಮೀಸಲಿಟ್ಟ ಹುದ್ದೆ, ಮುಂದೆಯೂ ಆ ಗುಂಪಿಗೆ ಸಿಗಬೇಕು. ಹೊಲೆಯರಿಗೆ ಮೀಸಲಿಟ್ಟ ಹುದ್ದೆ ಹಾಗೆ ಮುಂದು ವರೆಯಬೇಕು. ಲಂಬಾಣಿ, ಇತರೆ ಸಮುದಾಯಗಳಿಗೆ ಮೀಸಲಿಟ್ಟ ಹುದ್ದೆ ಅವರಿಗೆ ಸಿಗುವಂತಹ ಕಾನೂನು ಇರಬೇಕು. ಕ್ಯಾರಿ ಓವರ್ ಸಿಸ್ಟಮ್ ಹೊಸ ಕಾನೂನಿನಲ್ಲಿ ಅಳವಡಿಸಬಾರದು ಎಂದು ಒತ್ತಾಯಿಸಿದ್ದಾರೆ.

ಮಂಗಳವಾರ ಮಂಡನೆಯಾಗಲಿರುವ ಒಳ ಮೀಸಲಾತಿ ಬಿಲ್‌ನಲ್ಲಿ ರಾಜ್ಯ ಸರ್ಕಾರ ನಡೆಸುವ ಚುನಾವಣೆಗಳಲ್ಲಿ ಒಳ ಮೀಸಲಾತಿ ಜಾರಿಗೆ ಕಾನೂನು ತಿದ್ದುಪಡಿ ಮಾಡಲು ರಾಜ್ಯ ಸರ್ಕಾರ ಮುಂದಾಗುತ್ತಿರುವುದು ಸ್ವಾಗತಾರ್ಹ ಎಂದರು.

ಕಾರ್ಯಾಗಾರ ಉದ್ಘಾಟನೆ


ಭೌಗೋಳಿಕ ಮಾಹಿತಿ ತಂತ್ರಜ್ಞಾನ ವಿಭಾಗದ ವತಿಯಿಂದ ಜಿಯೋಇನ್‌ಫಾರ್ಮೇಟಿಕ್ಸ್ ಅಂಡ್ ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ವಿಷಯಾಧಾರಿತ ಎರಡು ದಿನಗಳ ಕಾರ್ಯಾಗಾರವನ್ನು ಜಿಯೋ ಮಾನಸ ಸಭಾಂಗಣದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಉಪಕುಲಪತಿ ಪ್ರೊ ಎನ್.ಕೆ.ಲೋಕನಾಥ್ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಪ್ರೊ.ಗಣೇಶ್ ಪ್ರಸಾದ್, ವಿಭಾಗದ ಸಂಯೋಜಕರಾದ ಪ್ರೊ.ಜಯಶ್ರೀ. ಪಿ, ವಿಭಾಗದ ಸಂದರ್ಶಕ ಪ್ರಾಧ್ಯಾಪಕ ಪ್ರೊ.ರಾಮು, ಭೂಗೋಳ ಶಾಸ್ತ್ರ ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ಚಂದ್ರಶೇಖರ್.ಬಿ, ವಿಭಾಗದ ಪ್ರೊ.ಅರುಣ್ ದಾಸ್, ಡಾ. ರಾಜೇಶ್, ಡಾ. ರೇಖಾ, ಡಾ.ಪಾಪಣ್ಣ ಮತ್ತು ಕು. ಕೃತಿಕಾ ಉಪಸ್ಥಿತರಿದ್ದರು.

ಮುಖ್ಯಮಂತ್ರಿಗಳಿಗೆ ಅಭಿನಂದನೆ...


ಎಂಸಿಡಿಸಿಸಿ ಬ್ಯಾಂಕ್ ನೂತನ ನಿರ್ದೇಶಕರಾಗಿ ಆಯ್ಕೆಯಾಗಿರುವ ಎಸ್. ಚಂದ್ರಶೇಖರ್ ಹಾಗೂ ಜಿ.ಎನ್. ಮಂಜುನಾಥ್ ಸೋಮವಾರ ಬೆಂಗಳೂರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಭೇಟಿಯಾಗಿ ಅಭಿನಂದಿಸಿದರು. ಈ ವೇಳೆ ಜನತಾ ಬಜಾರ್ ಅಧ್ಯಕ್ಷ ಯು.ಎಸ್. ರಮೇಶ್, ನಿರ್ದೇಶಕ ಎನ್. ಮಂಜುನಾಥ್, ಮರ್ಚೆಂಟ್ಸ್ ಕೋ ಆಪರೇಟಿವ್ ಬ್ಯಾಂಕ್ ಉಪಾಧ್ಯಕ್ಷ ಮಹೇಶ್ ಇತರರಿದ್ದಾರೆ.

ಕಾಂಗ್ರೆಸ್ ರ್‍ಯಾಲಿಯಲ್ಲಿ 'ಮೋದಿ ಸಮಾಧಿ' ಘೋಷಣೆ

ಕ್ಷಮೆ ಯಾಚಿಸುವಂತೆ ಆಡಳಿತಾರೂಢ ಪಕ್ಷ ಆಗ್ರಹ

ನವದೆಹಲಿ: ದೆಹಲಿಯ ರಾಮಲೀಲಾ ಮೈದಾನದಲ್ಲಿ ಭಾನುವಾರ ನಡೆದ ಕಾಂಗ್ರೆಸ್ ರ್‍ಯಾಲಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ವಿರುದ್ಧ ವಿವಾದಾತ್ಮಕ ಘೋಷಣೆಗಳು ಕೇಳಿ ಬಂದಿದ್ದು, ಇದರ ಬೆನ್ನಲ್ಲೇ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಕ್ಷಮೆಯಾಚಿಸುವಂತೆ ಆಡಳಿತಾರೂಢ ಪಕ್ಷ ಆಗ್ರಹಿಸಿದೆ.

ಸಂಸತ್ತಿನ ಕೆಳಮನೆ ಮತ್ತು ಮೇಲ್ಮನೆ ಎರಡರಲ್ಲೂ ಕಲಾಪಗಳು ಬೆಳಿಗ್ಗೆ 11 ಗಂಟೆಗೆ ಪ್ರಾರಂಭವಾಯಿತು. ಕಲಾಪ ಆರಂಭವಾಗುತ್ತಿದ್ದಂತೆಯೇ ಕಾಂಗ್ರೆಸ್ ರ್‍ಯಾಲಿಯಲ್ಲಿ ಮೋದಿ ವಿರುದ್ಧ ಕೂಗಲಾದ ಘೋಷಣೆ ವಿಚಾರವನ್ನು ಆಡಳಿತಾರೂಢ ಪಕ್ಷದ ನಾಯಕರು ಪ್ರಸ್ತಾಪಿಸಿದರು.

ಕೇಂದ್ರ ಸಚಿವ ಕಿರಣ್ ರಿಜಿಜು ಅವರು ಮಾತನಾಡಿ, ಕಾಂಗ್ರೆಸ್ ರ್‍ಯಾಲಿಯಲ್ಲಿ ಪ್ರಧಾನಿಯವರ ಜೀವ ತೆಗೆಯುವುದಾಗಿ, ಮೋದಿ ಅವರ ಸಮಾಧಿಯನ್ನು ಅಗೆಯುವುದಾಗಿ ಬಹಿರಂಗವಾಗಿ ಘೋಷಿಸುವುದು ಭಾರತೀಯ ರಾಜಕೀಯ ಇತಿಹಾಸದಲ್ಲಿ ಅತ್ಯಂತ ದುರದೃಷ್ಟಕರ ಸಂಗತಿ ಎಂದು ಹೇಳಿದ್ದಾರೆ.

ಪ್ರಧಾನಿ ಮೋದಿಯವರು 2047ರ ವೇಳೆಗೆ ವಿಕಸಿತ ಭಾರತ ಮತ್ತು ಅಭಿವೃದ್ಧಿ ಹೊಂದಿದ ಭಾರತವನ್ನು ಗುರಿಯಾಗಿಟ್ಟುಕೊಂಡು ರಾಷ್ಟ್ರಕ್ಕಾಗಿ ಕೆಲಸ ಮಾಡುತ್ತಿದ್ದಾರೆ. ಮೋದಿ ಅವರ ಕನಸು ಭಾರತವನ್ನು ಬಲಿಷ್ಠ ಮತ್ತು ಹೆಮ್ಮೆಯನ್ನಾಗಿ ಮಾಡುವುದಾಗಿದೆ, ಆದರೆ, ಇವರ ಬಗ್ಗೆ ಇಂತಹ ಘೋಷಣೆಗಳು ದುರಂತ ಮತ್ತು ಸ್ವೀಕಾರಾರ್ಹವಲ್ಲ. ಹೀಗಾಗಿ, ಕಾಂಗ್ರೆಸ್ ರಾಷ್ಟ್ರಾಧ್ಯಕ್ಷರು ಮತ್ತು ವಿರೋಧ ಪಕ್ಷದ ನಾಯಕರು ಸಂಸತ್ತಿನ ಸದನದಿಂದ ದೇಶದ ಮುಂದೆ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದ್ದಾರೆ.

ಕಾಂಗ್ರೆಸ್ ರ್‍ಯಾಲಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪ್ರಧಾನಿ ಮೋದಿಯವರ ಸಮಾಧಿ ಅಗೆಯುವುದಾಗಿ ಬೆದರಿಕೆ ಹಾಕಿದ್ದಾರೆ. ಇದು ಅತ್ಯಂತ ದುರದೃಷ್ಟಕರ ವಿಚಾರ. ಪ್ರಧಾನಿ ಮೋದಿ ದೇಶದ 140 ಕೋಟಿ ಜನರ ನಾಯಕ ಮತ್ತು ವಿಶ್ವದ ಅತ್ಯಂತ ಬಲಿಷ್ಠ ನಾಯಕ. ಬೆದರಿಕೆ ಹಾಕಿರುವುದಕ್ಕೆ ಕಾಂಗ್ರೆಸ್ ಪಕ್ಷ ಕ್ಷಮೆಯಾಚಿಸಬೇಕು ಎಂದು ಹೇಳಿದ್ದಾರೆ.

ಜೆ.ಪಿ.ನಡ್ಡಾ ಅವರು ಮಾತನಾಡಿ, ಭಾನುವಾರ ನಡೆದ ರ್‍ಯಾಲಿಯಲ್ಲಿ ಮೋದಿಗೆ ಬೆದರಿಕೆ ಹಾಕುವ ಘೋಷಣೆಗಳನ್ನು ಕೂಗಿದ್ದಕ್ಕೆ ಸೋನಿಯಾ ಗಾಂಧಿಯವರು ಕ್ಷಮೆಯಾಚಿಸಬೇಕೆಂದು ಒತ್ತಾಯಿಸಿದ್ದಾರೆ.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷರಾಗಿ ಖಂಡ್ರೆ ಅಧಿಕಾರ ಸ್ವೀಕಾರ


ಈಶ್ವರ್ ಖಂಡ್ರೆ

ಬೆಂಗಳೂರು: ದೇಶದ ಅತಿ ಹಿರಿಯ ಶಾಸಕ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ ವಯೋಸಹಜ ಅನಾರೋಗ್ಯದಿಂದ ಭಾನುವಾರ ನಿಧನರಾದರು. ಇವರಿಗೆ 95 ವರ್ಷ ವಯಸ್ಸಾಗಿತ್ತು.

ಶಾಮನೂರು ಶಿವಶಂಕರಪ್ಪ ಅವರ ನಿಧನವು ವೀರಶೈವ–ಲಿಂಗಾಯತ ಸಮುದಾಯಕ್ಕೆ ವೈಯಕ್ತಿಕ ನಷ್ಟವನ್ನುಂಟುಮಾಡುವುದಲ್ಲದೆ, ಕರ್ನಾಟಕದ ಅತ್ಯಂತ ಪ್ರಭಾವಶಾಲಿ ಸಾಮಾಜಿಕ–ರಾಜಕೀಯ ಸಂಘಟನೆಗಳಲ್ಲಿ ಒಂದಾದ ಲಿಂಗಾಯತ ಸಮುದಾಯದ ನಿರ್ಣಾಯಕ ಅಧ್ಯಾಯ ಅಂತ್ಯಗೊಂಡಿದೆ. ಶಿವಶಂಕರಪ್ಪ ಅವರ ನಿಧನದೊಂದಿಗೆ, ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾವು ತ್ವರಿತ ನಾಯಕತ್ವ ಪರಿವರ್ತನೆಗೆ ಒಳಗಾಗಿದೆ.

ಹಿರಿಯ ಕಾಂಗ್ರೆಸ್ ನಾಯಕ ಮತ್ತು ಅರಣ್ಯ ಸಚಿವ ಈಶ್ವರ್ ಖಂಡ್ರೆ ಹೊಸ ರಾಷ್ಟ್ರೀಯ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡಿದ್ದಾರೆ, ಅತ್ಯಂತ ದೀರ್ಘಕಾಲ ಸೇವೆ ಸಲ್ಲಿಸಿದ ಮತ್ತು ಅತ್ಯಂತ ಶಕ್ತಿಶಾಲಿ ಮುಖ್ಯಸ್ಥರಾಗಿದ್ದ ಶಾಮನೂರು ಶಿವಶಂಕರಪ್ಪ ನಂತರ ಖಂಡ್ರೆ ಅಧಿಕಾರ ವಹಿಸಿಕೊಂಡಿದ್ದಾರೆ.

ಈ ಹಿಂದೆ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಮತ್ತು ಹಿರಿಯ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ ಅವರು, ಸಂಘಟನೆಯ ಸೈದ್ಧಾಂತಿಕ ಚೌಕಟ್ಟಿನಲ್ಲಿ, ವಿಶೇಷವಾಗಿ ಸಮುದಾಯದ ಏಕತೆಯನ್ನು ರೂಪಿಸುವಲ್ಲಿ ಮತ್ತು ವೀರಶೈವರಿಗೆ ಪ್ರತ್ಯೇಕ ಧಾರ್ಮಿಕ ಮಾನ್ಯತೆಗಾಗಿ ದೀರ್ಘಕಾಲದ ಹೋರಾಟ ನಡೆಸಿದ ನಾಯಕರಾಗಿದ್ದಾರೆ.


ಅವರ ದಿವಂಗತ ತಂದೆ , ಮಾಜಿ ಸಚಿವ ಭೀಮಣ್ಣ ಖಂಡ್ರೆ ಹಿಂದಿನ ಅಧ್ಯಕ್ಷರಾಗಿದ್ದರು. ನಿವೃತ್ತ ಡಿಜಿಪಿ ಶಂಕರ್ ಬಿದರಿ ರಾಜ್ಯ ಅಧ್ಯಕ್ಷರಾಗಿ ಮುಂದುವರಿಯಲಿದ್ದಾರೆ. ದಶಕಗಳ ಕಾಲ, ಶಿವಶಂಕರಪ್ಪ ಅವರ ನೇತೃತ್ವದಲ್ಲಿ ಮಹಾಸಭಾವು ರಾಜ್ಯ ರಾಜಕೀಯದಲ್ಲಿ ನಿರ್ಣಾಯಕ ಸಂಘಟನೆಯಾಗಿ ಮುಂದುವರಿದಿತ್ತು, ಚುನಾವಣಾ ನಿರೂಪಣೆಗಳು, ನೀತಿ ಚರ್ಚೆಗಳು ಮತ್ತು ಪಕ್ಷಾತೀತ ಸಾಮಾಜಿಕ ನೀತಿ ನಿಯಮಗಳ ಮೇಲೆ ಪ್ರಭಾವ ಬೀರಿತು.

ಕರ್ನಾಟಕದಾದ್ಯಂತ ಅದರ ತಾಲೂಕು ಮಟ್ಟದಲ್ಲಿ ಮತ್ತು ಮಹಾರಾಷ್ಟ್ರ, ಗೋವಾ, ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು ಮತ್ತು ಕೇರಳದಲ್ಲಿ ಹೆಜ್ಜೆಗುರುತು ಮೂಡಿಸಿದರು. ದಕ್ಷಿಣ ರಾಜ್ಯಗಳಲ್ಲಿ ವೀರಶೈವ ಮಹಾಸಭಾ ಒಂದು ಅಸಾಧಾರಣ ಸಂಘಟನೆಯಾಗಿದೆ.

ಭಾಲ್ಕಿಯ ಶಾಸಕ ಮತ್ತು ಸಿದ್ದರಾಮಯ್ಯ ಸಂಪುಟದ ಪ್ರಮುಖ ವ್ಯಕ್ತಿಯಾಗಿರುವ ಖಂಡ್ರೆ ತಮ್ಮ ಮೇಲೆ ಇಟ್ಟಿರುವ ನಂಬಿಕೆಗೆ ಕೃತಜ್ಞತೆ ಸಲ್ಲಿಸಿದರು. ಶಿಕ್ಷಣ, ಸಾಮಾಜಿಕ ಕಲ್ಯಾಣ ಮತ್ತು ಧಾರ್ಮಿಕ ವಿಷಯಗಳಲ್ಲಿ ಮಹಾಸಭಾದ ಪಾತ್ರವನ್ನು ಬಲಪಡಿಸಲು ಪ್ರತಿಜ್ಞೆ ಮಾಡಿದರು. ಖಂಡ್ರೆ ನೇಮಕವನ್ನು ನಾಯಕರು ಸ್ವಾಗತಿಸಿದ್ದಾರೆ, ಆಂತರಿಕ ಭಿನ್ನಾಭಿಪ್ರಾಯಗಳನ್ನು ನಿರ್ವಹಿಸುವ ಸಾಮರ್ಥ್ಯವನ್ನು ಅವರು ಹೊಂದಿದ್ದಾರೆ.

ದೇಶ - ವಿದೇಶ

ಕೋಚಿಂಗ್ ಸೆಂಟರ್‌ನಲ್ಲಿ ಕ್ಲಾಸ್‌ಮೇಟ್‌ಗೆ ಇರಿದ ವಿದ್ಯಾರ್ಥಿ; ಬಾಲಕ ಸಾವು



ಪುಣೆ: ಪುಣೆ ಜಿಲ್ಲೆಯ ಕೋಚಿಂಗ್ ಸೆಂಟರ್‌ನಲ್ಲಿ ಸೋಮವಾರ ತರಗತಿಯೊಳಗೆ ಕ್ಲಾಸ್‌ಮೇಟ್ ಒಬ್ಬ ಚಾಕುವಿನಿಂದ ಹಲ್ಲೆ ನಡೆಸಿದ್ದರಿಂದ 16 ವರ್ಷದ ಬಾಲಕ ಸಾವನ್ನಪ್ಪಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

10ನೇ ತರಗತಿಯಲ್ಲಿ ಓದುತ್ತಿದ್ದ ಇಬ್ಬರು ಹುಡುಗರ ನಡುವಿನ ಹಿಂದಿನ ಜಗಳದ ಪರಿಣಾಮವಾಗಿ ಈ ದಾಳಿ ನಡೆದಿದೆ ಎಂದು ಅವರು ಹೇಳಿದ್ದಾರೆ.

ಪೊಲೀಸರು ನೀಡಿರುವ ಮಾಹಿತಿಯ ಪ್ರಕಾರ, ರಾಜಗುರುನಗರದ ಖಾಸಗಿ ಕೋಚಿಂಗ್ ಸೆಂಟರ್‌ನಲ್ಲಿ ಈ ಘಟನೆ ನಡೆದಿದೆ.

ಸೋಮವಾರ ಬೆಳಗ್ಗೆ ಕೋಚಿಂಗ್ ಸೆಂಟರ್‌ನಲ್ಲಿ ಚಾಕು ಹಿಡಿದುಕೊಂಡು ಬಂದ ವಿದ್ಯಾರ್ಥಿಯೊಬ್ಬ ತನ್ನ ಸಹಪಾಠಿಯ ಮೇಲೆ ಇದ್ದಕ್ಕಿದ್ದಂತೆ ಹಲ್ಲೆ ನಡೆಸಿದ್ದಾನೆ. ಗಾಯಗೊಂಡ ಬಾಲಕನನ್ನು ಆಸ್ಪತ್ರೆಗೆ ಸಾಗಿಸಲಾಯಿತು. ಆದರೆ ಆತ ಸಾವನ್ನಪ್ಪಿದ್ದಾನೆ. ಆರೋಪಿ ಬಾಲಕನನ್ನು ಬಂಧಿಸುವ ಪ್ರಕ್ರಿಯೆ ನಡೆಯುತ್ತಿದೆ" ಎಂದು ಖೇಡ್ ಪೊಲೀಸ್ ಠಾಣೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ರಾಮ ಜನ್ಮಭೂಮಿ ಚಳವಳಿಯ ಪ್ರಮುಖ ನಾಯಕ ರಾಮವಿಲಾಸ್ ವೇದಾಂತಿ ವಿಧಿವಶ



ರೇವಾ: ಹಿರಿಯ ಭಾರತೀಯ ಜನತಾ ಪಕ್ಷದ ನಾಯಕ ಮತ್ತು ಮಾಜಿ ಸಂಸದ ರಾಮ್ ವಿಲಾಸ್ ವೇದಾಂತಿ ಸೋಮವಾರ ವಿಧಿವಶರಾಗಿದ್ದಾರೆ. ಅವರಿಗೆ 67 ವರ್ಷ ವಯಸ್ಸಾಗಿತ್ತು.

ದೀರ್ಘಕಾಲದಿಂದ ಅನಾರೋಗ್ಯದಿಂದ ಬಳಲುತ್ತಿದ್ದ ವೇದಾಂತಿ ಅವರನ್ನು ಮಧ್ಯಪ್ರದೇಶದ ರೇವಾದ ಖಾಸಗಿ ಆಸ್ಪತ್ರೆಯೊಂದರಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ವೇದಾಂತಿ ವಿಶ್ವ ಹಿಂದೂ ಪರಿಷತ್‌ನ ಪ್ರಮುಖ ನಾಯಕರಲ್ಲಿ ಒಬ್ಬರಾಗಿದ್ದರು. ಅವರು ಉತ್ಕಟ ವಾಗ್ಮಿ ಕೌಶಲ್ಯಕ್ಕೆ ಹೆಸರುವಾಸಿಯಾಗಿದ್ದರು. ರಾಮ ಜನ್ಮಭೂಮಿ ಚಳವಳಿಯ ಪ್ರಮುಖ ನಾಯಕರಾಗಿದ್ದರು. ಚಳವಳಿಯನ್ನು ಬೆಂಬಲಿಸುವ ಹಲವಾರು ರ್‍ಯಾಲಿಗಳು ಮತ್ತು ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು. 1998ರಲ್ಲಿ ಅವರು ಕಾಂಗ್ರೆಸ್ ಅಭ್ಯರ್ಥಿ ರಾಜಕುಮಾರಿ ರತ್ನ ಸಿಂಗ್ ಅವರನ್ನು 68,460 ಮತಗಳಿಂದ ಸೋಲಿಸುವ ಮೂಲಕ ಪ್ರತಾಪಗಢ ಲೋಕಸಭಾ ಕ್ಷೇತ್ರದಲ್ಲಿ ಜಯಗಳಿಸಿದ್ದರು.

ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ವೇದಾಂತಿಯವರ ನಿಧನಕ್ಕೆ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ವೇದಾಂತಿಯವರ ನಿಧನವು ಸನಾತನ ಧರ್ಮಕ್ಕೆ ತುಂಬಲಾಗದ ನಷ್ಟವಾಗಿದೆ ಎಂದು ಅವರು ಹೇಳಿದ್ದಾರೆ.

'ವೋಟ್ ಚೋರಿ' ಹೋರಾಟಕ್ಕೂ 'ಇಂಡಿಯಾ ಬಣ'ಕ್ಕೂ ಸಂಬಂಧ ಇಲ್ಲ

ಜಮ್ಮು–ಕಾಶ್ಮೀರ ಸಿಎಂ ಒಮರ್ ಅಬ್ದುಲ್ಲಾ ಸ್ಪಷ್ಟನೆ



ಜಮ್ಮು: ಕಾಂಗ್ರೆಸ್ ಎತ್ತಿರುವ 'ವೋಟ್ ಚೋರಿ' ವಿವಾದದಿಂದ ದೂರ ಉಳಿದಿರುವ ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ, ಇದಕ್ಕೂ ಇಂಡಿಯಾ ಬಣ'ಕ್ಕೂ ಯಾವುದೇ ಸಂಬಂಧ ಇಲ್ಲ ಎಂದಿದ್ದಾರೆ.

ರಾಷ್ಟ್ರ ರಾಜಧಾನಿಯ ರಾಮಲೀಲಾ ಮೈದಾನದಲ್ಲಿ ಭಾನುವಾರ ನಡೆದ ವೋಟ್ ಚೋರ್ ಗದ್ದಿ ಛೋಡ್' ಪ್ರತಿಭಟನೆಯಲ್ಲಿ ಕಾಂಗ್ರೆಸ್ ನಾಯಕರು ಬಿಜೆಪಿ ಹಾಗೂ ಚುನಾವಣಾ ಆಯುಕ್ತರ ವಿರುದ್ಧ ವಾಗ್ದಾಳಿ ನಡೆಸಿದ ಒಂದು ದಿನದ ಬಳಿಕ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಈ ರೀತಿಯ ಹೇಳಿಕೆ ನೀಡಿದ್ದಾರೆ.

ಒಮರ್ ಅಬ್ದುಲ್ಲಾ ಅವರ 'ನ್ಯಾಷನಲ್ ಕಾನ್ಫರೆನ್ಸ್' ಇಂಡಿಯಾ ಬಣದಲ್ಲಿರುವ ಪ್ರಮುಖ ಮಿತ್ರಪಕ್ಷವಾಗಿದೆ. ಲೋಕಸಭೆಯಲ್ಲಿ ವಿರೋಧ ಪಕ್ಷದ ಸಂಸದರ ಸಂಖ್ಯೆಗೆ ಅನುಗುಣವಾಗಿ ಕಾಂಗ್ರೆಸ್ ಅತಿದೊಡ್ಡ ಪಕ್ಷವಾಗಿದೆ.

ಮತ ಚೋರಿ ಮತ್ತು ಚುನಾವಣಾ ಅಕ್ರಮ ಕುರಿತು ಕಾಂಗ್ರೆಸ್ ಆರೋಪಗಳ ಬಗ್ಗೆ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅಬ್ದುಲ್ಲಾ, ಇದಕ್ಕೂ ಇಂಡಿಯಾ ಬಣಕ್ಕೂ ಇದಕ್ಕೂ ಯಾವುದೇ ಸಂಬಂಧವಿಲ್ಲ ಎಂದರು.

ಹಾಲಿವುಡ್ ನಿರ್ದೇಶಕ ರಾಬ್ ರೀನರ್, ಪತ್ನಿ ಮೈಕೆಲ್ ಶವವಾಗಿ ಪತ್ತೆ; ಡಬಲ್ ಮರ್ಡರ್ ಶಂಕೆ!



ಲಾಸ್ ಏಂಜಲೀಸ್: "ದಿ ಪ್ರಿನ್ಸೆಸ್ ಬ್ರೈಡ್," "ವೆನ್ ಹ್ಯಾರಿ ಮೆಟ್ ಸ್ಯಾಲಿ..." ಮತ್ತು "ದಿಸ್ ಈಸ್ ಸ್ಪೈನಲ್ ಟ್ಯಾಪ್" ನಂತಹ ಚಲನಚಿತ್ರಗಳ ಮೂಲಕ ತಮ್ಮ ಪೀಳಿಗೆಯ ಪ್ರಮುಖ ನಿರ್ದೇಶಕರಲ್ಲಿ ಒಬ್ಬರಾಗಿದ್ದ ರಾಬ್ ರೀನರ್ ಮತ್ತು ಅವರ ಪತ್ನಿ ಮೈಕೆಲ್ ಶವವಾಗಿ ಪತ್ತೆಯಾಗಿದ್ದು, ಡಬಲ್ ಮರ್ಡರ್ ಶಂಕೆ ವ್ಯಕ್ತವಾಗಿದೆ. 78 ವರ್ಷದ ರೀನರ್ ಮತ್ತು ಅವರ ಪತ್ನಿ ಮೈಕೆಲ್ ಸಿಂಗರ್, ಲಾಸ್ ಏಂಜಲೀಸ್‌ನ ಬ್ರೆಂಟ್‌ವುಡ್‌ನಲ್ಲಿರುವ ಅವರ ಮನೆಯಲ್ಲಿ ಭಾನುವಾರ ಶವವಾಗಿ ಪತ್ತೆಯಾಗಿದ್ದಾರೆ. ಮೃತರು ರೀನರ್ ಮತ್ತು ಸಿಂಗರ್ ಎಂದು ಪೊಲೀಸ್ ಅಧಿಕಾರಿಯೊಬ್ಬರು ದೃಢಪಡಿಸಿದ್ದಾರೆ. ಆದರೆ ತನಿಖೆಯ ವಿವರಗಳನ್ನು ಸಾರ್ವಜನಿಕವಾಗಿ ಚರ್ಚಿಸಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ರಾಬ್ ರೀನರ್ ಒಬ್ಬ ನಟ, ನಿರ್ದೇಶಕ ಮತ್ತು ಹೋರಾಟಗಾರರಾಗಿದ್ದರು, ಐಕಾನಿಕ್ ರೊಮ್ಯಾಂಟಿಕ್ ಹಾಸ್ಯ "ವೆನ್ ಹ್ಯಾರಿ ಮೆಟ್ ಸ್ಯಾಲಿ" ನಿರ್ದೇಶನ ಮತ್ತು 1970 ರ ದಶಕದ ಸಿಬಿಎಸ್ ಸಿಟ್‌ಕಾಮ್ "ಆಲ್ ಇನ್ ದಿ ಫ್ಯಾಮಿಲಿ" ನಲ್ಲಿ ಅವರ ಆರಂಭಿಕ ನಟನೆಯ ಯಶಸ್ಸಿಗೆ ಹೆಸರುವಾಸಿಯಾಗಿದ್ದರು.

ಹದಗೆಟ್ಟ ದೆಹಲಿ ವಾಯು ಗುಣಮಟ್ಟ: 170 ವಿಮಾನ ರದ್ದು

ಪ್ರಯಾಣಿಕರಿಗೆ ವಿಮಾನ ನಿಲ್ದಾಣ ಸಲಹೆ

ನವದೆಹಲಿ: ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಸೋಮವಾರ ಬೆಳಗ್ಗೆ ಮತ್ತೊಮ್ಮೆ ದಟ್ಟವಾದ ಮಂಜು ಆವೃತವಾಗಿದ್ದು, ಗಾಳಿಯ ಗುಣಮಟ್ಟ ತೀವ್ರ ಹದಗೆಟ್ಟಿದೆ. ದೆಹಲಿಯಲ್ಲಿ ಇಂದು ದಟ್ಟವಾದ ಮಂಜು ಆವರಿಸಿದ್ದರಿಂದ ಕನಿಷ್ಠ 170 ವಿಮಾನಗಳು ರದ್ದಾಗಿದ್ದು, ರೈಲುಗಳು ಗಂಟೆಗಟ್ಟಲೆ ತಡವಾಗಿ ಸಂಚರಿಸಿವೆ. ದೆಹಲಿಯ ಸರಾಸರಿ ವಾಯು ಗುಣಮಟ್ಟ ಸೂಚ್ಯಂಕ ಈಗ 498ಕ್ಕೆ ಏರಿದ್ದು, ಮಾಲಿನ್ಯಕಾರಕಗಳು ದಟ್ಟವಾದ ಮಂಜು ಮತ್ತು ಗಾಳಿಯಲ್ಲಿ ಸಿಲುಕಿಕೊಂಡಿದ್ದರಿಂದ ನಗರದ ಗಾಳಿಯ ಗುಣಮಟ್ಟ 'ಗಂಭೀರ'ವಾಗಿದೆ.

ರಾಷ್ಟ್ರ ರಾಜಧಾನಿಯಾದ್ಯಂತ ಒಟ್ಟು 40 ವಾಯು ಗುಣಮಟ್ಟ ಮೇಲ್ವಿಚಾರಣಾ ಕೇಂದ್ರಗಳಲ್ಲಿ, 38 ಕಡೆ 'ಗಂಭೀರ' ಗಾಳಿಯ ಗುಣಮಟ್ಟ ವರದಿ ಮಾಡಿದರೆ, ಎರಡು ಕೇಂದ್ರಗಳು 'ತುಂಬಾ ಕಳಪೆ' ಮಟ್ಟವನ್ನು ದಾಖಲಿಸಿವೆ. ಜಹಾಂಗೀರ್‌ಪುರಿ ಅತ್ಯಂತ ಕಲುಷಿತ ಪ್ರದೇಶವಾಗಿ ಹೊರಹೊಮ್ಮಿದ್ದು, AQI 498 ದಾಖಲಿಸಿದೆ. ಇದು ಎಲ್ಲಾ ಕೇಂದ್ರಗಳಲ್ಲಿ ಅತ್ಯಧಿಕವಾಗಿದೆ.

ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಕಾರ, 401 ಮತ್ತು 500 ರ ನಡುವಿನ AQI 'ಗಂಭೀರ' ಎಂದು ವರ್ಗೀಕರಿಸಲಾಗಿದೆ. ಇದು ಗಂಭೀರ ಆರೋಗ್ಯ ಅಪಾಯಗಳನ್ನುಂಟುಮಾಡುತ್ತದೆ.

ಮೈಸೂರು ಮಿತ್ರ

ಕನ್ನಡ ಭಾಷೆ ಬೇಡ ಎನ್ನುವವರು ಭಾಷಾ ದ್ರೋಹಿಗಳು

ವಿಶ್ರಾಂತ ಪ್ರಾಧ್ಯಾಪಕ ಮೈಸೂರು ಕೃಷ್ಣಮೂರ್ತಿ ಅಭಿಮತ



70ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ನೃತ್ಯಗುರು ಪ್ರೊ.ಕೆ. ರಾಮಮೂರ್ತಿ ರಾವ್ ಹಾಗೂ ಕರ್ನಾಟಕ ಮುಕ್ತಕ ಸಾಹಿತ್ಯ ಅಕಾಡೆಮಿ ಟ್ರಸ್ಟ್ ಸಂಸ್ಥಾಪಕ ಎಸ್.ರಾಮಪ್ರಸಾದ್ ಅವರನ್ನು ಸನ್ಮಾನಿಸಲಾಯಿತು.

ಮೈಸೂರು,ಡಿ.15(ಎಸ್‌ಪಿಎನ್)–ವಿಶ್ವಕ್ಕೆ ಬೇಕಾದ ಕನ್ನಡ ಇಲ್ಲಿನವರಿಗೆ ಬೇಡವಾಗಿದೆ. ಕನ್ನಡ ಭಾಷೆ ತಿರಸ್ಕಾರ ಮಾಡುವವರನ್ನು ಭಾಷಾ ದ್ರೋಹಿಗಳು ಎನ್ನಬಹುದು ಎಂದು ವಿಶ್ರಾಂತ ಪ್ರಾಧ್ಯಾಪಕ ಮೈಸೂರು ಕೃಷ್ಣಮೂರ್ತಿ ಅಭಿಪ್ರಾಯಪಟ್ಟರು.

ಮೈಸೂರು ಜೆಎಲ್‌ಬಿ ರಸ್ತೆಯ ಎಂಜಿನಿಯರ್ ಸಂಸ್ಥೆಗಳ ಸಭಾಂಗಣದಲ್ಲಿ ಕರ್ನಾಟಕ ಮುಕ್ತಕ ಸಾಹಿತ್ಯ ಅಕಾಡೆಮಿ ಟ್ರಸ್ಟ್ ಏರ್ಪಡಿಸಿದ್ದ 70ನೇ ಕನ್ನಡ ರಾಜ್ಯೋತ್ಸವ ಹಾಗೂ ಸಾಧಕರಿಗೆ ಸನ್ಮಾನಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ರಾಜ್ಯಕ್ಕೆ ಕನ್ನಡ ಬೇಕು. ಅದು ಭಾರತದ ಭಾಗವಾಗಬೇಕು. ಬಳಿಕ ವಿಶ್ವಕ್ಕೂ ಬೇಕು. ಏಕೆಂದರೆ ಕನ್ನಡಿಗರು ಎಲ್ಲೆಡೆ ಸೇವೆ ಸಲ್ಲಿಸುತ್ತಿದ್ದಾರೆ. ಪರಿಸ್ಥಿತಿ ಹೀಗಿದ್ದರೂ ಕೆಲವರು ಕನ್ನಡ ಕಲಿತರೆ ಕೆಲಸ ಸಿಗುವುದಿಲ್ಲ ಎಂದು ಸುಳ್ಳು ಹೇಳಿರುವುದು ಸರಿಯಲ್ಲ ಎಂದರು.

ಕನ್ನಡ ಪ್ರಾಧ್ಯಾಪಕನಾಗಿ ಕೆಲಸ ಮಾಡಿರುವ ನನಗೆ ಇಂಗ್ಲಿಷ್ ಕೂಡ ಅಷ್ಟೇ ಸಮರ್ಥವಾಗಿ ಬರುತ್ತದೆ. ಕನ್ನಡ ಮಾಧ್ಯಮದಲ್ಲಿ ಓದಿದ ನನ್ನ ಮೂವರು ಮಕ್ಕಳು ಇವತ್ತು ಒಳ್ಳೆಯ ಉದ್ಯೋಗದಲ್ಲಿದ್ದಾರೆ. ಆದ್ದರಿಂದ ನಮ್ಮವರೇ ಕನ್ನಡದ ಬಗ್ಗೆ ಕೇವಲವಾಗಿ ಮಾತನಾಡಬಾರದು. ಬೇಕಾದರೆ, ಕನ್ನಡದ ಜೊತೆಗೆ ಇತರೆ ಭಾಷೆಗಳನ್ನು ಕಲಿಯಲಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ರಾಮಾಯಣ, ಮಹಾಭಾರತ ಭಾರತೀಯರ ಹೆಮ್ಮೆಯ ಮಹಾಕಾವ್ಯಗಳು. ಇಲ್ಲಿನ ಸಾಂಸ್ಕೃತಿಕ ಮಹತ್ವವನ್ನು ಸಾರುವ ಈ ಮಹಾಕಾವ್ಯಗಳು. ಕುವೆಂಪು ಅವರ ಆನಂದಮಯ ಈ ಜಗಹೃದಯ, ಡಾರಾಜ್‌ಕುಮಾರ್ ಅವರ ನಾದಮಯ, ಹಾಡು ಕೇಳಿದ ಮೇಲೂ ವೈವಿಧ್ಯಮಯ ಸಂಸ್ಕೃತಿಯನ್ನು ರಕ್ಷಿಸಬೇಕು. ವೈವಿಧ್ಯಮಯ ಸಂಸ್ಕೃತಿ ನಾಶವಾದರೆ, ಅದು ವಿಶ್ವದ್ರೋಹ ಆಗುತ್ತದೆ ಎಂದು ಎಚ್ಚರಿಸಿದರಲ್ಲದೆ, ಎಲ್ಲಾ ಕಾವ್ಯಗಳ ಮೂಲಸೆಲೆ ಮುಕ್ತಕ. ಇಂತಹ ಮುಕ್ತಕ ಸಾಹಿತ್ಯವನ್ನು ಉಳಿಸಿ, ಬೆಳೆಸುವ ಕೆಲಸವನ್ನು ಕರ್ನಾಟಕ ಮುಕ್ತಕ ಸಾಹಿತ್ಯ ಅಕಾಡೆಮಿ ಟ್ರಸ್ಟ್ ಮಾಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಾಧಕರಿಗೆ ಸನ್ಮಾನ: ಈ ಬಾರಿಯ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ನೃತ್ಯಗುರು ಪ್ರೊ.ಕೆ. ರಾಮಮೂರ್ತಿ ರಾವ್, ಜೆಎಸ್‌ಎಸ್ ಸಂಗೀತ ಸಭಾ ಟ್ರಸ್ಟ್‌ನಿಂದ ಸಂಗೀತ ಸೇವಾನಿಧಿ ಪ್ರಶಸ್ತಿ ಪಡೆದಿರುವ ಕರ್ನಾಟಕ ಮುಕ್ತಕ ಸಾಹಿತ್ಯ ಅಕಾಡೆಮಿ ಟ್ರಸ್ಟ್ ಸಂಸ್ಥಾಪಕ ಎಸ್. ರಾಮಪ್ರಸಾದ್ ಅವರನ್ನು ಸನ್ಮಾನಿಸಲಾಯಿತು.

ಸಂಸ್ಕೃತ ವಿದ್ವಾಂಸ ಡಾ.ಎಚ್.ವಿ. ನಾಗರಾಜರಾವ್ ಅಧ್ಯಕ್ಷತೆ ವಹಿಸಿದ್ದರು. ಸಂಘಟಕ ರಂಗನಾಥ್ ಮೈಸೂರು, ವಿದುಷಿ ಡಾ.ಸುಕನ್ಯಾ ಪ್ರಭಾಕರ್, ಹಿರಿಯ ಲೇಖಕ ಡಾ.ಮಂಜಪ್ಪಶೆಟ್ಟಿ ಮಸಗಲಿ, ಕಸಾಪ ಮಾಜಿ ಜಿಲ್ಲಾಧ್ಯಕ್ಷ ಎಂ. ಚಂದ್ರಶೇಖರ್, ಎಚ್.ಆರ್. ಸುಂದರೇಶನ್, ಕೃಷ್ಣ ಮೊದಲಾದವರು ಉಪಸ್ಥಿತರಿದ್ದರು. ಡಾ.ಕೆ. ಲೀಲಾ ಪ್ರಕಾಶ್ ಸ್ವಾಗತಿಸಿದರು. ಸೌಗಂಧಿಕಾ ಜೋಯಿಸ್, ಡಾ.ಕೃಪಾ. ಮಂಜುನಾಥ್, ಕೆ.ಟಿ. ಶ್ರೀಮತಿ, ಪ್ರೊ.ಆರ್. ಎ. ಕುಮಾರ್ ಅವರು ಅತಿಥಿ ಹಾಗೂ ಸನ್ಮಾನಿತರನ್ನು ಪರಿಚಯಿಸಿದರು. ಕಾರ್ಯದರ್ಶಿ ಕಿರಣ್ ಸಿಡ್ಲೇಹಳ್ಳಿ ಕಾರ್ಯಕ್ರಮ ನಿರೂಪಿಸಿದರು. ಮರಿಮಲ್ಲಪ್ಪ ಪ್ರೌಢಶಾಲೆಯ ಸಹಶಿಕ್ಷಕ ಬಿ.ಆರ್. ಶಿವಕುಮಾರ್ ವಂದಿಸಿದರು. ಚಾರ್ವಿ ಸತೀಶ್ ನಾಡಗೀತೆ, ಕನ್ನಡಗೀತೆಗಳನ್ನು ಹಾಡಿದರು.

ಇಂದು ಪುರಭವನ ಆವರಣದಲ್ಲಿ ನಾಯಿಮರಿ ದತ್ತು ಪಡೆಯುವ ಕಾರ್ಯಕ್ರಮ

ಮೈಸೂರು, ಡಿ.15– ನಾಯಿ ಮರಿಗಳನ್ನು ದತ್ತು ಪಡೆಯುವ ಕಾರ್ಯಕ್ರಮವನ್ನು ಮೈಸೂರಿನ ಪುರಭವನ ಆವರಣದಲ್ಲಿ ಮಂಗಳವಾರ(ಡಿ.16) ಬೆಳಗ್ಗೆ 10ಕ್ಕೆ ಏರ್ಪಡಿಸಲಾಗಿದೆ.

ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಈ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಶ್ವಾನ ಪ್ರಿಯರು ಭಾಗವಹಿಸಿ ನಾಯಿ ಮರಿಯನ್ನು ದತ್ತು ಪಡೆಯಬಹುದಾಗಿದೆ.

ಸುಪ್ರೀಂಕೋರ್ಟ್ ನ್ಯಾಯಾಲಯವು ಸ್ವಯಂಪ್ರೇರಿತ ರಿಟ್ ಅರ್ಜಿ ಸಂಬಂಧ ನ.7ರಂದು ನೀಡಿರುವ ಆದೇಶದಂತೆ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬೀದಿ ನಾಯಿಗಳನ್ನು ದತ್ತು ಪಡೆದು ಅವುಗಳನ್ನು ಪೋಷಣೆ ಮಾಡಲು ಇಚ್ಛಿಸುವವರ ಸಹಕಾರ ಕೋರಲಾಗಿದೆ. ಎನ್‌ಜಿಓಗಳು, ಪ್ರಾಣಿ ಪ್ರಿಯರು, ಪ್ರಾಣಿಗಳ ಸಂರಕ್ಷಣೆ ಸಂಕಲ್ಪವುಳ್ಳವರು, ಪ್ರಾಣಿಗಳ ಮೇಲೆ ದಯೆ ಇರುವವರು, ಪ್ರಾಣಿದಯಾ ಸಂಘದ ಪ್ರತಿನಿಧಿಗಳು ನಾಯಿ ಮರಿಗಳನ್ನು ದತ್ತು ಪಡೆಯಬಹುದು ಅಥವಾ ಆಶ್ರಯ ತಾಣಗಳಲ್ಲಿರುವ ಬೀದಿ ನಾಯಿಗಳಿಗೆ ಆಹಾರ ಪೂರೈಸಲು ನೆರವಾಗಬಹುದು. ಈ ಸೇವಾಕಾರ್ಯದಲ್ಲಿ ಆಸಕ್ತಿವುಳ್ಳವರು ದತ್ತು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್ ಅವರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಅಭಿನಂದನೆ



ಮೈಸೂರು ನಗರ ವಕೀಲರ ವಿವಿಧೋದ್ದೇಶ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಕೆ ಹೆಚ್ ರಮೇಶ್, ಉಪಾಧ್ಯಕ್ಷರಾಗಿ ಶ್ರೀನಿವಾಸ್ ಆಯ್ಕೆಯಾಗಿದ್ದು, ಅವರನ್ನು ಲಾ ಗೈಡ್ ಕನ್ನಡ ಕಾನೂನು ಪತ್ರಿಕೆಯ ಸಂಪಾದಕರಾದ ವೆಂಕಟೇಶ್ ಅಭಿನಂದಿಸಿದರು. ಈ ಸಂದರ್ಭದಲ್ಲಿ ವಕೀಲರ ಸಂಘದ ಮಾಜಿ ಅಧ್ಯಕ್ಷ ಜಿ.ವಿ.ರಾಮಮೂರ್ತಿ, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ ರಾಮಕೃಷ್ಣ ಶರತ್ ಗೌಡ ಶುಭಕರ್ ಮತ್ತಿತರರು ಉಪಸ್ಥಿತರಿದ್ದರು.

ಪತ್ನಿಯೊಂದಿಗಿನ ಸಲುಗೆ ಪ್ರಶ್ನಿಸಿದ ಗಂಡನನ್ನು ಕೊಲೆ ಮಾಡಿದ್ದ ಆರೋಪಿ ಬಂಧನ



ಧೀರಜ್

ತಿ.ನರಸೀಪುರ, ಡಿ.15– ಪತ್ನಿಯೊಂದಿಗಿನ ಸಲುಗೆಯನ್ನು ಪ್ರಶ್ನಿಸಿದ್ದ ಗಂಡನನ್ನು ಬರ್ಬರವಾಗಿ ಹತ್ಯೆಗೈದು ತಲೆಮರೆಸಿಕೊಂಡಿದ್ದ ಆರೋಪಿಯನ್ನು ತಿ.ನರಸೀಪುರ ಪಟ್ಟಣದ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ತಿರುಮಕೂಡಲು ಗ್ರಾಮದ ಲೇಟ್ ಶಿವರಾಮು ಅವರ ಪುತ್ರ ಧೀರಜ್(21) ಬಂಧಿತನಾದ ಕೊಲೆ ಆರೋಪಿ.

ಕಳೆದ ಶನಿವಾರ ಮುಂಜಾನೆ ಹಳೇ ತಿರುಮಕೂಡಲಿನ ಚೌಡಯ್ಯ ವೃತ್ತದಲ್ಲಿ ಹೊಸ ತಿರುಮಕೂಡಲು ಗ್ರಾಮದ ವಿನೋದ್ ಕುಮಾರ್ ಎಂಬಾತನ ಮೇಲೆ ಧೀರಜ್ ಮಾರಕಾಸ್ತ್ರದಿಂದ ಹಲ್ಲೆ ಮಾಡಿ ಕೊಲೆ ಗೈದಿದ್ದ, ಕೊಲೆಗೆ ವಿನೋದ್ ಕುಮಾರ್ ಪತ್ನಿಯೊಂದಿಗೆ ಧೀರಜ್ ಸಲುಗೆಯಿಂದಿದ್ದುದೇ ಕಾರಣವೆಂದು ಪಟ್ಟಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು.

ಕೊಲೆ ಮಾಡಿ ತಲೆ ಮರೆಸಿಕೊಂಡಿದ್ದ ಆರೋಪಿ ಧೀರಜ್‌ನನ್ನು ಟೌನ್ ಪೊಲೀಸರು ಸೋಮವಾರ ಬಂಧಿಸಿ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಆರೋಪಿಯನ್ನು ಸ್ಥಳ ಮಹಜರು ನಡೆಸಿ ಆತ ಕೊಲೆಗೆ ಬಳಸಿದ್ದ ಆಯುಧವನ್ನು ಪೊಲೀಸರು ವಶಪಡಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಆರೋಪಿ ಧೀರಜ್, ಕೊಲೆಯಾದ ವಿನೋದ್ ಕುಮಾರನ ದೂರದ ಸಂಬಂಧಿಯಾಗಿದ್ದು, ತನ್ನ ತಂದೆ–ತಾಯಿಯನ್ನು ಕಳೆದುಕೊಂಡ ಮೇಲೆ ವಿನೋದ್‌ಕುಮಾರ್ ಮನೆಯಲ್ಲೇ ವಾಸವಾಗಿದ್ದ. ಈ ವೇಳೆ ವಿನೋದ್‌ಕುಮಾರ್ ಪತ್ನಿಯೊಂದಿಗೆ ಧೀರಜ್ ಸಲುಗೆಯಿಂದ ವರ್ತಿಸುತ್ತಿದ್ದನಂತೆ. ಇದನ್ನು ಪ್ರಶ್ನಿಸಿದ ವಿನೋದ್‌ಕುಮಾರ್‌ನನ್ನು ಧೀರಜ್ ಕೊಲೆ ಮಾಡಿ ಪರಾರಿಯಾಗಿದ್ದ.

ಪಠ್ಯದಂತೆ ಕಲಾ ಚಟುವಟಿಕೆಗಳಿಗೂ ಆದ್ಯತೆ ನೀಡಬೇಕು

ರಘುಲೀಲಾ ಸಂಗೀತ ಮಂದಿರದ ನಿರ್ದೇಶಕಿ ವಿದುಷಿ ಸುನೀತಾ ಚಂದ್ರಕುಮಾರ್ ಪ್ರತಿಪಾದನೆ



ಸಮೂಹ ಭರತನಾಟ್ಯ ಪ್ರದರ್ಶನ ಎಲ್ಲರ ಗಮನ ಸೆಳೆಯಿತು

ಮೈಸೂರು, ಡಿ.15(ಎಸ್‌ಪಿಎನ್)– ಪಠ್ಯಕ್ಕೆ ನೀಡುವ ಗಮನ, ಕಲಾ ಚಟುವಟಿಕೆಗಳಿಗೂ ಆದ್ಯತೆ ನೀಡಬೇಕು. ಇದಕ್ಕೆ ಪೋಷಕರ ಬೆಂಬಲವೂ ಬೇಕು ಎಂದು ಮೈಸೂರು ರಘುಲೀಲಾ ಸಂಗೀತ ಮಂದಿರದ ನಿರ್ದೇಶಕಿ ವಿದುಷಿ ಸುನೀತಾ ಚಂದ್ರಕುಮಾರ್ ಅಭಿಪ್ರಾಯಪಟ್ಟರು.

ಮೈಸೂರು ಕುವೆಂಪುನಗರದ ಆದಿಚುಂಚನಗಿರಿ ರಸ್ತೆಯಲ್ಲಿರುವ ಗಾನಭಾರತಿ ಆವರಣದ ರಮಾಗೋವಿಂದ ಸಭಾಂಗಣದಲ್ಲಿ ಮೈಸೂರಿನ ನೃತ್ಯಾ ಈಶಾ ಪ್ರದರ್ಶಕ ಕಲೆಗಳ ಕೇಂದ್ರದ ವತಿಯಿಂದ ಏರ್ಪಡಿಸಿದ್ದ ಈಶಾ ನೃತ್ಯೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಇತ್ತೀಚೆಗೆ ಪೋಷಕರು ಕಲಾ ಚಟುವಟಿಕೆಗಳಾದ ಸಂಗೀತ, ನೃತ್ಯ, ತಬಲ, ವೀಣೆ, ಘಟಂ, ನಾಟಕ ಕಲಿಕೆ ತಮ್ಮ ಮಕ್ಕಳನ್ನು ಸೇರಿಸಲು ಮೊದಮೊದಲು ಆಸಕ್ತಿ ವಹಿಸುತ್ತಾರೆ. ಕೆಲ ದಿನಗಳಲ್ಲೇ ಕಲಿಕಾ ಹಂತದಲ್ಲೇ ಮಕ್ಕಳನ್ನು ಕಲಾ ಚಟುವಟಿಕೆಗಳ ತರಗತಿಗಳನ್ನು ಮೊಟಕುಗೊಳಿಸಿ ಬೇರೆ ಕ್ಷೇತ್ರಕ್ಕೆ ತೊಡಗಿಸಲು ಪ್ರಯತ್ನಿಸುತ್ತಾರೆ. ಕಲಿಕಾ ಹಂತದಲ್ಲೇ ಮಕ್ಕಳಿಗೆ ಎಲ್ಲವೂ ಅರ್ಥವಾಗುವುದಿಲ್ಲ. ಹೊಸ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಲು ಮಕ್ಕಳಿಗೆ ಕಾಲಾವಕಾಶ ಬೇಕು. ಮನೆಯಲ್ಲಿಯೂ ಈ ಪರಿಸರಕ್ಕೆ ಹೊಂದಿಕೊಳ್ಳುವಂತೆ ಇರಬೇಕು ಎಂದು ಸಲಹೆ ನೀಡಿದರು.

ನೃತ್ಯ ಈಶಾ ಪ್ರದರ್ಶಕ ಕಲೆಗಳ ಕೇಂದ್ರ ವಿದ್ಯಾರ್ಥಿಗಳಾದ ಸನ್ನಿತಾ ಪ್ರಾಪ್ತಿ ಭಾಷ್ಯಂ, ಜನನಿ, ವರ್ಷ ಸ್ಪಂದನ, ಚೈತನ್ಯ, ಪಿ.ಎನ್.ನಿಸರ್ಗ, ಸಿ.ಸ್ಫೂರ್ತಿ, ಸಿ.ಶಿರಿಶ್ರೀ, ಲೀಲಾಂಬಿಕಾ, ಸಮೃದ್ಧಿ, ಚಿನ್ಮಯಿ, ಯುಕ್ತಿ, ಎಸ್.ಕೆ.ಧೃತಿ, ನೇಹ ಪಟೇಲ್, ಆರ್.ಸಿರಿ, ವಿ.ನಿಸರ್ಗ, ಧನುಶ್ರೀ, ಅಕ್ಷರ, ನೇಹಶ್ರೀ, ಲಕ್ಷ್ಮಿ, ಹರಿಣಿ, ವೈಷ್ಣವಿ, ಕುಸುಮಾ, ಸನ್ನಿಧಿ ನೇಹಾ ಪಟೇಲ್, ಶದ್ವಾಲಾ, ರಿತ್ವಿ ಹೇಮಿತಾ, ಐಲ್ವಿಪ್ರಿಯಾ, ಎನ್.ಸಾನ್ವಿ, ಲೇಖಾ, ಧನ್ವಿಕಾ, ಸಾನ್ವಿಕಾ ಶ್ರೀ, ಸರಯು, ಧಾತ್ರಿ, ಎನ್.ಮಾನ್ವಿ, ಸಿಂಚನ, ಪುಣ್ಯ, ಪ್ರಣತಿ ಅವರಿಂದ ಸಮೂಹ ಭರತನಾಟ್ಯ ಪ್ರದರ್ಶನ ನೀಡಿ, ಎಲ್ಲರ ಗಮನ ಸೆಳೆದರು.

ಜೆಸಿಸ್ ಸ್ಪೋರ್ಟ್ಸ್ ಮೆಡಿಸಿನ್ ಸೆಂಟರ್ ಮತ್ತು ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕ ಡಾ.ಆರ್.ಗಿರೀಶ್ ಚಂದ್ರ, ನಿವೃತ್ತ ಪ್ರಾಚಾರ್ಯ ನವಿಲೂರು ಪ್ರಕಾಶ್, ನೃತ್ಯ ಈಶಾ ಪ್ರದರ್ಶಕ ಕಲೆಗಳ ಕೇಂದ್ರದ ಸಂಸ್ಥಾಪಕ ನಿರ್ದೇಶಕ ಹರೀಶ್ ಕುಮಾರ್ ಉಪಸ್ಥಿತರಿದ್ದರು. ಈ ವೇಳೆ ಪ್ರತಿಭಾವಂತ ವಿದ್ಯಾರ್ಥಿಗಳಾದ ಎಸ್.ಸನ್ನೀತ್ನಾ, ಬಿ.ಧೃತಿ ಕಿರಣ್, ಎಂ.ವರ್ಷ, ಪ್ರಾಪ್ತಿ ಭಾಷ್ಯಂ, ಜೆ.ಜನನಿ ಅವರನ್ನು ಸನ್ಮಾನಿಸಲಾಯಿತು.

ರಾಮಕೃಷ್ಣ ವಿದ್ಯಾಕೇಂದ್ರದ ಹಿರಿಯ ಪ್ರಾಥಮಿಕ, ಪ್ರೌಢಶಾಲೆ ವಾರ್ಷಿಕ ಕ್ರೀಡಾಕೂಟ



ಮೈಸೂರು, ಡಿ. 15– ಮೈಸೂರಿನ ರಾಮಕೃಷ್ಣನಗರದಲ್ಲಿರುವ ರಾಮಕೃಷ್ಣ ವಿದ್ಯಾಕೇಂದ್ರದ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಯ ವಾರ್ಷಿಕ ಕ್ರೀಡಾಕೂಟ ಹಮ್ಮಿಕೊಳ್ಳಲಾಗಿತ್ತು. ರಾಮಕೃಷ್ಣ ಸೇವಾಸಂಘದ ಅಧ್ಯಕ್ಷ ಎಂ.ಪಾಪೇಗೌಡ, ಕಾರ್ಯನಿರ್ವಾಹಕ ಅಧಿಕಾರಿ ಪ್ರೊ. ಜಿ.ಚಂದ್ರಶೇಖರ್, ಮುಖ್ಯೋಪಾಧ್ಯಾಯ ಜಿ.ಎನ್.ವಿಶ್ವನಾಥ್ ಮತ್ತಿತರರು ಬಲೂನನ್ನು ಹಾರಿಬಿಡುವ ಮೂಲಕ ವಾರ್ಷಿಕ ಕ್ರೀಡಾಕೂಟ ಉದ್ಘಾಟಿಸಿದರು. ಸಾಂಕೇತಿಕವಾಗಿ ಆಟ ಆಡುವುದರ ಮೂಲಕ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು. ಕಾರ್ಯನಿರ್ವಾಹಕ ಅಧಿಕಾರಿ ಪ್ರೊ.ಜಿ.ಚಂದ್ರಶೇಖರ್, ಮಕ್ಕಳಿಗೆ ಪ್ರೋತ್ಸಾಹದ ನುಡಿಗಳನ್ನಾಡಿದರು.

ನಾಳೆಯಿಂದ ಜ.4ರವರೆಗೆ ಧ್ವನಿ–ಬೆಳಕು ಕಾರ್ಯಕ್ರಮ ರದ್ದು

ಮೈಸೂರು, ಡಿ.15– ಮೈಸೂರು ಅರಮನೆ ಆವರಣದಲ್ಲಿ 'ಫಲಪುಷ್ಪ ಪ್ರದರ್ಶನ' ಆಯೋಜಿಸುವ ಹಿನ್ನೆಲೆಯಲ್ಲಿ ಡಿ.17ರಿಂದ ಜ.4ರವರೆಗೆ 'ಧ್ವನಿ ಮತ್ತು ಬೆಳಕು' ಕಾರ್ಯಕ್ರಮವನ್ನು ರದ್ದುಗೊಳಿಸಲಾಗಿದೆ. ಮೈಸೂರು ಅರಮನೆ ಮಂಡಳಿ ವತಿಯಿಂದ ಪ್ರತಿ ವರ್ಷದಂತೆ ವರ್ಷಾಂತ್ಯಕ್ಕೆ 'ಫಲಪುಷ್ಪ ಪ್ರದರ್ಶನ' ಏರ್ಪಡಿಸಲಾಗಿದ್ದು, ಇದರ ಪೂರ್ವಭಾವಿ ಕಾರ್ಯಗಳು ಪ್ರಗತಿಯಲ್ಲಿರುವ ಕಾರಣ ತಾತ್ಕಾಲಿಕವಾಗಿ ಧ್ವನಿ ಬೆಳಕು ಕಾರ್ಯಕ್ರಮ ರದ್ದುಗೊಳಿಸಲಾಗಿದ್ದು, ಜ.5ರಿಂದ ಎಂದಿನಂತೆ ರಾತ್ರಿ 7ರಿಂದ 8 ಗಂಟೆವರೆಗೆ ಕಾರ್ಯಕ್ರಮ ನಡೆಯಲಿದೆ ಎಂದು ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್.ಸುಬ್ರಮಣ್ಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

20 ಸಾವಿರ ಪಿಸಿ, ಪಿಎಸ್‌ಐ ನೇಮಕಾತಿ: ಜ್ಞಾನಬುತ್ತಿ ಸಂಸ್ಥೆಯಲ್ಲಿ ಉಚಿತ ತರಬೇತಿ

ಮೈಸೂರು, ಡಿ.15(ಬಿಎಲ್‌ಯು)– ಮೈಸೂರಿನ ಜ್ಞಾನಬುತ್ತಿ ಸಂಸ್ಥೆಯು ಪಿಸಿ, ಪಿಎಸ್‌ಐ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ನೀಡಲಿದೆ ಎಂದು ಸಂಸ್ಥೆಯ ಕಾರ್ಯದರ್ಶಿ ಹೆಚ್.ಬಾಲಕೃಷ್ಣ ತಿಳಿಸಿದ್ದಾರೆ. ಮುಂದಿನ ದಿನಗಳಲ್ಲಿ 20 ಸಾವಿರಕ್ಕೂ ಹೆಚ್ಚು ಪೊಲೀಸ್ ಕಾನ್ಸ್‌ಟೇಬಲ್ ಹಾಗೂ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗಳಿಗೆ ಲಿಖಿತ ಪರೀಕ್ಷೆ ಮೂಲಕ ಸರ್ಕಾರ ನೇಮಕಾತಿ ಮಾಡಿಕೊಳ್ಳಲಿದೆ ಎಂದಿದ್ದಾರೆ.

ಈ ಹಿನ್ನೆಲೆಯಲ್ಲಿ ಸಂಸ್ಥೆ ತರಬೇತಿ ನೀಡುತ್ತಿದ್ದು, ಆಸಕ್ತರು ಡಿಸೆಂಬರ್ 23 ರವರೆಗೆ ಮೈಸೂರಿನ ಲಕ್ಷ್ಮಿಪುರಂನ ಸಂಸ್ಥೆಯಲ್ಲಿ ಹೆಸರು ನೋಂದಾಯಿಸಿಕೊಳ್ಳಬಹುದು.

ಹೆಚ್ಚಿನ ವಿವರಗಳಿಗೆ ಸಂಯೋಜಕರಾದ ಸಿ.ಕೆ.ಕಿರಣ್ ಕೌಶಿಕ್ (9972830857) ಅಥವಾ ಕೆ.ವೈ.ನಾಗೇಂದ್ರ (8296788251) ಅವರನ್ನು ಸಂಪರ್ಕಿಸಬಹುದು ಎಂದು ಬಾಲಕೃಷ್ಣ (9448117455) ಅವರು ತಿಳಿಸಿದ್ದಾರೆ.

ರ್‍ಯಾಡಿಸನ್ ಬ್ಲೂನಲ್ಲಿ ರಾಷ್ಟ್ರಪತಿ ವಾಸ್ತವ್ಯ; ಇಂದು ಎಂಆರ್‌ಸಿ ರೇಸ್ ಚಟುವಟಿಕೆ ರದ್ದು

ಮೈಸೂರು, ಡಿ.15– ರಾಷ್ಟ್ರಪತಿ ಶ್ರೀಮತಿ ದ್ರೌಪದಿ ಮುರ್ಮು ಅವರು ಮಂಗಳವಾರ(ಡಿ.16) ಮೈಸೂರಿನ ರ್‍ಯಾಡಿಸನ್ ಬ್ಲೂ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಲಿರುವ ಹಿನ್ನೆಲೆಯಲ್ಲಿ ಭದ್ರತಾ ಕಾರಣಗಳಿಂದಾಗಿ ಮೈಸೂರು ರೇಸ್ ಕ್ಲಬ್ ಲಿಮಿಟೆಡ್‌ನಲ್ಲಿ ಮಂಗಳವಾರ ನಡೆಯಬೇಕಿದ್ದ ದೆಹಲಿ ರೇಸ್‌ಗಳ ಮೇಲಿನ ಮಧ್ಯಂತರ ಬೆಟ್ಟಿಂಗ್ ಕಾರ್ಯಾಚರಣೆಗಳನ್ನು ರದ್ದುಗೊಳಿಸಲಾಗಿದೆ ಎಂದು ರೇಸ್ ಕ್ಲಬ್‌ನ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಅಭಿನಂದನೆ



ಮೈಸೂರು ನಗರ ವಕೀಲರ ವಿವಿಧೋದ್ದೇಶ ಸಹಕಾರ ಸಂಘದ ನೂತನ ಅಧ್ಯಕ್ಷ ಕೆ.ಹೆಚ್.ರಮೇಶ ಹಾಗೂ ಉಪಾಧ್ಯಕ್ಷ ಜೆ.ಶ್ರೀನಿವಾಸ್ ಅವರನ್ನು ಮೈಸೂರು ವಕೀಲರ ಸಂಘದ ಮಾಜಿ ಕಾರ್ಯದರ್ಶಿ ಬಿ.ಶಿವಣ್ಣ ನೇತೃತ್ವದಲ್ಲಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ಮಾಜಿ ಅಧ್ಯಕ್ಷ ಎಸ್.ಆನಂದ ಕುಮಾರ್, ಹಿರಿಯ ವಕೀಲರಾದ ಎಸ್.ಶಿವಣ್ಣ ಎಂ.ಬಸವರಾಜ್, ಆರ್.ಸರಸ್ವತಿ, ನಾಗರತ್ನ, ಎನ್.ಸ್ವಾಮಿ, ಮತ್ತಿತರರು ಉಪಸ್ಥಿತರಿದ್ದರು.

ದಾವಣಗೆರೆ ಸರ್ವಾಂಗೀಣ ಅಭಿವೃದ್ಧಿಗೆ ಶಾಮನೂರು ಶಿವಶಂಕರಪ್ಪ ಕಾರಣರು

ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಮರಣೆ; ಗುಣಗಾನ



ಬೆಳಗಾವಿ, ಡಿ. 15(ಕೆಎಂಶಿ)– ದಾವಣಗೆರೆ ಜಿಲ್ಲೆಯ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಗೆ ಶ್ಯಾಮನೂರು ಶಿವಶಂಕರಪ್ಪ ಕಾರಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿಂದು ಸ್ಮರಿಸಿದ್ದಾರೆ.

ಸದನದ ಹಿರಿಯ ಸದಸ್ಯ ಶ್ಯಾಮನೂರು ಶಿವಶಂಕರಪ್ಪ ನಿಧನಕ್ಕೆ ಸಂತಾಪ ಸೂಚಿಸಿ ಸಭಾಧ್ಯಕ್ಷ ಯು.ಟಿ. ಖಾದರ್ ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಬೆಂಬಲಿಸಿ ಮಾತನಾಡಿದ ಅವರು, ಶ್ಯಾಮನೂರು ಶಿವಶಂಕರಪ್ಪ 63ನೇ ವಯಸ್ಸಿನಲ್ಲಿ ವಿಧಾನಸಭೆ ಪ್ರವೇಶಿಸಿ ಆರು ಬಾರಿ ಶಾಸಕರಾದವರು, ಒಮ್ಮೆ ಸಂಸತ್ ಸದಸ್ಯರಾಗಿದ್ದರು, ದೀರ್ಘ ಕಾಲ ರಾಜಕೀಯದಲ್ಲಿದ್ದರು.

ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷರಾಗಿ, 1969ರಲ್ಲಿ ದಾವಣಗೆರೆ ಪುರಸಭೆ ಸದಸ್ಯರಾಗಿ ನಂತರ ನಗರಸಭೆ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು.

ದಾವಣಗೆರೆಯ ಬಾಪೂಜಿ ವಿದ್ಯಾ ಕೇಂದ್ರದ ಮೂಲಕ ಇಂಜಿನಿಯರಿಂಗ್, ವೈದ್ಯಕೀಯ ಕಾಲೇಜುಗಳು ಸೇರಿದಂತೆ ಅನೇಕ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ಜಿಲ್ಲೆಯನ್ನು ವಿದ್ಯಾಕಾಶಿ ಮಾಡಿದ್ದರು. ಉದ್ಯಮಿಯಾಗಿ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲಿ ತಮ್ಮದೇ ಛಾಪು ಮೂಡಿಸಿದ್ದರು. ಜವಳಿ ಕ್ಷೇತ್ರದ ಅವನತಿ ಪ್ರಾರಂಭವಾದಾಗ ಹಲವು ಕೈಗಾರಿಕೆ ಮತ್ತು ಶಿಕ್ಷಣ ಸಂಸ್ಥೆಗಳನ್ನು ಆರಂಭಿಸುವ ಮೂಲಕ ದಾವಣಗೆರೆಗೆ ಬ್ರ್ಯಾಂಡ್ ತಂದುಕೊಟ್ಟವರು.

ದೀರ್ಘಕಾಲ ಕೆಪಿಸಿಸಿ ಖಜಾಂಚಿಯಾಗಿ, ಎಲ್ಲರ ಸ್ನೇಹ ಸಂಪಾದಿಸಿ ಅಜಾತಶತ್ರು ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು.

ದಾವಣಗೆರೆಗೆ ತಾವು ಭೇಟಿ ನೀಡಿದ ಸಂದರ್ಭದಲ್ಲೆಲ್ಲಾ ಶಾಮನೂರು ಶಿವಶಂಕರಪ್ಪ ಅವರ ಗೆಸ್ಟ್‌ಹೌಸ್‌ನಲ್ಲಿ ತಂಗುತ್ತಿದ್ದುದಲ್ಲದೆ, ಅವರ ಒತ್ತಾಯದ ಮೇರೆಗೆ ಅವರ ಮನೆಯಲ್ಲಿಯೇ ಊಟ ಮಾಡುತ್ತಿದ್ದುದ್ದನ್ನು ಮುಖ್ಯಮಂತ್ರಿ ಸ್ಮರಿಸಿದರು.

ತಮ್ಮ 75ನೇ ಜನ್ಮದಿನವನ್ನು ದಾವಣಗೆರೆಯಲ್ಲಿಯೇ ಆಚರಿಸಿಕೊಂಡಿದ್ದನ್ನು ಮುಖ್ಯಮಂತ್ರಿ ನೆನಪಿಸಿಕೊಂಡರು. ಜನರಿಗೆ ಕಷ್ಟದ ಸಂದರ್ಭಗಳಲ್ಲಿ ಶ್ಯಾಮನೂರು ಶಿವಶಂಕರಪ್ಪ ಸಹಾಯಹಸ್ತ ಚಾಚುತ್ತಿದ್ದರು. ಕೋವಿಡ್ ಸಂದರ್ಭದಲ್ಲಿ 6 ಕೋಟಿ ರೂ.ಗಳಿಗೂ ಹೆಚ್ಚು ವೆಚ್ಚ ಮಾಡಿ ಆಕ್ಸಿಜನ್ ಸರಬರಾಜು ಮಾಡಿದ್ದರು.

ಮೊದಲ ಬಾರಿಗೆ ತಾವು ಮುಖ್ಯಮಂತ್ರಿ ಆಗಿದ್ದಾಗ ಮಂತ್ರಿಮಂಡಲದಲ್ಲಿ ಶ್ಯಾಮನೂರು ಶಿವಶಂಕರಪ್ಪ ಸಚಿವರಾಗಿ ಕಾರ್ಯನಿರ್ವಹಿಸಿದ್ದರು. 2016ರಲ್ಲಿ ಸಂಪುಟ ಪುನರ್ ರಚನೆಯಾದಾಗ ಅವರ ಪುತ್ರ ಎಸ್.ಎಸ್.ಮಲ್ಲಿಕಾರ್ಜುನ್ ಅವರನ್ನು ಸಚಿವರನ್ನಾಗಿ ಮಾಡಲು ಕೋರಿಕೊಂಡಿದ್ದರು. ಅದರಂತೆ ಮಲ್ಲಿಕಾರ್ಜುನ್ ಸಚಿವರಾದರು. ನಮ್ಮ ಈಗಿನ ಸಚಿವ ಸಂಪುಟದಲ್ಲಿಯೂ ಮಂತ್ರಿಗಳಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದರು.

ಆಸ್ಪತ್ರೆಯಲ್ಲಿ 15 ದಿನಗಳ ಹಿಂದೆ ಅವರನ್ನು ಭೇಟಿ ಮಾಡಿದಾಗ ಮಾತನಾಡುವ ಸ್ಥಿತಿಯಲ್ಲಿ ಇರಲಿಲ್ಲ. ಅವರ ನಿಧನದಿಂದ ಜನಪರ ನಾಯಕನನ್ನು ಕಳೆದುಕೊಂಡಂತಾಗಿದೆ. ಅವರ ದೊಡ್ಡ ಕುಟುಂಬ ಹಾಗೂ ಲಕ್ಷಾಂತರ ಅಭಿಮಾನಿಗಳಿಗೆ ಅಗಲಿಕೆಯ ದುಃಖ ಭರಿಸುವ ಶಕ್ತಿ ಹಾಗೂ ಅವರ ಆತ್ಮಕ್ಕೆ ಭಗವಂತ ಚಿರಶಾಂತಿ ನೀಡಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದರು.

ಶಾಮನೂರು ಶಿವಶಂಕರಪ್ಪ ಅವರ ನಿಧನಕ್ಕೆ ಸಂತಾಪ ಸೂಚಿಸಿ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮತ್ತಿತರರು ಮಾತನಾಡಿದರು.

ನಂತರ ಸದನ ಮೃತರ ಗೌರವಾರ್ಥ ಒಂದು ನಿಮಿಷ ಮೌನ ಆಚರಿಸಿ, ಕಲಾಪವನ್ನು ನಾಳೆಗೆ ಮುಂದೂಡಲಾಯಿತು.

ಪ್ರಧಾನಮಂತ್ರಿ ಬೆಳೆ ವಿಮೆ ಬಗ್ಗೆ ಕೇಂದ್ರ ಶ್ವೇತಪತ್ರ ಹೊರಡಿಸಲಿ

ಅರಣ್ಯ ಸಚಿವ ಈಶ್ವರ ಖಂಡ್ರೆ ಆಗ್ರಹ



ಬೆಂಗಳೂರು, ಡಿ. 15(ಕೆಎಂಶಿ)– ಪ್ರಧಾನಮಂತ್ರಿ ಬೆಳೆ ವಿಮೆ ಯೋಜನೆಯಡಿ ರೈತರು, ಕೇಂದ್ರ ಮತ್ತು ರಾಜ್ಯ ಸರ್ಕಾರ ಪಾವತಿಸಿರುವ ಕಂತಿನ ಹಣ ಎಷ್ಟು, ಈವರೆಗೆ ರೈತರಿಗೆ ನೀಡಿರುವ ಪರಿಹಾರ ಎಷ್ಟು ಎಂಬ ವಿವರ ಕುರಿತು ಕೇಂದ್ರ ಸರ್ಕಾರ ಶ್ವೇತಪತ್ರ ಹೊರಡಿಸಲಿ ಎಂದು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಒತ್ತಾಯಿಸಿದ್ದಾರೆ.

ಸದನದಲ್ಲಿ ತಾವು ಫಸಲು ಭಿಮಾ ಯೋಜನೆ ಬಗ್ಗೆ ಸುಳ್ಳು ಮಾಹಿತಿ ನೀಡಿರುವುದಾಗಿ ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ವಿಮೆ ಯೋಜನೆ ಶ್ವೇತಪತ್ರ ಹೊರಡಿಸಿದರೆ ಖಾಸಗಿ ವಿಮಾ ಕಂಪನಿಗಳಿಗೆ ಕೇಂದ್ರ ಸರ್ಕಾರ ಹೇಗೆ ಲಾಭ ಮಾಡಿಕೊಡುತ್ತಿದೆ ಎಂಬುದು ಬಯಲಾಗಲಿದೆ.

ದೇಶಾದ್ಯಂತ ಬೆಳೆ ವಿಮೆ ಯೋಜನೆ ಜಾರಿಯಾದ ದಿನದಿಂದ ಈವರೆಗೆ ವಿಮಾ ಕಂಪನಿಗಳು ಲಾಭ ಮಾಡಿವೆಯೇ ಹೊರತು ರೈತರಲ್ಲ. ಇದು ಬಿಜೆಪಿ ಪ್ರಾಯೋಜಿತ ಗೋಲ್ಮಾಲ್ ಯೋಜನೆ ಎಂದರು.

ಈ ಸಂಬಂಧ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಕೋವಿಡ್ ಸಾಂಕ್ರಾಮಿಕದ ವೇಳೆ ಜನರು ಆಮ್ಲಜನಕ, ರೆಮಿಡಿ ಸಿವೀರ್ ಚುಚ್ಚುಮದ್ದು ಸಿಗದೇ, ಉದ್ಯೋಗವೂ ಇಲ್ಲದೆ ಹಸಿವಿನಿಂದ ಬಳಲುತ್ತಿದ್ದಾಗ ಮನೆಯಲ್ಲಿ ಬಾಗಿಲು ಮುಚ್ಚಿ ಕುಳಿತಿದ್ದ ಖೂಬಾ ಈಗ ಬೀದಿಯಲ್ಲಿ ನಿಂತು ವೀರಾವೇಷದಿಂದ ಮಾತನಾಡಿದರೆ ಜನ ನಂಬುವುದಿಲ್ಲ ಅವರಿಗೆ ಸತ್ಯದ ಅರಿವಿದೆ ಎಂದರು. ಖೂಬಾ ಅವರಿಗೆ ಕೆಲಸವಿಲ್ಲದೆ ನಿರುದ್ಯೋಗಿಯಾಗಿದ್ದು, ಮಾಧ್ಯಮ ಹೇಳಿಕೆ ನೀಡುತ್ತಾ, ಕಾಲಹರಣ ಮಾಡುತ್ತಿದ್ದಾರೆ ಎಂದರು.

ಬೆಳಗಾವಿ ಅಧಿವೇಶನ ಒಂದು ವಾರ ವಿಸ್ತರಿಸಲು ಸ್ಪೀಕರ್‌ಗೆ ವಿಪಕ್ಷ ನಾಯಕ ಅಶೋಕ್ ಪತ್ರ

ಬೆಳಗಾವಿ, ಡಿ. 15(ಕೆಎಂಶಿ)– ಬೆಳಗಾವಿಯ ವಿಧಾನಮಂಡಲದ ಚಳಿಗಾಲದ ಅಧಿವೇಶನವನ್ನು ಒಂದು ವಾರ ವಿಸ್ತರಿಸಬೇಕು ಎಂದು ಕೋರಿ ಸಭಾಧ್ಯಕ್ಷ ಯು.ಟಿಖಾದರ್ ಅವರಿಗೆ ಪತ್ರ ಬರೆದಿರುವುದಾಗಿ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ತಿಳಿಸಿದ್ದಾರೆ.

ಈ ಸಂಬಂಧ ಟ್ವೀಟ್ ಮಾಡಿರುವ ಅವರು, ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಹಲವು ಸದಸ್ಯರು ಗಂಭೀರ ಪ್ರಸ್ತಾಪಗಳನ್ನು ಮುಂದಿಟ್ಟಿದ್ದಾರೆ. ಮುಖ್ಯಮಂತ್ರಿ ಮತ್ತು ಸಚಿವರು ಇವುಗಳಿಗೆ ಉತ್ತರ ನೀಡಬೇಕಿದೆ.

ರಾಜ್ಯದಲ್ಲಿ ಕುಸಿದಿರುವ ಕಾನೂನು ಸುವ್ಯವಸ್ಥೆ, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಅನುದಾನ ಬಳಕೆಯ ಕಳಪೆ ಸಾಧನೆ ಸೇರಿದಂತೆ ಅನೇಕ ವಿಚಾರಗಳನ್ನು ಚರ್ಚಿಸಲು ಸದಸ್ಯರುಗಳಿಗೆ ಸಾಕಷ್ಟು ಸಮಯಾವಕಾಶ ಅಗತ್ಯವಿದೆ. ಅಧಿವೇಶನ ಅವಧಿ ವಿಸ್ತರಣೆ ಕೋರಿ ಸಲ್ಲಿಸಿರುವ ನನ್ನ ಮನವಿ ಪರಿಗಣಿಸುತ್ತಾರೆಂಬ ವಿಶ್ವಾಸವಿದೆ ಎಂದಿದ್ದಾರೆ.

ಡಿ.18ರಿಂದ ಮೈಸೂರು ಯೋಗ ಉತ್ಸವ

● 30ಕ್ಕೂ ಹೆಚ್ಚು ದೇಶಗಳಿಂದ ಪ್ರತಿನಿಧಿಗಳು ಆಗಮನ ● 50ಕ್ಕೂ ಹೆಚ್ಚು ಯೋಗ ಗುರುಗಳ ಮಾರ್ಗದರ್ಶನ



ಮೈಸೂರು, ಡಿ.15(ಜಿಎ)–ಮೈಸೂರಿನ ವಿಜಯನಗರದಲ್ಲಿರುವ ಜೆಸಿಎಸಿ ಸಭಾಂಗಣದಲ್ಲಿ ಇಂಡಿಕಾ ಯೋಗ ಸಂಸ್ಥೆ ವತಿಯಿಂದ ಡಿ.18ರಿಂದ 21 ರವರೆಗೆ ಮೈಸೂರು ಯೋಗ ಉತ್ಸವ ಆಯೋಜಿಸಲಾಗಿದೆ ಎಂದು ಸಂಸ್ಥೆ ಸಂಸ್ಥಾಪಕ ಡಾ.ವಿನಯ್‌ಚಂದ್ರ ಬನವತಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.18ರಂದು ಬೆಳಗ್ಗೆ 11 ಗಂಟೆಗೆ ಗ್ರಾಮಿ ಪ್ರಶಸ್ತಿ ಪುರಸ್ಕೃತರಾದ ರಿಕ್ಕಿ ಕೇಜ್ ಯೋಗ ಉತ್ಸವಕ್ಕೆ ಚಾಲನೆ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಇಂಡಿಯನ್ ಯೋಗ ಅಸೋಸಿಯೇಷನ್‌ನ ಕಾರ್ಯಕಾರಿಣಿ ಉಪಾಧ್ಯಕ್ಷ ಎಸ್.ಶ್ರೀಧರನ್, ಉದ್ಯಮಿಗಳಾದ ಜಗನ್ನಾಥ್ ಶೆಣೈ, ಗೋಪಾಲ್ ಕೃಷ್ಣನ್, ಸ್ವಾಮಿ ದಯಾನಂದ ಆಶ್ರಮದ ಸ್ವಾಮಿನಿ ಸ್ವಾತ್ಮವಿದ್ಯಾನಂದ ಅವರು ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ಇದು ಯೋಗ ಪರಂಪರೆಯ ಜಾಗತಿಕ ವೇದಿಕೆ ಆಗಲಿದೆ. 30 ಕ್ಕೂ ಹೆಚ್ಚು ದೇಶಗಳಿಂದ ಪ್ರತಿನಿಧಿಗಳು ಆಗಮಿಸಲಿದ್ದಾರೆ. 500 ಕ್ಕೂ ಹೆಚ್ಚು ಮಂದಿ ಪಾಲ್ಗೊಳ್ಳಲಿದ್ದಾರೆ. 50 ಕ್ಕೂ ಹೆಚ್ಚು ಯೋಗ ಗುರುಗಳು ಮಾರ್ಗದರ್ಶನ ನೀಡಲಿದ್ದಾರೆ. ನಾಲ್ಕು ದಿನದ ಉತ್ಸವದಲ್ಲಿ ಬೆಳಗ್ಗೆ 8.30ರಿಂದ ರಾತ್ರಿ 8.30ರವರೆಗೆ 40ಕ್ಕೂ ಹೆಚ್ಚು ಕಾರ್ಯಾಗಾರಗಳನ್ನು ಆಯೋಜಿಸಲಾಗಿದೆ ಎಂದರು.

ವಿಶೇಷವಾಗಿ ಸ್ವಾಸ್ಥ್ಯಕ್ಕೆ ಸಂಬಂಧಿಸಿದಂತೆ ವಸ್ತು ಪ್ರದರ್ಶನವನ್ನು ಆಯೋಜಿಸಿದ್ದು, ಆಯುರ್ವೇದ, ನೈಸರ್ಗಿಕ ಚಿಕಿತ್ಸೆ ಆರ್ಗಾನಿಕ್ ವಸ್ತುಗಳು, ಪುಸ್ತಕ ಸೇರಿದಂತೆ ಅನೇಕ ವಿಚಾರಗಳನ್ನು ತಿಳಿದುಕೊಳ್ಳಲು ಸಹಕಾರಿಯಾಗಿದೆ. ಡಿ.18ರಂದು ಮಧ್ಯಾಹ್ನ 12.30ಕ್ಕೆ ವಸ್ತುಪ್ರದರ್ಶನಕ್ಕೆ ಟಿಐಇ ಸಂಸ್ಥೆಯ ಅಧ್ಯಕ್ಷ ಮದನ್ ಪದಕಿ ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಡಿ.18ರಂದು 7 ಗಂಟೆಗೆ ಪ್ರವೀಣ್ ಕುಮಾರ್ ಮತ್ತು ಚಿತ್ಕಲಾ ಸ್ಕೂಲ್ ಆಫ್ ಡ್ಯಾನ್ಸ್ ತಂಡದಿಂದ ಭರತನಾಟ್ಯ ಪ್ರದರ್ಶನ, ಡಿ19ರಂದು ಸಂಜೆ 7 ಗಂಟೆಗೆ ಕೊಳಲು, ಸಿತಾರ್, ತಬಲಾ ವಾದ್ಯಗಳ ಶಾಸ್ತ್ರೀಯ ಸಂಗೀತವನ್ನು ರವಿಶಂಕರ್, ಜುನೈನ್ ಜಾಫರ್ ಖಾನ್ ಮತ್ತು ಗೌರಿಶಂಕರ್ ನಡೆಸಿಕೊಡಲಿದ್ದಾರೆ. ಡಿ.20ರಂದು 7 ಗಂಟೆಗೆ ಮಹೇಶ್ ರಾಘವನ್ ತಂಡದವರು ಕರ್ನಾಟಿಕ್ 2.0 ಸಂಗೀತ ಕಾರ್ಯಕ್ರಮ ಪ್ರಸ್ತುತ ಪಡಿಸಲಿದ್ದಾರೆ ಎಂದರು.

ಡಿ.21 ರಂದು ಮಧ್ಯಾಹ್ನ 12.45ಕ್ಕೆ ಸಮಾರೋಪ ಸಮಾರಂಭ ನಡೆಯಲಿದ್ದು, ಸಂಸದ ಯದುವೀರ್ ಕೃಷ್ಣದತ್ತ ಒಡೆಯರ್, ಇಂಡಿಯಾ ಸಂಸ್ಥಾಪಕ ಹರಿ ಮರಲಾಮನಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ತಿಳಿಸಿದರು.

ವಸ್ತುಪ್ರದರ್ಶನ ವೀಕ್ಷಿಸಲು ಉಚಿತವಿದ್ದು, ಉತ್ಸವದಲ್ಲಿ ಪಾಲ್ಗೊಳ್ಳಲು ಪ್ರತ್ಯೇಕ ಶುಲ್ಕ ನಿಗದಿ ಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ www.namaste@mysuruyogautsava.com, 8431570343 ಸಂಪರ್ಕಿಸಿ ಎಂದರು.

ಸುದ್ದಿಗೋಷ್ಠಿಯಲ್ಲಿ ಪದ್ಮಾವತಿ ಭಟ್, ದತ್ತಪ್ರಸಾದ್, ಲಕ್ಷ್ಮೀನಾರಾಯಣ ಶೆಣೈ, ಬಿ.ಪಿ.ಮೂರ್ತಿ ಉಪಸ್ಥಿತರಿದ್ದರು.

ಬಸವಯ್ಯ ನಿಧನ



ಮೈಸೂರು, ಡಿ.15– ಮೂಲತಃ ಮೈಸೂರಿನ ಕೆ.ಜಿ.ಕೊಪ್ಪಲು ನಿವಾಸಿ, ಹಾಲಿ ಕುವೆಂಪು ನಗರ ವಾಸಿ, ಮೈಸೂರು ವಿಶ್ವವಿದ್ಯಾಲಯದ ನಿವೃತ್ತ ನೌಕರ ಬಸವಯ್ಯ(78) ಸೋಮವಾರ ಬೆಳಗ್ಗೆ ನಿಧನರಾದರು.

ಇವರು ಕುವೆಂಪುನಗರ ಅನಿಕೇತನ ನಿವಾಸಿಗಳ ಸಂಘದ ಮಾಜಿ ಉಪಾಧ್ಯಕ್ಷರೂ ಆಗಿದ್ದರು. ಮೃತರ ಅಂತ್ಯಕ್ರಿಯೆ ಇಂದು ಮಧ್ಯಾಹ್ನ ಕುವೆಂಪುನಗರದ ಕನ್ನೇಗೌಡರ ರುದ್ರಭೂಮಿಯಲ್ಲಿ ನೆರವೇರಿತು. ಮೃತರು ಪತ್ನಿ, ಮಕ್ಕಳು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಮೃತರ ನಿಧನಕ್ಕೆ ಕುವೆಂಪುನಗರ ಅನಿಕೇತನ ನಿವಾಸಿಗಳ ಸಂಘದ ಮಾಜಿ ಕಾರ್ಯದರ್ಶಿ ವಿಕ್ರಾಂತ್ ಪಿ.ದೇವೇಗೌಡ ತೀವ್ರ ಸಂತಾಪ ಸೂಚಿಸಿದ್ದಾರೆ.


ಕೇಂದ್ರ ಸಚಿವರು ಹಾಗೂ ಮಾಜಿ ಮುಖ್ಯಮಂತ್ರಿಗಳಾದ
ಶ್ರೀ ಹೆಚ್.ಡಿ ಕುಮಾರಸ್ವಾಮಿ ರವರಿಗೆ
ಜನ್ಮದಿನದ ಶುಭಾಶಯಗಳು
ಎಲ್. ನಾಗೇಂದ್ರ
ಮಾಜಿ ಶಾಸಕರು, ಚಾಮರಾಜ ಕ್ಷೇತ್ರ
ಮೈಸೂರು ನಗರ ಬಿ.ಜೆ.ಪಿ ಅಧ್ಯಕ್ಷರು
ಶುಭಕೋರುವವರು : ಬಿ.ಜೆ.ಪಿ ಹಾಗೂ ಜೆ.ಡಿ.ಎಸ್ (ಎನ್.ಡಿ.ಎ) ಮುಖಂಡರು, ಕಾರ್ಯಕರ್ತರು ಚಾಮರಾಜ ವಿಧಾನಸಭಾ ಕ್ಷೇತ್ರ ಮೈಸೂರು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

'ಮಿತ್ರ'ನ ಮಿಣುಕು | ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 46 | ಡಿಸೆಂಬರ್ 16 ಮಂಗಳವಾರ 2025

ಪುಟಗಳು: IV

ಕಲುಷಿತವಾಗಿದ್ದಾಳೆ ಕಾವೇರಿ; ಕಾಪಾಡಿ... ಕಾಪಾಡಿ...!

● 10 ತಜ್ಞರ ಸಮಿತಿಯಿಂದ ಅಧ್ಯಯನ ● ಕಾವೇರಿ ಹರಿಯುವ ಪ್ರತಿ ಸ್ಥಳಕ್ಕೂ ಖುದ್ದು ಭೇಟಿ ● ಎಲ್ಲೆಲ್ಲಿ ಕಲುಷಿತಗೊಳ್ಳುತ್ತಿದೆ ಎಂಬ ಬಗ್ಗೆ ಮಾಹಿತಿ ಸಂಗ್ರಹ ● 150 ಪುಟಗಳ ವರದಿಯಲ್ಲಿ ಸಮಗ್ರ ವಿವರ



ಮೈಸೂರು, ಡಿ.15(ಬಿಎಲ್‌ಯು)– ಕೊಡಗಿನ ತಲಕಾವೇರಿಯಲ್ಲಿ ಉಗಮಿಸಿ, ತಮಿಳುನಾಡು ಮೂಲಕ ಸಮುದ್ರ ಸೇರುವ ಕಾವೇರಿ ನದಿ ಶುದ್ಧ ಹಾಗೂ ಪವಿತ್ರವಾಗಿತ್ತು. ಆದರೆ, ಇತ್ತೀಚಿನ ವರ್ಷದಲ್ಲಿ ಒಳಚರಂಡಿ ನೀರು, ಕೈಗಾರಿಕಾ ತ್ಯಾಜ್ಯ, ವಿಷಕಾರಿ ವಸ್ತುಗಳು, ರಾಸಾಯನಿಕ ಪದಾರ್ಥಗಳು ಸೇರಿ ಕಲುಷಿತಗೊಂಡಿದೆ. ಕಾವೇರಿ ನದಿಯನ್ನು ಸ್ವಚ್ಛ ಮಾಡಲು ರಾಜ್ಯ ಸರ್ಕಾರ ದಿಟ್ಟ ಹೆಜ್ಜೆ ಇಟ್ಟಿದೆ. ಕಾವೇರಿ ನದಿಗೆ ಎಲ್ಲೆಲ್ಲಿ ಕಲುಷಿತ ನೀರು ಸೇರುತ್ತಿದೆ ಎಂಬ ಬಗ್ಗೆ ಅಧ್ಯಯನ ಮಾಡಲು ಸರ್ಕಾರ ತಜ್ಞರ ಸಮಿತಿಯೊಂದನ್ನು ರಚನೆ ಮಾಡಿತ್ತು. ಕಾವೇರಿ ನದಿ ಹರಿಯುವ ಮಾರ್ಗದಲ್ಲಿ ಖುದ್ದು ಭೇಟಿ ನೀಡಿರುವ ತಜ್ಞರ ಸಮಿತಿ ಅಧ್ಯಯನ ನಡೆಸಿ ಸರ್ಕಾರಕ್ಕೆ ಸಮಗ್ರ ವರದಿ ಸಲ್ಲಿಸಿದೆ.

ಕಲುಷಿತಗೊಂಡಿರುವ ಕಾವೇರಿ ನದಿ ನೀರಿನ ಮಾದರಿಯನ್ನು ಪ್ರಯೋಗಾಲಯದಲ್ಲಿ ಪರೀಕ್ಷೆಗೊಳಪಡಿಸಿದಾಗ ಕಾವೇರಿ ನದಿ ನೀರು ಕುಡಿಯಲು ಸೂಕ್ತವಲ್ಲ, ಸುರಕ್ಷಿತವಲ್ಲ ಎಂಬುದು ಸಾಬೀತಾಗಿದೆ.

ನದಿ ನೀರಿನ ಗುಣಮಟ್ಟದ ಆಧಾರದ ಮೇಲೆ ಎ,ಬಿ ಮತ್ತು ಸಿ ಎಂದು ವರ್ಗೀಕರಣ ಮಾಡಲಾಗಿದೆ. ಕಾವೇರಿ ನದಿ ನೀರಿನಲ್ಲಿ ಆಮ್ಲಜನಕದ ಕೊರತೆ, ಬಯೋ ಕೆಮಿಕಲ್ ಆಕ್ಸಿಜನ್, ಕೋಲಿಫಾರ್ಮ್ ಬ್ಯಾಕ್ಟೀರಿಯಾ, ಫೆಕಲ್ ಕೋಲಿಫಾರ್ಮ್ ಬ್ಯಾಕ್ಟೀರಿಯಾ ಹೆಚ್ಚಾಗಿವೆ. ಈ ಕಾರಣದಿಂದ ಕಾವೇರಿ ನದಿ ನೀರನ್ನು ಸಿ ದರ್ಜೆಯ ನದಿ ನೀರೆಂದು ಪರಿಗಣಿಸಿದ್ದು, ಕುಡಿಯಲು ಯೋಗ್ಯವಲ್ಲ ಎಂದು ನಿರ್ಧರಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಮೈಸೂರಿನ ವಾಣಿ ವಿಲಾಸ ನೀರು ಸರಬರಾಜು ಕೇಂದ್ರ ಹಾಗೂ ಬೆಂಗಳೂರು ಒಳ ಚರಂಡಿ ಮಂಡಳಿಯವರು ನದಿಯಿಂದ ಕಾವೇರಿ ನದಿ ನೀರು ಪಂಪ್‌ಹೌಸ್‌ಗೆ ಪೂರೈಕೆಯಾದಾಗ ಅಲ್ಲಿ ಕ್ಲೋರಿನ್ ರಾಸಾಯನಿಕ ಅಂಶವನ್ನು ಬೆರೆಸಲಾಗುತ್ತದೆ. ಈ ರಾಸಾಯನಿಕ ನೀರಿನಲ್ಲಿರುವ ಬ್ಯಾಕ್ಟೀರಿಯಾವನ್ನು ಕೊಲ್ಲುತ್ತದೆ. ಹೀಗೆ ಸಂಸ್ಕರಿಸದ ನೀರನ್ನು ಗ್ರಾಹಕರಿಗೆ ಸರಬರಾಜು ಮಾಡಲಾಗುತ್ತಿದೆ.

ಆದರೆ ಕಾವೇರಿ ನದಿ ಹಾದು ಹೋಗುವ ಸುತ್ತಮುತ್ತಲಿನ ಸಾವಿರಾರು ಗ್ರಾಮಗಳಿಗೆ ಕಲುಷಿತಗೊಂಡಿರುವ ನೀರನ್ನೆ ಸರಬರಾಜು ಮಾಡುತ್ತಿರುವ ಆತಂಕಕಾರಿ ವಿಚಾರ ಬಯಲಾಗಿದೆ. ಈ ಗ್ರಾಮಗಳಿಗೆ ನದಿ ನೀರನ್ನು ಸಂಸ್ಕರಿಸಿ ಬಿಡುತ್ತಿಲ್ಲ. ಇದರಿಂದ ಕಲುಷಿತಗೊಂಡಿರುವ ನೀರು ಸೇವಿಸಿ ಹಲವರು ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ಕಾವೇರಿ ನದಿಗೆ ಸೇರುವ ಒಳಚರಂಡಿ ನೀರು, ಕಲುಷಿತ ನೀರು, ಕೈಗಾರಿಕಾ ತ್ಯಾಜ್ಯ, ವಿಷಕಾರಿ ವಸ್ತುಗಳು, ರಾಸಾಯನಿಕ ಅಂಶಗಳನ್ನು ಸೇರುವುದನ್ನು ತಡೆಯಲು ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಚೀಫ್ ಇಂಜಿನಿಯರ್ ನಿರಂಜನ್ ನೇತೃತ್ವದಲ್ಲಿ ರಾಜ್ಯ ಸರ್ಕಾರ 10 ತಜ್ಞರ ಸಮಿತಿ ರಚನೆ ಮಾಡಿತ್ತು.

ಈ ಸಮಿತಿಯಲ್ಲಿ ಕಾವೇರಿ ನೀರಾವರಿ ನಿಗಮದ ಸೂಪರಿಂಟೆಂಡೆಂಟ್ ಇಂಜಿನಿಯರ್ ಸೇರಿದಂತೆ 9 ನೀರಾವರಿ ತಜ್ಞರು ಇದ್ದಾರೆ. ಸಮಿತಿಯಲ್ಲಿರುವ 10 ಮಂದಿ ನೀರಿನ ಬಗ್ಗೆ ವೈಜ್ಞಾನಿಕ ಹಾಗೂ ತಾಂತ್ರಿಕವಾಗಿ ಪರಿಣಿತಿ ಹೊಂದಿದವರಾಗಿದ್ದಾರೆ.

ಸಮಿತಿಯ 10 ಮಂದಿ ತಜ್ಞರು ತಲಕಾವೇರಿಯಿಂದ ಕರ್ನಾಟಕ ಹಾಗೂ ತಮಿಳುನಾಡು ಗಡಿಭಾಗದ ಬಿಳಿಗುಂಡ್ಲು ಜಲ ಮಾಪನ ಕೇಂದ್ರದವರೆಗೆ ಖುದ್ದು ಭೇಟಿ ನೀಡಿ ಎಲ್ಲೆಲ್ಲಿ ಕಾವೇರಿ ನದಿಗೆ ಒಳ ಚರಂಡಿ ನೀರು ಹಾಗೂ ಕೈಗಾರಿಕಾ ತ್ಯಾಜ್ಯ ಸೇರುತ್ತಿದೆ ಎಂದು ಪರಿಶೀಲನೆ ನಡೆಸಿದ್ದಾರೆ. ಸಮಿತಿಯ ಎಲ್ಲಾ ಸದಸ್ಯರು ಸಮಾಲೋಚನೆ ನಡೆಸಿ, ಒಮ್ಮತದಿಂದ 150 ಪುಟಗಳ ಸಮಗ್ರ ವರದಿ ತಯಾರಿಸಿದ್ದಾರೆ. ಈ ವರದಿಯನ್ನು ಜಲಸಂಪನ್ಮೂಲ ಇಲಾಖೆಗೆ ಸಲ್ಲಿಸಿದ್ದಾರೆ. ಅಲ್ಲದೆ ಈ ವಿಚಾರವನ್ನು ಜಲ ಸಂಪನ್ಮೂಲ ಖಾತೆ ಹೊಂದಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗಮನಕ್ಕೂ ತಂದಿದ್ದಾರೆ.

ಕಾವೇರಿ ಕಾಪಾಡಲು ಸಿಎಂ, ಡಿಸಿಎಂ ಮೊರೆ

ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಚೀಫ್ ಇಂಜಿನಿಯರ್ ನೇತೃತ್ವದ ಸಮಿತಿ ಸರ್ಕಾರಕ್ಕೆ ವರದಿ ನೀಡಿದ್ದು, ಸರ್ಕಾರ ನದಿ ಕಲುಷಿತ ಆಗದಂತೆ ಯಾವ ಕ್ರಮ ಕೈಗೊಳ್ಳುತ್ತದೆಯೋ ಕಾದು ನೋಡಬೇಕಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರಿಗೂ ಲಿಖಿತ ಮನವಿ ಸಲ್ಲಿಸಿದ್ದೆ. ಕಾವೇರಿಯನ್ನು ರಕ್ಷಿಸಲು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದೆ. ತಜ್ಞರು ಈಗ ವರದಿ ಸಲ್ಲಿಸಿದ್ದು, ಸರ್ಕಾರ ಕೂಡಲೇ ಕ್ರಮ ಕೈಗೊಂಡು ಕಾವೇರಿ ಕಾಪಾಡುವಂತೆ ಆಗ್ರಹಿಸಿದ್ದೇನೆ. ಈ ಸಂಬಂಧ ಸರ್ಕಾರದ ನಿರ್ಧಾರವನ್ನು ನಿರೀಕ್ಷಿಸುತ್ತಿದ್ದೇನೆ. ವಿಳಂಬವಾದರೆ ಮತ್ತೊಮ್ಮೆ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿ ಗಮನ ಸೆಳೆಯುತ್ತೇನೆ.



– ದಿನೇಶ್ ಗೂಳಿಗೌಡ, ವಿಧಾನ ಪರಿಷತ್ ಸದಸ್ಯ, ಮಂಡ್ಯ



ಕಾವೇರಿ ಉಗಮ ಸ್ಥಾನದಿಂದ ಸಮುದ್ರ ಸೇರುವವರೆಗೆ ಕೊಳಕುಮಯ!


ಉಗಮ ಸ್ಥಾನ ತಲಕಾವೇರಿಯಿಂದಲೇ ಕಾವೇರಿ ಒಡಲು ಸೇರುತ್ತಿದೆ ಕಸ. ಜೀವನದಿ ಸಮುದ್ರ ಸೇರುವವರೆಗೆ ಸುಮಾರು 800 ಕಿಲೋ ಮೀಟರ್‌ವರೆಗೆ ಹಂತ ಹಂತವಾಗಿ ಕಾವೇರಿ ಕಲುಷಿತಗೊಳ್ಳುತ್ತಿದೆ. ಭಾರತದ ಪ್ರಸಿದ್ಧ 7 ನದಿಗಳಲ್ಲಿ ಕಾವೇರಿ ಕೂಡ ಒಂದಾಗಿದೆ. ಇದನ್ನು ದಕ್ಷಿಣ ಭಾರತದ ಗಂಗೆ ಎಂದೇ ಪರಿಗಣಿಸಲಾಗುತ್ತದೆ. ಕಾವೇರಿ ನದಿಯಲ್ಲಿ ಸ್ನಾನ ಮಾಡಿದರೆ ಪುಣ್ಯ ಲಭಿಸುತ್ತದೆ ಎಂದು ಪೌರಾಣಿಕ ಹಿನ್ನೆಲೆ ಸಾರಿ ಸಾರಿ ಹೇಳುತ್ತದೆ. ಇಂತಹ ಪವಿತ್ರ ನದಿ ತಲಕಾವೇರಿಯಿಂದ ಸಮುದ್ರ ಸೇರುವವರೆಗೆ ಹಲವು ಹಂತದಲ್ಲಿ ಕಲುಷಿತಗೊಳ್ಳುತ್ತಿದೆ.

ಪಶ್ಚಿಮ ಘಟ್ಟಗಳ ಬ್ರಹ್ಮಗಿರಿ ಪರ್ವತ ಶ್ರೇಣಿಯಲ್ಲಿ ಉಗಮಿಸುವ ಕಾವೇರಿ ತಲಕಾವೇರಿಯ ಗುಪ್ತಗಾಮಿನಿಯಾಗಿ ಹರಿಯಲು ಆರಂಭಿಸುತ್ತದೆ. ಕನಕಾ ನದಿ ಭಾಗಮಂಡಲದಲ್ಲಿ ಕಾವೇರಿಯನ್ನು ಸೇರುತ್ತದೆ. ತರುವಾಯ ಸಿದ್ದಾಪುರ ದಾಟಿ ಶ್ರೀರಂಗ ಸಮುದ್ರಕ್ಕೆ ಬಂದಾಗ ಚಿಕೋಲಿ ಎಂಬ ಇನ್ನೊಂದು ಹೊಳೆ ಕಾವೇರಿಯನ್ನು ಕೂಡಿಕೊಳ್ಳುತ್ತದೆ.

ನಂತರ ಕುಶಾಲನಗರ, ರಾಮನಾಥಪುರ, ಬಸವಾಪಟ್ಟಣ, ರುದ್ರಪಟ್ಟಣ, ಸಾಲಿಗ್ರಾಮ, ಚುಂಚನಕಟ್ಟೆ, ಕೃಷ್ಣರಾಜ ಸಾಗರ ದಾಟಿ, ರಂಗನತಿಟ್ಟು ಪಕ್ಷಿಧಾಮ ಸೇರುತ್ತದೆ. ಅಲ್ಲಿ ಕವಲೊಡೆದು ಪಶ್ಚಿಮವಾಹಿನಿಯನ್ನು ಆವರಿಸಿಕೊಳ್ಳುತ್ತದೆ. ಶ್ರೀರಂಗಪಟ್ಟಣ ಸುತ್ತುವರಿದು ಲೋಕಪಾವನಿ ನದಿಯಿಂದ ಕೂಡಿಕೊಂಡು ತಿರುಮಕೂಡಲ ನರಸೀಪುರದಲ್ಲಿ ಕಪಿಲಾ ಹಾಗೂ ಗುಪ್ತಗಾಮಿನಿ ಸ್ಪಟಿಕ ಸರೋವರ ಸೇರುತ್ತದೆ.

ನಂತರ ಸತ್ಯಗಾಲದಲ್ಲಿ ಕವಲೊಡೆದು ಶಿವನ ಸಮುದ್ರದ ಗಗನಚುಕ್ಕಿ, ಭರಚುಕ್ಕಿಯಲ್ಲಿ ಧುಮ್ಮಿಕ್ಕುವ ಕಾವೇರಿ ಮೇಕೆದಾಟು ಮೂಲಕ ಮುಂದೆ ಸಾಗುತ್ತದೆ. ಅಲ್ಲಿ ಅರ್ಕಾವತಿ, ಕಾವೇರಿ ಸೇರುತ್ತದೆ. ಹೀಗೆ ಕರ್ನಾಟಕದ ಕೊಡಗು, ಹಾಸನ, ಮೈಸೂರು, ಮಂಡ್ಯ, ಬೆಂಗಳೂರು ಜಿಲ್ಲೆಯ ಮೂಲಕ ಸಾಗುವ ಕಾವೇರಿ ಹೊಗೇನಕಲ್ ಮೂಲಕ ಕರ್ನಾಟಕದ ಗಡಿ ಬಿಳಿಗುಂಡ್ಲು ಜಲ ಮಾಪನ ಕೇಂದ್ರದ ಮೂಲಕ ತಮಿಳುನಾಡು ಪ್ರವೇಶಿಸುತ್ತದೆ. ಮೆಟ್ಟೂರು ಮೂಲಕ ಹರಿಯುವ ಕಾವೇರಿ ನದಿ ಅಂತಿಮವಾಗಿ ತಮಿಳುನಾಡಿನ ಪೂಂಪುಹಾರ್ ಎಂಬಲ್ಲಿ ಬಂಗಾಳ ಕೊಲ್ಲಿ ಸೇರುತ್ತದೆ.

ಮಾನವ–ವನ್ಯಜೀವಿಗಳ ಸಂಘರ್ಷ: ಚಾಮರಾಜನಗರದಲ್ಲಿ 40 ಮಂದಿ ಬಲಿ



ಮೈಸೂರು, ಡಿ.15(ಬಿಎಲ್‌ಯು)– ಮಾನವ–ವನ್ಯಜೀವಿಗಳ ಸಂಘರ್ಷದಲ್ಲಿ ಬಲಿಯಾದವರಲ್ಲಿ ಚಾಮರಾಜನಗರ ಮೊದಲನೆ ಸ್ಥಾನದಲ್ಲಿದೆ.

ಚಾಮರಾಜನಗರದಲ್ಲಿ 2022–23 ರಿಂದ 2025–26 ರವರೆಗೆ ವನ್ಯಜೀವಿಗಳ ದಾಳಿಯಿಂದ 40 ಮಂದಿ ಮೃತಪಟ್ಟಿದ್ದಾರೆ. ಕೊಡಗು 32, ಹಾಸನ 19, ಮೈಸೂರು 19 ಹಾಗೂ ಮಂಡ್ಯ ಜಿಲ್ಲೆಯಲ್ಲಿ 19 ಮಂದಿ ಬಲಿಯಾಗಿದ್ದಾರೆ.

ವಿಧಾನಸಭಾ ಅಧಿವೇಶನದಲ್ಲಿ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು ಮಾನವ ಪ್ರಾಣ ಹಾನಿಯ ಬಗ್ಗೆ ಅಂಕಿ ಅಂಶ ಸಹಿತ ವಿವರ ನೀಡಿದ್ದಾರೆ.



ಒಟ್ಟಾರೆ ಇಡೀ ಕರ್ನಾಟಕದಲ್ಲಿ ನಾಲ್ಕು ವರ್ಷದ ಅವಧಿಯಲ್ಲಿ ವನ್ಯಜೀವಿಗಳ ದಾಳಿಯಿಂದ 203 ಜನರು ಮೃತಪಟ್ಟಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಆನೆ ಸೇರಿದಂತೆ ಇತರೆ ಪ್ರಾಣಿಗಳು ಒಂದೆಡೆಯಿಂದ ಮತ್ತೊಂದೆಡೆಗೆ ಅಡೆತಡೆ ಇಲ್ಲದೆ ಸಂಚರಿಸಲು ಅನುಕೂಲವಾಗುವಂತೆ ವನ್ಯಜೀವಿ ಕಾರಿಡಾರ್ ಯೋಜನೆ ಅನುಷ್ಠಾನ ಮಾಡಬೇಕಿದೆ. ಇದಕ್ಕಾಗಿ ವನ್ಯಜೀವಿ ಕಾರಿಡಾರ್ ನೀತಿ ರೂಪಿಸಲು ಸರ್ಕಾರ ಚಿಂತನೆ ನಡೆಸಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

ರಾಜ್ಯದಲ್ಲಿ 1435 ಪ್ರೌಢಶಾಲೆ, 264 ಕಾಲೇಜುಗಳ ಆಸ್ತಿ ನೋಂದಣಿ ಆಗಿಲ್ಲ



ವಿಧಾನಪರಿಷತ್ ಸದಸ್ಯ ಕೆ. ವಿವೇಕಾನಂದ ಪ್ರಶ್ನೆಗೆ ಶಿಕ್ಷಣ ಸಚಿವರ ಉತ್ತರ

ಮೈಸೂರು, ಡಿ.15(ಜಿಎ)–ರಾಜ್ಯದಲ್ಲಿ ಸರ್ಕಾರಿ ಶಾಲಾ–ಕಾಲೇಜುಗಳು ಇರುವ ಕಟ್ಟಡಗಳ ಆಸ್ತಿಗಳಲ್ಲಿ 1435 ಪ್ರೌಢ ಶಾಲೆ ಮತ್ತು 264 ಕಾಲೇಜುಗಳ ಆಸ್ತಿ ನೊಂದಣಿ ಆಗಿಲ್ಲ. ಸರ್ಕಾರಿ ಶಾಲೆ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳ ಆಸ್ತಿಗಳ ಸಂರಕ್ಷಣಾ ಅಭಿಯಾನ್ ನಡೆಸಲಾಗುತ್ತಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಎಸ್.ಮಧು ಬಂಗಾರಪ್ಪ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ವಿಧಾನ ಪರಿಷತ್ ಸದಸ್ಯ ಕೆ.ವಿವೇಕಾನಂದ ವಿಧಾನಪರಿಷತ್ ಕಲಾಪದಲ್ಲಿ ಸರ್ಕಾರಿ ಶಾಲಾ–ಕಾಲೇಜುಗಳು ಇರುವ ಕಟ್ಟಡಗಳ ಆಸ್ತಿಗಳು ಈ ಶೈಕ್ಷಣಿಕ ಸಂಸ್ಥೆಗಳ ಹೆಸರಿಗೆ ಖಾತೆ ಆಗಿದೆಯೇ ಹಾಗೂ ಇನ್ನೂ ಖಾತೆಯಾಗಬೇಕಾಗಿರುವ ಶಾಲಾ–ಕಾಲೇಜು ಸಂಖ್ಯೆ ಬಗ್ಗೆ ಕೇಳಿದ ಪ್ರಶ್ನೆಗೆ ಸಚಿವರು ಉತ್ತರಿಸಿದರು.

ರಾಜ್ಯದಲ್ಲಿ 4,872 ಪ್ರೌಢಶಾಲೆಗಳಿವೆ. ಅವುಗಳಲ್ಲಿ 3,437 ಶಾಲೆಗಳ ಖಾತೆ ಆಗಿದ್ದು, 1,435 ಶಾಲೆಗಳ ಖಾತೆ ಆಗಬೇಕಿದೆ. ಹಾಗೇ 1,319 ಪದವಿಪೂರ್ವ ಕಾಲೇಜುಗಳಲ್ಲಿ 1055 ಕಾಲೇಜುಗಳ ಖಾತೆ ಪೂರ್ಣಗೊಂಡಿದೆ. 264 ಕಾಲೇಜುಗಳಿಗೆ ಖಾತೆ ಮಾಡಬೇಕಿದೆ ಎಂದು ಮಾಹಿತಿ ನೀಡಿದ್ದಾರೆ.


ಅವುಗಳಲ್ಲಿ ಮೈಸೂರು ಜಿಲ್ಲೆಯಲ್ಲಿ 233 ಪ್ರೌಢಶಾಲೆಗಳಿವೆ. ಅವುಗಳಲ್ಲಿ ಕಳೆದ ವರ್ಷ 186 ಶಾಲೆ ಮಾಡಿದ್ದು, 188 ಶಾಲೆಗಳಿಗೆ ಖಾತೆ ಮಾಡಲಾಗಿದೆ. 45 ಶಾಲೆಗಳ ಆಸ್ತಿ ನೊಂದಣಿ ಮಾಡಬೇಕು. ಮಂಡ್ಯ ಜಿಲ್ಲೆಯಲ್ಲಿ 215 ಶಾಲೆಗಳಿವೆ. ಅವುಗಳಲ್ಲಿ 54 ಶಾಲೆಗಳನ್ನು ಖಾತೆ ಮಾಡಲಾಗಿದೆ. 161 ಶಾಲೆ ಖಾತೆ ಮಾಡಬೇಕಿದೆ. ಚಾಮರಾಜನಗರ ಜಿಲ್ಲೆಯಲ್ಲಿ 86 ಶಾಲೆಗಳಿದ್ದು, ಅವುಗಳಲ್ಲಿ 42 ಶಾಲೆಗಳ ಖಾತಾ ನೊಂದಣಿ ಮಾಡಲಾಗಿದೆ. 44 ಶಾಲೆಗಳ ಖಾತೆ ಮಾಡಬೇಕಿದೆ. ಹಾಸನ ಜಿಲ್ಲೆಯಲ್ಲಿ 241 ಶಾಲೆಗಳಿದ್ದು, ಈವರೆಗೂ 179 ಶಾಲೆಗಳ ಖಾತಾ ನೊಂದಣಿ ಮಾಡಲಾಗಿದ್ದು, 62 ಶಾಲೆಗಳ ನೊಂದಣಿ ಕಾರ್ಯ ಮಾಡಬೇಕಿದೆ ಎಂದು ಉತ್ತರಿಸಿದ್ದಾರೆ.

ಸರ್ಕಾರಿ ಶಾಲಾ–ಕಾಲೇಜುಗಳ ಆಸ್ತಿಯನ್ನು ರಕ್ಷಣೆ ಮಾಡಿಕೊಳ್ಳಲು ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಇಲಾಖೆ ಮತ್ತು ಪೌರಾಡಳಿತ ಇಲಾಖೆಯ ಒಟ್ಟಾಗಿ ಶಾಲಾ ಶಿಕ್ಷಣ ಇಲಾಖೆಯ ಜೊತೆಗೂಡಿ ಸಮಸ್ಯೆಯನ್ನು ಬಗೆಹರಿಸಲು ಸಮನ್ವಯ ಸಮಿತಿಯನ್ನು ರಚನೆ ಮಾಡಿ ಶಾಲಾ–ಕಾಲೇಜುಗಳ ಆಸ್ತಿಯನ್ನು ಭದ್ರಪಡಿಸಲು ಸರ್ಕಾರ ಚಿಂತನೆ ನಡೆಸಿದೆಯೇ ಎಂದು ವಿವೇಕಾನಂದ ಪ್ರಶ್ನಿಸಿದ್ದಾರೆ.


ಅದಕ್ಕೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರು, ಸರ್ಕಾರದ ಶಾಲಾ–ಕಾಲೇಜುಗಳ ಆಸ್ತಿಯನ್ನು ರಕ್ಷಣೆ ಮಾಡಿಕೊಳ್ಳಲು ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಇಲಾಖೆ ಮತ್ತು ಪೌರಾಡಳಿತ ಇಲಾಖೆಯ ಒಟ್ಟಾಗಿ ಶಾಲಾ ಶಿಕ್ಷಣ ಇಲಾಖೆಯ ಜೊತೆಗೂಡಿ ಸಮಸ್ಯೆಯನ್ನು ಬಗೆಹರಿಸಲು 2022–23ನೇ ಸಾಲಿನಿಂದ ಪ್ರತಿವರ್ಷ 'ಸರ್ಕಾರಿ ಶಾಲೆ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳ ಆಸ್ತಿಗಳ ಸಂರಕ್ಷಣಾ ಅಭಿಯಾನ್' ನಡೆಸಲಾಗುತ್ತಿದೆ ಎಂದು ಸದನಕ್ಕೆ ಉತ್ತರಿಸಿದ್ದಾರೆ.

ಶಾಶ್ವತ ವಿಶಾಲ ನೆಲೆಯಲ್ಲಿ ತೇಲಿ ಬರುತ್ತಿದೆ ಸಂಗೀತ–ನಾದಮಯ!

ಸಂಗೀತ ವಿಶ್ವವಿದ್ಯಾನಿಲಯಕ್ಕೆ ಅಂತೂ ಸ್ವಂತ ನೆಲೆ ಸಿಕ್ತು



ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯಕ್ಕೆ 16 ವರ್ಷಗಳ ನಂತರ ಸ್ವಂತ ಸ್ಥಳ ನಿಗದಿಯಾಗಿದೆ. ಹೊಸ ಕ್ಯಾಂಪಸ್‌ನಲ್ಲಿ ಇನ್ನೂ ಮೂರು ತಿಂಗಳಲ್ಲಿ ಹಾಸ್ಟೆಲ್ ನಿರ್ಮಾಣವೂ ಪೂರ್ಣಗೊಳ್ಳಲಿದೆ. ಈಗಾಗಲೇ ಗುರುಕುಲ ಮಾದರಿಯಲ್ಲಿ ತರಗತಿಗಳನ್ನು ಆರಂಭಿಸಲಾಗಿದೆ. ಸರ್ಕಾರ ಖಾಯಂ ನೌಕರರನ್ನು ಭರ್ತಿ ಮಾಡಿದರೆ ಯುಜಿಸಿಯಿಂದ 12ಬಿ ಅರ್ಹತೆ ಜೊತೆಗೆ ಎಲ್ಲಾ ರೀತಿಯ ಅನುದಾನಗಳನ್ನು ಪಡೆದುಕೊಳ್ಳಲು ಸಾಧ್ಯವಾಗಲಿದೆ. ಜೊತೆಗೆ ನ್ಯಾಕ್ ಮತ್ತು ಎನ್‌ಐಆರ್‌ಎಫ್ ರ್ಯಾಂಕಿಂಗ್ ಪಡೆಯಲಿದೆ.



– ಪ್ರೊ.ನಾಗೇಶ್ ವಿ.ಬೆಟ್ಟಕೋಟೆ, ಕುಲಪತಿ, ಸಂಗೀತ ವಿವಿ

ಮೈಸೂರು, ಡಿ.15(ಎಂಕೆ)– ಸಾಂಸ್ಕೃತಿಕ ನಗರಿ ಮೈಸೂರಲ್ಲಿ ಸ್ವಂತ ಸೂರಿಲ್ಲದೆ ನಲುಗಿದ್ದ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯ ವಿದ್ಯಾರ್ಥಿಗಳಿಂದು ವಿಶಾಲ ಹಾಗೂ ಶಾಶ್ವತ ನೆಲೆಯಲ್ಲಿ ಸಂಗೀತ ಕಲಾ ಪ್ರಕಾರಗಳ ಅಭ್ಯಾಸ ಆರಂಭಿಸಿದ್ದಾರೆ...!

ಮೈಸೂರಿನ ಲಕ್ಷ್ಮಿಪುರಂನಲ್ಲಿ 2008 ರಂದು ಸ್ಥಾಪನೆಯಾದ ಸಂಗೀತ ವಿವಿಗೆ ಕೊನೆಗೂ ಮೈಸೂರು ಹೊರವಲಯದ ನಾಡನಹಳ್ಳಿ(ಸರ್ದಾರ್ ವಲ್ಲಭ ಬಾಯ್ ಪಟೇಲ್ ನಗರ)ಯಲ್ಲಿ 5.5 ಎಕರೆ ವಿಸ್ತೀರ್ಣದ ವಿಶಾಲವಾದ, ಅತ್ಯಾಕರ್ಷಕ ಕ್ಯಾಂಪಸ್ ದೊರೆತಿದೆ. ಕುಟೀರಗಳ ಮಾದರಿಯಲ್ಲಿ ತರಗತಿ ಕೊಠಡಿಗಳು, ಗ್ರಂಥಾಲಯ, ಆಡಳಿತ ಕಚೇರಿ ನಿರ್ಮಾಣಗೊಂಡಿದ್ದು, ಶೀಘ್ರದಲ್ಲೇ ಅಧಿಕೃತವಾಗಿ ಉದ್ಘಾಟನೆಗೊಳ್ಳಲಿದೆ.

ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ) ನೀಡಿರುವ ಜಾಗದಲ್ಲಿ 9.75 ಕೋಟಿ ರೂ. ವೆಚ್ಚದಲ್ಲಿ ಕ್ಯಾಂಪಸ್ ನಿರ್ಮಿಸಲಾಗಿದ್ದು, ಸಂಗೀತ, ಭರತನಾಟ್ಯ, ರಂಗಭೂಮಿ ಸೇರಿದಂತೆ ಹಲವು ಕಲಾ ಪ್ರಕಾರಗಳ ಅಭ್ಯಾಸ ಆರಂಭವಾಗಿದೆ. ಪಾರಂಪರಿಕ ಕಟ್ಟಡದಲ್ಲಿದ್ದರೂ ಮಳೆ ಬಂದರೆ ಭಯಪಡುತ್ತಿದ್ದ ಸಂಗೀತ ವಿವಿ ವಿದ್ಯಾರ್ಥಿಗಳಿಂದು ಸುಸಜ್ಜಿತ ನೆಲೆಯಲ್ಲಿ ಕಲಿಕಾಭ್ಯಾಸ ನಡೆಸುತ್ತಿರುವುದನ್ನು ವೀಕ್ಷಣೆ ಮಾಡುವುದೇ ವಿಶೇಷವಾಗಿದೆ.

ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯವು ಪ್ರಸ್ತುತ ಸ್ವಾವಲಂಬಿಯಾಗಿದೆ. ಸಂಗೀತ ಮತ್ತು ಪ್ರದರ್ಶಕ ಕಲೆಗಳ ತರಗತಿಗಳು ಆರಂಭಗೊಂಡಿವೆ. ವಿದ್ಯಾರ್ಥಿಗಳ ಹಾಜರಾತಿ ಹೆಚ್ಚಾಗುತ್ತಿದೆ. ಸೂರಿಲ್ಲದೆ ವಿದ್ಯಾರ್ಥಿಗಳು ಅಲೆದಾಡಿದ ದಿನಗಳು ಮರೆಯುವಂತಾಗಿದೆ. ವಿವಿಯ ಹೊಸ ಆವರಣದಲ್ಲಿ ಸಂಗೀತದ ನಾದ



ಮೊಳಗುತ್ತಿದೆ ಎಂದು ವಿವಿ ಕುಲಪತಿ ಪ್ರೊ.ನಾಗೇಶ್ ವಿ.ಬೆಟ್ಟಕೋಟೆ 'ಮೈಸೂರು ಮಿತ್ರ'ನೊಂದಿಗೆ ಸಂತಸ ಹಂಚಿಕೊಂಡರು.

2025ರ ಫೆಬ್ರವರಿ ತಿಂಗಳಿನಲ್ಲಿ ಹೊಸ ಕ್ಯಾಂಪಸ್ ನಿರ್ಮಾಣಕ್ಕೆ ಅಡಿಪಾಯ ಹಾಕಲಾಯಿತು. ನಿರ್ಮಾಣ ಕಾಮಗಾರಿ ಕೈಗೆತ್ತಿಕೊಂಡ ಕೇಂದ್ರ ಸರ್ಕಾರದ ನ್ಯಾಷನಲ್ ಪ್ರಾಜೆಕ್ಟ್ಸ್ ಕನ್ಸ್ಟ್ರಕ್ಷನ್ ಕಾರ್ಪೋರೇಷನ್ ಲಿಮಿಟೆಡ್(ಎನ್‌ಪಿಸಿಸಿ) ನಿಗದಿತ ಸಮಯಕ್ಕೂ ಮುನ್ನವೇ ಕ್ಯಾಂಪಸ್‌ಗೆ ಒಂದು ರೂಪ ಕೊಟ್ಟಿತು. ಕುಟೀರಗಳು ನಿರ್ಮಾಣವಾದ ಕೂಡಲೇ ಹಂತ ಹಂತವಾಗಿ ತರಗತಿಗಳನ್ನು ಆರಂಭಿಸಲಾಯಿತು. ಆಡಳಿತ ಕಚೇರಿ ನಿರ್ಮಾಣಗೊಂಡಿದ್ದು, ಕೊಠಡಿಗಳ ವಿನ್ಯಾಸ ಕಾರ್ಯ ನಡೆಯುತ್ತಿದೆ. ಇದೆಲ್ಲದರ ಜೊತೆಗೆ ಹಾಸ್ಟೆಲ್ ನಿರ್ಮಾಣ ಕಾಮಗಾರಿಯೂ ಸದ್ಯದಲ್ಲಿಯೇ ಆರಂಭವಾಗಲಿದೆ ಎಂದು ಮಾಹಿತಿ ನೀಡಿದರು.



81 ಸಂಸ್ಥೆಗಳೊಂದಿಗೆ ಒಡಂಬಡಿಕೆ: ಸಂಗೀತ ವಿವಿಯಲ್ಲಿ ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ, ಭರತನಾಟ್ಯ ಮತ್ತು ರಂಗಭೂಮಿ ಕಲೆಗಳಲ್ಲಿ ಬಿಪಿಎ (ಬ್ಯಾಚುಲರ್ ಆಫ್ ಪರ್ಫಾರ್ಮಿಂಗ್ ಆರ್ಟ್ಸ್) ಮತ್ತು ಎಂಪಿಎ(ಮಾಸ್ಟರ್ ಆಫ್ ಪರ್ಫಾರ್ಮಿಂಗ್ ಆರ್ಟ್ಸ್) ಸೇರಿ 155 ವಿದ್ಯಾರ್ಥಿಗಳು ಅಧ್ಯಯನ ನಡೆಸುತ್ತಿದ್ದಾರೆ. ಹಾಗೆಯೇ ಡಿಪ್ಲೊಮಾ ಕೋರ್ಸ್ ಹಾಗೂ ಇನ್ನಿತರೆ ಕೌಶಲ್ಯ ಕಲಿಕೆಗಾಗಿ ಕರ್ನಾಟಕದಾದ್ಯಂತ 81 ಸಂಸ್ಥೆಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ. ಹಾಗೆಯೇ ಕರ್ನಾಟಕ ಮಾಧ್ಯಮಿಕ ಶಿಕ್ಷಣ ಪರೀಕ್ಷಾ ಮಂಡಳಿಯಂತಹ ಸಂಸ್ಥೆಗಳಿಗೆ ಶೇಷ ಪರೀಕ್ಷೆಗಳನ್ನು ನಡೆಸುತ್ತಿದ್ದೇವೆ. ಜೊತೆಗೆ ಐದು ಸಂಸ್ಥೆಗಳಲ್ಲಿ ಸಂಶೋಧನಾ ಕೇಂದ್ರಗಳನ್ನು ಸ್ಥಾಪಿಸಿದ್ದು, ನೆರೆಯ ರಾಜ್ಯಗಳು ಮತ್ತು ವಿದೇಶಗಳಿಂದಲೂ ವಿವಿಯ ಬಗ್ಗೆ ವಿಚಾರಿಸುವವರ ಸಂಖ್ಯೆ ಹೆಚ್ಚಾಗುತ್ತಿದೆ ಎಂದರು.

ವಸ್ತು ಸಂಗ್ರಹಾಲಯವಾಗಿ ಅಭಿವೃದ್ಧಿ: ಲಕ್ಷ್ಮಿಪುರಂನಲ್ಲಿರುವ ಸಂಗೀತ ವಿವಿಯ ಕ್ಯಾಂಪಸ್‌ನಲ್ಲಿ ಪರೀಕ್ಷೆಗಳನ್ನು ನಡೆಸಲಾಗುವುದು. ಆಡಳಿತ ಕಚೇರಿ ಜೊತೆಗೆ ಡಾ.ಗಂಗೂಬಾಯಿ ಹಾನಗಲ್ ಅವರ ಹೆಸರಿನಲ್ಲಿ ವಸ್ತು ಸಂಗ್ರಹಾಲಯವನ್ನಾಗಿಯೂ ಅಭಿವೃದ್ಧಿಪಡಿಸಲಾಗುವುದು ಎಂದು ತಿಳಿಸಿದರು.

ಮಾಲ್ ಆಫ್ ಮೈಸೂರ್‌ನಲ್ಲಿ ಕ್ರಿಸ್‌ಮಸ್ ಕಾರ್ನಿವಲ್

ಮೈಸೂರು, ಡಿ.15(ಎಂಕೆ)– ಮೈಸೂರಿನ ಮಾಲ್ ಆಫ್ ಮೈಸೂರ್‌ನಲ್ಲಿ ಕ್ರಿಸ್‌ಮಸ್ ಹಾಗೂ ಹೊಸ ವರ್ಷದ ಅಂಗವಾಗಿ 'ಕ್ರಿಸ್‌ಮಸ್ ಕಾರ್ನಿವಲ್' ಆರಂಭಿಸಲಾಗಿದೆ.

ನಗರದ ಪ್ರಮುಖ ಬೇಕರಿಗಳಿಂದ ಕ್ರಿಸ್‌ಮಸ್ ಅಂಗವಾಗಿ ತಯಾರಿಸಿದ ವಿಶೇಷ ಪ್ಲಮ್ ಕೇಕ್, ರುಚಿಕರ ಡೆಸರ್ಟ್, ಕ್ರಿಸ್‌ಮಸ್ ಟ್ರೀ ಆಕರ್ಷಣೆ ಜೊತೆಗೆ ಡಿ.17 ರಿಂದ ವಿದ್ಯುತ್ ದೀಪಾಲಂಕಾರ ವೀಕ್ಷಣೆ ಮಾಡಬಹುದಾಗಿದೆ.

ಡಿ.24 ರಿಂದ ಮಕ್ಕಳು ಮತ್ತು ಕುಟುಂಬದೊಂದಿಗೆ ಸಾಂತಾಕ್ಲಾಸ್ ಜೊತೆಗೆ ಸೆಲ್ಫಿ ತೆಗೆದುಕೊಳ್ಳಲು ವೇದಿಕೆ ಸಜ್ಜಾಗಲಿದ್ದು, 5 ಸಾವಿರ ರೂ.ಮೇಲ್ಪಟ್ಟ ಶಾಪಿಂಗ್‌ಗೆ ಆಕರ್ಷಕ ಗಿಫ್ಟ್ ವೋಚರ್, 15 ಸಾವಿರ ರೂ.ಮೇಲ್ಪಟ್ಟ ಶಾಪಿಂಗ್‌ಗೆ ಸ್ಟೈಲಿಶ್ ನೆಕ್ ಬ್ಯಾಂಡ್ ಹಾಗೂ 30 ಸಾವಿರ ರೂ. ಮೇಲ್ಪಟ್ಟ ಶಾಂಪಿಗ್ ಪ್ರಿಮಿಯರ್ ಏರ್‌ಪ್ಯಾಡ್ ಅಥವಾ ಹೆಡ್ ಫೋನ್ಸ್ ಕೊಡುಗೆ ನೀಡಲಾಗುತ್ತದೆ ಎಂದು ಡಿಎಂಎಸ್‌ಐ ಗ್ರೂಪ್‌ನ ಉಪಾಧ್ಯಕ್ಷ ಸಂದೀಪ್ ಕುಮಾರ್ ತಿಳಿಸಿದ್ದಾರೆ.

'ಕ್ರಿಸ್‌ಮಸ್ ಕಾರ್ನಿವಲ್' ಕ್ರಿಸ್‌ಮಸ್ ಹಬ್ಬದ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಲಿದ್ದು, ಆಕರ್ಷಕ ಕೊಡುಗೆಯೊಂದಿಗೆ ಆಪ್ತರೊಂದಿಗೆ ಆಚರಿಸಲು ವೇದಿಕೆ ಸಜ್ಜುಗೊಳಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲೆಯಾದ್ಯಂತ ಶಾಮನೂರಿಗೆ ಭಾವಪೂರ್ಣ ನಮನ






ಭಾನುವಾರ ನಿಧನರಾದ ದೇಶದ ಹಿರಿಯ ಶಾಸಕರು ಮತ್ತು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷರಾದ ಶಾಮನೂರು ಶಿವಶಂಕರಪ್ಪನವರಿಗೆ ತಿ.ನರಸೀಪುರ, ಕೆ.ಆರ್.ನಗರ, ಸರಗೂರು ಮತ್ತು ಬೆಟ್ಟದಪುರ ಸೇರಿದಂತೆ ಜಿಲ್ಲೆಯಾದ್ಯಂತ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಮೈಸೂರು: ಭಾನುವಾರ ನಿಧನರಾದ ದೇಶದ ಹಿರಿಯ ಶಾಸಕರು ಮತ್ತು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷರಾದ ಶಾಮನೂರು ಶಿವಶಂಕರಪ್ಪನವರಿಗೆ ತಿ.ನರಸೀಪುರ, ಕೆ.ಆರ್.ನಗರ, ಸರಗೂರು ಸೇರಿದಂತೆ ಜಿಲ್ಲೆಯಾದ್ಯಂತ ಭಾವಪೂರ್ಣ ನಮನ ಸಲ್ಲಿಸಲಾಯಿತು.

ತಿ.ನರಸೀಪುರ: ಅತ್ಯಂತ ಕಠಿಣ ಪರಿಶ್ರಮದಿಂದ ತಮ್ಮ ಬದುಕನ್ನು ರೂಪಿಸಿ ಕೊಂಡಿದ್ದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷರೂ ಆದ ಶಾಮನೂರು ಶಿವಶಂಕರಪ್ಪರವರ ಅಗಲಿಕೆ ರಾಜ್ಯದ ಜನತೆಗೆ ನೋವುಂಟುಮಾಡಿದೆ ಎಂದು ಶ್ರೀ ಡಾ.ಶಿವಕುಮಾರ ಸ್ವಾಮಿ ಸೇವಾ ಟ್ರಸ್ಟ್ ಗೌರವಾಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ ಪಟ್ಟಣದ ವಿದ್ಯೋದಯ ಕಾಲೇಜು ವೃತ್ತದಲ್ಲಿ ಡಾ.ಶಿವಕುಮಾರ ಸ್ವಾಮಿ ಸೇವಾ ಟ್ರಸ್ಟ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಶಾಮನೂರು ಶಿವಶಂಕರಪ್ಪ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಲ್ಲಿಸಿ ಮಾತನಾಡಿದರು.

ಡಾ.ಶಿವಕುಮಾರ ಸ್ವಾಮಿ ಸೇವಾ ಟ್ರಸ್ಟ್‌ನ ಅಧ್ಯಕ್ಷ ಬಜ್ಜಿ ನಿಂಗಪ್ಪ, ಇಮ್ಮಡಿ ಶಿವಲಿಂಗ ಸ್ವಾಮಿ ಶ್ರೀ ಶಿವಕುಮಾರ ಸ್ವಾಮೀಜಿ, ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಸೋಮಶೇಖರಪ್ಪ, ವೀರಶೈವ ಮಹಾಸಭಾ ತಾಲೂಕು ಉಪಾಧ್ಯಕ್ಷ ಎಸ್.ಕೆ.ಕಿರಣ್, ಮಾಯಪ್ಪ, ಡೈರಿ ಅಧ್ಯಕ್ಷ ಬಿಲಿಗೆರೆ ಹುಂಡಿ ಮಹದೇವ ಸ್ವಾಮಿ, ಉಪನ್ಯಾಸಕ ಮೂಗೂರು ಕುಮಾರ ಸ್ವಾಮಿ, ಅಂಬೇಡ್ಕರ್ ಅಭಿವೃದ್ಧಿ ಸಂಘದ ಅಧ್ಯಕ್ಷ ಕರೋಹಟ್ಟಿ ಮಹದೇವಯ್ಯ, ಜಿಲ್ಲಾ ಜಾಗೃತಿ ವೇದಿಕೆ ಜಿಲ್ಲಾಧ್ಯಕ್ಷ ಕೆ.ಎನ್.ಪ್ರಭುಸ್ವಾಮಿ, ಪುರಸಭಾ ಮಾಜಿ ಸದಸ್ಯರಾದ ಎನ್.ಲೋಕೇಶ್, ರೂಪಾ ಪರಮೇಶ್, ಕೆ ನಂಜುಂಡಸ್ವಾಮಿ, ಕೆ ಇ ಬಿ ಯೋಗೇಶ್, ಪ್ರಸಾದ್ ನಾಯಕ್, ಶ್ರೀನಿವಾಸ್ ,ಕಿಶೋರ್, ರಾಜಶೇಖರ್, ಬಿ ಎಂ ಶಿವಕುಮಾರ್ ಮತ್ತಿತರರು ಭಾಗವಹಿಸಿದ್ದರು.

ಕೆ.ಆರ್.ನಗರ : ಪಕ್ಷದ ಹಿರಿಯ ನಾಯಕರು ಆದ ಶಾಮನೂರು ಶಿವಶಂಕರಪ್ಪ ಅವರ ನಿಧನ ನೋವುಂಟುಮಾಡಿದೆ. ಎಂದು ತಾಲೂಕು ಕಾಂಗ್ರೆಸ್ ವಕ್ತಾರ ಸಯ್ಯದ್ ಜಾಬೀರ್ ಪಟ್ಟಣದ ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ಸಂತಾಪ ಸಭೆಯಲ್ಲಿ ಮಾತನಾಡಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಎಂ.ಎಸ್. ಮಹದೇವ್, ಉದಯ್ ಶಂಕರ್, ಸಾಲಿಗ್ರಾಮ ತಾಲೂಕು ಕಾಂಗ್ರೆಸ್ ಸಹಕಾರ ಅಧ್ಯಕ್ಷ ತೇಜೋಮೂರ್ತಿ, ಕಾಂಗ್ರೆಸ್ ಮುಖಂಡರಾದ ಲಾಲನಹಳ್ಳಿ ಉಮೇಶ್, ಭೇರ್ಯ ಖಾಲಿದ್, ಚೀರನಹಳ್ಳಿ ಕುಮಾರ್, ಮುಜಮಿಲ್, ಇಬ್ರಾಹಿಂ ಷರೀಫ್, ಪಿ.ಪಿ. ಮಹದೇವ್ ಮೊದಲಾದವರು ಇದ್ದರು.

ಸರಗೂರು: ಶಾಮನೂರು ಶಿವಶಂಕರಪ್ಪರವರಿಗೆ ಸರಗೂರು ತಾಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ವತಿಯಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಪಟ್ಟಣದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಶ್ರದ್ಧಾಂಜಲಿಯಲ್ಲಿ ಅಗಲಿದ ಮುತ್ಸದ್ದಿ ಶಾಮನೂರು ಶಿವಶಂಕರಪ್ಪರವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮೌನಾಚರಣೆ ನಡೆಸಲಾಯಿತು.

ಸರಗೂರು ತಾಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಕಾಟವಾಳು ನಟರಾಜು(ವೀರಭದ್ರಪ್ಪ) ಮಾತನಾಡಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷರು ಹಾಗೂ ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕರು ಮುಖಂಡರು, ಶಾಮನೂರು ಶಿವಶಂಕರಪ್ಪರವರು ಸಾರ್ವಜನಿಕ ಜೀವನದಲ್ಲಿ ಮೌಲ್ಯಾಧಾರಿತ ರಾಜಕೀಯ, ಸಮಾಜಸೇವೆ ಹಾಗೂ ವೀರಶೈವ–ಲಿಂಗಾಯತ ಸಮುದಾಯದ ಶಕ್ತೀಕರಣಕ್ಕೆ ಅವರು ನೀಡಿದ ಅನನ್ಯ ಕೊಡುಗೆ ಸದಾ ಸ್ಮರಣೀಯ ಎಂದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕಾರ್ಯಾಧ್ಯಕ್ಷ ಸಿ.ಕೆ.ಗಿರೀಶ್, ಸರಗೂರು ತಾಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಪದಾಧಿಕಾರಿಗಳು ಹಾಗೂ ನಿರ್ದೇಶಕರುಗಳು, ಬಸವ ಬಳಗದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ನಿರ್ದೇಶಕರುಗಳು ಹಾಗೂ ಯುವ ಘಟಕದ ಪದಾಧಿಕಾರಿಗಳು ಹಾಗೂ ನಿರ್ದೇಕರುಗಳು ಮತ್ತು ಮಹಿಳಾ ಘಟಕದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ನಿರ್ದೇಶಕರುಗಳು ಹಾಗೂ ಪಟ್ಟಣ ಪಂಚಾಯಿತಿ ಸದಸ್ಯರು ಹಾಗೂ ಸಮಾಜದ ಮುಖಂಡರು ಬಂಧುಗಳು ಬಾಗಿಯಾಗಿದ್ದರು.

ಬೆಟ್ಟದಪುರ: ಭಾನುವಾರ ನಿಧನರಾದ ವೀರಶೈವ ಲಿಂಗಾಯತ ಸಮಾಜದ ರಾಷ್ಟ್ರೀಯ ಅಧ್ಯಕ್ಷರಾದ ಶಾಮನೂರು ಶಿವಶಂಕರಪ್ಪ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಬೆಟ್ಟದಪುರದ ಪ್ರಮುಖ ವೃತ್ತದಲ್ಲಿ ಇಂದು ಗ್ರಾಮದ ವೀರಶೈವ ಲಿಂಗಾಯತ ಸಮಾಜ ಹಾಗೂ ಅಕ್ಕಪಕ್ಕದ ಗ್ರಾಮದ ವೀರಶೈವ ಲಿಂಗಾಯತ ಸಮಾಜ ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ಶಾಮನೂರು ಶಿವಶಂಕರಪ್ಪ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಬೆಟ್ಟದಪುರದ ವೀರಶೈವ ಲಿಂಗಾಯತ ಸಮಾಜದ ಮುಖಂಡ ಶಿಕ್ಷಕ ಬಿಸಿ ಮಾದೇವಪ್ಪ, ಬಿ.ಎ.ಸುರೇಶ್, ಶಿವಕುಮಾರ ಸ್ವಾಮಿ ಸಂಘದ ಅಧ್ಯಕ್ಷ ರುದ್ರೇಶ್, ತಾಪಂ ಸದಸ್ಯೆ ಅನಿತಾ, ಮಾಜಿ ಅಧ್ಯಕ್ಷ ಮಂಜು, ಎಂ.ಬೆಟ್ಟದಪುರ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಶಿವದೇವ್, ಕಾರ್ಯದರ್ಶಿ ಶಿವು, ಮುಖಂಡರಾದ ರಾಜು ಸಂಜಯ್ ವಿಕಾಸ್, ಮಲ್ಲೇಶ ಕಪಾಲಿ ಮಹೇಂದರ್ ಎಸ್‌ಮಲ್ಲೇಶ್ ಹಾಗೂ ಗ್ರಾಮಸ್ಥರು ಅಕ್ಕಪಕ್ಕದ ಗ್ರಾಮಸ್ಥರು ಹಾಜರಿದ್ದರು.

ಟಿಎಪಿಸಿಎಂಎಸ್ ಚುನಾವಣೆ: 12 ಸ್ಥಾನಗಳನ್ನು ಗೆದ್ದು ಬೀಗಿದ ಕಾಂಗ್ರೆಸ್



ಟಿಎಪಿಸಿಎಂಎಸ್ ಚುನಾವಣೆಯಲ್ಲಿ ಜಯಭೇರಿ ಬಾರಿಸಿದ ಕಾಂಗ್ರೆಸ್ ನಿರ್ದೇಶಕರನ್ನು ಅಭಿನಂದಿಸಲಾಯಿತು.

ನಂಜನಗೂಡು, ಡಿ.15– ತೀವ್ರ ಕುತೂಹಲ ಕೆರಳಿಸಿದ್ದ ನಂಜನಗೂಡು ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ಚುನಾವಣೆಯಲ್ಲಿ 12ಕ್ಕೆ 12 ಸ್ಥಾನಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ದಿಗ್ವಿಜಯ ಸಾಧಿಸುವ ಮೂಲಕ ಕಾಂಗ್ರೆಸ್ ಪಕ್ಷ ಅಧಿಕಾರವನ್ನು ಹಿಡಿಯುವಲ್ಲಿ ಯಶಸ್ವಿಯಾಗಿದೆ.

ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘಕ್ಕೆ ಕಳೆದ ನ.2 ರಂದು ಚುನಾವಣೆ ನಡೆದಿತ್ತು, ಒಟ್ಟಾರೆ 1012 ಮತಗಳಿದ್ದವು ಆದರೆ ಸರ್ಕಾರದ ನಿಯಮಾವಳಿಯಂತೆ ಸಂಘದ ಜೊತೆಗೆ ವ್ಯವಹಾರ ನಡೆಸಲಾದ 412 ಜನರಿಗೆ ಮಾತ್ರ ಚುನಾವಣೆಯಲ್ಲಿ ಮತದಾನ ಮಾಡಲು ಅವಕಾಶ ದೊರಕಿತ್ತು, ಉಳಿದ 600 ಮಂದಿಗೆ ಮತದಾನದ ಹಕ್ಕು ದೊರಕಿರಲಿಲ್ಲ, 600 ಜನರು ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶ ದೊರಕಿಸುವಂತೆ ಹೈಕೋರ್ಟ್ ಮೆಟ್ಟಿಲೇರಿದ್ದರು, ಚುನಾವಣೆ ಪ್ರಕ್ರಿಯೆಯಲ್ಲಿ ನ್ಯಾಯಾಲಯದ ಅನುಮತಿ ಮೇರೆಗೆ 1012 ಮತದಾರರು ಕೂಡ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರು, ಆದರೆ ನ್ಯಾಯಾಲಯದ ತೀರ್ಪು ಹೊರಬರದ ಕಾರಣ 412 ಮತಗಳ ಎಣಿಕೆ ಕಾರ್ಯವನ್ನು ಮಾತ್ರ ನಡೆಸಲಾಗಿತ್ತು ಡಿ.15ರ ಸೋಮವಾರ ನ್ಯಾಯಾಲಯ ಮತ್ತು ಪ್ರಾಧಿಕಾರದ ಆದೇಶದಂತೆ ಟಿಎಪಿಸಿಎಂಎಸ್ ಫಲಿತಾಂಶ ಪ್ರಕಟಣೆಗೊಂಡಿತು.

ಐದು ವರ್ಷಗಳ ಆಡಳಿತ ಮಂಡಳಿಗೆ ಹಾಲಿ ಅಧ್ಯಕ್ಷ ಕುರಹಟ್ಟಿ ಮಹೇಶ್ ತಂಡ ಭರ್ಜರಿ ಗೆಲುವು ಸಾಧಿಸಿದರೆ ನಿಕಟ ಪೂರ್ವ ಅಧ್ಯಕ್ಷ ಸಿಂಧುವಳ್ಳಿ ಕೆಂಪಣ್ಣರವರ ತಂಡ ಪರಾಭವಗೊಂಡಿತು. ಕುರಹಟ್ಟಿ ಕೆ.ಜಿ.ಮಹೇಶ್ 285, ಎಸ್‌ಸಿ ಮೀಸಲು ವರ್ಗದಿಂದ ಸ್ಪರ್ಧಿಸಿದ್ದ ವಿಜಯ್‌ಕುಮಾರ್ 205, ಎಸ್ಟಿ ಮೀಸಲು ವರ್ಗದಿಂದ ಸ್ಪರ್ಧಿಸಿದ್ದ ಸರ್ವೇಶ್ 191, ಸಾಮಾನ್ಯ ವರ್ಗದಿಂದ ಸ್ಪರ್ಧಿಸಿದ್ದ ಶಿವಕುಮಾರ್ 222, ಎನ್.ಶ್ರೀನಿವಾಸ್ 184, ಮಹಿಳಾ ಮೀಸಲು ವರ್ಗದಿಂದ ಸ್ಪರ್ಧಿಸಿದ್ದ ಹೆಚ್‌ಎಂ.ಮಂಜುಳಾ ಮಧು 248, ಎನ್.ಎಂ. ಪವಿತ್ರ 197, ಬಿಸಿಎಂ(ಎ)ಯಿಂದ ಸ್ಪರ್ಧಿಸಿದ್ದ ಆರ್.ಮಹದೇವು 170 ಮತಗಳನ್ನು ಪಡೆದು ವಿಜಯ ಸಾಧಿಸುವ ಮೂಲಕ ಟಿಎಪಿಸಿಎಂಎಸ್ ಸಂಘದ ನಿರ್ದೇಶಕರಾಗಿ ಆಯ್ಕೆಯಾದರು.

ಅಲ್ಲದೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘಗಳಿಂದ ಆಯ್ಕೆಯಾಗಿದ್ದ ಕಾಂಗ್ರೆಸ್ ಪಕ್ಷದ ಬೆಂಬಲಿತರಾದ ಹೆಚ್.ಜಿ ಪರಶಿವಮೂರ್ತಿ, ಜಿ.ಕೆ.ಪ್ರಕಾಶ್, ಕೆ.ಎನ್. ಮಲ್ಲೇಶ್, ಟಿ.ಎನ್.ಗುರುಮಲ್ಲೇಶ್ ಅವಿರೋಧವಾಗಿ ಆಯ್ಕೆಯಾದರು.

ಬಿಜೆಪಿ ಪಕ್ಷದ ಬೆಂಬಲಿತರಾಗಿ ಸ್ಪರ್ಧಿಸಿದ್ದ ಎಸ್‌ಎಂ ಕೆಂಪಣ್ಣ, ಸಿ.ಎಂ.ಮಹದೇವಯ್ಯ, ಕೆ.ಎಂ.ನಾಗರಾಜು, ಎಚ್.ಎಸ್. ಮಹದೇವಸ್ವಾಮಿ, ಎಂ.ಪಿ.ನಟರಾಜು, ಎಚ್.ಕೆ. ಸವಿತಾ ರಂಗನಾಥ್, ಎಸ್. ಮಂಜುಳಾ ಪರಾಭವಗೊಂಡರು.

ಚುನಾವಣಾಧಿಕಾರಿ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರ್ ಮತ್ತು ರಿಟರ್ನಿಂಗ್ ಆಫೀಸರ್ ವಸಂತ್ ಕುಮಾರ್ ಅವರು ಮಾತನಾಡಿ ನ್ಯಾಯಾಲಯ ಮತ್ತು ಪ್ರಾಧಿಕಾರದ ಆದೇಶದಂತೆ ಚುನಾವಣೆಯ ಫಲಿತಾಂಶವನ್ನು ಪ್ರಕಟಣೆ ಮಾಡುತ್ತಿರುವುದಾಗಿ ಘೋಷಿಸಿದರು.

ಅಧ್ಯಕ್ಷ ಕುರಹಟ್ಟಿ ಮಹೇಶ್ ಮಾತನಾಡಿ ಆಡಳಿತ ಮಂಡಳಿಗೆ ನಡೆದ ಚುನಾವಣೆಯಲ್ಲಿ ಜಯ ದೊರಕಿಸಿದ ಮತದಾರರಿಗೆ ಕೃತಜ್ಞತೆಗಳು. ಜೊತೆಗೆ. ಟಿಎಪಿಸಿಎಂಎಸ್‌ನಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರವನ್ನು ಹಿಡಿಯಲು ಕಾರಣರಾದಂತಹ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ.ಮಹದೇವಪ್ಪ, ಶಾಸಕ ದರ್ಶನ್ ಧ್ರುವ ನಾರಾಯಣ್, ಸಂಸದ ಸುನಿಲ್ ಬೋಸ್, ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಹಾಗೂ ರೈತ ಮತದಾರರಿಗೆ ಕಾಂಗ್ರೆಸ್ ಪಕ್ಷದ ಎಲ್ಲಾ ಮುಖಂಡರುಗಳಿಗೆ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ. ಜೊತೆಗೆ ತಾಲೂಕು ವ್ಯವಸಾಯ ಉತ್ಪನ್ನ ಸಂಘದ ಮೂಲಕ ರೈತರಿಗೆ ಅನುಕೂಲ ಮಾಡಿಕೊಡುವುದಲ್ಲದೆ, ಸಂಘದ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು.

ಇದೇ ಸಂದರ್ಭದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಮುಖಂಡರಾದ ಸತೀಶ್‌ಗೌಡ, ನಾಗರಾಜು, ಪರಶಿವಮೂರ್ತಿ, ಹೆಮ್ಮರಗಾಲ ಉಮೇಶ್, ಹಂಡುವಿನಹಳ್ಳಿ ಪರಶಿವಮೂರ್ತಿ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

ಮಳವಳ್ಳಿಯ ಜಯಂತಿ ಮಹೋತ್ಸವಕ್ಕೆ ತೆರಳುತ್ತಿದ್ದ

ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ ಸುವರ್ಣ ಪುತ್ಥಳಿಗೆ ಸ್ವಾಗತ



ತಿ.ನರಸೀಪುರದಲ್ಲಿ ಶಿವಯೋಗಿಗಳವರ ಸುವರ್ಣ ಪುತ್ಥಳಿಯನ್ನು ಭವ್ಯವಾಗಿ ಸ್ವಾಗತಿಸಲಾಯಿತು.

ತಿ.ನರಸೀಪುರ, ಡಿ.15– ಮಳವಳ್ಳಿ ಪಟ್ಟಣದಲ್ಲಿ ಸೋಮವಾರದಿಂದ ಎಂಟು ದಿನಗಳ ಕಾಲ ಅದ್ದೂರಿಯಾಗಿ ಆಯೋಜನೆಗೊಂಡಿರುವ ಸುತ್ತೂರು ಮಠದ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ 1066ನೇ ಜಯಂತಿ ಮಹೋತ್ಸವಕ್ಕೆ ತೆರಳುತ್ತಿದ್ದ ಶಿವಯೋಗಿಗಳವರ ಸುವರ್ಣ ಪುತ್ಥಳಿಯನ್ನು ಪಟ್ಟಣದಲ್ಲಿ ಮಂಗಳವಾದ್ಯದೊಂದಿಗೆ ಪುಷ್ಪವೃಷ್ಟಿಗೈದು ಬರಮಾಡಿಕೊಳ್ಳಲಾಯಿತು.

ತಾಲೂಕಿನ ಹೆಳವರಹುಂಡಿ ಗ್ರಾಮದಲ್ಲಿ ಸುವರ್ಣ ಪುತ್ಥಳಿಗೆ ಡೋಲು, ನಗಾರಿ ಮೂಲಕ ಸ್ವಾಗತ ಕೋರಲಾಯಿತು. ವೀರಭದ್ರನ ವೇಷಧಾರಿಗಳು ಗೆಜ್ಜೆಯ ನಡೆಯೊಂದಿಗೆ ನೃತ್ಯ ಪ್ರದರ್ಶಿಸಿದರು. ಜಮಾವಣೆಗೊಂಡಿದ್ದ ಭಕ್ತರು ಹಾಗೂ ಸಾರ್ವಜನಿಕರು ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ನೇತೃತ್ವದಲ್ಲಿ ಆಗಮಿಸಿದ ಶಿವಯೋಗಿಗಳವರ ಪುತ್ಥಳಿಗೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಹಾಗೂ ಮಾಲಾರ್ಪಣೆ ಮಾಡಲಾಯಿತು.

ಬಳಿಕ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಮಾತನಾಡಿ, ಪಕ್ಕದ ಮಳವಳ್ಳಿಯಲ್ಲಿ ಜಯಂತಿ ಮಹೋತ್ಸವ ಸಮಿತಿ ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಜಯಂತಿಯನ್ನು ಡಿ.15 ರಿಂದ 22 ರವರೆಗೆ ಹಮ್ಮಿಕೊಂಡಿದ್ದು, ಮಹೋತ್ಸವವನ್ನು ಯಶಸ್ವಿಗೊಳಿಸಲು ಮೈಸೂರು ಜಿಲ್ಲೆಯ ಎಲ್ಲಾ ತಾಲೂಕುಗಳಿಂದ ಶ್ರೀಗಳ ಭಕ್ತರು ಹಾಗೂ ಶರಣ, ಶರಣೆ ಬಂಧುಗಳು ಭಾಗವಹಿಸಬೇಕೆಂದು ಕೋರಿದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಪಿ.ನಟರಾಜು ಮಾತನಾಡಿ ಮಳವಳ್ಳಿಯಲ್ಲಿ ಆಯೋಜಿಸಲಾಗಿರುವ ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಜಯಂತಿ ಕಾರ್ಯಕ್ರಮ ವಿಜೃಂಭಣೆಯಿಂದ, ಅದ್ದೂರಿಯಾಗಿ ಜರುಗುತ್ತಿದೆ. ಕಾರ್ಯಕ್ರಮಕ್ಕೆ ರಾಷ್ಟ್ರಪತಿ ದ್ರೌಪತಿ ಮುರ್ಮು ಸೇರಿದಂತೆ ಅನೇಕ ರಾಜಕೀಯ ಮುಖಂಡರು, ಹರ ಗುರು ಚರ ಮೂರ್ತಿಗಳು ಆಗಮಿಸಲಿದ್ದು ಐತಿಹಾಸಿಕ ಮಹತ್ವ ಪಡೆದುಕೊಳ್ಳಲಿರುವ ಕಾರ್ಯಕ್ರಮಕ್ಕೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ಮನವಿ ಮಾಡಿದರು.

ಎಂ.ಎಲ್.ಹುಂಡಿ ಮಠದ ಗೌರಿಶಂಕರ ಸ್ವಾಮೀಜಿ, ಹೊಸೂರುಹುಂಡಿ ಮಠದ ರಾಜಶೇಖರ ಸ್ವಾಮೀಜಿ, ವಿಧಾನ ಪರಿಷತ್ ಮಾಜಿ ಸದಸ್ಯ ಸಿ.ರಮೇಶ್, ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ, ಮಂಜುನಾಥ್ ಬುದ್ಧಿ, ಪೂಜಿತ್ ಮೆಡಿಕಲ್ಸ್ ಕುಮಾರ್, ಗ್ರಾಪಂ ಮಾಜಿ ಉಪಾಧ್ಯಕ್ಷ ಹೆಚ್.ಬಿ.ಚಿಕ್ಕನಂಜಯ್ಯ, ಎಸ್.ಕೆ.ಕಿರಣ್, ತೊಟ್ಟವಾಡಿ ಮಹದೇವಸ್ವಾಮಿ, ರೂಪಶ್ರೀ ಪರಮೇಶ್, ಕೆ.ಎನ್.ಅಶೋಕ್, ಸಿ.ಎಂ. ಪ್ರಕಾಶ್, ಬಜ್ಜಿನಿಂಗಪ್ಪ, ಮಾಯಪ್ಪ, ಎಂ.ಕೆ.ಸಹದೇವ, ಶಿವಣ್ಣ, ಶಿವಪ್ರಸಾದ್, ಕೆಇಬಿ ಸಿದ್ದಲಿಂಗಸ್ವಾಮಿ, ಪರಮೇಶ್ ಪಟೇಲ್, ತೋಂಟೇಶ್, ಮುದ್ದುಬೀರನಹುಂಡಿ ಗುರುಸ್ವಾಮಿ, ಪಿ.ಸ್ವಾಮಿನಾಥ್ ಗೌಡ, ಹೋಟೆಲ್ ರಾಜಣ್ಣ, ಶಿವಕುಮಾರ್, ಮೂಗೂರು ಕುಮಾರ ಸ್ವಾಮಿ, ಕೆ.ಎನ್. ಪ್ರಭುಸ್ವಾಮಿ, ಬಿ.ಮರಯ್ಯ, ಕೆ.ವಿ.ಶಿವಶಂಕರ್, ಬೆನಕನಹಳ್ಳಿ ಅಜಯ್, ಸೋಮಶೇಖರಪ್ಪ, ಬಿ.ಮಂಟೇಲಿಂಗಪ್ಪ, ಹೆಳವರಹುಂಡಿ ಮೂರ್ತಿ, ಕಿರಗಸೂರು ಎಂ. ಸುರೇಶ್, ಎಂ.ಎಸ್.ಮಂಜುನಾಥ್, ಸೋಮಶೇಖರಪ್ಪ, ಅಕ್ಕಿನಾಗಪ್ಪ, ಬಿ.ಎಂ.ಅಜಯ್, ಬಿ.ಪಿ. ಪರಶಿವಮೂರ್ತಿ ಹಾಗೂ ಇತರರು ಇದ್ದರು.

ಇ–ಪೌತಿ ಖಾತೆ ಆಂದೋಲನ

ಹೆಚ್.ಡಿ.ಕೋಟೆ: ತಾಲೂಕಿನಲ್ಲಿ ಸರ್ಕಾರದ ವತಿಯಿಂದ ಇ–ಪೌತಿ ಖಾತೆ ಆಂದೋಲನ ಹಮ್ಮಿಕೊಂಡಿದ್ದು ರೈತರು ಇದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಹಸೀಲ್ದಾರ್ ಶ್ರೀನಿವಾಸ್ ತಿಳಿಸಿದರು.

ಪಟ್ಟಣದ ತಾಲೂಕು ಆಡಳಿತ ಸೌಧದ ತಹಸೀಲ್ದಾರ್ ಕಚೇರಿಯಲ್ಲಿ ಮಾತನಾಡಿದ ಅವರು ತಾಲೂಕಿನಲ್ಲಿ 9 ಸಾವಿರ ಪೌತಿ ಖಾತೆದಾರರು ಇದ್ದು ಇದರಲ್ಲಿ ಒಂದೂವರೆ ಸಾವಿರ ಪೌತಿ ಖಾತೆ ಮಾಡಲಾಗಿದೆ. ಏಳೂವರೆ ಸಾವಿರ ಪೌತಿ ಖಾತೆ ಆಗಬೇಕಾಗಿದೆ. ಇದಕ್ಕಾಗಿ ನಮ್ಮ ಗ್ರಾಮ ಆಡಳಿತ ಅಧಿಕಾರಿಗಳು ಹಾಗೂ ಕಂದಾಯ ಅಧಿಕಾರಿಗಳನ್ನು ಮನೆಮನೆಗೆ ತೆರಳಿ ಪೌತಿ ಖಾತೆ ದಾರರಿಗೆ ಮಾಹಿತಿ ನೀಡಿ ದಾಖಲಾತಿಗಳಾದ ಮರಣ ಧೃಡಿಕರಣ ಪತ್ರ, ಖಾತೆ ಮಾಡಿಕೊಳ್ಳುವವರ ವಂಶವೃಕ್ಷ, ಆಧಾರ್ ಕಾರ್ಡ್ ಹಾಗೂ ಒಪ್ಪಿಗೆ ಪತ್ರ ಸೇರಿದಂತೆ ಇನ್ನಿತರ ದಾಖಲೆಗಳನ್ನು ಪಡೆದು ಹದಿನೈದು ದಿನಗಳಲ್ಲಿ ಪೌತಿ ಖಾತೆ ನೀಡಲಾಗುತ್ತದೆ ಎಂದು ಮಾಹಿತಿ ನೀಡಿದರು.

ತಾಲೂಕಿನಲ್ಲಿ 33 ವೃತ್ತಗಳು ಇದ್ದು 27 ಗ್ರಾಮ ಆಡಳಿತ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ, ಒಬ್ಬ ಗ್ರಾಮ ಆಡಳಿತ ಅಧಿಕಾರಿ ತಿಂಗಳಿಗೆ ಕನಿಷ್ಠ ನೂರು ಪೌತಿ ಖಾತೆ ಮಾಡಲು ಗುರಿ ನೀಡಲಾಗಿದೆ ಎಂದು ತಿಳಿಸಿದರು.

ಚಿರತೆ ದಾಳಿಗೆ ಹಸು ಬಲಿ

ತಿ.ನರಸೀಪುರ, ಡಿ.15– ಹಾಡುಹಗಲೇ ಚಿರತೆಯೊಂದು ಹಸುವಿನ ಮೇಲೆ ದಾಳಿ ನಡೆಸಿ ತಿಂದು ಹಾಕಿರುವ ಘಟನೆ ತಾಲೂಕಿನ ಶ್ರೀ ರಂಗರಾಜಪುರ ಗ್ರಾಮದಲ್ಲಿ ಸಂಭವಿಸಿದೆ.

ಗ್ರಾಮದ ಕುಮಾರ್ ಎಂಬುವರಿಗೆ ಸೇರಿದ 60 ಸಾವಿರ ರೂ. ಬೆಲೆ ಬಾಳುವ ಹಸುವನ್ನು ಊರಿನ ಹೊರಗಿನ ಪೊದೆಯೊಂದಕ್ಕೆ ಹೊತ್ತೊಯ್ದಿರುವ ಚಿರತೆ ಹಸುವನ್ನು ಕೊಂದು ತಿಂದು ಹಾಕಿದೆ. ಚಿರತೆಯು ಹಾಡು ಹಗಲೇ ಗ್ರಾಮದಿಂದ ಹಸುವನ್ನು ಹೊತ್ತೊಯ್ದು ಭಕ್ಷಿಸಿರುವ ಘಟನೆಯಿಂದ ಗ್ರಾಮಸ್ಥರು ಭಯ ಭೀತರಾಗಿದ್ದಾರೆ.

ಕೆಲ ದಿನಗಳಿಂದ ಚಿರತೆ ಗ್ರಾಮದಲ್ಲಿ ಓಡಾಡತೊಡಗಿದೆ ಎಂದು ಗ್ರಾಮಸ್ಥರು ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದರೂ ಅಗತ್ಯ ಕ್ರಮ ಕೈಗೊಳ್ಳದೇ ಇಲಾಖೆಯವರು ಬೇಜವಾಬ್ದಾರಿ ತೋರುತ್ತಿದ್ದಾರೆ ಎಂದು ಗ್ರಾಮಸ್ಥರು ಅರಣ್ಯ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತ ಪಡಿಸಿದ್ದಾರೆ.

ಕೂಡಲೇ ಚಿರತೆ ಸೆರೆ ಹಿಡಿಯಲು ಅಗತ್ಯ ಕ್ರಮ ಕೈಗೊಳ್ಳುವ ಜೊತೆಗೆ ಹಸು ಮಾಲೀಕರಿಗೆ ಪರಿಹಾರ ನೀಡಬೇಕೆಂದು ಒತ್ತಾಯಿಸಿದ್ದಾರೆ

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

16.12.2025 ಮಂಗಳವಾರ, ಮಳೆ ನಕ್ಷತ್ರ: ಮೂಲ, 16.12.2025 ರಿಂದ 28.12.2025
ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ, ಕೃಷ್ಣ ಪಕ್ಷ,
ತಿಥಿ: ದ್ವಾದಶಿ, ನಕ್ಷತ್ರ: ಸ್ವಾತಿ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

- **ಕಾವೇರಿ ಆಯುರ್ವೇದ ಆಸ್ಪತ್ರೆ:** ಮಕ್ಕಳಲ್ಲಿ ಕಂಡು ಬರುವ ಆಟಿಸಂ, ಕುತ್ತಿಗೆ ನೋವಿಗೆ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಗೆ.
- **ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನ :** ಸ್ವಾತಿ ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ, ಬೆಳಿಗ್ಗೆ 9 ಗಂಟೆಯಿಂದ ಸಂಕಲ್ಪ, ಮಧ್ಯಾಹ್ನ 1.30ಕ್ಕೆ ಮಹಾಮಂಗಳಾರತಿ, ತೀರ್ಥ ಪ್ರಸಾದ, ಬೆಳಿಗ್ಗೆ 5.30ರಿಂದ 10 ಗಂಟೆವರೆಗೆ ಮತ್ತು ಸಂಜೆ 5.30ರಿಂದ 7.30ವರೆಗೆ ಧನುರ್ಮಾಸದ ಪ್ರಯುಕ್ತ ವಿಶೇಷ ಪೂಜೆ, ಸ್ಥಳ: ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನ.
- **ರಾಮ್‌ಸನ್ಸ್ ಬೊಂಬೆ ಮನೆ:** ದಸರೆಯ ಬೊಂಬೆ ಪ್ರದರ್ಶನ 21ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ.
- **ಶ್ರೀಸೂತ್ರ ಆಯುರ್ಧಾಮ :** ಕಿಡ್ನಿ ಸ್ಟೋನ್ ಸಮಸ್ಯೆಯಿಂದ ಬಳಲುತ್ತಿರುವವರಿಗೆ ಉಚಿತ ವೈದ್ಯಕೀಯ ತಪಾಸಣಾ ಹಾಗೂ ಸಲಹಾ ಶಿಬಿರ, ಸ್ಥಳ: ಶ್ರೀ ಸೂತ್ರ ಆಯುರ್ಧಾಮ, ಚಾಮುಂಡಿಪುರಂ, ಬೆಳಗ್ಗೆ 10 ರಿಂದ.
- **ಜೆಎಸ್‌ಎಸ್ ಮಹಿಳಾ ಪದವಿಪೂರ್ವ ಕಾಲೇಜು :** ಬೆಳಗ್ಗೆ 10ಕ್ಕೆ ಅಂತರ ಪ್ರೌಢಶಾಲಾ ನೃತ್ಯ ಸ್ಪರ್ಧೆ, ದಿವ್ಯಾಶೀರ್ವಾದ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಪ್ರೊ. ಕೆ. ರಾಮಮೂರ್ತಿರಾವ್, ಮುಖ್ಯ ಅತಿಥಿಗಳು : ವಿದುಷಿ ಡಾ. ನಾಗಲಕ್ಷ್ಮಿ ನಾಗರಾಜನ್, ಅಧ್ಯಕ್ಷತೆ : ಜೆಎಸ್‌ಎಸ್ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ; ಸಂಜೆ 4ಕ್ಕೆ ಸಮಾರೋಪ ಸಮಾರಂಭ, ಮುಖ್ಯ ಅತಿಥಿಗಳು : ನಿವೃತ್ತ ಪ್ರಾಧ್ಯಾಪಕ ಡಾ. ಶೀಲಾ ಶ್ರೀಧರ್, ಅಧ್ಯಕ್ಷತೆ : ಜೆಎಸ್‌ಎಸ್ ಮಹಿಳಾ ಕಾಲೇಜು ಪ್ರಿನ್ಸಿಪಾಲ್ ಡಾ. ರೇಚಣ್ಣ, ಸ್ಥಳ: ನವಜ್ಯೋತಿ ಸಭಾಂಗಣ, ಕಾಲೇಜು ಆವರಣ.
- **ಪಾಳ್ಯಂ ಶ್ರೀ ಶಾಸ್ತಾ ಪೀಠಂ, ಅಭ್ಯುದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ :** ಧನುರ್ಮಾಸದ ವಿಶೇಷ ಪೂಜಾ, ಲಕ್ಷಾರ್ಚನಾ, ವಾರ್ಷಿಕ ಕುಂಭಾಭಿಷೇಕ ಪೂಜಾ ಮಹೋತ್ಸವ, ಮಹತೋಭಾರ ಶ್ರೀ ಧರ್ಮಶಾಸ್ತಾ ಸ್ವಾಮಿಯವರಿಗೆ, ಮಹಾಭಿಷೇಕ, ಅಲಂಕಾರಸೇವೆ, ನಾಮಾರ್ಚನೆ, ಮಹಾನಿವೇದನೆ, ಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ, ಸ್ಥಳ: ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನ, ರಾಘವೇಂದ್ರನಗರ.
- **ಮೈಸೂರು ವಿಶ್ವವಿದ್ಯಾನಿಲಯ :** ಮಾನಸ ಯುವ ಸಂವರ್ಧನೆ, ಯುವ ಸಬಲೀಕರಣ ಮತ್ತು ಔದ್ಯೋಗಿಕ ಕಾರ್ಯಾಗಾರ, ಉದ್ಘಾಟನೆ : ಪ್ರಾದೇಶಿಕ ಆಯುಕ್ತ ನಿತೇಶ್ ಪಾಟೀಲ್, ಅಧ್ಯಕ್ಷತೆ : ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಉಪಸ್ಥಿತರು : ಕುಲಸಚಿವರಾದ ಶ್ರೀಮತಿ ಎಂ.ಕೆ. ಸವಿತಾ, ಪ್ರೊ. ಎನ್. ನಾಗರಾಜ, ಹಣಕಾಸು ಅಧಿಕಾರಿ ಶ್ರೀಮತಿ ಕೆ.ಎಸ್. ರೇಖಾ, ಸ್ಥಳ: ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣ, ಸೆನೆಟ್ ಭವನ, ಮಾನಸಗಂಗೋತ್ರಿ, ಬೆಳಗ್ಗೆ 10ಕ್ಕೆ.
- **ಮೈಸೂರು ವಿಶ್ವವಿದ್ಯಾನಿಲಯ, ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರ :** ಯೋಗ ಮತ್ತು ಕ್ಷೇಮಪಾಲನೆ ಕುರಿತು ಯುಜಿಸಿ ಪ್ರಾಯೋಜಿತ ಅಲ್ಪಾವಧಿ ಶಿಬಿರ, ಉದ್ಘಾಟನೆ : ಜೆಎಸ್‌ಎಸ್ ಯೋಗ ಸಂಶೋಧನಾ ಪ್ರತಿಷ್ಠಾನ ಸಂಸ್ಥಾಪಕ ಡಿ. ಶ್ರೀಹರಿ, ಅಧ್ಯಕ್ಷತೆ : ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದ ನಿರ್ದೇಶಕರಾದ ಪ್ರೊ. ಹೆಚ್.ಪಿ. ಜ್ಯೋತಿ, ಸ್ಥಳ: ಎಂಎಂಟಿಟಿಸಿ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 11ಕ್ಕೆ.
- **ಭಾರತೀಯ ಶೈಕ್ಷಣಿಕ ರಂಗಭೂಮಿ ಸಂಸ್ಥೆ :** ಗೊಂಬೆಯಾಟ (ಪೊಪೆಟ್) ಕಾರ್ಯಾಗಾರ, ಉದ್ಘಾಟನೆ: ಲೇಖಕ ಜಿ.ಕೆ. ಜಯರಾಮ್, ಪಪೆಟ್ ವಿನ್ಯಾಸಕರಾದ ಶಶಿಧರ ಉಡುಪ, ಅಧ್ಯಕ್ಷತೆ : ಹಿರಿಯ ರಂಗಕರ್ಮಿ ಶ್ರೀಮತಿ ರಾಮೇಶ್ವರಿ ವರ್ಮಾ, ಸ್ಥಳ: ಹಾರ್ಡ್ವಿಕ್ ಶಾಲಾ ಆವರಣ, ಜೆಎಲ್‌ಬಿ ರಸ್ತೆ, ಬೆಳಗ್ಗೆ 11ಕ್ಕೆ.
- **ಅರಮನೆ ಕೋಟೆ ಉತ್ತರ ಬಾಗಿಲು ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನ, ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಮೂಹ ದೇವಾಲಯಗಳು:** ಶ್ರೀ ಹನುಮ ಜಯಂತಿ ಮಹೋತ್ಸವ, ಸಂಜೆ 5.30ರಿಂದ ಪರಶಿವ ಮತ್ತು ತಂಡದವರಿಂದ ಭಕ್ತಿಗೀತೆ, ಸಂಜೆ 7 ರಿಂದ ಪೂರ್ವಜ್ ವಿಶ್ವನಾಥ್ ಮತ್ತು ವೃಂದದವರಿಂದ ಸುಗಮ ಸಂಗೀತ, ಸ್ಥಳ: ಆಂಜನೇಯಸ್ವಾಮಿ ದೇವಸ್ಥಾನದ ಬಳಿ, ಅರಮನೆ ಕೋಟೆ ಉತ್ತರ ಬಾಗಿಲು.
- **ಸಾಧನಾ ಮಂದಿರ:** ಸರಸ್ವತಿ ಪೂಜೆ ವಿಶೇಷ ತರಬೇತಿ, ಅರ್ಥ, ಸಂಕೇತ, ಮಹತ್ವ, ಪ್ರಾಮುಖ್ಯತೆ, ಪ್ರಯೋಜನ ಮತ್ತು ವಿಧಾನಗಳೊಂದಿಗೆ, ಸ್ಥಳ: ಸಂಜೆ 6.30ಕ್ಕೆ ಶ್ರೀ ಸಂಕಷ್ಟಹರ ಗಣಪತಿ ದೇವಸ್ಥಾನ, ಬಿಇಎಂಎಲ್‌ನಗರ, ಶ್ರೀರಾಮಪುರ, ಸಂಜೆ 7.30ಕ್ಕೆ ಮೈಸೂರು ಮೃಗಾಲಯ, ಎಸ್‌ವಿಎಂ ಲೇಔಟ್, ಕೆನರಾ ಬ್ಯಾಂಕ್ ಹಿಂಭಾಗ, ವಿವೇಕಾನಂದನಗರ.
- **ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನ :** ವಿದುಷಿ ಡಾ. ಕೆ.ಎಲ್. ಪ್ರಸನ್ನಾಕ್ಷಿ ಅವರಿಂದ ತಿರುಪ್ಪಾವೈ ಪ್ರವಚನ ಕಾರ್ಯಕ್ರಮ, ಸ್ಥಳ: ಶ್ರೀವೇಣುಗೋಪಾಲಸ್ವಾಮಿ ದೇವಸ್ಥಾನ, ತ್ಯಾಗರಾಜ ರಸ್ತೆ, ಸಂಜೆ 6.30 ರಿಂದ.

ಸುತ್ತೂರಿನಲ್ಲಿಂದು, ನಂಜನಗೂಡು ತಾಲೂಕು

- **ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ :** ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಕರ್ತೃಗದ್ದುಗೆ, ಶ್ರೀ ಮಹದೇಶ್ವರ ಸನ್ನಿಧಿ, ಶ್ರೀ ವೀರಭದ್ರೇಶ್ವರ, ಶ್ರೀ ಸೋಮೇಶ್ವರ ಮತ್ತು ಶ್ರೀ ನಾರಾಯಣಸ್ವಾಮಿ ದೇವಸ್ಥಾನಗಳಲ್ಲಿ ಧನುರ್ಮಾಸ ವಿಶೇಷ ಪೂಜೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ಮೊರಬದ ಮಲ್ಲಿಕಾರ್ಜುನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸಾಧಕರ ಸೋಪಾನ – ಲೇಖನ ಮತ್ತು ಪ್ರಸ್ತುತಿ: ಟಿ.ಎಸ್. ಗೋಪಾಲ್, ಪ್ರಾಯೋಜಕರು: ಸಹಬಾಳ್ವೆ, ಬೆಂಗಳೂರು, 6.40 ಅರಿವಿನ ಶಿಖರ– ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ: ಜಯಂತಿ ವಿ. ಭಟ್, ವ್ಯಾಖ್ಯಾನ : ಮೊರಬದ ಮಲ್ಲಿಕಾರ್ಜುನ, 6.50 ರೈತರಿಗೆ ಸಲಹೆ, 7.15 ಮತ್ತು ಸಂಜೆ 5.40 – ಪ್ರಾಯೋಜಿತ ಕಾರ್ಯಕ್ರಮ ಕೆ.ಎಸ್.ಓ.ಯು. ಮುಕ್ತವಾಣಿ, ಪ್ರಾಯೋಜಕರು– ಪ್ರಸಾರಂಗ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವರಾದ ಡಾ. ಸಿ.ಎಸ್.ಆನಂದ್ ಕುಮಾರ್ ಅವರೊಂದಿಗೆ ನಡೆಸಿದ ಸಂದರ್ಶನದ ಮೊದಲ ಭಾಗ. ಪ್ರಸ್ತುತಿ : ಎನ್.ಕೇಶವಮೂರ್ತಿ, 8.30 ವಿಶೇಷ ಕಾರ್ಯಕ್ರಮ ಸರಣಿ, ಮೈಸೂರು ಆಕಾಶವಾಣಿ ತೊಂಬತ್ತು ನೆನಪುಗಳ ಹೊತ್ತು – ಮಾಲಿಕೆಯಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿಯ ಪ್ರಶಸ್ತಿ ಪುರಸ್ಕೃತರು ಮತ್ತು ಕುವೆಂಪು ಭಾಷಾ ಭಾರತಿಯ ಅಧ್ಯಕ್ಷರಾಗಿದ್ದ ಡಾ.ಪ್ರಧಾನ ಗುರುದತ್ತ ಅವರೊಂದಿಗಿನ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಲೇಖಕಿ ಮತ್ತು ಅನುವಾದಕಿ ನಿವೇದಿತಾ.ಹೆಚ್., 9.00 ಕರೆಗೊಂದು ಗೀತೆ– ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಬಾಲಾಜಿ ಶಂಕರ್–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ, ಹೊಂಗಿರಣ–ವಿಕಸಿತ ಹಾದಿಗೊಂದು ಸೋಪಾನ, ಪ್ರಸ್ತುತಿ: ಎಸ್. ಲಕ್ಷ್ಮೀನಾರಾಯಣ, ಆರ್. ಲೋಕೇಶ್ವರಿ ಹಾಗೂ ಬಿ.ಜಿ. ಕವಿತಾ

ಮಧ್ಯಾಹ್ನ: 12.05 ವನಿತಾ ವಿಹಾರ–ಮೈಸೂರಿನ ಲೇಖಕಿ ಉಷಾ ನರಸಿಂಹನ್ ಅವರೊಡನೆ ಸಂದರ್ಶನ. ಸಂದರ್ಶಕರು–ಕೆ. ನೇತ್ರಾ, 12.35 ದೇವರನಾಮ– ಆಲಾಪ್. ಬಿ.ಆರ್., 12.45 ಕನ್ನಡದಲ್ಲಿ ಭಾಷಣ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು–ಎಂ.ವಾಣಿ ಸತೀಶ್, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಬಿ. ಶ್ರೀರಾಮ್ ಭಟ್ – ಹಾಡುಗಾರಿಕೆ, 4.00 ಕಥಾಕಾಲಕ್ಷೇಪ–ದಶಾವತಾರ, ಪ್ರಸ್ತುತಿ: ಸಂತ ಶ್ರೀ ಕೇಶವದಾಸರು, 5.00 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ– ಕಿಸಾನ್‌ವಾಣಿ, ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಮತ್ಸ್ಯ ತರಂಗ ಮೀನು ಸಾಕಾಣಿಕೆ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ 'ಕೆರೆ ಅಂಚಿನಲ್ಲಿ ಮೀನು ಸಾಕಾಣಿಕೆ' ಈ ಕುರಿತು ಮೈಸೂರು ತಾಲ್ಲೂಕು ಜಯಪುರ ಹೋಬಳಿ ದೊಡ್ಡಕಾಟೂರು ಗ್ರಾಮದ ಎಂ. ಚಿನ್ನಂಕ ಅವರೊಂದಿಗೆ ಸಂದರ್ಶನ. ಸಂದರ್ಶಕರು– ಎನ್.ಕೇಶವಮೂರ್ತಿ, 7.45 ವಿಧಾನಮಂಡಲದಲ್ಲಿ ಇಂದು, 8.00 ಸಂಸತ್ ಸಮೀಕ್ಷಾ, 8.15 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಬಸವರಾಜ ರಾಜಗುರು– ಹಾಡುಗಾರಿಕೆ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, ವಿ. ಕಲಾವತಿ ಅವಧೂತ್ – ಹಾಡುಗಾರಿಕೆ, 10.00 ಸಂಸತ್ತಿನ ಪ್ರಶ್ನೋತ್ತರ ಕಲಾಪಗಳ ಧ್ವನಿಮುದ್ರಣದ ಪ್ರಸಾರ

'ಸ್ವಸ್ಥ ಮೈಸೂರು' ಜಾಗೃತಿ ಅಭಿಯಾನಕ್ಕೆ ಪ್ರಮೋದಾದೇವಿ ಒಡೆಯರ್ ಚಾಲನೆ

● ವಾಣಿವಿಲಾಸ ಪ್ರೌಢಶಾಲೆ ವಿದ್ಯಾರ್ಥಿನಿಯರಿಗೆ ಆರೋಗ್ಯ ತಪಾಸಣೆ ● ಗ್ರಾಮೀಣ ಪ್ರದೇಶದಲ್ಲೂ ಆರೋಗ್ಯ ಅರಿವು ಉದ್ದೇಶ: ಪ್ರಮೋದಾದೇವಿ



ಆರೋಗ್ಯಕರ ಮೈಸೂರು ಉದ್ದೇಶಿತ 'ಸ್ವಸ್ಥ ಮೈಸೂರು' ಜಾಗೃತಿ ಅಭಿಯಾನಕ್ಕೆ ಸೋಮವಾರ ಚಾಲನೆ ನೀಡಲಾಯಿತು. ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್, ಡಿಹೆಚ್‌ಓ ಡಾ.ಕುಮಾರಸ್ವಾಮಿ, ಯೋಗಗುರು ಆಚಾರ್ಯ ಭರತ್ ಶೆಟ್ಟಿ, ಖ್ಯಾತ ವೈದ್ಯ ಡಾ.ಖಾದರ್ ವಾಲಿ, ಡಾ.ನಾಗರಾಜು ಮತ್ತಿತರರಿದ್ದರು.

ಮೈಸೂರು, ಡಿ.15(ಎಂಕೆ)– ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಫೌಂಡೇಶನ್, ಆರೋಗ್ಯ ವರ್ಲ್ಡ್ ಇಂಡಿಯಾ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿರುವ ಆರೋಗ್ಯಕರ ಮೈಸೂರು ಉದ್ದೇಶಿತ 'ಸ್ವಸ್ಥ ಮೈಸೂರು' ಜಾಗೃತಿ ಅಭಿಯಾನಕ್ಕೆ ಸೋಮವಾರ ಚಾಲನೆ ದೊರೆಯಿತು.

ಮೈಸೂರಿನ ನಜರ್‌ಬಾದ್‌ನಲ್ಲಿರುವ ಶ್ರೀ ವಾಣಿ ವಿಲಾಸ ಅರಸು ಬಾಲಕಿಯರ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿನಿಯರಿಗೆ ಉಚಿತ ಆರೋಗ್ಯ ತಪಾಸಣೆ ಹಾಗೂ ಆರೋಗ್ಯ ಕಾಪಾಡಿಕೊಳ್ಳುವ ಕುರಿತು ಮಾರ್ಗದರ್ಶನ ನೀಡುವ ಮೂಲಕ 'ಸ್ವಸ್ಥ ಮೈಸೂರು' ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ಸ್ವಸ್ಥ ಮೈಸೂರು ಅಭಿಯಾನಕ್ಕೆ ಚಾಲನೆ ನೀಡಿದ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಫೌಂಡೇಶನ್ ಅಧ್ಯಕ್ಷರೂ ಹಾಗೂ ರಾಜವಂಶಸ್ಥರಾದ ಪ್ರಮೋದಾದೇವಿ ಒಡೆಯರ್ ಮಾತನಾಡಿ, ಮೈಸೂರನ್ನು ಆರೋಗ್ಯಕರ ನಗರವನ್ನಾಗಿ ರೂಪಿಸುವ ಉದ್ದೇಶದಿಂದ 'ಸ್ವಸ್ಥ ಮೈಸೂರು' ಕಾರ್ಯಕ್ರಮ ರೂಪಿಸಲಾಗಿದೆ. ಅಭಿಯಾನದ ಮೊದಲ ಕಾರ್ಯಕ್ರಮ ಇದಾಗಿದ್ದು, ನಗರ ಸೇರಿದಂತೆ ಗ್ರಾಮೀಣ ಭಾಗದಲ್ಲಿಯೂ ನಿರಂತರವಾಗಿ ಆರೋಗ್ಯ ಕುರಿತ ಅರಿವು ಮತ್ತು ತಪಾಸಣೆ ಕಾರ್ಯಕ್ರಮಗಳನ್ನು ನಡೆಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸಿ.ಪಿ.ಕುಮಾರಸ್ವಾಮಿ ಮಾತನಾಡಿ, ಖಾಸಗಿ ಮತ್ತು ಸಾರ್ವಜನಿಕ ಸಹಭಾಗಿತ್ವದಲ್ಲಿ 'ಸ್ವಸ್ಥ ಮೈಸೂರು' ಅಭಿಯಾನ ಹಮ್ಮಿಕೊಂಡಿರುವುದು ಶ್ಲಾಘನೀಯ. ಸಾಂಕ್ರಾಮಿಕ ರೋಗವಲ್ಲದ ಕಾಯಿಲೆಗಳ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ ಆಯುಷ್ ಸೇವೆಗಳನ್ನು ನೀಡಲಾಗುವುದು. ರೋಗ ಬರುವುದಕ್ಕೂ ಮುನ್ನ ಎಚ್ಚರಿಕೆ ವಹಿಸುವ ನಿಟ್ಟಿನಲ್ಲಿ ಕಾರ್ಯಕ್ರಮ ಆಯೋಜನೆ ಮಾಡಲಾಗುತ್ತಿದೆ. ಡಯಾಬಿಟಿಸ್ ಮತ್ತು ರಕ್ತದೊತ್ತಡಕ್ಕೆ ಸ್ಕ್ರೀನಿಂಗ್ ಜೊತೆಗೆ ಸರ್ಕಾರದಿಂದ ಉಚಿತ ಚಿಕಿತ್ಸೆ ನೀಡಲಾಗುತ್ತಿದೆ ಎಂದರು.

ಮೈಸೂರು ನಗರ ಪ್ರದೇಶಕ್ಕೆ ಸೀಮಿತಗೊಳಿಸದೆ ಗ್ರಾಮೀಣ ಭಾಗಕ್ಕೂ ಅಭಿಯಾನ ವಿಸ್ತರಣೆ ಮಾಡಲಾಗುತ್ತದೆ. ಒಂದು ದಿನಕ್ಕೆ ಸೀಮಿತಗೊಳಿಸದೆ ದಿನದ 24 ಗಂಟೆಯೂ ಅರಿವು ಮೂಡಿಸುವಂತಾಗಬೇಕು. ರಾಷ್ಟ್ರೀಯ ಬಾಲ ಸ್ವಸ್ಥ ಕಾರ್ಯಕ್ರಮ ಹಾಗೂ ರಾಷ್ಟ್ರೀಯ ಕಿಶೋರ್ ಸ್ವಸ್ಥ ಕಾರ್ಯಕ್ರಮಕ್ಕೂ ಸಹಕಾರ ನೀಡಿದರೆ ಶಾಲಾ ಮಕ್ಕಳಲ್ಲಿ ಹೆಚ್ಚಿನ ಜಾಗೃತಿ ಮೂಡಿಸಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

'ಸ್ವಸ್ಥ ಮೈಸೂರು' ಅಭಿಯಾನದ ಅಂಬಾಸಿಡರ್ ಯೋಗ ಗುರು ಆಚಾರ್ಯ ಭರತ್ ಶೆಟ್ಟಿ, ಖ್ಯಾತ ವೈದ್ಯ ಡಾ.ಖಾದರ್ ವಾಲಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಾಗರಾಜು, ಶ್ರೀ ಜಯ ಚಾಮರಾಜ ಅರಸು ಎಜುಕೇಷನ್ ಟ್ರಸ್ಟ್ ಕಾರ್ಯದರ್ಶಿ ಮಹೇಶ್ ಅರಸ್, ಟ್ರಸ್ಟಿಗಳಾದ ಡಾ.ಎ.ತೇಜಶ್ರೀ, ಅಜಿತ್‌ಕುಮಾರ್ ರಾಜೇ ಅರಸ್, ಶ್ರೀಕಂಠರಾಜೇ ಅರಸ್, ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಫೌಂಡೇಶನ್ ಗೌರವ ಕಾರ್ಯದರ್ಶಿ ರಿಜಿನಾಲ್ಡ್ ವೆಸ್ಲಿ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮಹಾಸೇನಾ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಡೆವಿಲ್ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಕಿಸ್ ಕಿಸ್ಕೋ ಪ್ಯಾರ್ ಕರೂ (ಹಿ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಡೆವಿಲ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಡೆವಿಲ್ (ಕ)	4 ಪ್ರದರ್ಶನಗಳು
ರಾಜಕಮಲ್	
ಅಖಂಡ–2 (ತೆ)	4 ಪ್ರದರ್ಶನಗಳು
ಸಂಗಂ	
ಡೆವಿಲ್ (ಕ)	3 ಪ್ರದರ್ಶನಗಳು
ಲಿಡೋ	
ಅಖಂಡ–2 (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಕಾಂತಾರ–2 (ಕ)	4 ಪ್ರದರ್ಶನಗಳು

ಮದ್ಯಪಾನದಿಂದ ಅಪರಾಧ ಕೃತ್ಯಗಳು ಹೆಚ್ಚಳ

ಆಲ್ಕೋಹಾಲಿಕ್ಸ್ ಅನಾಮಿಮಸ್ 24ನೇ ವಾರ್ಷಿಕೋತ್ಸವದಲ್ಲಿ ಡಿಸಿಪಿ ಸುಂದರರಾಜ್ ಅಭಿಮತ



ಮೈಸೂರಿನ ಸಂತ ಫಿಲೋಮಿನಾ ಚರ್ಚ್ ಸಭಾಂಗಣದಲ್ಲಿ ಭಾನುವಾರ ಆಲ್ಕೋಹಾಲಿಕ್ಸ್ ಅನಾಮಿಮಸ್ 24ನೇ ವಾರ್ಷಿಕೋತ್ಸವವನ್ನು ಡಿಸಿಪಿ ಕೆ.ಎಸ್. ಸುಂದರರಾಜ್ ಉದ್ಘಾಟಿಸಿದರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಡಾ,ವಸುಧ ರಾವ್, ಮಹೇಂದ್ರ, ಕಾರ್ತಿಕ್, ಶಂಕರಮೂರ್ತಿ ಇದ್ದಾರೆ.

ಮೈಸೂರು, ಡಿ. 15– ಮದ್ಯಪಾನ ಮಾಡಿದಂತಹ ಸಂದರ್ಭದಲ್ಲಿ ಜನ ಅಧಿಕ ಅಪರಾಧ ಕೃತ್ಯಗಳಲ್ಲಿ ಭಾಗಿಯಾಗುವುದು ಹೆಚ್ಚು. ಆದ್ದರಿಂದ ಮದ್ಯಪಾನ ತ್ಯಜಿಸಿ, ಗೌರವಯುತವಾಗಿ ಜೀವನ ನಡೆಸಿ ಎಂದು ಮೈಸೂರು ನಗರ ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಕೆ.ಎಸ್. ಸುಂದರರಾಜ್ ಕರೆ ನೀಡಿದರು.

ನಗರದ ಸಂತ ಫಿಲೋಮಿನಾ ಚರ್ಚ್ ಸಭಾಂಗಣದಲ್ಲಿ ಭಾನುವಾರ ಆಲ್ಕೋಹಾಲಿಕ್ಸ್ ಅನಾನಿಮಸ್ 24ನೇ ಹಾಗೂ ಮೈಸೂರು ಇಂಟರ್ ಗ್ರೂಪ್ 5ನೇ ವಾರ್ಷಿಕೋತ್ಸವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪರಿಸರ, ಸ್ನೇಹಿತರ ಸಹವಾಸ ಮದ್ಯಪಾನ ಚಟಕ್ಕೆ ಕಾರಣವಾಗುತ್ತದೆ. ನಂತರ ಈ ಅಭ್ಯಾಸ ಇಡೀ ಜೀವನವನ್ನು ಆಪೋಶನ ತೆಗೆದುಕೊಂಡು ಬಿಡುತ್ತದೆ. ಆದ್ದರಿಂದ ಉತ್ತಮ ಪರಿಸರ ಹಾಗೂ ಒಳ್ಳೆಯ ಸ್ನೇಹಿತರ ಸಹವಾಸದಲ್ಲಿ ಬದುಕಿ ಎಂದು ಕಿವಿಮಾತು ಹೇಳಿದರು.

ಸಾಮಾನ್ಯವಾಗಿ ಬೆಳಗ್ಗೆಯಿಂದ ಸಂಜೆವರೆಗೆ ದೈಹಿಕ ಶ್ರಮದ ಕೆಲಸ ಮಾಡುವವರು ನೋವು ಮರೆಯಲು ಕುಡಿತದ ದಾಸರಾಗುತ್ತಾರೆ. ಶ್ರೀಮಂತ ವರ್ಗದವರು ಕೂಡ ವಿಲಾಸ ಜೀವನಕ್ಕಾಗಿ ಮದ್ಯಪಾನದ ಚಟ ಅಂಟಿಸಿಕೊಳ್ಳುತ್ತಾರೆ. ಅಂತಿಮವಾಗಿ ಇದು ಆರೋಗ್ಯದ ಮೇಲೆ ಹಾಗೂ ಕುಟುಂಬದ ಮೇಲೆ ಪರಿಣಾಮ ಬೀರುತ್ತದೆ. ಆದ್ದರಿಂದ ಮದ್ಯಪಾನ, ಧೂಮಪಾನ, ಮಾದಕ ವಸ್ತು ಸೇವನೆ ಮೊದಲಾದ ದುಶ್ಚಟಗಳಿಂದ ದೂರ ಇರುವುದು ಒಳಿತು ಎಂದರು.

ಆಲ್ಕೋಹಾಲಿಕ್ಸ್ ಅನಾನಿಮಸ್ ಸಂಸ್ಥೆಯು ಕಳೆದ ಎರಡೂವರೆ ದಶಕಗಳಿಂದಲೂ ಶಿಬಿರಗಳನ್ನು ಏರ್ಪಡಿಸುತ್ತಾ, ಕುಡಿತದ ಚಟವಿರುವವರನ್ನು ಸುಧಾರಣೆ ಮಾಡಿ, ಅದರಿಂದ ಹೊರತರುತ್ತಿರುವುದು ಉತ್ತಮವಾದ ಕಾರ್ಯ ಎಂದು ಅವರು ಶ್ಲಾಘಿಸಿದರು.

ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್ ಮುಖ್ಯ ಅತಿಥಿಯಾಗಿದ್ದರು. ಮನೋರೋಗ ತಜ್ಞೆ ಡಾ.ವಸುಧ ರಾವ್ ದಿಕ್ಸೂಚಿ ಭಾಷಣ ಮಾಡಿದರು. ಆಲ್ಕೋಹಾಲಿಕ್ಸ್ ಅನಾನಿಮಸ್ ಕರ್ನಾಟಕ ವಲಯ–15ರ ಕ್ಲಾಸ್ ಬಿ ಟ್ರಸ್ಟಿ ಮಹೇಂದ್ರ, ಮೈಸೂರು ಅಧ್ಯಕ್ಷ ಕಾರ್ತಿಕ್, ಡೆಲಿಗೇಟ್ ಶಂಕರಮೂರ್ತಿ, ಶಾಂತರಾಜು ಇದ್ದರು.

ಅವಘಡಕ್ಕೀಡಾದವರಿಗೆ ಅತೀ ಶೀಘ್ರ ಚಿಕಿತ್ಸೆ ಒದಗಿಸಿದರೆ ಬದುಕುವ ಸಾಧ್ಯತೆ ಹೆಚ್ಚು

● ಪ್ರಾದೇಶಿಕ ಆರೋಗ್ಯ ತರಬೇತಿ ಕೇಂದ್ರದ ಪ್ರಾಂಶುಪಾಲೆ ಡಾ. ಎಸ್. ಆಶಾ ಕಿವಿಮಾತು ● ಕೌಶಲ್ಯ ಆಧಾರಿತ ಪ್ರಥಮ ಪ್ರತಿಸ್ಪಂದಕ ತರಬೇತಿ ಶಿಬಿರಕ್ಕೆ ಚಾಲನೆ



ಮೈಸೂರಿನ ಮೇಟಗಳ್ಳಿಯಲ್ಲಿರುವ ಪ್ರಾದೇಶಿಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ತರಬೇತಿ ಕೇಂದ್ರದಲ್ಲಿ ವಿವಿಧ ಇಲಾಖೆಯ ಸಿಬ್ಬಂದಿಗೆ ಪ್ರಥಮ ಚಿಕಿತ್ಸೆ ನೀಡುವ ಕುರಿತು ತರಬೇತಿ ಕಾರ್ಯಾಗಾರ ನಡೆಸಲಾಯಿತು.

ಮೈಸೂರು,ಡಿ.15(ಎಂಟಿವೈ)– ಅಪಘಾತ, ಹೃದಯಾಘಾತ ಸೇರಿದಂತೆ ವಿವಿಧ ಅವಘಡಗಳಿಗೆ ತುತ್ತಾಗಿ ತುರ್ತು ಸ್ಥಿತಿಯಲ್ಲಿರುವ ಗಾಯಾಳುಗಳಿಗೆ 'ಗೋಲ್ಡನ್ ಮಿನಿಟ್'ನಲ್ಲಿ ತುರ್ತು ಚಿಕಿತ್ಸೆ ನೀಡಿ, ಆಸ್ಪತ್ರೆಗೆ ಕೊಂಡೊಯ್ಯುವುದರಿಂದ ಗಾಯಾಳುವನ್ನು ಸಾವಿನ ದವಡೆಯಿಂದ ಪಾರು ಮಾಡಬಹುದು ಎಂದು ಪ್ರಾದೇಶಿಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಡಾ.ಎಸ್.ಆಶಾ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಮೇಟಗಳ್ಳಿಯಲ್ಲಿರುವ ಪ್ರಾದೇಶಿಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ತರಬೇತಿ ಕೇಂದ್ರದಲ್ಲಿ ಸೋಮವಾರ ಮೈಸೂರು, ಚಾಮರಾಜನಗರ, ಮಂಡ್ಯ, ಕೊಡಗು ಜಿಲ್ಲೆ ವಿವಿಧ ಶ್ರೇಣಿಯ ಸಿಬ್ಬಂದಿ ವರ್ಗದವರಿಗೆ, ಆಶಾ ಕಾರ್ಯಕರ್ತೆಯರು, ಕೆಎಸ್‌ಆರ್‌ಟಿಸಿ ನೌಕರರು, ಸರ್ಕಾರಿ ನರ್ಸಿಂಗ್ ಶಾಲೆಯ ವಿದ್ಯಾರ್ಥಿಗಳು, ರೈಲ್ವೆ ಹಾಗೂ ಇಎಸ್‌ಐ ಆಸ್ಪತ್ರೆ ಸಿಬ್ಬಂದಿ ವರ್ಗಕ್ಕೆ ಆಯೋಜಿಸಿದ್ದ 'ಕೌಶಲ್ಯ ಆಧಾರಿತ ಪ್ರಥಮ ಪ್ರತಿಸ್ಪಂದಕ ತರಬೇತಿ' ಶಿಬಿರವನ್ನು ಉದ್ಘಾಟಿಸಿದ ಅವರು ಮಾತನಾಡಿದರು.

ರಸ್ತೆ ಅಪಘಾತ, ಬೆಂಕಿ ದುರಂತ, ಹೃದಯಾಘಾತ ಸೇರಿದಂತೆ ವಿವಿಧ ಅವಘಡಕ್ಕೆ ತುತ್ತಾದ ಸಂತ್ರಸ್ತರಿಗೆ ತುರ್ತಾಗಿ ಪ್ರಥಮ ಚಿಕಿತ್ಸೆ ನೀಡುವುದರಿಂದ ಜೀವ ಹಾನಿ ತಡೆಗಟ್ಟಬಹುದು. ಗಾಯಾಳುವನ್ನು ಮೊದಲು ನೋಡಿದವರು ಪ್ರಥಮ ಚಿಕಿತ್ಸೆ ನೀಡುವುದಕ್ಕೆ ಪ್ರಯತ್ನಿಸಬೇಕು. ಯಾವುದೇ ಅಂಜಿಕೆ, ಅಳುಕಿಲ್ಲದೆ ತುರ್ತು ಚಿಕಿತ್ಸೆ ನೀಡಿದ ಬಳಿಕ ಆಸ್ಪತ್ರೆಗೆ ಕೊಂಡೊಯ್ಯಬೇಕು. ಆಗ ಜೀವದ ಅಪಾಯವನ್ನು ತಪ್ಪಿಸಬಹುದು ಎಂದರು.

ಸಾರಿಗೆ ಬಸ್, ರೈಲುಗಳಲ್ಲಿ ಪ್ರಯಾಣಿಸಲು ಬರುವ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿರುತ್ತದೆ. ಈ ವೇಳೆ ಯಾರಿಗಾದರೂ ಹೃದಯಾಘಾತ ಉಂಟಾದರೆ, ಅಲ್ಲಿನ ಸಿಬ್ಬಂದಿ ಪ್ರಥಮ ಚಿಕಿತ್ಸೆ ನೀಡಬೇಕು. ಮೆಡಿಕಲ್ ಮತ್ತು ಸರ್ಜಿಕಲ್ ಎಮರ್ಜೆನ್ಸಿ ಆಗಿದ್ದಾಗ ಪ್ರಥಮವಾಗಿ ಯಾರು ನೋಡುತ್ತಾರೋ ಅವರು ಪ್ರಥಮ ಚಿಕಿತ್ಸೆ ನೀಡಬೇಕು. ಹೃದಯಾಘಾತಕ್ಕೆ ಒಳಗಾದವರಿಗೆ ಸಿಪಿಆರ್ ಮಾಡುವ ಮೂಲಕ ಹೃದಯ ಮತ್ತೆ ಕಾರ್ಯನಿರ್ವಹಿಸುವಂತೆ ಮಾಡಿ ಆಸ್ಪತ್ರೆಗೆ ಕರೆದೊಯ್ಯಬಹುದು.

ಅಪಘಾತದಿಂದ ಗಾಯಗೊಂಡವರಿಗೆ ಆಗುತ್ತಿರುವ ರಕ್ತಸ್ರಾವ ತಡೆಗಟ್ಟಬೇಕು. ಹಾವು ಕಚ್ಚಿದವರನ್ನು ತುರ್ತಾಗಿ ಆಸ್ಪತ್ರೆಗೆ ಕರೆದೊಯ್ಯಬೇಕು. ಬ್ಲೇಡ್‌ನಿಂದ ಹಾವು ಕಚ್ಚಿದ ಸ್ಥಳವನ್ನು ಕುಯ್ಯುವುದು, ದೇವಾಲಯಕ್ಕೆ ಕರೆದೊಯ್ಯುವುದು ಮಾಡಬಾರದು. ಬಿದ್ದು ಗಾಯಗೊಂಡವರು, ಅಪಘಾತದಿಂದ ಗಾಯಗೊಂಡವರಿಗೆ ತಕ್ಷಣಕ್ಕೆ ನೀರು ಕುಡಿಸಬಾರದು ಎಂದು ಸಲಹೆ ನೀಡಿದರು.

ಇದೇ ವೇಳೆ ಪ್ರಾತ್ಯಕ್ಷಿಕೆ ಮೂಲಕ ಶಿಬಿರಾರ್ಥಿಗಳಿಗೆ ಪ್ರಥಮ ಚಿಕಿತ್ಸೆ ನೀಡುವ ವಿಧಾನದ ಬಗ್ಗೆ ತರಬೇತಿ ನೀಡಲಾಯಿತು. ಪ್ರಾಣಾಪಾಯದಿಂದ ರಕ್ಷಣೆ ಮಾಡಲು ಗೋಲ್ಡನ್ ಮಿನಿಟ್, ಗೋಲ್ಡನ್ ಹವರ್, ಗೋಲ್ಡನ್ ಟೈಮ್ ಪ್ರಮುಖವಾಗಿದೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ತರಬೇತುದಾರರಾದ ಶಿವಶಂಕರ.ಎನ್.ಆರ್, ಅರುಣ್‌ಕುಮಾರ್. ಎಸ್.ಆರ್, ದಿವ್ಯಸಿಂಗ್, ಶರತ್.ಎಸ್ ಹಾಗೂ ಕೃತಿ.ಕೆ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಪೌತಿ ಖಾತೆ ಅಭಿಯಾನದ ಪ್ರಗತಿ ಪರಿಶೀಲಿಸಿದ ಎಡಿಸಿ

ನಿಯಮಾನುಸಾರ ತ್ವರಿತವಾಗಿ ಖಾತೆ ಮಾಡಿಕೊಡುವಂತೆ ಸೂಚನೆ



ಹಾರೋಹಳ್ಳಿ(ಮೆಲ್ಲಹಳ್ಳಿ) ಗ್ರಾ.ಪಂ ಕಚೇರಿಗೆ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜ್ ಭೇಟಿ ನೀಡಿ ಪೌತಿ ಖಾತೆ ಅಭಿಯಾನದ ಬಗ್ಗೆ ಮಾಹಿತಿ ನೀಡಿದರು.

ಮೈಸೂರು,ಡಿ.15(ಎಂಟಿವೈ)– ಪೌತಿ ಖಾತೆಗಾಗಿ ಅರ್ಜಿ ಸಲ್ಲಿಸಿರುವವರಿಗೆ ತ್ವರಿತಗತಿಯಲ್ಲಿ ನಿಯಮಾನುಸಾರ ಪೌತಿ ಖಾತೆ ಮಾಡಿಕೊಡುವಂತೆ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜ್ ಸೂಚಿಸಿದ್ದಾರೆ.

ಮೈಸೂರು ತಾಲೂಕಿನ ವರುಣ ಹೋಬಳಿಯ ಹಾರೋಹಳ್ಳಿ(ಮೆಲ್ಲಹಳ್ಳಿ) ಗ್ರಾಮ ಪಂಚಾಯ್ತಿ ಕಚೇರಿಗೆ ಭೇಟಿ ನೀಡಿ ಗ್ರಾಮಸ್ಥರೊಂದಿಗೆ ಸಭೆ ನಡೆಸಿ, ಅಹವಾಲು ಆಲಿಸಿದರು. ಬಳಿಕ ಗ್ರಾ.ಪಂ ಅಧಿಕಾರಿಗಳಿಗೆ ಸೂಚನೆ ನೀಡಿ, ಸರ್ಕಾರ ರಾಜ್ಯದಲ್ಲಿ ಪೌತಿ ಖಾತೆ ಮಾಡಿಕೊಡುವ ಅಭಿಯಾನ ಆರಂಭಿಸಿದ್ದು, ಆ ಮೂಲಕ ಪೌತಿ ಖಾತೆಗಾಗಿ ಅರ್ಜಿ ಸಲ್ಲಿಸಿರುವವರಿಗೆ ತ್ವರಿತಗತಿಯಲ್ಲಿ ಪೌತಿ ಖಾತೆ ಮಾಡಿಕೊಡಲು ಕ್ರಮ ಕೈಗೊಂಡಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಈ ಅಭಿಯಾನ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಪ್ರತಿಯೊಂದು ಗ್ರಾ.ಪಂ ಅಧಿಕಾರಿಗಳು ಶ್ರಮಿಸಬೇಕು. ಕಂದಾಯ ಇಲಾಖೆಯ ಈ–ಪೌತಿ ಖಾತೆ ಅಭಿಯಾನವು ಮೈಸೂರು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ತಹಶೀಲ್ದಾರರ ನೇತೃತ್ವದಲ್ಲಿ ಪ್ರತಿಯೊಂದು ಗ್ರಾಮ ಆಡಳಿತಾಧಿಕಾರಿಗಳ ಮಟ್ಟದಲ್ಲಿ ನಡೆಯುತ್ತಿದ್ದು, ಬಾಕಿ ಇರುವ ಪೌತಿ ಖಾತೆ ಅರ್ಜಿಗಳನ್ನು ಇತ್ಯರ್ಥಪಡಿಸಲು ಪ್ರತಿ ಗ್ರಾಮ ಮಟ್ಟದಲ್ಲಿ ಅಭಿಯಾನ ನಡೆಸಲಾಗುತ್ತಿದೆ ಎಂದರು.

ಹಾರೋಹಳ್ಳಿ(ಮೆಲ್ಲಹಳ್ಳಿ) ಗ್ರಾ.ಪಂ ವ್ಯಾಪ್ತಿಯಲ್ಲಿ ಪೌತಿ ಖಾತೆಗಾಗಿ 1400 ಅರ್ಜಿ ಸಲ್ಲಿಕೆಯಾಗಿದೆ. ಅವುಗಳನ್ನು ಪರಿಶೀಲಿಸಿ, ನಿಯಮಾನುಸಾರ ಒಂದು ವಾರದಲ್ಲಿ ವಿಲೇವಾರಿ ಮಾಡಬೇಕು. ಆ ಮೂಲಕ ಅರ್ಜಿ ಸಲ್ಲಿಸಿರುವ ರೈತರು ಹಾಗೂ ಗ್ರಾಮಸ್ಥರಿಗೆ ನೆರವಾಗಬೇಕು. ಪೌತಿಖಾತೆ ಅಭಿಯಾನ ನಿರೀಕ್ಷೆಗೂ ಮೀರಿ ಯಶಸ್ವಿಗೊಳಿಸಬೇಕು ಎಂದು ಸಲಹೆ ನೀಡಿದರು.

ಸರ್ಕಾರ ರೈತರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಈ ಅಭಿಯಾನ ಆರಂಭಿಸಿದೆ. ರೈತರು ಈ ಕಾರ್ಯಕ್ರಮದ ಸದುಪಯೋಗ ಮಾಡಿಕೊಳ್ಳಬೇಕು. ಅಧಿಕಾರಿಗಳು ಗ್ರಾಮಮಟ್ಟದಲ್ಲಿ ಅಭಿಯಾನದ ಬಗ್ಗೆ ಪ್ರಚಾರ ಮಾಡಿ ಸಾರ್ವಜನಿಕರು ಹಾಗೂ ರೈತರಿಗೆ ನೆರವಾಗಬೇಕು ಎಂದರು.

ಈ ಸಂದರ್ಭದಲ್ಲಿ ವರುಣಾ ಹೋಬಳಿಯ ಉಪ ತಹಸೀಲ್ದಾರ್, ಕಂದಾಯ ನಿರೀಕ್ಷಕರು, ಹಾರೋಹಳ್ಳಿ(ಮೆಲ್ಲಹಳ್ಳಿ)ಯ ಕಂದಾಯ ಇಲಾಖಾ ಆಡಳಿತಾಧಿಕಾರಿಗಳು, ಗ್ರಾಮಸ್ಥರು, ಸಾರ್ವಜನಿಕರು ಹಾಗೂ ರೈತರು ಉಪಸ್ಥಿತರಿದ್ದರು.

ರೈಲ್ವೆ ನಿವೃತ್ತಿದಾರರ ದಿನಾಚರಣೆ

ಮೈಸೂರು, ಡಿ. 15– ಮೈಸೂರಿನ ರೈಲ್ವೆ ನಿವೃತ್ತಿದಾರರ ಸಂಘದಿಂದ ಡಿ. 17 ರಂದು ಬೆಳಗ್ಗೆ 10.30ಕ್ಕೆ ಶೇಷಾದ್ರಿಪುರ ರಸ್ತೆಯಲ್ಲಿರುವ ಎಸ್.ಸಿ, ಎಸ್‌ಟಿ ಸಭಾಂಗಣದಲ್ಲಿ ರೈಲ್ವೆ ನಿವೃತ್ತಿದಾರರ ದಿನಾಚರಣೆ ಆಚರಿಸಲು ನಿರ್ಧರಿಸಲಾಗಿದೆ. ಕಾರ್ಯ ಕ್ರಮಕ್ಕೆ ಮುದಿತ್ ಮಿತ್ತಲ್, ಹಿರಿಯ ಕಾರ್ಮಿಕ ಅಧಿಕಾರಿ ವಿಷ್ಣುಗೌಡ, ಹಿರಿಯ ಲೇಖಾಧಿಕಾರಿ ಹರ್ಷವರ್ಧನ್, ಪಾರ್ಥಸಾರಥಿ, ಜಿ.ಎಸ್.ಸ್ವಾಮಿನಾಥನ್ ಭಾಗವಹಿಸಲಿದ್ದಾರೆ.

ಅಮೆರಿಕಾದೊಂದಿಗಿನ ಕೃಷಿ ಸಂಬಂಧಿತ ಮುಕ್ತ ವಾಣಿಜ್ಯ ಒಪ್ಪಂದ ವಿರೋಧಿಸಿ ರೈತ ಸಂಘಟನೆಗಳ ಪ್ರತಿಭಟನೆ

● ಬಳಿಕ ಸಂಸದರಾದ ಯದುವೀರ್, ಸುನೀಲ್ ಬೋಸ್‌ಗೆ ಮನವಿ ಸಲ್ಲಿಕೆ ● ಈ ಒಡಂಬಡಿಕೆಯಿಂದ ವಿದೇಶಿ ಆಹಾರ ಪದಾರ್ಥ ಆಮದು ಹೆಚ್ಚಾಗಿ ದೇಶಿಯ ರೈತರಿಗೆ ಸಂಕಷ್ಟ



ಮೈಸೂರಿನ ಕಾಡಾ ಕಚೇರಿ ಎದುರು ಸಾಮೂಹಿಕ ನಾಯಕತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಸೋಮವಾರ ಪ್ರತಿಭಟನೆ ನಡೆಸಲಾಯಿತು

ಮೈಸೂರು, ಡಿ.15(ಎಂಕೆ)– ಅಮೆರಿಕಾದೊಂದಿಗಿನ ಕೃಷಿ ಸಂಬಂಧಿತ ಮುಕ್ತ ವಾಣಿಜ್ಯ ಒಪ್ಪಂದಕ್ಕೆ ಕೇಂದ್ರ ಸರ್ಕಾರ ಸಹಿ ಮಾಡಬಾರದು ಎಂದು ಆಗ್ರಹಿಸಿ ಸಾಮೂಹಿಕ ನಾಯಕತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಪ್ರತಿಭಟನೆ ನಡೆಸಿ, ಸಂಸದರಾದ ಯದುವೀರ್ ಹಾಗೂ ಸುನೀಲ್ ಬೋಸ್ ಅವರಿಗೆ ಮನವಿ ಸಲ್ಲಿಸಲಾಯಿತು.

ಮೈಸೂರಿನ ಕಾಡಾ ಕಚೇರಿ ಆವರಣದಲ್ಲಿ ಸೋಮವಾರ ಜಮಾವಣೆಗೊಂಡ ರೈತ ಮುಖಂಡರು, ಅಮೆರಿಕಾ ಜೊತೆಗೆ ಕೃಷಿ ಸಂಬಂಧಿತ ಮುಕ್ತ ವಾಣಿಜ್ಯ ಒಪ್ಪಂದಕ್ಕೆ ಸಹಿ ಮಾಡಲು ಮುಂದಾಗಿರುವ ಕೇಂದ್ರ ಸರ್ಕಾರದ ವಿರುದ್ಧ ಧಿಕ್ಕಾರ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ದೇಶದ ರೈತರ ಬೆಳೆಗೆ ಸರಿಯಾದ ಬೆಲೆ ಸಿಗದೆ ಸಂಕಷ್ಟದಲ್ಲಿದ್ದಾರೆ. ಹವಾಮಾನ ವೈಪರೀತ್ಯದಿಂದಾಗಿ ನಷ್ಟ ಅನುಭವಿಸುವಂತಾಗಿದೆ. ಮಾರುಕಟ್ಟೆಗಳಲ್ಲಿ ದಲ್ಲಾಳಿಗಳ ಹಾವಳಿ, ಸಾಲಕೊಟ್ಟ ಬ್ಯಾಂಕ್ ಮತ್ತು ಖಾಸಗಿ ಲೇವಾದೇವಿದಾರರ ಒತ್ತಡಕ್ಕೆ ಸಿಲುಕಿ ರೈತರು ಕಂಗಾಲಾಗಿರುವ ಹೊತ್ತಿನಲ್ಲಿ ಒಡಂಬಡಿಕೆ ಬೇಡವೇ ಬೇಡ. ಒಡಂಬಡಿಕೆಯಿಂದ ವಿದೇಶಿ ಆಹಾರ ಪದಾರ್ಥಗಳು ದೇಶದ ಮಾರುಕಟ್ಟೆ ಪ್ರವೇಶಿಸಲಿದ್ದು, ಸ್ಥಳೀಯ ರೈತರು ಬೆಳೆದ ಬೆಳೆಗೆ ಬೆಲೆಯೇ ಇಲ್ಲದಂತಾಗುತ್ತದೆ ಎಂದು ಪ್ರತಿಪಾದಿಸಿದರು.

ನ್ಯಾಷನಲ್ ಕ್ರೈಂ ರೆಕಾರ್ಡ್ ಬ್ಯುರೋ ಪ್ರಕಾರ ದೇಶದಲ್ಲಿ ಪ್ರತಿ ಗಂಟೆಗೆ ಒಬ್ಬ ರೈತ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಕರ್ನಾಟಕವು ರೈತರ ಆತ್ಮಹತ್ಯೆ ವಿಚಾರದಲ್ಲಿ ದೇಶದಲ್ಲಿ ಎರಡನೇ ಸ್ಥಾನ ಪಡೆದಿದೆ. ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ನೀಡಿಲ್ಲ. ಭತ್ತ ಖರೀದಿ ಕೇಂದ್ರಗಳಾಗಿಲ್ಲ. ಇಷ್ಟೆಲ್ಲಾ ಸಮಸ್ಯೆಗಳಿದ್ದರೂ ಕೃಷಿ ಉತ್ಪನ್ನಗಳಾದ ಹಾಲು ಮತ್ತು ಹಾಲಿನ ಉತ್ಪನ್ನಗಳು, ಮೆಕ್ಕೆಜೋಳ, ಅಕ್ಕಿ, ಹತ್ತಿ, ಸೋಯಾ ಬೀನ್, ದ್ವಿದಳ ಧಾನ್ಯಗಳು ಮತ್ತು ಚಿಕನ್‌ಗೆ ಸಂಬಂಧಿಸಿದಂತೆ ಸುಂಕ ರಹಿತ ಅಥವಾ ಅತಿ ಕಡಿಮೆ ಸುಂಕದ ಆಧಾರದ ಮೇಲೆ ಆಮದು ಮಾಡಿಕೊಳ್ಳಲು ಒಪ್ಪಂದ ಮಾಡಿಕೊಳ್ಳುತ್ತಿರುವುದು ದೇಶದ ರೈತರಿಗೆ ಅನ್ಯಾಯ ಮಾಡಿದಂತೆ ಎಂದು ಕಿಡಿಕಾರಿದರು.

ಅಮೆರಿಕಾದೊಂದಿಗಿನ ಒಡಂಬಡಿಕೆಯಿಂದ ಅಲ್ಲಿ ಬೆಳೆದ ಆಹಾರ ಪದಾರ್ಥಗಳನ್ನು ದೇಶದೊಳಗೆ ಸುರಿಯಲು ಆರಂಭಿಸಿದರೆ, ನಮ್ಮ ದೇಶದ ರೈತರ ಪರಿಸ್ಥಿತಿ ಏನಾಗಬಹುದು ಎಂಬುದನ್ನು ಕೇಂದ್ರ ಸರ್ಕಾರ ಯೋಚನೆ ಮಾಡಬೇಕು. ಅಮೆರಿಕಾದ 34.8 ಕೋಟಿ ಜನರ ಪೈಕಿ ಕೃಷಿಯಲ್ಲಿ ತೊಡಗಿರುವವರು ಕೇವಲ 3.4 ಕೋಟಿ ಜನರು ಮಾತ್ರ. ಅದೇ 140 ಕೋಟಿ ಜನಸಂಖ್ಯೆಯುಳ್ಳ ಭಾರತದಲ್ಲಿ ಸುಮಾರು 70 ಕೋಟಿ ರೈತರಿದ್ದಾರೆ. ವಿದೇಶಿ ಕೃಷಿ ಪದಾರ್ಥಗಳನ್ನು ಆಮದು ಮಾಡಿಕೊಳ್ಳುವ ಬದಲು ದೇಶದ ರೈತರ ಸಮಸ್ಯೆಗಳನ್ನು ಬಗೆಹರಿಸಬಹುದಲ್ಲವೇ ಎಂದು ಪ್ರಶ್ನಿಸಿದರು.

ಹಾಗೆಯೇ ಅಮೆರಿಕಾದೊಂದಿಗೆ ಒಪ್ಪಂದದಿಂದ ಆತ್ಮ ನಿರ್ಭರ ಭಾರತದ ಕನಸು ಭಗ್ನವಾಗಲಿದೆ. ದೇಶದಲ್ಲಿ ರೈತರ ಆತ್ಮಹತ್ಯೆ ಸರಣಿ ಹೆಚ್ಚಾಗಲಿದೆ. ಆದ್ದರಿಂದ ಕೇಂದ್ರ ಸರ್ಕಾರ ಕೂಡಲೇ ಅಮೆರಿಕಾದೊಂದಿಗಿನ ಕೃಷಿ ಸಂಬಂಧಿತ ಮುಕ್ತ ವಾಣಿಜ್ಯ ಒಪ್ಪಂದವನ್ನು ಕೈ ಬಿಡಬೇಕು. ಇದಕ್ಕೆ ರಾಜ್ಯದಿಂದ ಆಯ್ಕೆಯಾಗಿರುವ ಸಂಸದರು ಅವಕಾಶ ನೀಡಬಾರದು ಎಂದು ಒತ್ತಾಯಿಸಿದರು. ಬಳಿಕ ಸಂಸದರಾದ ಯದುವೀರ್ ಹಾಗೂ ಸುನೀಲ್ ಬೋಸ್ ಅವರಿಗೆ ಮನವಿ ಸಲ್ಲಿಸಲಾಯಿತು. ರೈತ ಮುಖಂಡರಾದ ಹೊಸೂರು ಪ್ರಕಾಶ್, ಮಲ್ಲಿಕಾರ್ಜುನ್ ಬಳ್ಳಾರಿ, ಮಂಜು ಕಿರಣ್ ಮತ್ತಿತರರಿದ್ದರು.

ಅಖಿಲ ಭಾರತೀಯ ಪಿಂಚಣಿ ಅದಾಲತ್‌ನಲ್ಲಿ 32ರಲ್ಲಿ 24 ಅರ್ಜಿ ವಿಲೇವಾರಿ

ನಿವೃತ್ತರ ಹಿತಕಾಯಲು ಬದ್ಧ: ಮೈಸೂರು ವಿಭಾಗೀಯ ವ್ಯವಸ್ಥಾಪಕ ಮುದಿತ್ ಮಿತ್ತಲ್ ಭರವಸೆ



ನೈರುತ್ಯ ರೈಲ್ವೆ ಮೈಸೂರು ವಿಭಾಗದಲ್ಲಿ ಸೋಮವಾರ ಅಖಿಲ ಭಾರತೀಯ ಪಿಂಚಣಿ ಅದಾಲತ್ ನಡೆಯಿತು.

ಮೈಸೂರು, ಡಿ.15(ಎಂಕೆ)– ನೈರುತ್ಯ ರೈಲ್ವೆ ಮೈಸೂರು ವಿಭಾಗದ ವತಿಯಿಂದ ನಡೆದ ಅಖಿಲ ಭಾರತೀಯ ಪಿಂಚಣಿ ಅದಾಲತ್‌ನಲ್ಲಿ ಸಲ್ಲಿಕೆಯಾದ 32 ದೂರು ಅರ್ಜಿಗಳ ಪೈಕಿ 24 ಅರ್ಜಿಗಳನ್ನು ಇತ್ಯರ್ಥಗೊಳಿಸಲಾಯಿತು.

ಮೈಸೂರು ರೈಲ್ವೆ ನಿಲ್ದಾಣದ ವಿಭಾಗೀಯ ವ್ಯವಸ್ಥಾಪಕರ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಅದಾಲತ್‌ನಲ್ಲಿ 8 ಅರ್ಜಿಗಳು ಹಾಗೂ ಅದಾಲತ್‌ಗೂ ಮುನ್ನವೇ 16 ಅರ್ಜಿಗಳನ್ನು ಇತ್ಯರ್ಥಗೊಳಿಸಿ, ಉಳಿದ ಅರ್ಜಿಗಳನ್ನು ಹೆಚ್ಚಿನ ವಿಚಾರಣೆಗೆ ಒಳಪಡಿಸಲಾಯಿತು.

ಬಳಿಕ ಮೈಸೂರು ವಿಭಾಗೀಯ ವ್ಯವಸ್ಥಾಪಕ ಮುದಿತ್ ಮಿತ್ತಲ್ ಮಾತನಾಡಿ, ರೈಲ್ವೆ ಇಲಾಖೆಯ ಉನ್ನತೀಕರಣದಲ್ಲಿ ನಿವೃತ್ತ ನೌಕರರ ಶ್ರಮ ಅಧಿಕವಾಗಿದೆ. ಇಲಾಖೆಯು ನಿವೃತ್ತ ನೌಕರರ ಹಿತ ಕಾಯುತ್ತದೆ. ಪ್ರತಿ ಪಿಂಚಣಿದಾರರ ಸಮಸ್ಯೆ ಪರಿಹರಿಸಲು ಇಂದು ರೈಲ್ವೆ ಇಲಾಖೆ ದೇಶದಲ್ಲಿ ಅದಾಲತ್ ಆಯೋಜನೆ ಮಾಡಲಾಗಿದ್ದು, ನಿವೃತ್ತರ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸಿ ಅವರ ಹಿತ ಕಾಯುವಲ್ಲಿ ಶ್ರಮವಹಿಸಲಾಗುವುದು ಎಂದರು.

ನಿವೃತ್ತಿ ಸಂದರ್ಭದಲ್ಲಿ ಸೇವಾ ದಾಖಲೆ, ಪಿಪಿಓ (ನಿವೃತ್ತ ಸೇವಾ ಪ್ರಮಾಣ ಪತ್ರ), ಸೆಟ್ಲ್‌ಮೆಂಟ್ ಶೀಟ್, ಪಿಂಚಣಿ ವಿವರಣಾ ಪತ್ರ, ಕೌಟುಂಬಿಕ ಪಿಂಚಣಿ ಸದಸ್ಯರ ವಿವರ ಸೇರಿದಂತೆ ಅನೇಕ ದಾಖಲೆಗಳ ಮುದ್ರಿತ ಪ್ರತಿಗಳನ್ನು ನೀಡಲಾಗುವುದು. ಕೌಟುಂಬಿಕ ಪಿಂಚಣಿ ಪಡೆಯಲು ಸೂಕ್ತ ದಾಖಲೆ ನೀಡಿದರೆ ಶೀಘ್ರದಲ್ಲಿ ಪರಿಹಾರ ಮಾಡಲಾಗುತ್ತದೆ. ಆರ್ಥಿಕ ಮತ್ತು ಕಾರ್ಮಿಕ ಕಲ್ಯಾಣ ವಿಭಾಗಗಳ ಸಮನ್ವಯ ಕಾರ್ಯದ ಮೂಲಕ ಪಿಂಚಣಿದಾರರ ಸಮಸ್ಯೆಗಳನ್ನು ಪರಿಹರಿಸಿ, ವ್ಯರ್ಥ ಅಲೆದಾಟ, ಅನಗತ್ಯ ದಾಖಲೆ ಪಡೆಯುವುದನ್ನು ತಪ್ಪಿಸಲಾಗುತ್ತದೆ ಎಂದು ತಿಳಿಸಿದರು.

ಇದೇ ವೇಳೆ ನಿವೃತ್ತ ರೈಲ್ವೆ ಇಲಾಖೆ ನೌಕರರ ಸಂಘದ ಸದಸ್ಯ ವಾಸುದೇವ, ರೈಲ್ವೆ ಆಸ್ಪತ್ರೆ ಅವ್ಯವಸ್ಥೆ ಹಾಗೂ ಸಿಬ್ಬಂದಿ ಕೊರತೆ, ಕೌಟುಂಬಿಕ ಪಿಂಚಣಿ ಸಮಸ್ಯೆಗಳ ಪರಿಹಾರಕ್ಕೆ ಮನವಿ ಸಲ್ಲಿಸಿದ್ದರು. ಹಿರಿಯ ವರಿಷ್ಠ ವಿಭಾಗೀಯ ಹಣಕಾಸು ವ್ಯವಸ್ಥಾಪಕ ಆರ್.ಸಿ ಹರ್ಷವರ್ಧನ್, ವಿಭಾಗೀಯ ಕಾರ್ಮಿಕಾಧಿಕಾರಿ ವಿಷ್ಣುಗೌಡ, ವಿಭಾಗೀಯ ಹಣಕಾಸು ವ್ಯವಸ್ಥಾಪಕರೂ ಆದ ಜನ ಸಂಪರ್ಕ ಅಧಿಕಾರಿ ಪೃಥ್ವಿ ಎಸ್.ಹುಲ್ಲತ್ತಿ ಮತ್ತಿತರರಿದ್ದರು.

ಅರೆಭಾಷೆಯಲ್ಲಿ ಸಿನಿಮಾ, ನಾಟಕ, ಕಿರುಚಿತ್ರಗಳ ನಿರ್ಮಾಣ ಕಾರ್ಯ ಹೆಚ್ಚಾಗಿ ಆಗಲಿ



ಅರೆಭಾಷೆ 'ಸುದ್ದಿಜೊಂಪೆ' ವಾಚಕರನ್ನು ಸನ್ಮಾನಿಸಲಾಯಿತು.

ಮಡಿಕೇರಿ,ಡಿ.15–ಕನ್ನಡ ಉಪ ಭಾಷೆಗಳಲ್ಲಿ ಒಂದಾದ ಅರೆಭಾಷೆ ಎಲ್ಲೆಡೆ ಪಸರಿಸುವಂತಾಗಲು ಸಿನಿಮಾ, ನಾಟಕ ಹಾಗೂ ಕಿರುಚಿತ್ರಗಳ ನಿರ್ಮಾಣ ಕಾರ್ಯ ಹೆಚ್ಚಾಗಿ ಆಗಬೇಕು ಎಂದು ಕೊಡಗು ಗೌಡ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಚೊಕ್ಕಾಡಿ ಎನ್.ಅಪ್ಪಯ್ಯ ಸಲಹೆ ನೀಡಿದ್ದಾರೆ.

ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಇವರ ಸಹಯೋಗದೊಂದಿಗೆ ಮೂರ್ನಾಡು ಗೌಡ ಸಮಾಜದಲ್ಲಿ ಸೋಮವಾರ ನಡೆದ 'ಅರೆಭಾಷೆ ದಿನಾಚರಣೆ' ಕಾರ್ಯಕ್ರಮದಲ್ಲಿ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಬೆಳವಣಿಗೆಯಲ್ಲಿ ಸಮಾಜಗಳ ಪಾತ್ರ ಕುರಿತು ಮಾತನಾಡಿ, ಇಂದಿನ ಸಾಮಾಜಿಕ ಮಾಧ್ಯಮ ಯುಗದಲ್ಲಿ ಸಿನಿಮಾ ನಾಟಕ, ಸಾಕ್ಷ್ಯಚಿತ್ರ, ಕಿರುಚಿತ್ರಗಳು, ಎಲ್ಲರನ್ನು ಗಮನಸೆಳೆಯುತ್ತವೆ. ಆದ್ದರಿಂದ ಸಾಮಾಜಿಕ ಮಾಧ್ಯಮವು ಪ್ರಬಲವಾಗಿದ್ದು, ಆ ನಿಟ್ಟಿನಲ್ಲಿ ಅರೆಭಾಷೆ ಬೆಳವಣಿಗೆಗೆ ಇವುಗಳ ನಿರ್ಮಾಣ ಕಾರ್ಯ ಅತ್ಯಗತ್ಯ ಎಂದು ಪ್ರತಿಪಾದಿಸಿದರು.

ಕೊಡಗು ಗೌಡ ಸಮಾಜಗಳ ಒಕ್ಕೂಟದ ಮಾಜಿ ಅಧ್ಯಕ್ಷ ಸೂರ್ತಲೆ ಆರ್.ಸೋಮಣ್ಣ ಅವರು ಅರೆಭಾಷೆ ಸಾಹಿತ್ಯ ಮತ್ತು ಸಂಸ್ಕೃತಿ ಅಭಿವೃದ್ಧಿಗೆ ಹಿರಿಯರ ಕೊಡುಗೆ ಕುರಿತು ಮಾತನಾಡಿ, ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಬೆಳವಣಿಗೆಯಲ್ಲಿ ಪಟ್ಟಡ ಪ್ರಭಾಕರ್, ಪುರುಷೋತ್ತಮ ಬಿಳಿಮಲೆ, ಹೊದ್ದೆಟ್ಟಿ ಭವಾನಿ ಶಂಕರ್, ಸೂದನ ಈರಪ್ಪ, ವಿಶ್ವನಾಥ ಬದಿಕಾನ, ಕೋಡಿ ಕುಶಾಲಪ್ಪ ಗೌಡ, ಮೋಹನ್ ಸೋನಾ, ಪಿ.ಜಿ.ಅಂಬೆಕಲ್ಲು, ಬೈತಡ್ಕ ಜಾನಕಿ ಬೆಳ್ಯಪ್ಪ, ಕುರುಂಜಿ ಗಂಗಾಧರ್, ಪೂಜಾರಿ ಮೊಣ್ಣಪ್ಪ, ಕೋರನ ಸರಸ್ವತಿ, ಜೋಂಯಪ್ಪ ಮಾಸ್ಟರ್, ಹೀಗೆ ಹಲವರು ಶ್ರಮಿಸಿದ್ದಾರೆ ಎಂದು ಹೇಳಿದರು.

ಮೂರ್ನಾಡು ಗೌಡ ಸಮಾಜದ ಮಾಜಿ ಅಧ್ಯಕ್ಷ ಚೆಟ್ಟಿಮಾಡ ಟಿ.ಕಾರ್ಯಪ್ಪ (ವಸಂತ) ಮಾತನಾಡಿ, ಅರೆಭಾಷೆ, ಸಂಸ್ಕೃತಿ, ಕಲೆ ಉಳಿಸಿ ಬೆಳೆಸುವಂತಾಗಬೇಕು. ಮನೆಯಲ್ಲಿ ಕಡ್ಡಾಯವಾಗಿ ಅರೆಭಾಷೆ ಮಾತನಾಡುವಂತಾಗಬೇಕು. ಇದರಿಂದ ಮಕ್ಕಳು ಅರೆಭಾಷೆ ಕಲಿಕೆಗೆ ಸಹಕಾರಿಯಾಗಲಿದೆ ಎಂದರು.

ಕೊಡಗು ಗೌಡ ವಿದ್ಯಾಸಂಘದ ಅಧ್ಯಕ್ಷ ಅಂಬೆಕಲ್ಲು ನವೀನ್ ಕುಶಾಲಪ್ಪ ಅಕಾಡೆಮಿ ಸದಸ್ಯ ಕಾರ್ಯಕ್ರಮದ ಸಂಚಾಲಕ ಸಂದೀಪ್ ಪೂಳಕಂಡ ಸೂದನ ಈರಪ್ಪ ಮಾತನಾಡಿದರು. ಆಕಾಶವಾಣಿಯಲ್ಲಿ ಅರೆಭಾಷೆ 'ಸುದ್ದಿಜೊಂಪೆ' ವಾಚಕರಾದ ರೋಹಿಣಿ ಗುಡ್ಡೆಮನೆ, ವಾಣಿ ಚೊಕ್ಕಾಡಿ, ಮಜ್ಜೆಗೌಡನ ಪ್ರೇಮ ಪ್ರಕಾಶ್, ಉಳುವಾರನ ರೋಷನ್ ವಸಂತ್, ಪುದಿಯನೆರವನ ಸ್ವಾತಿ, ಕಲ್ಲುಮುಟ್ಲು ಜಶ್ಮಿ ಚಿಂತು, ಕ್ರೀಡೆ ಸೇರಿದಂತೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಕು.ಮೇರ್ಕಜೆ ದಿವಿನ್ ಬೋಪಯ್ಯ ಮತ್ತು ಕು.ದೇರಾಜೆ ಭವಿಷ್ಯ ಕಿರಣ್ ಅವರನ್ನು ಸನ್ಮಾನಿಸಲಾಯಿತು.

ಮೂರ್ನಾಡು ಗೌಡ ಸಮಾಜದ ಅಧ್ಯಕ್ಷ ಪಾಣತ್ತಲೆ ಟಿ.ಹರೀಶ್ ಮಾತನಾಡಿದರು. ವಯಸ್ಕರು ಮತ್ತು ಮಕ್ಕಳಿಗೆ ಪ್ರತ್ಯೇಕ ಅರೆಭಾಷೆ ರಸಪ್ರಶ್ನೆ ನಡೆಯಿತು. ವಿಜೇತರಿಗೆ ನಗದು ಬಹುಮಾನ ನೀಡಲಾಯಿತು.

ರಸಪ್ರಶ್ನೆ ಸ್ಪರ್ಧೆಯನ್ನು ಸದಸ್ಯರಾದ ಪಿ.ಎಸ್.ಕಾರ್ಯಪ್ಪ ಮತ್ತು ಕುಂಬುಗೌಡನ ರಂಜಿತ್ ನಡೆಸಿಕೊಟ್ಟರು. ವಿಜೇತರಿಗೆ ನಗದು ಬಹುಮಾನ ನೀಡಲಾಯಿತು. ತೆಕ್ಕಡೆ ಪೂರ್ಣಿಮಾ ಪ್ರಾರ್ಥಿಸಿದರು. ಸೂದನ ಈರಪ್ಪ ಸ್ವಾಗತಿಸಿದರು, ಕಲ್ಲುಮುಟ್ಲು ಜಶ್ಮಿ ಅವರು ನಿರೂಪಿಸಿದರು, ಲತಾ ಪ್ರಸಾದ್ ಕುದ್ಪಾಜೆ ಅವರು ವಂದಿಸಿದರು.

ಪ್ರವಾಸಿ ಬಸ್‌ಗೆ ಆಕಸ್ಮಿಕ ಬೆಂಕಿ ತಗುಲಿ ಸಂಪೂರ್ಣ ಭಸ್ಮ



ವಿರಾಜಪೇಟೆ/ಮಡಿಕೇರಿ, ಡಿ.15–ವಿದ್ಯಾರ್ಥಿಗಳನ್ನು ಬಿಟ್ಟು ಹಿಂತೆರಳುತ್ತಿದ್ದ ಪ್ರವಾಸಿ ಬಸ್ಸು ಆಕಸ್ಮಿಕ ಬೆಂಕಿಗೆ ತುತ್ತಾಗಿ ಸಂಪೂರ್ಣ ಕರಕಲಾಗಿರುವ ಘಟನೆ ಸಂಭವಿಸಿದೆ.

ಈ ಘಟನೆಯಲ್ಲಿ ಬಸ್ ಚಾಲಕ ಮತ್ತು ಸಹಾಯಕ ಬಸ್‌ನಿಂದ ಹೊರ ಜಿಗಿದು ಪ್ರಾಣ ಉಳಿಸಿಕೊಂಡಿದ್ದಾರೆ. ಬಸ್‌ನ ತಾಂತ್ರಿಕ ದೋಷವೇ ಈ ಅವಘಡಕ್ಕೆ ಕಾರಣ ಎಂದು ಶಂಕಿಸಲಾಗಿದೆ.

ಘಟನೆ ಹಿನ್ನೆಲೆ : 2 ದಿನಗಳ ಹಿಂದೆ ವಿರಾಜಪೇಟೆ ಹೊರ ವಲಯದ ಮದರಸ ಶಾಲೆಯ 48 ವಿದ್ಯಾರ್ಥಿಗಳು ಕೇರಳ ಪ್ರವಾಸಿ ಬಸ್‌ನಲ್ಲಿ ಕೇರಳಕ್ಕೆ ಪ್ರವಾಸ ಕೈಗೊಂಡಿದ್ದರು. ಪ್ರವಾಸ ಮುಗಿಸಿ ಸೋಮವಾರ ಬೆಳಿಗ್ಗೆ ವಿರಾಜಪೇಟೆಗೆ ಆಗಮಿಸಿ ವಿದ್ಯಾರ್ಥಿಗಳನ್ನು ಕೆಳಗಿಳಿಸಿ 5ಗಂಟೆ ಸಮಯದಲ್ಲಿ ಪೆರಂಬಾಡಿ–ಮಾಕುಟ್ಟ ಮಾರ್ಗವಾಗಿ ಹಿಂತಿರುಗುತ್ತಿತ್ತು. ಮಾಕುಟ್ಟದಿಂದ ಅಂದಾಜು 12 ಕಿ.ಮೀ ದೂರದ ಮಗಡಿಪಾರೆ ಆಂಜನೇಯ ಸ್ವಾಮಿ ದೇವಾಲಯ ವ್ಯಾಪ್ತಿಯ ದಟ್ಟ ಅರಣ್ಯದ ಬಳಿ ಬಸ್‌ನ ಇಂಧನ ಟ್ಯಾಂಕ್ ಬಳಿ ಮೊದಲಿಗೆ ಹೊಗೆ ಕಾಣಿಸಿಕೊಂಡಿದ್ದು, ಬಳಿಕ ಬೆಂಕಿ ಹರಡಿಕೊಂಡಿದೆ.

ಈ ರಸ್ತೆಯಲ್ಲಿ ಯಾವುದೇ ಮೊಬೈಲ್ ಸಂಪರ್ಕ ಸಿಗದ ಕಾರಣ ದಾರಿಯಲ್ಲಿ ಸಂಚರಿಸುತ್ತಿದ್ದ ಇತರ ವಾಹನ ಚಾಲಕರು ವಿರಾಜಪೇಟೆಗೆ ಹೋಗಿ ಗ್ರಾಮಾಂತರ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ತಕ್ಷಣವೇ ಗ್ರಾಮಾಂತರ ಠಾಣಾಧಿಕಾರಿ ಲತಾ ಸಿಬ್ಬಂದಿ ಸಂತೋಷ್, ಸ್ಟೀಫನ್ ತಂಡ ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿ ಘಟನಾ ಸ್ಥಳಕ್ಕೆ ತೆರಳಿದ್ದಾರೆ. ಗೋಣಿಕೊಪ್ಪದಿಂದ ಆಗಮಿಸಿದ ಅಗ್ನಿ ಶಾಮಕ ದಳದ ಅಧಿಕಾರಿ ಚಂದ್ರಶೇಖರ ಭಂಡಾರಿ ಹಾಗೂ ಸಿಬ್ಬಂದಿ ಪೊನ್ನಪ್ಪ, ರವಿಕುಮಾರ್, ಗಂಗಾಧರ, ಸುನಿಲ್ ಕುಮಾರ್, ಜಗದೀಶ್ ತಂಡ ಕಾರ್ಯಾಚರಣೆ ನಡೆಸಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಬೆಂಕಿ ಅವಘಡದಿಂದ ರಸ್ತೆಯ ಎರಡೂ ಬದಿಗಳಲ್ಲಿ ನೂರಾರು ವಾಹನಗಳು ಸಾಲು ಗಟ್ಟಿ ನಿಲ್ಲುವಂತಾಗಿತ್ತು. ಬಸ್ ಸಂಪೂರ್ಣ ಸುಟ್ಟು ಹೋಗಿದ್ದು, ಲಕ್ಷಾಂತರ ರೂ. ನಷ್ಟವಾಗಿದೆ. ವಿರಾಜಪೇಟೆ ಗ್ರಾಮಾಂತರ ಠಾಣೆ ಪೊಲೀಸರು ಮೊಕದ್ದಮೆ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಜ್ಞಾನ ವಿಕಾಸ ಕಾರ್ಯಕ್ರಮದ ಪ್ರಯುಕ್ತ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ



ತಾಲೂಕು ಮಟ್ಟದ ಮಹಿಳಾ ವಿಚಾರ ಗೋಷ್ಠಿ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಸಾಧಕರನ್ನು ಗೌರವಿಸಲಾಯಿತು.

ನಾಪೋಕ್ಲು, ಡಿ15(ದುಗ್ಗಳ)–ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮಡಿಕೇರಿ ತಾಲೂಕಿನ ಜ್ಞಾನ ವಿಕಾಸ ಕಾರ್ಯಕ್ರಮದ ಪ್ರಯುಕ್ತ ತಾಲೂಕು ಮಟ್ಟದ ಮಹಿಳಾ ವಿಚಾರ ಗೋಷ್ಠಿ ಕಾರ್ಯಕ್ರಮವು ಪದ್ಮಶ್ರೀ ಪುರಸ್ಕೃತೆ ರಾಣಿ ಮಾಚಯ್ಯ ಅಧ್ಯಕ್ಷತೆಯಲ್ಲಿ ಮಡಿಕೇರಿಯ ಮೈತ್ರಿ ಸಭಾಂಗಣದಲ್ಲಿ ನಡೆಯಿತು.

ನಗರ ಸಭೆ ಅಧ್ಯಕ್ಷೆ ಪಿ. ಕಲಾವತಿ ನೆರವೇರಿಸಿ ಮಹಿಳೆಯರು ಸಮಾಜಮುಖಿ ಕಾರ್ಯಕ್ರಮದಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಲು ಮಹಿಳೆಯರಿಗೆ ಇಂತಹ ಮಾಹಿತಿ ಅತ್ಯಗತ್ಯ ಎಂದು ಹೇಳಿದರು.

ಜಿಲ್ಲಾ ನ್ಯಾಯಾಲಯದ ವಕೀಲೆ ಮೀನಾ ಕುಮಾರಿ ಮಾತನಾಡಿ, ನೊಂದ ಮಹಿಳೆಗೆ ಕಾನೂನಿನಲ್ಲಿ ಸಿಗುವ ನ್ಯಾಯದ ಬಗ್ಗೆ, ಬಾಲ್ಯ ವಿವಾಹದ ಬಗ್ಗೆ, ಹೆಣ್ಣು ಮಕ್ಕಳಿಗೆ ಶಿಕ್ಷಣದ ಮೌಲ್ಯದ ಕುರಿತು ಮಹಿಳಾ ಸಹಾಯವಾಣಿಯ ಕುರಿತು ಮಾಹಿತಿ ನೀಡಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆಯ ಮಡಿಕೇರಿ ತಾಲೂಕಿನ ಯೋಜನಾಧಿಕಾರಿ ಪುರುಷೋತ್ತಮ್ ಪ್ರಾಸ್ತವಿಕವಾಗಿ ಮಾತನಾಡಿದರು. ತಾಳೂರು ಉಷಾ ಕಾಶಿ ಮಹಿಳಾ ವಿಚಾರಗೋಷ್ಠಿಯಲ್ಲಿ ಮಕ್ಕಳಲ್ಲಿ ಸಂಸ್ಕೃತಿ ಸಂಸ್ಕಾರವನ್ನು ಬೆಳೆಸುವಲ್ಲಿ ಮಹಿಳೆ ಮತ್ತು ಪೋಷಕರ ಪಾತ್ರದ ಬಗ್ಗೆ ಮಾತನಾಡುತ್ತಾ, ಸಂಸ್ಕೃತಿ ಮತ್ತು ಸಂಸ್ಕಾರದ ಬಗ್ಗೆ ಪೋಷಕರು ಸಂಸ್ಕಾರವನ್ನು ಮಕ್ಕಳ ಜೀವನದಲ್ಲಿ ಅಳವಡಿಸಬೇಕು, ಎಂದರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಹೂಗುಚ್ಛ, ರಂಗೋಲಿ, ಛದ್ಮವೇಷ ಸ್ಪರ್ಧೆ ಏರ್ಪಡಿಸಿ ವಿಜೇತರಿಗೆ ಅತಿಥಿಗಳು ಬಹುಮಾನವನ್ನು ನೀಡಿ ಶುಭ ಹಾರೈಸಿದರು. ಕೇಂದ್ರದ ಸದಸ್ಯರಿಂದ ಸ್ವ ಉದ್ಯೋಗಕ್ಕೆ ಸಂಬಂಧಿಸಿದಂತೆ ಸ್ಟಾಲ್ ಹಾಕಲಾಗಿತ್ತು ಕಾರ್ಯಕ್ರಮದಲ್ಲಿ ಹರಿಣಿ ಪ್ರಾರ್ಥಿಸಿ, ಸೇವಾಪ್ರತಿನಿಧಿ ಚಿತ್ರ ಸ್ವಾಗತಿಸಿ, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಮಾಲಿನಿ ನಿರೂಪಿಸಿ ಯಶೋಧ ವಂದಿಸಿದರು.

ಸುತ್ತೂರು ಮಠದ ಜನಪರ ಕಾಳಜಿ ಶ್ಲಾಘನೀಯ

ಸುದ್ದಿಗೋಷ್ಠಿಯಲ್ಲಿ ಶಾಸಕ ಪಿ.ಎಂ.ನರೇಂದ್ರಸ್ವಾಮಿ ಅಭಿಪ್ರಾಯ



ಸುದ್ದಿಗೋಷ್ಠಿಯಲ್ಲಿ ಶಾಸಕ ಪಿ.ಎಂ.ನರೇಂದ್ರಸ್ವಾಮಿ ಮಾತನಾಡಿದರು.

ಮಳವಳ್ಳಿ, ಡಿ.15– ಸುತ್ತೂರು ಅತೀ ಪುರಾತನ ಮಠಗಳಲ್ಲೊಂದು. ಸುತ್ತೂರು ಸಂಸ್ಥಾನ ಜನಪರ ಕಾಳಜಿ, ಮೌಲ್ಯ, ಶೈಕ್ಷಣಿಕವಾಗಿ ಅನೇಕ ಸುಧಾರಣೆಗಳನ್ನು ಮಾಡುತ್ತಾ ಬಂದಿದೆ ಎಂದು ಶಾಸಕ ಪಿ.ಎಂ.ನರೇಂದ್ರಸ್ವಾಮಿ ತಿಳಿಸಿದರು.

ಪಟ್ಟಣದ ಶಾಂತಿ ಕಾಲೇಜು ಎದುರಿನ ಮೈದಾನದ ಬಳಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ 1066ನೇ ಜಯಂತಿ ಮಹೋತ್ಸವ ಮಳವಳ್ಳಿಯಲ್ಲಿ ನಡೆಯುತ್ತಿರುವುದು ಸಂತಸದ ಸಂಗತಿ. ಸುತ್ತೂರು ಮಠ ಸಮಾಜದ ಮೂಢ ನಂಬಿಕೆ ಹೋಗಲಾಡಿಸಿ ಅನೇಕರಿಗೆ ಆಶ್ರಯ ನೀಡಿದೆ. ಮಳವಳ್ಳಿ ಜನತೆಯ ಪರವಾಗಿ ನಾನು ಸುತ್ತೂರು ಶ್ರೀಗಳಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ಇಂದು ಆದಿ ಜಗದ್ಗುರು ಶಿವರಾತ್ರೀಶ್ವರ ಶಿವಯೋಗಿಗಳ ಉತ್ಸವಮೂರ್ತಿಯು ಸುತ್ತೂರು ಕ್ಷೇತ್ರದಿಂದ ತಿ.ನರಸೀಪುರ, ಬೆಳಕವಾಡಿ ಮಾರ್ಗವಾಗಿ ಮಳವಳ್ಳಿ ತಲುಪಲಿದೆ. ನಾಳೆ ನಡೆಯುವ ಆದಿ ಜಗದ್ಗುರು ಶ್ರೀಶಿವರಾತ್ರೀಶ್ವರ ಶಿವಯೋಗಿಗಳ 1066ನೇ ಜಯಂತಿಯನ್ನು ಗೌರವಾನ್ವಿತ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಉದ್ಘಾಟಿಸಲಿದ್ದಾರೆ. ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹಾಗೂ ಕೃಷಿ ಸಚಿವ ಚಲುವರಾಯಸ್ವಾಮಿ ಭಾಗಿಯಾಗಲಿದ್ದಾರೆ ಎಂದರು.

ರಾಷ್ಟ್ರಪತಿಗಳು ಉದ್ಘಾಟಿಸುವ ಕಾರ್ಯಕ್ರಮ ನಿರಂತರ 5 ದಿನಗಳ ಕಾಲ ನಡೆಯಲಿದ್ದು, ಅನೇಕ ನಾಟಕಗಳ ಪ್ರದರ್ಶನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಕಾರ್ಯಕ್ರಮಕ್ಕೆ ಬರುವ ಸಾರ್ವಜನಿಕರಿಗೆ ಅನ್ನ ದಾಸೋಹ ನಡೆಸಲಾಗುವುದು. ದಾಸೋಹದಲ್ಲಿ ಯಾವುದೇ ಲೋಪದೋಷ ಉಂಟಾಗದಂತೆ ನೋಡಿಕೊಳ್ಳಲಾಗುವುದು ಎಂದರು.

ಡಿ.21ರಂದು ನಡೆಯುವ ಸಮಾರೋಪ ಸಮಾರಂಭ ಸಿದ್ಧಗಂಗಾ ಮಠ, ಆದಿಚುಂಚನಗಿರಿ ಸಂಸ್ಥಾನ ಮತ್ತು ವಾಲ್ಮೀಕಿ ಪೀಠ ರಾಜನಹಳ್ಳಿ ಶ್ರೀಗಳ ಸಮ್ಮುಖದಲ್ಲಿ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಕಾರ್ಮಿಕ, ಉದ್ಯೋಗ, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಆಗಮಿಸಲಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಯಾವುದೇ ರಾಜಕೀಯ ಇಲ್ಲ. ಎಲ್ಲರೂ ಸಮಾನರು ಎಂದು ಭಾವಿಸಿ ವೈಶಿಷ್ಟಪೂರ್ಣ ಹಾಗೂ ವಿಜೃಂಭಣೆಯಿಂದ ನಡೆಸಲಾಗುವುದು. ಸುತ್ತೂರು ಮಠದ ಭಕ್ತರೆ ಕಾರ್ಯಕ್ರಮದಲ್ಲಿ ಚಪ್ಪರ ಹಾಕಿದರೆ, ಮಳವಳ್ಳಿ ದೀಪಾಲಂಕಾರದಿಂದ ಕಂಗೊಳಿಸುತ್ತಿದೆ ಎಂದರು.

ಕನಕಪುರದ ದೇಗುಲ ಮಠದ ಕಿರಿಯ ಶ್ರೀಗಳಾದ ಶ್ರೀಚನ್ನಬಸವ ಸ್ವಾಮೀಜಿ ಮಾತನಾಡಿ, ಸಹಸ್ರಾರು ವರ್ಷಗಳಿಂದ ಸುತ್ತೂರು ಮಠ ಸಮಾಜದಲ್ಲಿ ಸಾಮಾಜಿಕ ಪರಿವರ್ತನೆ ತರಲು ಅನೇಕ ಕಾರ್ಯಕ್ರಮಗಳನ್ನು ರೂಪಿಸಿಕೊಂಡು ಬಂದಿದೆ. ಸಮಾಜಿಕ, ಶೈಕ್ಷಣಿಕ ಸೇರಿದಂತೆ ಇನ್ನೂ ಅನೇಕ ಪ್ರಗತಿಪರ ನಿಲುವಿನಲ್ಲಿ ಕ್ರಾಂತಿ ಮಾಡಿದೆ ಎಂದರು.

ಜಿಲ್ಲಾಧಿಕಾರಿ ಡಾ.ಕುಮಾರ್ ಮಾತನಾಡಿ,

> ಕಾರ್ಯಕ್ರಮಕ್ಕೆ ಇಬ್ಬರು ಎಸ್ಪಿ, ಡಿವೈಎಸ್‌ಪಿಗಳು ಸೇರಿದಂತೆ 1000ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಗಳನ್ನು ನಿಂಯೋಜನೆ ಮಾಡಲಾಗಿದೆ. 100 ಮಳಿಗೆಗಳನ್ನು ಸ್ಥಾಪಿಸಲಾಗಿದೆ. 50 ಮಳಿಗೆಗಳನ್ನು ಮಹಿಳಾ ಸ್ವಸಹಾಯ ಗುಂಪುಗಳಿಗೆ ನೀಡಲಾಗಿದೆ. ಕಾರ್ಯಕ್ರಮಕ್ಕೆ ಬರುವ ಸಾರ್ವಜನಿಕರಿಗೆ ಶೌಚಾಲಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಪ್ರತಿನಿತ್ಯ ದಾಸೋಹ ನೀಡಲಾಗುವುದು.
>
> – ಡಾ.ಕುಮಾರ್, ಜಿಲ್ಲಾಧಿಕಾರಿ.

ಗೌರವಾನ್ವಿತ ರಾಷ್ಟ್ರಪತಿಗಳು ಕಾರ್ಯಕ್ರಮಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಈಗಾಗಲೇ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಸಕಲ ಸಿದ್ಧತೆ ಮಾಡಿಕೊಂಡಿದೆ. ಮಾರೇನಹಳ್ಳಿ ಹೆಲಿಪ್ಯಾಡ್‌ನಲ್ಲಿ 3 ಹೆಲಿಕಾಪ್ಟರ್ ನಿಲ್ಲಲು ಜಾಗ ಗುರುತಿಸಲಾಗಿದೆ ಎಂದರು.

ಸುತ್ತೂರು ಶ್ರೀಮಠದ ಕಾರ್ಯದರ್ಶಿ ಮಂಜುನಾಥ್ ಬುದ್ಧಿ ಮಾತನಾಡಿದರು.

ಗೋಷ್ಠಿಯಲ್ಲಿ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ಮಳವಳ್ಳಿ ತಾಲೂಕು ಆಡಳಿತ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಸರ್ಕಾರದಿಂದ ಸರ್ಕಾರಿ ಶಾಲೆಗಳನ್ನು ಮುಚ್ಚುವ ಹುನ್ನಾರ

ಬಿಜೆಪಿ ಮುಖಂಡ ಇಂಡುವಾಳು ಸಚ್ಚಿದಾನಂದ ಆಕ್ರೋಶ



ಬಿಜೆಪಿ ಮುಖಂಡ ಸಚ್ಚಿದಾನಂದ ಅವರು ವಿದ್ಯಾರ್ಥಿನಿ ಚಂದನಾಗೆ ಲ್ಯಾಪ್‌ಟಾಪ್ ವಿತರಿಸಿದರು.

ಶ್ರೀರಂಗಪಟ್ಟಣ, ಡಿ.15– ರಾಜ್ಯ ಸರ್ಕಾರ ಗ್ರಾಪಂ ಕೇಂದ್ರ ಸ್ಥಾನಗಳಲ್ಲಿ ಕರ್ನಾಟಕ ಪಬ್ಲಿಕ್ ಶಾಲೆ (ಕೆಪಿಎಸ್) ಗಳನ್ನು ತೆರೆಯುವ ಯತ್ನ ಆರಂಭಿಸಿದ್ದು, ಗ್ರಾಮೀಣ ಸರ್ಕಾರಿ ಶಾಲೆಗಳನ್ನು ಮುಚ್ಚುವ ಹುನ್ನಾರ ನಡೆಸಿದೆ ಎಂದು ಬಿಜೆಪಿ ಮುಖಂಡ ಇಂಡುವಾಳು ಸಚ್ಚಿದಾನಂದ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ದೊಡ್ಡನಂಜಪ್ಪ ಎಂಬುವರ ಪುತ್ರಿ ಎಸ್.ಟಿ.ಚಂದನ ಪ್ರಸಕ್ತ ಸಾಲಿನಲ್ಲಿ ಸರ್ಕಾರಿ ಕೋಟಾದಲ್ಲಿ ವೈದ್ಯಕೀಯ ಕೋರ್ಸ್‌ಗೆ ಉಚಿತ ಪ್ರವೇಶ ಪಡೆದಿರುವ ಹಿನ್ನೆಲೆಯಲ್ಲಿ ಎನ್.ಶಂಕರೇಗೌಡ ಚಾರಿಟಬಲ್ ಟ್ರಸ್ಟ್ ವತಿಯಿಂದ ಲ್ಯಾಪ್‌ಟಾಪ್ ವಿತರಿಸಿ ಅವರು ಮಾತನಾಡಿದರು.

ಸರ್ಕಾರಿ ಶಾಲೆಗಳಿಗೆ ಬಡ ಕುಟುಂಬದ ಮಕ್ಕಳು ಹೆಚ್ಚು ದಾಖಲಾಗುತ್ತಾರೆ. ಕೆಪಿಎಸ್ ಶಾಲೆಗಳನ್ನು ತೆರೆದು ಗ್ರಾಪಂ ವ್ಯಾಪ್ತಿಯ ಇತರ ಶಾಲೆಗಳನ್ನು ಅದರಲ್ಲಿ ವಿಲೀನ ಮಾಡಿದರೆ ಸಾಕಷ್ಟು ಮಕ್ಕಳು ಶಾಲೆ ಬಿಡುವ ಸನ್ನಿವೇಶ ಸೃಷ್ಟಿಯಾಗುತ್ತದೆ. ಸರ್ಕಾರದ ಈ ಉದ್ದೇಶ ಶೈಕ್ಷಣಿಕ ಕ್ಷೇತ್ರ ಪ್ರಗತಿಗೆ ಮಾರಕವಾಗಲಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಕೆಪಿಎಸ್ ಶಾಲೆ ತೆರೆಯುವ ಬದಲು ಇರುವ ಸರ್ಕಾರಿ ಶಾಲೆಗಳಿಗೆ ಅಗತ್ಯ ಮೂಲ ಸೌಕರ್ಯ ಕಲ್ಪಿಸಬೇಕು. ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಬೇಕು. 1ನೇ ತರಗತಿಯಿಂದ ಇಂಗ್ಲಿಷ್ ಕಲಿಸಬೇಕು. ಸರ್ಕಾರಿ ಶಾಲೆಗಳ ಬಗ್ಗೆ ಪೋಷಕರಲ್ಲಿ ವಿಶ್ವಾಸ ಮೂಡುವಂತಹ ಯೋಜನೆಗಳನ್ನು ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಪ್ರತಿಭಾವಂತ ವಿದ್ಯಾರ್ಥಿನಿಯರಾದ ಮಧುರ ಪ್ರಕಾಶ್, ಶ್ರೇಯಾ ಸುಧಾಕರ್, ಶ್ರೇಯಾ ಗೋಪಾಲಸ್ವಾಮಿ ಅವರನ್ನು ಸಚ್ಚಿದಾನಂದ ಅಭಿನಂದಿಸಿದರು.

ಬಿಜೆಪಿ ನಗರ ಘಟಕದ ಅಧ್ಯಕ್ಷ ಜಿ.ಇ.ಸುಧಾಕರ್, ಪುರಸಭೆ ಮಾಜಿ ಸದಸ್ಯರಾದ ಕೃಷ್ಣಪ್ಪ ಗಂಜಾಂ ಶಿವು, ಎಸ್.ಪ್ರಕಾಶ್, ಎಸ್.ಟಿ.ರಾಜು, ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಮಾನಸ, ಮುಖಂಡರಾದ ಎಂ.ಜೆ.ಪುಟ್ಟರಾಜು, ಪ್ರಭಾಕರ್, ಎಸ್.ರಘು, ಹೆಚ್.ಎಸ್.ಪುಟ್ಟರಾಮು, ಉಮೇಶಕುಮಾರ್, ಚಂದ್ರು, ವಿಕ್ರಾಂತ್ ರಾಮಕೃಷ್ಣ ವೆಂಕಟೇಶ್, ವಿಶ್ವನಾಥ್, ಲಕ್ಷ್ಮೀನಾರಾಯಣ, ಅರುಣ, ಕುಮಾರ್, ಹರ್ಷ, ಸನತ್, ಶ್ರೇಯಸ್, ಜಯಲಕ್ಷ್ಮಿ, ಶಂಕರ್ ಹಾಜರಿದ್ದರು.

ಶಾಮನೂರು ಶಿವಶಂಕರಪ್ಪ ನಿಧನಕ್ಕೆ ಸಂತಾಪ

ಭಾರತೀನಗರ, ಡಿ.15– ಕಾಂಗ್ರೆಸ್‌ನ ಹಿರಿಯ ನಾಯಕ ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರದ ಶಾಸಕ ಶಾಮನೂರು ಶಿವಶಂಕರಪ್ಪ ಅವರ ನಿಧನಕ್ಕೆ ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಸಂತಾಪ ಸೂಚಿಸಿದ್ದಾರೆ.

ಶಾಮನೂರು ಶಿವಶಂಕರಪ್ಪನವರು ಸರಳ ಸಜ್ಜನಿಕೆಯ ವ್ಯಕ್ತಿಯಾಗಿದ್ದು, ಅವರೊಂದಿಗೆ ನಮ್ಮ ಒಡನಾಟ ತುಂಬಾ ಆತ್ಮೀಯವಾಗಿತ್ತು. ಅವರು ಬಹಳ ಮೃದು ಸ್ವಭಾವದವರು ಮತ್ತು ಸ್ನೇಹಮಯಿಯಾಗಿದ್ದರು. ದಕ್ಷತೆ ಹಾಗೂ ಪ್ರಾಮಾಣಿಕತೆಯಿಂದ ರಾಜಕಾರಣ ಮಾಡಿದವರು. ದಾವಣಗೆರೆಯಲ್ಲಿ ಶಿಕ್ಷಣ ಸಂಸ್ಥೆ ತೆರೆದು ಸಾವಿರಾರು ವಿದ್ಯಾರ್ಥಿಗಳ ಜೀವನಕ್ಕೆ ಬೆಳಕು ಚೆಲ್ಲಿದವರು. ಅವರ ನಿಧನ ರಾಜ್ಯಕ್ಕೆ ತುಂಬಲಾರದ ನಷ್ಟ ಅವರ ಕುಟುಂಬಕ್ಕೆ ದೇವರು ದುಃಖ ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆಂದು ತಿಳಿಸಿದ್ದಾರೆ.

ಪಟೇಲ್ ಲೋಕೇಶ್ ನಿಧನ



ಪಾಂಡವಪುರ, ಡಿ.15– ತಾಲೂಕಿನ ಚಿಕ್ಕಮರಳಿ ಗ್ರಾಮದ ನಿವಾಸಿ ಪಟೇಲ್ ಲೋಕೇಶ್ (ಸಿ.ಬಿ.ತಮ್ಮೇಗೌಡ–65) ಸೋಮವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ ಮಂಜುಳ, ಪುತ್ರ ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸಂಜೆ ಮೃತರ ಜಮೀನಿನಲ್ಲಿ ನಡೆಯಿತು. ಮೃತರ ನಿಧನಕ್ಕೆ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಜಿಪಂ ಮಾಜಿ ಸದಸ್ಯ ಸಿ.ಅಶೋಕ್, ಟಿಎಪಿಸಿಎಂಎಸ್ ಅಧ್ಯಕ್ಷ ಚಿಕ್ಕಾಡೆ ಗಿರೀಶ್ ಸೇರಿದಂತೆ ಅನೇಕ ಗಣ್ಯರು, ಮುಖಂಡರು ಅಂತಿಮ ದರ್ಶನ ಪಡೆದು ಕುಟುಂಬದವರಿಗೆ ಸಾಂತ್ವನ ಹೇಳಿದರು.

ಚಿರತೆ ದಾಳಿಗೆ ಕರು ಬಲಿ



ಯಳಂದೂರು ಡಿ.15 (ವಿ.ನಾಗರಾಜು)– ತಾಲೂಕಿನ ಚಾಮಲಾಪುರ ಗ್ರಾಮಗಳಲ್ಲಿ ಚಿರತೆ ದಾಳಿಗೆ ಕರು ಮೃತಪಟ್ಟಿರುವ ಘಟನೆ ನಡೆದಿದೆ. ಚಾಮಲಾಪುರ ಗ್ರಾಮದ ಸಿದ್ದಪ್ಪಸ್ವಾಮಿ ಎಂಬುವರಿಗೆ ಸೇರಿದ ಕೊಟ್ಟಿಗೆಯಲ್ಲಿ ಕಟ್ಟಿ ಹಾಕಿದ್ದ ಕರು ಮೇಲೆ ದಾಳಿ ನಡೆಸಿರುವ ಚಿರತೆಗಳು ಕರುಗಳನ್ನು ಕೊಂದು ಹಾಕಿವೆ.

ವಿಷಯ ತಿಳಿದು ಸ್ಥಳಕ್ಕೆ ಅರಣ್ಯಾಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದ್ದು, ಚಿರತೆ ಸೆರೆಗೆ ಕ್ರಮವಹಿಸುವುದಾಗಿ ಭರವಸೆ ನೀಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ಕಾಡುಪ್ರಾಣಿಗಳ ಹಾವಳಿ ಹೆಚ್ಚಾಗಿದ್ದು ರೈತರು ಆತಂಕದಲ್ಲಿ ಜೀವನ ನಡೆಸುವಂತಾಗಿದೆ. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಮೃತಪಟ್ಟಿರುವ ಕರುಗಳಿಗೆ ಸೂಕ್ತ ಪರಿಹಾರ ಕೊಡಿಸಬೇಕು. ಜೊತೆಗೆ ಕಾಡುಪ್ರಾಣಿಗಳ ಹಾವಳಿಯನ್ನು ತಪ್ಪಿಸಬೇಕು ಎಂದು ರೈತರು ಆಗ್ರಹಿಸಿದ್ದಾರೆ

ಕುಡಿಯುವ ನೀರಿಗೆ ಹಾಹಾಕಾರ: ಜನತೆ ತತ್ತರ



ಪ್ರತಿನಿತ್ಯ ನೀರಿಗಾಗಿ ಖಾಲಿ ಬಿಂದಿಗೆ ಹಿಡಿದುಕೊಂಡು ಬೀದಿ– ಬೀದಿ ತಿರುಗುತ್ತಿರುವ ನಿವಾಸಿಗಳು.

ಚಾಮರಾಜನಗರ, ಡಿ.15–ಜಿಲ್ಲಾ ಕೇಂದ್ರವಾದ ಚಾಮರಾಜನಗರದಲ್ಲಿ ಪದೇ ಪದೇ ನೀರಿನ ಸಮಸ್ಯೆ ಕಾಡುತ್ತಿದ್ದು, ಜೀವಜಲಕ್ಕಾಗಿ ನಗರದ ನಿವಾಸಿಗಳು ನಿತ್ಯ ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

ಕಾವೇರಿ ಕುಡಿಯುವ ನೀರಿನ ಪೂರೈಕೆಯಲ್ಲಿ ಒಂದೆರಡು ದಿನಗಳು ವ್ಯತ್ಯಯವಾದರೆ ಪರವಾಗಿಲ್ಲ. ಆದರೆ, ಒಂದು ವಾರ, ಎರಡು ವಾರಗಳ ಕಾಲ ಕಾವೇರಿ ನೀರು ಪೂರೈಕೆಯಾಗುವುದೇ ಇಲ್ಲ ಹೀಗಾದರೆ ನಾವೇನು ಮಾಡಬೇಕು? ಎಂಬುದು ನಗರದ ನಿವಾಸಿಗಳ ಪ್ರಶ್ನೆಯಾಗಿದೆ.

ಶುದ್ಧ ಕುಡಿಯುವ ನೀರಿನ ಸಮಸ್ಯೆ ಪದೇ ಪದೇ ಆಗುತ್ತಿದ್ದರೂ ನಗರಸಭೆ ಆಡಳಿತ ಶಾಶ್ವತ ಪರಿಹಾರ ಕಂಡುಕೊಳ್ಳುವಲ್ಲಿ ವಿಫಲವಾಗಿದೆ. ನಗರಸಭೆ ಆಡಳಿತ ವರ್ಗದಲ್ಲಿನ ಆಂತರಿಕ ಸಂಘರ್ಷಗಳು ಕುಡಿಯುವ ನೀರಿನ ಪೂರೈಕೆ ಮೇಲೂ ಪರಿಣಾಮ ಬೀರುತ್ತಿದೆಯೇ ಎಂಬ ಅನುಮಾನ ಕಾಡಲಾರಂಭಿಸಿದೆ.

ವಾರ್ಡ್‌ನಲ್ಲಿ ಹಾಹಾಕಾರ: ನಗರದ 28 ಮತ್ತು 29ನೇ ವಾರ್ಡ್‌ಗಳ ವ್ಯಾಪ್ತಿಯಲ್ಲಿರುವ ರಾಮಸಮುದ್ರದ ಹಳ್ಳದ ಬೀದಿಗೆ ಕಳೆದ ಎರಡು ತಿಂಗಳಿನಿಂದ ಕುಡಿಯುವ ನೀರಿನ ಪೂರೈಕೆ ವ್ಯತ್ಯಯವಾಗಿ ನೀರಿನ ಹಾಹಾಕಾರ ಉಂಟಾಗಿದೆ. ಪರಿಣಾಮ ನಿವಾಸಿಗಳು ಪ್ರತಿನಿತ್ಯ ನೀರಿಗಾಗಿ ಖಾಲಿ ಬಿಂದಿಗೆ ಹಿಡಿದುಕೊಂಡು ಬೀದಿ– ಬೀದಿ ತಿರುಗುವಂತಾಗಿದೆ. ಎರಡು ತಿಂಗಳಿಂದ ಸಮರ್ಪಕವಾಗಿ ಕುಡಿಯುವ ನೀರು ಬಿಡುತ್ತಿಲ್ಲ ವಾರ್ಡ್‌ನಲ್ಲಿ ಸುಮಾರು 6 ಬೋರ್‌ವೆಲ್ ಇದ್ದರೂ ನೀರಿನ ಪ್ರಮಾಣ ಕಡಿಮೆಯಿದ್ದು, ನೀರಿನ ಸಮಸ್ಯೆ ತಲೆದೋರಿದೆ. ಈ ಬಗ್ಗೆ ನಗರಸಭೆ ಅಧಿಕಾರಿಗಳು ಹಾಗೂ ವಾರ್ಡ್‌ನ ಸದಸ್ಯರಿಗೆ ಮಾಹಿತಿ ನೀಡಿದರು ಯಾವುದೇ ಪ್ರಯೋಜನವಾಗುತ್ತಿಲ್ಲ ಎಂದು ಇಲ್ಲಿನ ನಿವಾಸಿಗಳು ದೂರಿದರು.

ಅಮೃತ್ 2 ಯೋಜನೆಯಡಿ ನಗರದಲ್ಲಿ ನಿರ್ಮಾಣಗೊಂಡಿರುವ ಹೊಸ ಟ್ಯಾಂಕ್‌ಗಳಿಗೂ ಹೊಸ ಮೋಟಾರ್‌ಗಳ ಅಳವಡಿಕೆ ಕಾರ್ಯ ಪೂರ್ಣಗೊಂಡ ಬಳಿಕ ನೀರು ತುಂಬಿಸಲಾಗುತ್ತದೆ. ಆಗ ನೀರಿನ ಸಂಗ್ರಹಣ ಸಾಮರ್ಥ್ಯ ಹೆಚ್ಚಾಗಲಿದ್ದು, ಬಡಾವಣೆಗಳಿಗೆ ನೀರು ಸಮರ್ಪಕವಾಗಿ ಪೂರೈಕೆಯಾಗಲಿದೆ. ಆದಷ್ಟು ಬೇಗ ಕುಡಿಯುವ ನೀರಿನ ಸಮಸ್ಯೆ ನಿವಾರಿಸುವುದೇ ನಮ್ಮ ಆದ್ಯತೆಯಾಗಿದ್ದು, ಆ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿದ್ದೇವೆ. ಹಳೇ ಮೋಟಾರ್ ಸಾಕಷ್ಟು ಒತ್ತಡದಿಂದ ದುರಸ್ತಿ ಪಡಿಸಿದರೂ ಕೆಡುತ್ತಿದೆ. ಹಾಗಾಗಿ ಹೊಸ ಮೋಟಾರ್‌ಗಳನ್ನೇ ಖರೀದಿಸಲಾಗಿದೆ ಎನ್ನುತ್ತಾರೆ ಅಧಿಕಾರಿಗಳು.

ಜನಪ್ರತಿನಿಧಿಗಳ ವಿರುದ್ಧ ರೈತ ಸಂಘ ತಮಟೆ ಚಳವಳಿ



ಜನಪ್ರತಿನಿಧಿಗಳು ಮತ್ತು ಸರ್ಕಾರದ ವಿರುದ್ಧ ರಾಜ್ಯ ರೈತ ಸಂಘದ ಪದಾಧಿಕಾರಿಗಳು ತಮಟೆ ಚಳುವಳಿ ನಡೆಸಿ ಗಮನ ಸೆಳೆದರು.

ಕೊಳ್ಳೇಗಾಲ, ಡಿ.15–(ಎನ್‌ಎನ್)–ಸಂವಿಧಾನದ ಆಶಯಗಳನ್ನು ಬಗೆಹರಿಸದೆ ನಿರ್ಲಕ್ಷ್ಯ ವಹಿಸುತ್ತಿರುವ ಹಾಗೂ ನಿದ್ರೆಗೆ ಜಾರಿರುವ ಜನಪ್ರತಿನಿಧಿಗಳು ಮತ್ತು ಸರ್ಕಾರವನ್ನು ಎಬ್ಬಿಸಲು ರಾಜ್ಯ ರೈತ ಸಂಘದ ಪದಾಧಿಕಾರಿಗಳು ತಮಟೆ ಚಳುವಳಿಯನ್ನು ನಡೆಸಿ ಗಮನ ಸೆಳೆದರು.

ಪಟ್ಟಣದ ಎಪಿಎಂಸಿ ಆವರಣದಲ್ಲಿ ಜಮಾಯಿಸಿದ್ದ ರೈತರು ಸರ್ಕಾರದ ವಿರುದ್ಧ ಧಿಕ್ಕಾರ ಕೂಗುವ ಮೂಲಕ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸಿ, ಅಂಬೇಡ್ಕರ್ ವೃತ್ತದ ಬಳಿ ಮಾನವ ಸರಪಳಿ ನಿರ್ಮಿಸಿ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ತಾಲೂಕು ಕಚೇರಿಗೆ ತೆರಳಿ ತಹಶಿಲ್ದಾರ್ ಬಸವರಾಜು ರವರಿಗೆ ಮನವಿ ಸಲ್ಲಿಸಿದರು. ಈ ವೇಳೆ ರೈತರಾದ ಪೌಲ್ ಧರ್ಮರಾಜ್, ಸಿರಿಲ್ ರವರು ಅರಬೆತ್ತಲೆಯಲ್ಲಿ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಪ್ರತಿಭಟನೆಯಲ್ಲಿ ಜಿಲ್ಲಾ ಕಾರ್ಯಧ್ಯಕ್ಷ ಶೈಲೇಂದ್ರ, ತಾಲೂಕು ಅಧ್ಯಕ್ಷ ಮೋಳೆ ರಾಜಣ್ಣ ಪ್ರಧಾನ ಕಾರ್ಯದರ್ಶಿ ಪೆರಿಯಾನಾಯಗಂ, ತಮಿಳುನಾಡಿನ ರಾಜ್ಯಾಧ್ಯಕ್ಷ ರವಿಕುಮಾರ್, ಹನೂರು ತಾಲೂಕು ಅಧ್ಯಕ್ಷ ಅರ್ಪುದಮ್, ಕೀರ್ತಿ, ವಾಸು, ಕುಠಿ, ದೊಡ್ಡಿಂದುವಾಡಿ ಗ್ರಾಮ ಘಟಕ ಅಧ್ಯಕ್ಷ ವಸಂತ ಕುಮಾರ್, ಉಪಾಧ್ಯಕ್ಷ ಸುರೇಂದ್ರ, ನಾಗೇಂದ್ರ, ರವಿ, ಸಿಂಗನಲ್ಲೂರು ಗ್ರಾಮ ಘಟಕ ಅಧ್ಯಕ್ಷ ಬೆಟ್ಟೇಗೌಡ ಇದ್ದರು.

ಶಿವನಂಜಮ್ಮ ನಿಧನ



ಚಾಮರಾಜನಗರ: ನಗರದ ವಾಣಿಯಾರ್ ಬೀದಿ ನಿವಾಸಿ ಶಿವನಂಜಮ್ಮ (88) ಸೋಮವಾರ ಬೆಳಗ್ಗೆ ನಿಧನರಾದರು. ಇವರು ಮೂವರು ಪುತ್ರಿಯರು, ಒಬ್ಬ ಪುತ್ರ, ಮೊಮ್ಮಕ್ಕಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸೋಮವಾರ ಸಂಜೆ ನಗರದ ವೀರಶೈವ ಲಿಂಗಾಯತ ರುದ್ರಭೂಮಿಯಲ್ಲಿ ನೆರವೇರಿತು.

ವಿಜೃಂಭಣೆಯಿಂದ ನಡೆದ ಶ್ರೀ ಬಸವೇಶ್ವರ ದೇವಾಲಯದ ಉದ್ಘಾಟನೆ

ಬೇಗೂರು, ಡಿ.15– ಸಮೀಪದ ಕಮರಹಳ್ಳಿ ಗ್ರಾಮದ ನೂತನ ಶ್ರೀ ಬಸವೇಶ್ವರ ಸ್ವಾಮಿ ದೇವಾಲಯದ ಉದ್ಘಾಟನೆ ಮತ್ತು ಕಳಸಾರೋಹಣ ಹಾಗೂ ಪ್ರತಿಷ್ಠಾಪನ ಮಹೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು

ದೇವಾಲಯದ ಆವರಣದಲ್ಲಿ ಗಣಪತಿ ಹೋಮ, ನವಗ್ರಹ ಹೋಮ ಸೇರಿದಂತೆ ವಿವಿಧ ಹೋಮಗಳನ್ನು ನಡೆಸಲಾಯಿತು ನಂತರ ನೂತನ ಕಳಸಕ್ಕೆ ಪೂಜೆ ಸಲ್ಲಿಸಿ ಬಸವೇಶ್ವರ ಸ್ವಾಮಿ ದೇವಾಲಯದ ಗೋಪುರದಲ್ಲಿ ಪ್ರತಿಷ್ಠಾಪಿಸಲಾಯಿತು ಮತ್ತು ಶ್ರೀ ಬಸವೇಶ್ವರ ಸ್ವಾಮಿಗೆ ವಿಶೇಷ ಪೂಜೆ ಮತ್ತು ಅಭಿಷೇಕಗಳನ್ನು ನಡೆಸಿ ವಿವಿಧ ಹೂಗಳಿಂದ ಅಲಂಕರಿಸಲಾಯಿತು ಹಾಗೂ ಅಲಂಕೃತ ವಾಹನದಲ್ಲಿ ಬಸವೇಶ್ವರ ಸ್ವಾಮಿಯ ಭಾವಚಿತ್ರವನ್ನು ಇರಿಸಿ ಛತ್ರಿ ಚಾಮರ ವಾದ್ಯ ಮೇಳ ನಂದಿ ಕಂಬ ಡೋಲು ವೀರಗಾಸೆ ನಡುವೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಉತ್ಸವ ನಡೆಸಲಾಯಿತು

ದೇವಾಲಯದ ಉದ್ಘಾಟನಾ ಕಾರ್ಯಕ್ರಮದಲ್ಲಿ ಬೇಗೂರು, ಹಾಲಹಳ್ಳಿ, ತೊಂಡವಾಡಿ, ಸೋಮಹಳ್ಳಿ, ಬೆಳಚಲವಾಡಿ, ನಿಟ್ರೆ, ಕಬ್ಬಳ್ಳಿ, ಮಾದಾಪಟ್ಟಣ ಚಿಕ್ಕಾಟಿ ಸಿರಿದಂತೆ ಸುತ್ತಮುತ್ತಲ ಗ್ರಾಮಗಳ ಸಾವಿರಾರು ಭಕ್ತಾದಿಗಳು ಪಾಲ್ಗೊಂಡು ಸರದಿ ಸಾಲಿನಲ್ಲಿ ದೇವರ ದರ್ಶನ ಪಡೆದರು. ಸುಮಾರು ಎರಡು ಸಾವಿರಕ್ಕೂ ಹೆಚ್ಚು ಮಂದಿಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು.



ಕಮರಹಳ್ಳಿ ಗ್ರಾಮದ ನೂತನ ಶ್ರೀ ಬಸವೇಶ್ವರಸ್ವಾಮಿ ದೇವಾಲಯದ ಉದ್ಘಾಟನಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು.